

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ


ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 22 ಶುಕ್ರವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 126 | ಪುಟಗಳು: 12
ಜಾಹೀರಾತು: ad@mysurumithra.com, website: www.mysurumithra.com
ಸುದ್ದಿ, ಫೋಟೋಗೆ: news@mysurumithra.com

₹4



ಪರಿಸರ ಸ್ನೇಹಿ ಗಣಪ

- ಹೀಗೆ ಮುಚ್ಚಳಿಕೆ ಬರೆದುಕೊಟ್ಟವರಿಗೆ ಮಾತ್ರ ಪ್ರತಿಷ್ಠಾಪನೆಗೆ ಅವಕಾಶ ಕಲ್ಪಿಸಿ
- ನಗರಪಾಲಿಕೆಗಳೂ ಸೇರಿ ಎಲ್ಲಾ ಸ್ಥಳೀಯ ಸಂಸ್ಥೆ ಅಧಿಕಾರಿಗಳಿಗೆ ಸರ್ಕಾರ ತಾಕೀತು
- ಪಟಾಕಿ ಸಿಡಿಸುವುದಕ್ಕೂ ಕಟ್ಟುನಿಟ್ಟಾಗಿ ಕೆಲ ಷರತ್ತು ವಿಧಿಸುವಂತೆಯೂ ಸೂಚನೆ



ಬೆಂಗಳೂರು, ಆ.21(ಕೆಎಂಶಿ)– ಸಾರ್ವಜನಿಕ ಸ್ಥಳಗಳಲ್ಲಿ ಗಣೇಶೋತ್ಸವಕ್ಕೆ ಅನುಮತಿ ಪಡೆಯಲು ಆಯೋಜಕರಿಂದ ಪಿಓಪಿ ಮೂರ್ತಿ ಬಳಸುವುದಿಲ್ಲ ಎಂಬ ಮುಚ್ಚಳಿಕೆ ಬರೆಸಿಕೊಳ್ಳಲು ನಗರಪಾಲಿಕೆ ಸೇರಿದಂತೆ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರ ಆದೇಶಿಸಿದೆ.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅರಣ್ಯ ಮತ್ತು ಪರಿಸರ ಖಾತೆ ಸಚಿವ ಈಶ್ವರ್ ಬಿ. ಖಂಡ್ರೆ, ಶ್ರದ್ಧಾಭಕ್ತಿಯಿಂದ ಆಚರಿಸುವ ಗಣೇಶೋತ್ಸವದಿಂದ ಜಲಚರ, ಪ್ರಾಣಿ, ಪಕ್ಷಿಗಳು ಮತ್ತು ಪರಿಸರಕ್ಕೆ ಮಾರಕವಾಗಬಾರದು. ಗಣೇಶೋತ್ಸವ ಸಮಿತಿಗಳು ಮತ್ತು ಸಾರ್ವಜನಿಕರು ಪಿಓಪಿ ಗಣಪತಿ ಖರೀದಿಸದೆ ಪರಿಸರ ಸ್ನೇಹಿ ಮಣ್ಣಿನ ಮೂರ್ತಿಗಳನ್ನೇ ಸ್ಥಾಪಿಸಿ, ವಿಸರ್ಜಿಸುವಂತೆ ಮನವಿ ಮಾಡಿದರು.


ಈಶ್ವರ್ ಖಂಡ್ರೆ

ಕರಾವಳಿ ಜಿಲ್ಲೆಗಳಲ್ಲಿ ಶೇಕಡ 90ರಷ್ಟು ಮಂದಿ ಮಣ್ಣಿನ ಗಣೇಶಮೂರ್ತಿಗಳನ್ನು ಬಳಸುತ್ತಾರೆ. ಈ ಜಿಲ್ಲೆಗಳಲ್ಲಿ ಸಾಧ್ಯವಾಗುವುದಾದರೆ ಬೇರೆಡೆ ಏಕೆ ಸಾಧ್ಯವಿಲ್ಲ ಎಂದರು.

ಜಿಲ್ಲಾಡಳಿತ, ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಸ್ಥಳೀಯ ಸಂಸ್ಥೆಗಳು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಪರಿಸರ ಉಳಿಸಬೇಕು. ಪಿಓಪಿ ಗೌರಿ, ಗಣೇಶ ಮೂರ್ತಿಗಳು ಬೇಗನೆ ನೀರಿನಲ್ಲಿ ಕರಗುವುದಿಲ್ಲ. ಜೊತೆಗೆ ವಿಷಕಾರಕ ಅಂಶಗಳನ್ನು ಸೇರಿಸುತ್ತವೆ. ಮೂರ್ತಿಗಳಿಗೆ ಲೇಪಿಸುವ ಭಾರ ಲೋಹಮಿಶ್ರಿತ ರಾಸಾಯನಿಕ ಬಣ್ಣಗಳು ಕರಗಿ ಜಲಚರಗಳ ಸಾವಿಗೆ ಕಾರಣವಾಗುತ್ತವೆ ಎಂದರು.

ಮಣ್ಣಿನ ಗಣಪ ಪೂಜಿಸಲು ಎಲ್ಲರಿಗೂ ಸಂದೇಶ ಕಳಿಸಬೇಕು, ಶಾಲಾ–ಕಾಲೇಜು ಮಕ್ಕಳಲ್ಲಿ ಪರಿಸರ ಸ್ನೇಹಿ ಗಣೇಶಮೂರ್ತಿ ಪೂಜಿಸುವ ಅರಿವು ಮೂಡಿಸುವಂತೆ ಸೂಚಿಸಲಾಗಿದೆ.

ಪಟಾಕಿ ಸಿಡಿಸಲು ಕೆಲ ನಿರ್ಬಂಧ: ಗಣೇಶಮೂರ್ತಿ ಮೆರವಣಿಗೆ ವೇಳೆ ಪಟಾಕಿಗಳನ್ನು ಸಿಡಿಸಲಾಗುತ್ತದೆ. 125 ಡೆಸಿಬಲ್‌ಗಿಂತ ಹೆಚ್ಚು ಶಬ್ದ ಉಂಟು ಮಾಡುವ ಪಟಾಕಿ ಸಿಡಿಸದಂತೆ ಮತ್ತು ರಾತ್ರಿ 8 ರಿಂದ 10 ಗಂಟೆಯೊಳಗೆ ಮಾತ್ರ ಸಿಡಿಸುವಂತೆ ಸುಪ್ರೀಂಕೋರ್ಟ್ ಆದೇಶವಿದೆ. ಎಲ್ಲರೂ ಈ ನಿಯಮ ಪಾಲಿಸಬೇಕು, ಪರಿಸರಕ್ಕೆ ಮಾರಕವಾಗದ ಹಸಿರು ಪಟಾಕಿ ಮಾತ್ರ ಸಿಡಿಸಬೇಕು.

ಮಣ್ಣಲ್ಲಿ ಮಣ್ಣಾಗದ, ನೀರಿನಲ್ಲಿ ಕರಗದ ಮತ್ತು ಸುಟ್ಟರೆ ಗಾಳಿಗೆ ವಿಷಕಾರಕ ಅಂಶ ಸೇರಿಸುವ ಏಕಬಳಕೆ ಪ್ಲಾಸ್ಟಿಕ್ ಉತ್ಪನ್ನ ನಿಷೇಧಿಸಲಾಗಿದೆ. ಆದಾಗ್ಯೂ ಹಾದಿಬೀದಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಕಂಡುಬರುತ್ತದೆ. ಈ ಬಗ್ಗೆ ಜಾಗೃತಿ ಅಗತ್ಯ ಸ್ಥಳೀಯ ಸಂಸ್ಥೆಗಳು ಹೆಚ್ಚು ಪರಿಣಾಮಕಾರಿಯಾಗಿ ಸಮಸ್ಯೆ ಪರಿಹರಿಸಬೇಕು ಎಂದರು. ■ 6ನೇ ಪುಟಕ್ಕೆ

ಮಾರುಕಟ್ಟೆಗೆ ಬಂದ ಮೇಲೆ ಆದೇಶ!

ಗಣಪತಿ ಪ್ರತಿಷ್ಠಾಪನೆಗೆ ಇನ್ನು ಕೇವಲ ಐದು ದಿನಗಳಿರುವಾಗ ಘನ ಸರ್ಕಾರ ಪರಿಸರ ಸ್ನೇಹಿ ಗಣಪತಿ ಪ್ರತಿಷ್ಠಾಪನೆ ಸಂಬಂಧ ಆದೇಶ ಹೊರಡಿಸುತ್ತಿರುವುದು ತಮಾಷೆಯಾಗಿದೆ. ಈಗಾಗಲೇ ಪಿಓಪಿ ಸೇರಿದಂತೆ ಎಲ್ಲಾ ರೀತಿಯ ಗಣಪನ ಮೂರ್ತಿಗಳು ಮಾರಾಟಕ್ಕಿವೆ. ಸಾಕಷ್ಟು ಮಾರಾಟವೂ ಆಗಿವೆ. ಈಗೇನು ಮಾಡುವುದು. ಸರ್ಕಾರ, ಎರಡು ತಿಂಗಳ ಮುನ್ನವೇ ಇಂತಹ ಆದೇಶವನ್ನ ಹೊರಡಿಸಿದ್ದರೆ ಅದರ ಉದ್ದೇಶ ಸಾರ್ಥಕವಾಗುತ್ತೇನೋ... ಈ ವಿಚಾರವಾಗಿ ಸರ್ಕಾರಕ್ಕೆ ಹೇಳುವವರು ಯಾರು?

ಇಂದಿನಿಂದ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ 'ಧರ್ಮಯುದ್ಧ'

ಬೆಂಗಳೂರು, ಆ.21(ಕೆಎಂಶಿ)– ನಾಳೆಯಿಂದ ಒಂದು ವಾರ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ಧರ್ಮದ ಉಳಿವಿಗಾಗಿ 'ಧರ್ಮಯುದ್ಧ' ಹೋರಾಟ ನಡೆಸುವುದಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಇಂದಿಲ್ಲಿ ಘೋಷಿಸಿದ್ದಾರೆ.




ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶ್ರೀಕ್ಷೇತ್ರ ಧರ್ಮಸ್ಥಳ ವಿಚಾರದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ದಿನೇಶ್ ಗುಂಡೂರಾವ್ ಹೇಳಿಕೆಗಳು ಹಾಗೂ ಅಪಪ್ರಚಾರದ ವಿರುದ್ಧ ರಾಜ್ಯ ಸರ್ಕಾರದ ನಡವಳಿಕೆ ಅನುಮಾನ ಮೂಡಿಸುತ್ತಿದೆ ಎಂದರು.

ಸರ್ಕಾರದ ಧೋರಣೆ ಖಂಡಿಸಿ 'ಧರ್ಮದ ಉಳಿವಿಗಾಗಿ ಧರ್ಮಯುದ್ಧ' ಪ್ರತಿಭಟನೆ ಮಾಡಲಿದ್ದೇವೆ. ಕಳೆದ ಒಂದು ತಿಂಗಳಿಂದ ಧರ್ಮಸ್ಥಳ ವಿಚಾರದಲ್ಲಿ ಆಗಿರುವ ಬೆಳವಣಿಗೆ ಎಲ್ಲರಿಗೂ ತಿಳಿದಿದೆ. ಧರ್ಮಸ್ಥಳ ವಿಚಾರದಲ್ಲಿ ತನಿಖೆ ನಡೆಸಲು ಸರ್ಕಾರ ಎಸ್‌ಐಟಿ ರಚಿಸಿದಾಗ ಸ್ವಾಗತ ಮಾಡಿದ್ದೆವು. ಸಮಗ್ರ ಪಾರದರ್ಶಕ ತನಿಖೆಗೆ ಸಂಪೂರ್ಣ ಬೆಂಬಲ ನೀಡುವ ಮೂಲಕ ಬಿಜೆಪಿಯ ಸ್ಪಷ್ಟ ನಿಲುವು ತಿಳಿಸಿದ್ದೆವು.

ತನಿಖೆ ವಿಚಾರದಲ್ಲಿ ಹಿಂದೆ ಸರಿದಿಲ್ಲ. ಆದರೆ, ಸಾಮಾಜಿಕ ಜಾಲತಾಣಗಳಲ್ಲಿ ನಿರಂತರವಾಗಿ ಶ್ರೀಕ್ಷೇತ್ರದ ವಿರುದ್ಧ ನಡೆಯುತ್ತಿರುವ ಅಪಪ್ರಚಾರ ತಡೆಯುವ ಕೆಲಸವನ್ನು ಸರ್ಕಾರ ಮತ್ತು ಪೊಲೀಸ್ ಇಲಾಖೆ ಏಕೆ ಮಾಡುತ್ತಿಲ್ಲ ಎಂದರು.

ಧರ್ಮಸ್ಥಳದ ಮಾಸ್ಕ್‌ಮ್ಯಾನ್ ಬಣ್ಣ ಬಯಲು ಮಾಡಿದ ಅವನ ಮೊದಲ ಪತ್ನಿ!

ಅವನೊಬ್ಬ ಮೋಸಗಾರ, ಸುಳ್ಳುಗಾರ... ಹಣದ ಆಸೆಗೆ ಹೀಗೆ ಮಾಡಿರಬಹುದು...


ಮಾಸ್ಕ್‌ಮ್ಯಾನ್


ಈತನ ಮೊದಲ ಪತ್ನಿ

ಮಂಡ್ಯ, ಆ.21– ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಾದ್ಯಂತ ಸುದ್ದಿಯಾಗಿದ್ದ ಮುಸುಕುಧಾರಿ (ಮಾಸ್ಕ್‌ಮ್ಯಾನ್) ನಿಜಬದುಕು ಈಗ ಆತನ ಮೊದಲ ಪತ್ನಿಯಿಂದಲೇ ಬಯಲಾಗಿದೆ. ಮಾಧ್ಯಮಗಳ ಜೊತೆ ಮಾತನಾಡಿದ ಆತನ ಮೊದಲ ಪತ್ನಿ, ಅವನೊಬ್ಬ ಮೋಸಗಾರ, ಸುಳ್ಳುಗಾರ ಎಂದು ಆರೋಪಿಸಿದ್ದಾರೆ.

1999ರಲ್ಲಿ ನಮ್ಮಿಬ್ಬರ ಮದುವೆ ಆಗಿತ್ತು. ಏಳು ವರ್ಷ ನಾವು ಸಂಸಾರ ಮಾಡಿದ್ದೆವು. ನಮಗೆ ಒಂದು ಗಂಡು ಮತ್ತು ಒಂದು ಹೆಣ್ಣು ಮಕ್ಕಳಿದ್ದಾರೆ. ಆದರೆ, ಅವನ ಬಳಿ ಒಳ್ಳೆಯತನ ಇರಲೇ ಇಲ್ಲ. ಬರೀ ಸುಳ್ಳು ಹೇಳುತ್ತಿದ್ದ. ■ 6ನೇ ಪುಟಕ್ಕೆ

ಅನಾಮಿಕ ಮುಸುಕುಧಾರಿ ವಿರುದ್ಧ ಹುಟ್ಟೂರಲ್ಲಿ ಆಕ್ರೋಶ

ಮಂಡ್ಯ: ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತಿದ್ದೇನೆ ಎಂದು ಹೇಳಿಕೊಂಡು ದೂರು ನೀಡಿರುವ ಮುಸುಕುಧಾರಿ ಅನಾಮಿಕನ ವೈಯಕ್ತಿಕ ವಿಚಾರಗಳು ಒಂದೊಂದಾಗಿ ಹೊರಗೆ ಬರುತ್ತಿದ್ದು, ನಿನ್ನೆ ಮದ್ದೂರಿನಲ್ಲಿ ಆತನ ಜೊತೆ ಕೆಲಸ ಮಾಡಿದ್ದ ರಾಜು ಎಂಬಾತ ಆತ ಹೇಳಿರುವುದೆಲ್ಲ ಸುಳ್ಳು ಎಂದು ಹೇಳಿದ್ದ. ಇದೀಗ ಅನಾಮಿಕನ ಮೊದಲ ಪತ್ನಿಯೂ ಸಹ ಆತ ಹಣಕ್ಕಾಗಿ ಈ ರೀತಿ ಸುಳ್ಳು ಹೇಳುತ್ತಿದ್ದಾನೆ ಎಂದು ಹೇಳಿದ್ದಾರೆ.

ಅನಾಮಿಕ ಮಂಡ್ಯ ತಾಲೂಕಿನ ಚಿಕ್ಕಬಳ್ಳಿ ಗ್ರಾಮದವನು. ಅಲ್ಲಿಯೇ ಹುಟ್ಟಿ ಬೆಳೆದಿದ್ದು, ನಂತರ ಆತ ಧರ್ಮಸ್ಥಳಕ್ಕೆ ತೆರಳಿ ಅಲ್ಲಿ ಕೆಲಸಕ್ಕೆ ಸೇರಿದ್ದ ಎಂದು ಗ್ರಾಮಸ್ಥರು ಹೇಳುತ್ತಾರೆ. ಆತನ ತಂದೆ–ತಾಯಿಗಳೆಲ್ಲರೂ ಒಳ್ಳೆಯವರು. ಗ್ರಾಮದ ಹಲ್ಲೇಗೆರೆ ಗ್ರಾಮ ಪಂಚಾಯಿತಿಯಲ್ಲಿ ಹವಾಲಿ ಕೆಲಸ ಮಾಡಿಕೊಂಡಿದ್ದರು. ಈತ ಸೋಮಾರಿ, ಯಾವುದೇ ಕೆಲಸ ಮಾಡುತ್ತಿರಲಿಲ್ಲ. ಈತನ ತಂದೆ–ತಾಯಿಗಳು ತೀರಿಕೊಂಡಾಗ ಇವರು ಗ್ರಾಮ ಬಿಟ್ಟು ■ 6ನೇ ಪುಟಕ್ಕೆ

ರಾಜ್ಯದಲ್ಲಿ ಅಧಿಕಾರ ಹಸ್ತಾಂತರ ರಾಜಕೀಯ ವಿದ್ಯಮಾನಗಳ ಮಾಹಿತಿ ಪಡೆದ ಅಮಿತ್ ಶಾ

ಬೆಂಗಳೂರು, ಆ.21(ಕೆಎಂಶಿ)– ಒಳಮೀಸಲಾತಿ ಹಾಗೂ ಕರ್ನಾಟಕ ಕಾಂಗ್ರೆಸ್‌ನಲ್ಲಿನ ಅಧಿಕಾರ ಹಸ್ತಾಂತರದ ರಾಜಕೀಯ ವಿದ್ಯಮಾನಗಳ ಕುರಿತು ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಂದ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾಹಿತಿ ಪಡೆದಿದ್ದಾರೆ.


ಅಮಿತ್ ಶಾ


ಕುಮಾರಸ್ವಾಮಿ

ಕುಮಾರಸ್ವಾಮಿ ಅವರನ್ನು ಇಂದು ಮಧ್ಯಾಹ್ನ ತಮ್ಮ ಕಚೇರಿಗೆ ಕರೆಸಿಕೊಂಡ ಅಮಿತ್ ಶಾ, ಸುದೀರ್ಘ ಚರ್ಚೆ ನಡೆಸಿದರು. ಸೆಪ್ಟೆಂಬರ್–ನವೆಂಬರ್ ವೇಳೆಗೆ ರಾಜ್ಯ ಕಾಂಗ್ರೆಸ್ ನಾಯಕತ್ವದಲ್ಲಿ ಬದಲಾವಣೆ ಲಕ್ಷಣಗಳು ಕಂಡುಬರುತ್ತಿದ್ದು, ಇಂತಹ ಸನ್ನಿವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವಯಂಪ್ರೇರಿತವಾಗಿ ಅಧಿಕಾರ ಬಿಟ್ಟುಕೊಡುವರೆ. ಅವರು ಸಿದ್ಧರಿದ್ದರೂ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಹುದ್ದೆಗೇರಲು ಸಿದ್ದರಾಮಯ್ಯ ಬಣ ಬೆಂಬಲಿಸುವುದೇ. ಒಂದು ವೇಳೆ ಶಿವಕುಮಾರ್ ■ 6ನೇ ಪುಟಕ್ಕೆ

ಸಂಚಾರ ನಿಯಮ ಉಲ್ಲಂಘನೆ

ಶೇ.50 ರಿಯಾಯಿಯಡಿ ಆ.23ರಿಂದ ಸೆ.12ರವರೆಗೆ ದಂಡ ಪಾವತಿಗೆ ಅವಕಾಶ

ಮೈಸೂರು, ಆ.21(ಎಂಕೆ)– ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳ ಬಾಕಿ ದಂಡದ ಮೊತ್ತ ಪಾವತಿಗೆ ರಾಜ್ಯ ಸರ್ಕಾರ ಶೇ.50 ರಷ್ಟು ರಿಯಾಯ್ತಿ ಘೋಷಣೆ ಮಾಡಿದ್ದು, ಆ.23 ರಿಂದ ಸೆ.12ರವರೆಗೆ ದಂಡ ಪಾವತಿ ಮಾಡಲು ಅವಕಾಶ ನೀಡಲಾಗಿದೆ.




ಕರ್ನಾಟಕ ರಾಜ್ಯದಲ್ಲಿ ಪೊಲೀಸ್ ಇಲಾಖೆಯವರು ಸಂಚಾರಿ ಇ–ಚಲನ್ ಮೂಲಕ ವಿಧಿಸಿದ ದಂಡದ ಮೊತ್ತದಲ್ಲಿ ಶೇ. 50 ರಷ್ಟು ರಿಯಾಯ್ತಿ ನೀಡಲಾಗಿದ್ದು, ಇದು ಸೇರಿ 3ನೇ ಬಾರಿ ರಿಯಾಯ್ತಿ ನೀಡಲಾಗಿದೆ. 2023ರ ಫೆ.11 ರೊಳಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಮೊದಲ ಬಾರಿ ರಿಯಾಯ್ತಿ ನೀಡಲಾಗಿತ್ತು.

ನಂತರ 2023ರ ಫೆ.11 ರೊಳಗೆ ದಾಖಲಾಗಿ, ಸೆ.9 ರೊಳಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ದಂಡ ಪಾವತಿಯಲ್ಲಿ ಶೇ.50 ರಷ್ಟು ರಿಯಾಯ್ತಿ ನೀಡಲಾಯಿತು. ಅದೇ ರೀತಿ 3ನೇ ಬಾರಿಗೆ ಆ.23 ರಿಂದ ಸೆ.12ರವರೆಗೆ ಶೇ.50 ರಷ್ಟು ರಿಯಾಯ್ತಿಯಲ್ಲಿ ದಂಡ ಪಾವತಿ ಮಾಡಲು ಅವಕಾಶ ನೀಡಿ ಆದೇಶ ಹೊರಡಿಸಲಾಗಿದೆ.

ಬಿ.ಎಲ್.ಸಂತೋಷ್ ಕುರಿತು ಅವಹೇಳನ ಆರೋಪ

ಮಹೇಶ್ ಶೆಟ್ಟಿ ತಿಮರೋಡಿ ಜೈಲಿಗೆ

ಉಡುಪಿ, ಆ.21– ಒಂದೆಡೆ ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತಿದ್ದಾಗಿ ಅನಾಮಿಕ ಹೇಳಿರುವ ಪ್ರಕರಣದ ಎಸ್‌ಐಟಿ ತನಿಖೆ ತೀವ್ರಗೊಂಡಿದ್ದು, ಮತ್ತೊಂದೆಡೆ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿಯನ್ನು ಗುರುವಾರ ಉಡುಪಿಯ ಬ್ರಹ್ಮಾವರ ಠಾಣೆ ಪೊಲೀಸರು ಬಂಧಿಸಿದ್ದಾರೆ.



ನ್ಯಾಯಾಧೀಶರ ಮುಂದೆ ಹಾಜರು ಪಡಿಸಲಾಗಿ ಅವರನ್ನು 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಬಳಿಕ ಪೊಲೀಸರು ಅವರನ್ನು ಜೈಲಿಗೆ ಕಳುಹಿಸಿದ್ದಾರೆ.

ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿಎಲ್ ಸಂತೋಷ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದಲ್ಲಿ ಮಹೇಶ್ ಶೆಟ್ಟಿಯನ್ನು ಉಜಿರೆಯ ಅವರ ನಿವಾಸದಿಂದ ಪೊಲೀಸರು ವಶಕ್ಕೆ ಪಡೆದರು. ಈ ಮಧ್ಯೆ ತಿಮರೋಡಿ ಅವರ ವಕೀಲರು ಹಾಗೂ ಬೆಂಬಲಿಗರು ಕೂಡ ಉಡುಪಿಯತ್ತ ತೆರಳಿದ್ದರು.

ನಂತರ ಉಡುಪಿಯಲ್ಲಿ ತಿಮರೋಡಿಯನ್ನು ಬಂಧಿಸಲಾಗಿದೆ. ಮಹೇಶ್ ಶೆಟ್ಟಿ ತಿಮರೋಡಿಯನ್ನು ಬಂಧಿಸಿರುವುದನ್ನು ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹರಿರಾಮ್ ಶಂಕರ್ ಖಚಿತ ಪಡಿಸಿದ್ದರು. ತಿಮರೋಡಿಗೆ ಎರಡು ಬಾರಿ ನೋಟಿಸ್ ನೀಡಲಾಗಿತ್ತು. ಅದಕ್ಕೆ ಸರಿಯಾದ ಉತ್ತರ ನೀಡದೇ ಇರುವುದರಿಂದ ಅವರನ್ನು ವಶಕ್ಕೆ ಪಡೆದು, ನಂತರ ಬಂಧಿಸಲಾಯಿತು ಎಂದು ಅವರು ತಿಳಿಸಿದ್ದರು.

ಹೈಡ್ರಾಮ: ಮಹೇಶ್ ಶೆಟ್ಟಿ ತಿಮರೋಡಿಯನ್ನು ವಶಕ್ಕೆ ಪಡೆಯುವುದಕ್ಕಾಗಿ ಬ್ರಹ್ಮಾವರ ■ 6ನೇ ಪುಟಕ್ಕೆ

ಯೂಟ್ಯೂಬರ್ ಸಮೀರ್‌ಗೆ ನಿರೀಕ್ಷಣಾ ಜಾಮೀನು ಮಂಜೂರು

ಮಂಗಳೂರು, ಆ.21–ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಅಪರಾಧ ಕೃತ್ಯಗಳ ಕುರಿತು AI ವಿಡಿಯೋ ಮಾಡಿ, ಬಂಧನ ಭೀತಿಯಲ್ಲಿದ್ದ ಯೂಟ್ಯೂಬರ್ ಎಂ.ಡಿ. ಸಮೀರ್‌ಗೆ ದಕ್ಷಿಣ ಕನ್ನಡ ಜಿಲ್ಲಾ ನ್ಯಾಯಾಲಯ ಗುರುವಾರ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.



ಧರ್ಮಸ್ಥಳ ವಿರುದ್ಧ ವಿಡಿಯೋ ಮೂಲಕ ಅಪಪ್ರಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಧರ್ಮಸ್ಥಳ ಪೊಲೀಸರು ಜುಲೈ 12ರಂದು ಸಮೀರ್ ವಿರುದ್ಧ ಸುಮೋಟೋ ಕೇಸ್ ದಾಖಲಿಸಿಕೊಂಡಿದ್ದರು.

ಅಲ್ಲದೆ ಸಮೀರ್‌ನನ್ನು ವಶಕ್ಕೆ ಪಡೆಯಲು ಧರ್ಮಸ್ಥಳ ಪೊಲೀಸರು ಇಂದು ಬನ್ನೇರುಘಟ್ಟದ ನಿವಾಸಕ್ಕೆ ತೆರಳಿದ್ದರು. ಈ ಮಧ್ಯೆ, ಆ.19 ರಂದು ಜಾಮೀನು ಕೋರಿ ಸಮೀರ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ದಕ್ಷಿಣ ಕನ್ನಡ ಜಿಲ್ಲಾ ನ್ಯಾಯಾಲಯ ಇಂದು ಆರೋಪಿಗೆ ಜಾಮೀನು ನೀಡಿ ಆದೇಶ ಹೊರಡಿಸಿದೆ. ಇದರೊಂದಿಗೆ ಸಮೀರ್ ಬಂಧನದಿಂದ ಪಾರಾಗಿದ್ದಾರೆ. ■ 6ನೇ ಪುಟಕ್ಕೆ

ದಸರಾ ಮಹೋತ್ಸವ - 2025

ಸೆ.27ಕ್ಕೆ ಏರ್ ಶೋ

- ಕೇಂದ್ರ ಸಮ್ಮತಿ ; ಸಿಎಂ ಸಿದ್ದರಾಮಯ್ಯ ಧನ್ಯವಾದ
- ಭಾರತೀಯ ವಾಯುಪಡೆಯ ಸಾರಂಗ್ ತಂಡದಿಂದ ವೈಮಾನಿಕ ಸಾಹಸ


ಸಂಗ್ರಹ ಚಿತ್ರ

ಮೈಸೂರು,ಆ.21(ಎಂಟಿವೈ)– ಈ ಸಾಲಿನ ನಾಡಹಬ್ಬ ದಸರಾ ಮಹೋತ್ಸವದಲ್ಲಿ ಲೋಹದ ಹಕ್ಕಿಗಳ ಸಾಹಸ ಪ್ರದರ್ಶನವಿದೆ. ಇದಕ್ಕೆ ಕೇಂದ್ರ ಸರ್ಕಾರ ಒಪ್ಪಿಗೆ ನೀಡಿದ್ದು, ಮೈಸೂರಿನ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದಲ್ಲಿ ಭಾರತೀಯ ವಾಯುಪಡೆಯ ಸಾರಂಗ್ ತಂಡದಿಂದ ಮೈನವಿರೇಳಿಸುವ ವೈಮಾನಿಕ ಪ್ರದರ್ಶನವಿದೆ.

ಪ್ರಸಕ್ತ ಸಾಲಿನ ದಸರಾ ಮಹೋತ್ಸವ ಸೆ.22 ರಂದು ಆರಂಭವಾಗಲಿದ್ದು, ಅ.2ರಂದು ಜಂಬೂಸವಾರಿ ಮೆರವಣಿಗೆ ನೆರವೇರಲಿದೆ. ದಸರಾದ ಆಕರ್ಷಣೀಯ ಕಾರ್ಯಕ್ರಮದಲ್ಲಿ ಏರ್ ಶೋ ಒಂದಾಗಿದ್ದು, ಅಪಾರ ಸಂಖ್ಯೆಯ ವೀಕ್ಷಕರು ಆಗಸದಲ್ಲಿ ಲೋಹದ ಹಕ್ಕಿಗಳ ಚಮತ್ಕಾರ ಕಣ್ತುಂಬಿಕೊಳ್ಳಲು ತವಕಿಸುತ್ತಿದ್ದಾರೆ. ಕಳೆದ ವರ್ಷ ಏರ್ ಶೋ ಇರಲಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಳೆದ ತಿಂಗಳು ಕೇಂದ್ರದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿ ಮಾಡಿ, ವೈಮಾನಿಕ ಪ್ರದರ್ಶನಕ್ಕೆ ಅನುಮತಿ ನೀಡುವಂತೆ ಮನವಿ ಮಾಡಿದ್ದರು. ರಾಜ್ಯ ಸರ್ಕಾರದ ಮನವಿಯನ್ನು ಪುರಸ್ಕರಿಸಿದ ಕೇಂದ್ರ, ವೈಮಾನಿಕ ಪ್ರದರ್ಶನಕ್ಕೆ ಒಪ್ಪಿಗೆ ನೀಡಿದೆ.

2023ರಲ್ಲಿ ವೈಮಾನಿಕ ಪ್ರದರ್ಶನ ನಡೆದಿತ್ತು. ಆದರೆ ಕಳೆದ ವರ್ಷ ಏರ್‌ಶೋಗೆ ಕೇಂದ್ರ ಅನುಮತಿ ನಿರಾಕರಿಸಿತ್ತು. ವಾಯುಪಡೆಯ ಐಎಎಫ್‌ನ ಸಾರಂಗ್ ತಂಡ ವೈಮಾನಿಕ ಸಾಹಸ ಪ್ರದರ್ಶನ ನೀಡಲಿದೆ. ಅಲ್ಲದೆ, ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ (ಹೆಚ್‌ಎಎಲ್) ಅಭಿವೃದ್ಧಿಪಡಿಸಿದ ಧ್ರುವ ಹೆಲಿಕಾಪ್ಟರ್‌ಗಳು ವೈಮಾನಿಕ ಪ್ರದರ್ಶನದಲ್ಲಿ ಪಾಲ್ಗೊಳ್ಳಲಿವೆ.

ದಸರಾ ವೇಳೆ ಏರ್‌ಶೋ ಸಂಬಂಧ 'ಮೈಸೂರು ಮಿತ್ರ'ನೊಂದಿಗೆ ಜಿಲ್ಲಾಧಿಕಾರಿ ಜಿ. ಲಕ್ಷ್ಮಿಕಾಂತರೆಡ್ಡಿ, ಮಾತನಾಡಿ, ವೈಮಾನಿಕ ಪ್ರದರ್ಶನದ ವೇಳೆ ಫೈಟರ್ ಜೆಟ್‌ಗಳು ಪಾಲ್ಗೊಳ್ಳುವ ಸಂಬಂಧ ■ 6ನೇ ಪುಟಕ್ಕೆ

ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಭೇಟಿಯಾದ ಹೆಚ್.ಡಿ.ಕುಮಾರಸ್ವಾಮಿ

ಮಂಡ್ಯ ಜಿಲ್ಲೆ ಸೇರಿ ರಾಜ್ಯದ ಹೆದ್ದಾರಿ ಯೋಜನೆಗಳ ಬಗ್ಗೆ ಚರ್ಚೆ



ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರದ ಹೆದ್ದಾರಿ ಮತ್ತು ಭೂ ಸಾರಿಗೆ ಸಚಿವರಾದ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

ನವದೆಹಲಿ: ಮಂಡ್ಯ ಲೋಕಸಭಾ ಕ್ಷೇತ್ರದ ಹಾಲಿ ಹಾಗೂ ಮುಂದೆ ಕೈಗೊಳ್ಳಲಿರುವ ಹೆದ್ದಾರಿ ಯೋಜನೆಗಳ ಬಗ್ಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದ ಹೆದ್ದಾರಿ ಮತ್ತು ಭೂ ಸಾರಿಗೆ ಸಚಿವರಾದ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

ಗಡ್ಕರಿ ಅವರ ನಿವಾಸಕ್ಕೆ ತಮ್ಮ ಆಪ್ತ ಅಧಿಕಾರಿಗಳ ಜತೆ ತೆರಳಿ ಭೇಟಿ ಮಾಡಿದ ಕುಮಾರಸ್ವಾಮಿ, ಈಗಾಗಲೇ ಮಂಡ್ಯ ಜಿಲ್ಲೆಯಲ್ಲಿ ಕಾರ್ಯಗತ ಆಗುತ್ತಿರುವ ಹೆದ್ದಾರಿ ಯೋಜನೆಗಳ ಪ್ರಗತಿ ಬಗ್ಗೆ ಸಮಾಲೋಚನೆ ನಡೆಸಿದರು.

ಹಲವಾರು ಯೋಜನೆಗಳ ಬಗ್ಗೆ ಮನವಿ ಮಾಡಿದ್ದು, ಬಹುತೇಕ ಯೋಜನೆಗಳಿಗೆ ಹೆದ್ದಾರಿ ಸಚಿವರಿಂದ ಅನುಮೋದನೆ ದೊರೆತಿದೆ. ಉಳಿದ ಕೆಲವು ಯೋಜನೆಗಳ ಬಗ್ಗೆ ಸಚಿವರು ಹೆದ್ದಾರಿ ಸಚಿವರಲ್ಲಿ ಪ್ರಸ್ತಾಪಿಸಿದರು.

ಇದೇ ವೇಳೆ ಪಾಂಡವಪುರ ಸಕ್ಕರೆ ಕಾರ್ಖಾನೆ ಸಮೀಪದ ಸಿಡಿಎಸ್ ಕಾಲುವೆಯಿಂದ ದರಸಗುಪ್ಪೆ ನೀರು ಸಂಸ್ಕರಣ ಘಟಕದವರೆಗೂ ನಾಲ್ಕು ಪಥದ ಹೆದ್ದಾರಿಯ ಅಭಿವೃದ್ಧಿಗೆ ಅಗತ್ಯವಿರುವ ಹೆಚ್ಚುವರಿ ಅನುದಾನಕ್ಕೆ ನಿತಿನ್ ಗಡ್ಕರಿ ಅವರು ಅನುಮೋದನೆ ನೀಡಿದರು.

ಎಂಪ್ಲಾಯಬಿಲಿಟಿ ಡ್ರಿಲ್ ಕಾರ್ಯಾಗಾರಕ್ಕೆ ಚಾಲನೆ



ಮೈಸೂರು ವಿವಿ ಯುಸಿಹೆಚ್ ಕೇಂದ್ರದಲ್ಲಿ 'ಎಂಪ್ಲಾಯಬಿಲಿಟಿ ಡ್ರಿಲ್' ಕಾರ್ಯಾಗಾರಕ್ಕೆ ಗುರುವಾರ ಚಾಲನೆ ನೀಡಲಾಯಿತು.

ಮೈಸೂರು,ಆ.21(ಎಂಕೆ)– ಮೈಸೂರು ವಿವಿ ಮಾನಸಗಂಗೋತ್ರಿಯಲ್ಲಿರುವ ಯೂನಿವರ್ಸಿಟಿ ಕೆರಿಯರ್ ಹಬ್, ಬಿ.ಎನ್. ಬಹದ್ದೂರ್ ಇನ್‌ಸ್ಟಿಟ್ಯೂಟ್ ಹಾಗೂ ನವೋದಯ ಫೌಂಡೇಶನ್ ವತಿಯಿಂದ ಹಮ್ಮಿಕೊಂಡಿರುವ 3 ದಿನಗಳ 'ಎಂಪ್ಲಾಯಬಿಲಿಟಿ ಡ್ರಿಲ್ ಕಾರ್ಯಾಗಾರಕ್ಕೆ ಗುರುವಾರ ಚಾಲನೆ ನೀಡಲಾಯಿತು.

ಕಾರ್ಯಾಗಾರ ಉದ್ಘಾಟಿಸಿದ ಬಿ.ಎನ್. ಬಹದ್ದೂರ್ ಮುಖ್ಯಸ್ಥ ಹಾಗೂ ಯುಸಿಹೆಚ್ ಸಂಚಾಲಕ ಪ್ರೊ.ಆರ್.ಮಹೇಶ್ ಮಾತನಾಡಿ, ವೇಗವಾಗಿ ರೂಪಾಂತರಗೊಳ್ಳುತ್ತಿರುವ ಜಗತ್ತಿನಲ್ಲಿ ವಿದ್ಯಾರ್ಥಿಗಳು, ತಮ್ಮ ಆಯ್ಕೆ ವಿಷಯಗಳಲ್ಲಿ ಶೈಕ್ಷಣಿಕ ಮೂಲಭೂತ ಜ್ಞಾನ ಪಡೆಯುವುದರ ಜೊತೆಗೆ ನಿರಂತರವಾಗಿ ಬದಲಾಗುತ್ತಿರುವ ತಂತ್ರಜ್ಞಾನಾಧಾರಿತ ಸವಾಲುಗಳನ್ನು ಎದುರಿಸಲು ಮಾನಸಿಕವಾಗಿ ಸಿದ್ಧರಾಗಿರಬೇಕು ಎಂದು ಸಲಹೆ ನೀಡಿದರು.

ಈ ಕಾರ್ಯಾಗಾರವೂ ಸಂಯುಕ್ತ ಪ್ರಯತ್ನವಾಗಿದ್ದು, ಶಿಕ್ಷಣ ಹಾಗೂ ಕೈಗಾರಿಕಾ ಕ್ಷೇತ್ರದ ನಡುವೆ ಸೇತುವೆಯಾಗಿ, ಎಂ.ಬಿ.ಎ ವಿದ್ಯಾರ್ಥಿಗಳನ್ನು ಇಂದಿನ ಸ್ಪರ್ಧಾತ್ಮಕ ಮಾರುಕಟ್ಟೆಗೆ ಸಜ್ಜುಗೊಳಿಸುವ ಮಹತ್ತರ ಹೆಜ್ಜೆಯಾಗಿದೆ. ವಿದ್ಯಾರ್ಥಿಗಳಲ್ಲಿ ಪ್ರಸ್ತುತ ಸ್ಪರ್ಧಾತ್ಮಕ ಜಗತ್ತಿಗೆ ಸಜ್ಜಾಗುವ ಮನೋಭಾವನೆ ಬೆಳೆಸುವ ಉದ್ದೇಶ ಹೊಂದಿದ್ದು, ಅವರು ತಮ್ಮ ವೃತ್ತಿಜೀವನದ ಪಯಣವನ್ನು ಆರಂಭಿಸುವಾಗ ಎದುರಿಸಬೇಕಾದ ಅನೇಕ ಅಂಶಗಳ ಕುರಿತು ಒಳನೋಟ ಕುರಿತು ಪರಿಚಯಿಸಲಾಗುವುದು ಎಂದರು.

ಮಾರುಕಟ್ಟೆಯಲ್ಲಿ ಹೊಂದಿಕೊಳ್ಳುವಿಕೆ, ಸಹನಶೀಲತೆ ಮತ್ತು ಸರಿಯಾದ ಮನೋಭಾವ ರೂಪಿಸಲು ನೆರವಾಗುವ ಇಂತಹ ಪ್ರಯತ್ನಗಳು, ವಿದ್ಯಾರ್ಥಿಗಳನ್ನು ಕೇವಲ ವೃತ್ತಿಜೀವನಕ್ಕೆ ಸಿದ್ಧಗೊಳಿಸುವುದಲ್ಲದೆ, ಭವಿಷ್ಯದ ಉದ್ಯೋಗ ಕ್ಷೇತ್ರದಲ್ಲಿನ ಅವಕಾಶಗಳನ್ನು ಆತ್ಮವಿಶ್ವಾಸದಿಂದ ಎದುರಿಸಲು ಪ್ರೇರೇಪಿಸುತ್ತವೆ ಎಂದರು.

ಸಂಪನ್ಮೂಲ ವ್ಯಕ್ತಿ ವಿಜಯ್‌ಕುಮಾರ್ ಗುಪ್ತ, ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನದ ಕುರಿತು ತಿಳಿಸಿಕೊಟ್ಟರು. ಕಾರ್ಯಾಗಾರದಲ್ಲಿ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ನಿವೃತ್ತ ಪ್ರಾಧ್ಯಾಪಕ ಪ್ರೊ.ಪ್ರಸಾದ್, ನವೋದಯ ಸಂಸ್ಥೆಯ ನಿರ್ದೇಶಕ ಡಾ.ರವಿ, ಮ್ಯಾನೇಜಿಂಗ್ ಟ್ರಸ್ಟಿ ಪ್ರಿಯದರ್ಶಿನಿ, ರಮೇಶ್ ಇದ್ದರು.

ನಿಧನ



ಸುಬ್ಬೇಗೌಡ

ಮೈಸೂರು,ಆ.21–ಮೈಸೂರು ಜಿಲ್ಲೆಯ ಹುಣಸೂರು ತಾಲೂಕಿನ ಎಮ್ಮೆಕೊಪ್ಪಲು ನಿವಾಸಿ ಸುಬ್ಬೇಗೌಡ (75) ಗುರುವಾರ ಬೆಳಗ್ಗೆ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಧರ್ಮಪತ್ನಿ ಹಾಗೂ ನಿವೃತ್ತ ಯೋಧ ಸುರೇಶ್ (ಮೋಹನ್‌ಕುಮಾರ್) ಸೇರಿದಂತೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಶ್ರೀಯುತರು ಈ ಹಿಂದೆ ಹುಣಸೂರಿನಲ್ಲಿ ರಾಜ್ಯಮಟ್ಟದ ಖ್ಯಾತ ಕಬಡ್ಡಿ ಆಟಗಾರರಾಗಿ ಹಾಗೂ ಉತ್ತಮ ಕೃಷಿಕರಾಗಿಯೂ ಗುರುತಿಸಿಕೊಂಡಿದ್ದರು. ಅಂತ್ಯಕ್ರಿಯೆ ಎಮ್ಮೆಕೊಪ್ಪಲು ಗ್ರಾಮದಲ್ಲಿರುವ ಅವರ ತೋಟದಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶ್ರೀಮತಿ ಸಿ.ವಿ.ಕಮಲ



ಮೈಸೂರು ವಿದ್ಯಾರಣ್ಯಪುರಂ ನಿವಾಸಿ ಹಾಗೂ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾಗಿದ್ದ ವಿ.ಅನಂತು ಅವರ ಧರ್ಮಪತ್ನಿ, ನಿವೃತ್ತ ಎಲ್ಐಸಿ ನೌಕರರಾದ ಶ್ರೀಮತಿ ಸಿ.ವಿ.ಕಮಲ (66) ಅವರು ಅನಾರೋಗ್ಯ ನಿಮಿತ್ತ ಆ.19ರಂದು ನಿಧನರಾದರು. ಮೃತರು ಪುತ್ರಿ ವಿ.ಶ್ರುತಿ, ವಿ.ಗುಂಡಣ್ಣ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ನೆರವೇರಿತು.



ಎಂ.ಎನ್.ಸೂರ್ಯನಾರಾಯಣ

ಮೈಸೂರು, ಆ.21– ಮೈಸೂರಿನ ಶಿವರಾಂಪೇಟೆ ನಿವಾಸಿ, ಹೋಟೆಲ್ ಉದ್ಯಮಿ ಎಂ.ಎನ್.ಸೂರ್ಯನಾರಾಯಣ(59) ಅವರು ಗುರುವಾರ ಸಂಜೆ ನಿಧನರಾದರು.

ಇವರು ಪುತ್ರರಾದ ಶ್ರೀನಿಧಿ, ರವಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ನಾಳೆ(ಆ.22) ಬೆಳಗ್ಗೆ 7 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ವಿದ್ಯುತ್ ಚಿತಾಗಾರದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪಿ.ವಿ.ವಾಸುದೇವ್



ಮೈಸೂರು,ಆ.21– ಪ್ರಥಮ ದರ್ಜೆ ಗುತ್ತಿಗೆದಾರ ಮತ್ತು ವಿಜಯನಗರ 2ನೇ ಹಂತದ ನಿವಾಸಿ ಪಿ.ವಿ.ವಾಸುದೇವ್ (73) ಗುರುವಾರ ನಿಧನರಾದರು. ಮೃತರು ಪತ್ನಿ, ಪುತ್ರ ಹಾಗೂ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಅಂತ್ಯಕ್ರಿಯೆ ನಾಳೆ (ಆ.22) ಗೋಕುಲಂ ಸ್ಮಶಾನದಲ್ಲಿ ನೆರವೇರಲಿದೆ ಎಂದು ಮೃತರ ಕುಟುಂಬ ಮೂಲಗಳು ತಿಳಿಸಿವೆ.

ಗ್ರಾಮಾಂತರ ಪ್ರದೇಶದ ಕಾಯಂ ಪೌರಕಾರ್ಮಿಕರ ಸಮಸ್ಯೆ ಬಗೆಹರಿಸಲು ಆಗ್ರಹ

ಮೈಸೂರು, ಆ.21(ಜಿಎ)–ಮೈಸೂರು ಜಿಲ್ಲಾ ಗ್ರಾಮಾಂತರ ವ್ಯಾಪ್ತಿಯ ಸ್ಥಳೀಯ ಸಂಸ್ಥೆಗಳಲ್ಲಿ ಕಾಯಂ ಪೌರಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವವರು ವೇತನ ಪಾವತಿ ವಿಳಂಬ ಸೇರಿದಂತೆ ಹಲವಾರು ಸಮಸ್ಯೆ ಎದುರಿಸುತ್ತಿದ್ದಾರೆ. ಹೀಗಾಗಿ ಸಂಬಂಧಿಸಿದವರು ಕ್ರಮ ವಹಿಸಬೇಕೆಂದು ರಾಜ್ಯ ಪೌರಕಾರ್ಮಿಕರ (ಸಫಾಯಿ ಕರ್ಮಚಾರಿಗಳ) ಮಹಾ ಸಂಘದ ರಾಜ್ಯಾಧ್ಯಕ್ಷ ಬಿ.ಎಸ್.ಸುಬ್ರಹ್ಮಣ್ಯ ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೌರಕಾರ್ಮಿಕರಿಗೆ ಗೃಹಭಾಗ್ಯ ಯೋಜನೆ ಅಡಿಯಲ್ಲಿ ಮನೆ ಅಥವಾ ನಿವೇಶನ ನೀಡಿಲ್ಲ. ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ಪೌರಕಾರ್ಮಿಕರಿಗೆ ಸ್ಥಳೀಯ ಸಂಸ್ಥೆಗಳಲ್ಲಿ ಇಎಸ್ಐ, ಪಿಎಫ್‌ನಂತಹ ಭದ್ರತೆ ಒದಗಿಸಿಲ್ಲ. ಜಿಲ್ಲಾಡಳಿತ ಕೂಡಲೇ ಇತ್ತ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಮೈಸೂರು ಗ್ರಾಮಾಂತರ ಭಾಗದಲ್ಲಿ ಆದಿದ್ರಾವಿಡ ಸಮುದಾಯದವರು ಹೆಚ್ಚಾಗಿ ಪೌರಕಾರ್ಮಿಕರ ಕೆಲಸ ನಿರ್ವಹಿಸಿಕೊಂಡು ಬರುತ್ತಿದ್ದಾರೆ. ಆದರೆ ಈಗ ಹೊರಗುತ್ತಿಗೆ ಅಡಿಯಲ್ಲಿ ಲೋಡರ್ಸ್, ಸ್ವಚ್ಛತಾ ವಾಹನ ಚಾಲಕರ ನೇಮಕ ವೇಳೆ ಸ್ಥಳೀಯ ಸಂಸ್ಥೆ ಅಧಿಕಾರಿ, ಸಿಬ್ಬಂದಿ ವರ್ಗ ಲಂಚ ಪಡೆಯುತ್ತಿದ್ದಾರೆ. ಆದ್ದರಿಂದ ಜಿಲ್ಲಾಡಳಿತ ಸಮಸ್ಯೆ ಬಗೆಹರಿಸಬೇಕೆಂದು ಮನವಿ ಮಾಡಿದರು. ಗೋಷ್ಠಿಯಲ್ಲಿ ಪೆಂಚಲಯ್ಯ, ಮೈಸೂರು ಮಹದೇವ, ಅಮಾಸೆ ಮತ್ತಿತರರಿದ್ದರು.

ಅಲೆಮಾರಿ ಸೇರಿ ಪರಿಶಿಷ್ಟ ಜಾತಿಯ ಹಲವು ವರ್ಗಕ್ಕೆ ಒಳ ಮೀಸಲಾತಿಯಲ್ಲಿ ಅನ್ಯಾಯ

ಮಾಜಿ ಸಚಿವ ಮಹೇಶ್ ಆರೋಪ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಗುರುವಾರ ಮಾಜಿ ಸಚಿವ ಎನ್.ಮಹೇಶ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು, ಆ.21(ಬಿಎಲ್‌ಯು)–ಪರಿಶಿಷ್ಟ ಜಾತಿಯ ಅಲೆಮಾರಿ ಸೇರಿದಂತೆ ಹಲವು ಸಮುದಾಯಗಳಿಗೆ ಒಳ ಮೀಸಲಾತಿಯಲ್ಲಿ ರಾಜ್ಯ ಸರ್ಕಾರ ಅನ್ಯಾಯ ಮಾಡಿದೆ ಎಂದು ಮಾಜಿ ಸಚಿವ ಎನ್.ಮಹೇಶ್ ಆರೋಪಿಸಿದ್ದಾರೆ.

ನಗರದ ಬಿಜೆಪಿ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಿಶಿಷ್ಟ ಜಾತಿಯಲ್ಲಿರುವ 101 ಪಂಗಡಗಳಲ್ಲಿ ಕೆಲವು ವರ್ಗದವರಿಗೆ ಒಳ ಮೀಸಲಾತಿಯಲ್ಲಿ ನ್ಯಾಯ ದೊರಕಿರಲಿಲ್ಲ. ಇದರಿಂದ ಕಳೆದ 30 ವರ್ಷಗಳಿಂದ ನಿರಂತರ ಹೋರಾಟ ನಡೆಸುತ್ತಾ ಬಂದಿದ್ದರು. ಆದರೆ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೋರಾಟಕ್ಕೆ 'ಫುಲ್ ಸ್ಟಾಪ್' ಇಡುವ ಬದಲು 'ಕಾಮ' ಇಟ್ಟಿದ್ದಾರೆ ಎಂದು ಆಪಾದಿಸಿದರು.

ಅಲೆಮಾರಿ, ಅರೆ ಅಲೆಮಾರಿ ಸೇರಿದಂತೆ ಹಲವು ಸಮುದಾಯಗಳಿಗೆ ಒಳಮೀಸಲಾತಿಯಲ್ಲಿ ನ್ಯಾಯಯುತವಾಗಿ ದೊರೆಯಬೇಕಾದ ಮೀಸಲಾತಿ ದೊರೆತಿಲ್ಲ. ಇದರಿಂದ ಈ ಸಮುದಾಯದವರು ಈಗ ಹೋರಾಟ ಆರಂಭಿಸಿದ್ದಾರೆ ಎಂದು ಮಹೇಶ್ ತಿಳಿಸಿದರು.

ಒಳ ಮೀಸಲಾತಿಯನ್ನು ಶೇಕಡ 50:50 ಅನುಪಾತದಲ್ಲಿ ಹಂಚಿಕೆ ಮಾಡಿ ರಾಜ್ಯ ಸರ್ಕಾರ ಕೈ ತೊಳೆದುಕೊಂಡಿದೆ. ಈ ಮೂಲಕ ಯಾವುದೇ ಮಾನದಂಡವಿಲ್ಲದೆ ಒಳ ಮೀಸಲಾತಿ ಹಂಚಿಕೆ ಮಾಡಿಲ್ಲ. ಪರಿಶಿಷ್ಟ ಜಾತಿಯ ಕೆಲವು ವರ್ಗಗಳಿಗೆ ಕೇಕ್ ಕತ್ತರಿಸಿದಂತೆ ಮೀಸಲಾತಿ ಹಂಚಿಕೆ ಮಾಡಿದೆ. ಆದರೆ ಅಲೆಮಾರಿ, ಅರೆ ಅಲೆಮಾರಿ ಸೇರಿದಂತೆ ಹಲವು ವರ್ಗದವರಿಗೆ ಅನ್ಯಾಯ ಮಾಡಲಾಗಿದೆ ಎಂದು ಹೇಳಿದರು.

ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದ ವರದಿ ವೈಜ್ಞಾನಿಕವಾಗಿದ್ದು, ಸರಿಯಾಗಿ ಒಳ ಮೀಸಲಾತಿ ಹಂಚಿಕೆ ಮಾಡಿಲ್ಲ. ರಾಜ್ಯ ಸರ್ಕಾರ ಕೂಡ ಇದನ್ನು ಕಣ್ಮುಚ್ಚಿ ಒಪ್ಪಿದೆ ಎಂದು ಮಹೇಶ್ ದೂರಿದರು.

ಜಂಗಮ, ಬೇಡ ಜಂಗಮ ಮತ್ತು ಅಂತರಜಾತಿ ವಿವಾಹವಾದವರನ್ನು ಒಳ ಮೀಸಲಾತಿಯಲ್ಲಿ ಪರಿಗಣಿಸಿಲ್ಲ. ಹಾಗಾದರೆ ಇವರು ಎಲ್ಲಿಗೆ ಹೋಗಬೇಕು, ಇವರಿಗೆ ಯಾವ ರೀತಿ ನ್ಯಾಯ ದೊರಕಿಸಿದ್ದೀರಾ ಎಂದು ಪ್ರಶ್ನಿಸಿದರು.

ವಿಧಾನಸಭಾ ಅಧಿವೇಶನದಲ್ಲಿ ಒಳ ಮೀಸಲಾತಿಯನ್ನು ಪ್ರಕಟಿಸಿ ಸ್ಟೇಟ್‌ಮೆಂಟ್ ನೀಡಿದ ಸಿದ್ದರಾಮಯ್ಯ ಅವರು ಶಾಸಕರ ಸಂಶಯಗಳಿಗೆ ಯಾವುದೇ ಉತ್ತರ ನೀಡದೆ ತಪ್ಪಿಸಿಕೊಂಡು ಹೋಗಿದ್ದಾರೆ. ಹಾಗಾದರೆ ಜನರ ಸಂಶಯಗಳಿಗೆ ಸರ್ಕಾರ ಯಾವ ರೀತಿ ಉತ್ತರ ನೀಡುತ್ತದೆ ಎಂದು ಪ್ರಶ್ನಿಸಿದರು. ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹಂಚಿಕೆ ಮಾಡಬೇಕು. ಅಧಿಸೂಚನೆ ಹೊರಡಿಸುವ ಮುನ್ನ ಸರ್ಕಾರ ಈ ಸಮಸ್ಯೆ ಪರಿಹಾರ ಮಾಡಬೇಕು ಎಂದು ಮಹೇಶ್ ಆಗ್ರಹಿಸಿದರು.

ಮಾಜಿ ಉಪ ಮೇಯರ್ ಶೈಲೇಂದ್ರ, ಎಸ್‌ಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ಕಾರ್ತಿಕ್ ಮರಿಯಪ್ಪ, ಗ್ರಾಮಾಂತರ ಅಧ್ಯಕ್ಷ ಅನಿಲ್, ಮಾಧ್ಯಮ ಸಂಚಾಲಕ ಮಹೇಶ್ ರಾಜೇಅರಸ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಮೈಸೂರಿಂದ ಅಭಿಯಾನ

"ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಮಾಡುತ್ತಿರುವ ಕೆಲವರ ಷಡ್ಯಂತ್ರ ಖಂಡಿಸಿ ಮೈಸೂರು ಸೇರಿದಂತೆ ರಾಜ್ಯಾದ್ಯಂತ ಅಭಿಯಾನ ಮಾಡಲಾಗುವುದು ಎಂದು ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ ಹೇಳಿದರು.

ಧರ್ಮಸ್ಥಳದ ಬಗ್ಗೆ ಆಧಾರರಹಿತ ಆರೋಪ ಮಾಡಿದ ತಕ್ಷಣ ರಾಜ್ಯ ಸರ್ಕಾರ ಎಸ್‌ಐಟಿ ರಚನೆ ಮಾಡಿದೆ. ಎಸ್‌ಐಟಿ ಇಡೀ ಧರ್ಮಸ್ಥಳವನ್ನು ತಲಾಷ್ ಮಾಡಿದರೂ ಅಸ್ಥಿಪಂಜರ ಸಿಗಲಿಲ್ಲ. ಈ ಮೂಲಕ ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಮಾಡುತ್ತಿರುವವರೊಂದಿಗೆ ಸರ್ಕಾರ ಕೂಡ ಶಾಮೀಲಾಗಿದೆ ಎಂದು ದೂರಿದರು.

ಮೈಸೂರಿನಿಂದ ಬೈಕ್ ಹಾಗೂ ಕಾರ್‌ಗಳಲ್ಲಿ ಧರ್ಮಸ್ಥಳಕ್ಕೆ ಹೋಗುತ್ತೇವೆ. ಈ ಮೂಲಕ ಧರ್ಮಸ್ಥಳದ ಬಗ್ಗೆ ನಡೆಯುತ್ತಿರುವ ಅಪ ಪ್ರಚಾರವನ್ನು ಜನರಿಗೆ ಮನವರಿಕೆ ಮಾಡಿಕೊಡುತ್ತೇವೆ ಎಂದು ಎಲ್.ನಾಗೇಂದ್ರ ತಿಳಿಸಿದರು.

ಪ್ರತಿಪಕ್ಷಗಳ ಪ್ರತಿಭಟನೆ ನಡುವೆ ಲೋಕಸಭೆಯಲ್ಲಿ 12, ರಾಜ್ಯಸಭೆಯಲ್ಲಿ 15 ಮಸೂದೆ ಅಂಗೀಕಾರ

ನವದೆಹಲಿ: ಒಂದು ತಿಂಗಳ ಕಾಲ ನಡೆದ ಸಂಸತ್ ಮುಂಗಾರು ಅಧಿವೇಶನಕ್ಕೆ ಗುರುವಾರ ತೆರೆ ಬಿದಿದ್ದು, ಪ್ರತಿಪಕ್ಷಗಳ ಪ್ರತಿಭಟನೆ, ಮುಂದೂಡಿಕೆ ಮತ್ತು ಸಭಾತ್ಯಾಗದ ನಡುವೆಯೇ ಲೋಕಸಭೆಯಲ್ಲಿ 12 ಮಸೂದೆಗಳು ಮತ್ತು ರಾಜ್ಯಸಭೆಯಲ್ಲಿ 15 ಮಸೂದೆಗಳನ್ನು ಅಂಗೀಕರಿಸಲಾಗಿದೆ. ಈ ಬಾರಿಯ ಮುಂಗಾರು ಅಧಿವೇಶನ ಜು.21ರಂದು ಆರಂಭವಾಯಿತು. ಎರಡೂ ಸದನಗಳಲ್ಲಿ 'ಆಪರೇಷನ್ ಸಿಂಧೂರ್' ಕುರಿತ ಚರ್ಚೆ ಹೊರತುಪಡಿಸಿ, ಇತರ ಯಾವುದೇ ವಿಷಯದ ಬಗ್ಗೆ ಚರ್ಚೆ ನಡೆಯಲೇ ಇಲ್ಲ. ಆಪರೇಷನ್ ಸಿಂಧೂರ್ ಕುರಿತು ಚರ್ಚೆಗೆ ಆರಂಭದಲ್ಲಿ ಒತ್ತಾಯಿ ಸಿದ್ದ ವಿರೋಧ ಪಕ್ಷಗಳು, ನಂತರ ಬಿಹಾರ ದಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಚರ್ಚೆಗೆ ಆಗ್ರಹಿಸಿ ಪ್ರತಿಭಟನೆ ಮುಂದುವರೆಸಿದವು. ಪ್ರತಿಪಕ್ಷಗಳ ನಿರಂತರ ಪ್ರತಿಭಟನೆ ಮತ್ತು ಗದ್ದಲದ ನಡುವೆ ಸಂಸತ್ ಮಾನ್ಸೂನ್ ಅಧಿವೇಶನ ಇಂದು ಮುಕ್ತಾಯಗೊಂಡಿತು.

ಲೋಕಸಭೆ ಅಂಗೀಕರಿಸಿದ ಮಸೂದೆಗಳು: ಲೋಕಸಭೆಯಲ್ಲಿ ಗೋವಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಪಂಗಡಗಳ ಪ್ರಾತಿನಿಧ್ಯದ ಮರು ಹೊಂದಾಣಿಕೆ ಮಸೂದೆ, 2025, ಮರ್ಚೆಂಟ್ ಶಿಪ್ಪಿಂಗ್ ಮಸೂದೆ, 2025, ಮಣಿಪುರ ಸರಕು–ಸೇವಾ ತೆರಿಗೆ (ತಿದ್ದುಪಡಿ) ಮಸೂದೆ 2025, ಮಣಿಪುರ ವಿನಿಯೋಗ (ಸಂ.2) ಮಸೂದೆ 2025, ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ 2025 ಮತ್ತು ರಾಷ್ಟ್ರೀಯ ಡೋಪಿಂಗ್ ವಿರೋಧಿ (ತಿದ್ದುಪಡಿ) ಮಸೂದೆ 2025, ಆದಾಯ ತೆರಿಗೆ ಮಸೂದೆ 2025, ತೆರಿಗೆ ಕಾನೂನುಗಳು(ತಿದ್ದುಪಡಿ) ಮಸೂದೆ, 2025, ಭಾರತೀಯ ಬಂದರು ಮಸೂದೆ 2025 ಮತ್ತು ಆನ್‌ಲೈನ್ ಗೇಮಿಂಗ್‌ನ ಪ್ರಚಾರ ಮತ್ತು ನಿಯಂತ್ರಣ ಮಸೂದೆ 2025 ಸೇರಿದಂತೆ 12 ಮಸೂದೆಗಳನ್ನು ಅಂಗೀಕರಿಸಲಾಯಿತು.

ರಾಜ್ಯಸಭೆ ಅಂಗೀಕರಿಸಿದ ಮಸೂದೆಗಳು: ಸರಕು ಸಾಗಣೆ ಮಸೂದೆ 2025, ಸಮುದ್ರದ ಮೂಲಕ ಸರಕುಗಳ ಸಾಗಣೆ ಮಸೂದೆ 2025, ಕರಾವಳಿ ಸಾಗಣೆ ಮಸೂದೆ 2025, ಮಣಿಪುರ ಸರಕು–ಸೇವಾ ತೆರಿಗೆ (ತಿದ್ದುಪಡಿ) ಮಸೂದೆ 2025, ಮಣಿಪುರ ವಿನಿಯೋಗ (ಸಂ.2) ಮಸೂದೆ 2025, ವ್ಯಾಪಾರಿ ಸಾಗಣೆ ಮಸೂದೆ 2025 ಮತ್ತು ಗೋವಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಪಂಗಡಗಳ ಪ್ರಾತಿನಿಧ್ಯದ ಮರು ಹೊಂದಾಣಿಕೆ ಮಸೂದೆ 2025, ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ 2025, ರಾಷ್ಟ್ರೀಯ ಡೋಪಿಂಗ್ ವಿರೋಧಿ(ತಿದ್ದುಪಡಿ) ಮಸೂದೆ 2025, ಆದಾಯ ತೆರಿಗೆ ಮಸೂದೆ 2025, ತೆರಿಗೆ ಕಾನೂನುಗಳು (ತಿದ್ದುಪಡಿ) ಮಸೂದೆ 2025, ಭಾರತೀಯ ಬಂದರು ಮಸೂದೆ 2025, ಗಣಿ ಮತ್ತು ಖನಿಜಗಳು (ಅಭಿವೃದ್ಧಿ ಮತ್ತು ನಿಯಂತ್ರಣ) ತಿದ್ದುಪಡಿ ಮಸೂದೆ 2025, ಭಾರತೀಯ ನಿರ್ವಹಣಾ ಸಂಸ್ಥೆಗಳ(ತಿದ್ದುಪಡಿ) ಮಸೂದೆ 2025, ಆನ್‌ಲೈನ್ ಗೇಮಿಂಗ್‌ನ ಪ್ರಚಾರ ಮತ್ತು ನಿಯಂತ್ರಣ ಮಸೂದೆ, 2025.

ಶಾಸಕ ಜಿಟಿಡಿ ಹೇಳಿಕೆಗೆ ದಲಿತ ಪ್ಯಾಂಥರ್ಸ್ ಖಂಡನೆ

ಮೈಸೂರು, ಆ.21(ಜಿಎ)–ವಿಧಾನಸಭೆಯಲ್ಲಿ ಸಹಕಾರ ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿ, ಪಂಗಡದವರು ಮತ್ತು ಮಹಿಳೆಯರಿಗೆ ನಾಮನಿರ್ದೇಶಿತ ನೇಮಕ ಹಾಗೂ ರೋಸ್ಟರ್ ಪದ್ಧತಿ ಅಧಿಕಾರ ಹಂಚಿಕೆ ಮಾಡುವುದಕ್ಕೆ ಸಂಬಂಧಿಸಿದ ಕಾಯ್ದೆ ತಿದ್ದುಪಡಿ ಮಂಡಿಸುವಾಗ ಅದನ್ನು ಶಾಸಕ ಜಿ.ಟಿ. ದೇವೇಗೌಡ ಅವರು ವಿರೋಧಿಸಿರುವುದನ್ನು ಕರ್ನಾಟಕ ದಲಿತ ಪ್ಯಾಂಥರ್ಸ್ ಖಂಡಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ದಲಿತ ಪ್ಯಾಂಥರ್ಸ್ ಅಧ್ಯಕ್ಷ ಯೋಗ ನರಸಿಂಹ ಮಾತನಾಡಿ, ಶಾಸಕರು ಕೂಡಲೇ ಎಲ್ಲರ ಕ್ಷಮೆ ಯಾಚಿಸಬೇಕು. ಚಾಮುಂಡೇಶ್ವರಿ ಕ್ಷೇತ್ರದಲ್ಲಿ ದಲಿತರು, ಮಹಿಳೆಯರು, ಹಿಂದುಳಿದವರ ಮತ ಪಡೆದು ಗೆದ್ದಿರುವುದನ್ನು ಮರೆತಂತಿದೆ. ಇವರ ಹೇಳಿಕೆ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದೆ. ಹೀಗಾಗಿ ಇವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು. ಗೋಷ್ಠಿಯಲ್ಲಿ ಕಿರಣ್‌ಕುಮಾರ್, ದೇವೇಂದ್ರ ಚೇತನ್ ಕಾಂತರಾಜು, ಕುಮಾರ್ ಇದ್ದರು.

ಪಾನಮತ್ತ ಸ್ನೇಹಿತರ ನಡುವೆ ಗಲಾಟೆ: ಓರ್ವನಿಗೆ ಗಾಯ

ಮೈಸೂರು, ಆ.21(ಬಿಎಲ್‌ಯು)– ಪಾನಮತ್ತ ಸ್ನೇಹಿತರ ನಡುವೆ ಗಲಾಟೆ ನಡೆದು, ಒಬ್ಬ ಗಾಯಗೊಂಡಿರುವ ಘಟನೆ ಮೈಸೂರಿನ ಕಲ್ಯಾಣಗಿರಿ ನಗರದಲ್ಲಿ ನಿನ್ನೆ ಸಂಭವಿಸಿದೆ. ನಗರದ ಉದಯಗಿರಿ ಪೊಲೀಸ್ ಠಾಣಾ ವ್ಯಾಪ್ತಿಯ ವಾಸೀಮ್ (28) ಗಾಯಗೊಂಡ ವ್ಯಕ್ತಿಯಾಗಿದ್ದಾನೆ. ಸೆಂಟ್ರಿಂಗ್ ವೃತ್ತಿ ಮಾಡುತ್ತಿದ್ದ ವಾಸೀಮ್ ಕೆಲಸ ಮುಗಿಸಿ ಡಾ.ರಾಜ್‌ಕುಮಾರ್ ರಸ್ತೆಯಲ್ಲಿ ಹೋಗುವಾಗ ಕಾರ್ತಿಕ್ ಮತ್ತು ವೇಲು ಎದುರಾಗಿದ್ದಾರೆ. ಪಾನಮತ್ತರಾಗಿದ್ದ ಮೂವರು ಕ್ಷುಲ್ಲಕ ವಿಚಾರಕ್ಕೆ ಗಲಾಟೆ ಮಾಡಿಕೊಂಡಿದ್ದಾರೆ. ಈ ವೇಳೆ ವಾಸೀಮ್ ಮೇಲೆ ಹಲ್ಲೆ ನಡೆಸಿ ಕಾರ್ತಿಕ್ ಮತ್ತು ವೇಲು ಪರಾರಿಯಾಗಿದ್ದಾರೆ. ಗಾಯಗೊಂಡ ವಾಸೀಮ್‌ನನ್ನು ಖಾಸಗಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಈ ಸಂಬಂಧ ಉದಯಗಿರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

22.08.2025 ಶುಕ್ರವಾರ, ಮಳೆ ನಕ್ಷತ್ರ: ಮಖ 17.08.2025 ರಿಂದ 30.08.2025
ವಿಶ್ವವಸು ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ,
ತಿಥಿ: ಚತುರ್ದಶಿ, ನಕ್ಷತ್ರ: ಆಶ್ಲೇಷ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

- **ಶ್ರೀ ವೀರಭದ್ರೇಶ್ವರ ಸ್ವಾಮಿ ಹಾಗೂ ಶ್ರೀಚಾಮರಾಜೇಶ್ವರ ಸ್ವಾಮಿ ದೇವಸ್ಥಾನ ಟ್ರಸ್ಟ್:** ಶ್ರೀ ವೀರಭದ್ರೇಶ್ವರ ಸ್ವಾಮಿಯವರ ಜನ್ಮೋತ್ಸವ, ಮಹಾ ರಥೋತ್ಸವ ಹಾಗೂ ಶ್ರಾವಣ ಮಾಸದಲ್ಲಿ ನಡೆಯುವ ಪೂಜಾ ಕಾರ್ಯಕ್ರಮ, ಸ್ಥಳ: ಶ್ರೀ ವೀರಭದ್ರೇಶ್ವರ ಸ್ವಾಮಿ ಹಾಗೂ ಶ್ರೀಚಾಮರಾಜೇಶ್ವರ ಸ್ವಾಮಿ ದೇವಸ್ಥಾನ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 9ರಿಂದ ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಹೈಪೋಥೈರಾಯ್ಡಿಸಮ್‌ಗೆ ಚಿಕಿತ್ಸಾ ಶಿಬಿರ, ಮಧು ಮೇಹದ ಗಾಯಗಳಿಗೆ ಚಿಕಿತ್ಸೆ, ಮೈಗ್ರೇನ್‌ಗೆ ಪರಿಹಾರ ಹಾಗೂ ಆಕ್ಯುಪಂಕ್ಚರ್ ಚಿಕಿತ್ಸೆ, ಎಲ್ಲಾ ತರಹದ ತಲೆನೋವಿಗೆ ಚಿಕಿತ್ಸೆ, ಆರ್ಥರೈಟಿಸ್‌ಗೆ, ಕುತ್ತಿಗೆ ನೋವು ಮತ್ತು ಭುಜದ ನೋವಿಗೆ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸಯಾಟೀಕ, ಗೃದ್ರಸಿ ರೋಗದ ಚಿಕಿತ್ಸಾ ಶಿಬಿರ, ಸ್ಥಳ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ. ಆಲನಹಳ್ಳಿ.
- **ರಾಮ್‌ಸನ್ಸ್ ಬೊಂಬೆ ಮನೆ:** ಬೊಂಬೆ ಪ್ರದರ್ಶನ. ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ. ಬೆಳಗ್ಗೆ 10 ರಿಂದ.
- **ಕಾವೇರಿ ಆಯುರ್ವೇದ ಆಸ್ಪತ್ರೆ :** ಡಿಜಿಟಲ್ ಡಿಟಾಕ್ಸ್ ಮತ್ತು ಸ್ಕ್ರೀನ್ ಅತ್ಯಾಶಕ್ತಿ ಅರಿವು ಶಿಬಿರ, ಗರ್ಭ ಸಂಸ್ಕಾರ, ಬೀಜ ಗ್ರಂಥಿ ದೋಷ, ಮಕ್ಕಳಲ್ಲಿ ಕಂಡು ಬರುವ ಕೆಮ್ಮು, ಅಸ್ತಮಾ, ಬೆನ್ನು ನೋವಿಗೆ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್. ಬೆಳಗ್ಗೆ 10 ರಿಂದ.
- **ಶ್ರೀ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು, ಶ್ರೀ ಗುಬ್ಬಿ ವೀರಣ್ಣ ಅಧ್ಯಯನ ಪೀಠ, ವಿಶ್ವವಿದ್ಯಾನಿಲಯ ಲಲಿತಕಲಾ ಕಾಲೇಜು :** ಪ್ರದರ್ಶಕ ಕಲೆ ಮತ್ತು ದೃಶ್ಯ ಕಲೆಗಳ ಅನುಸಂಧಾನ ಕುರಿತು ವಿಚಾರ ಸಂಕಿರಣ, ಉದ್ಘಾಟನೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಮುಖ್ಯ ಅತಿಥಿಗಳು: ಹಿರಿಯ ರಂಗಕರ್ಮಿ ಡಾ. ಸಿ. ಬಸವಲಿಂಗಯ್ಯ, ವಿದುಷಿ ಡಾ. ತುಳಸಿ ರಾಮಚಂದ್ರ, ಅಧ್ಯಕ್ಷತೆ : ಶ್ರೀ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ಡೀನ್ ಎ. ದೇವರಾಜು, ಉಪಸ್ಥಿತರು : ಪ್ರೊ. ಅನಿಟ ಬ್ರ್ಯಾಗ್ಸ್, ಶ್ರೀಮತಿ ನಿರ್ಮಲಾ ಮಠಪತಿ, ಎ.ಪಿ. ಚಂದ್ರಶೇಖರ್, ಸ್ಥಳ: ಕಾವಾ ಕಾಲೇಜು, ಬೆಳಗ್ಗೆ 10.30ಕ್ಕೆ.
- **ಶ್ರೀಸುತ್ತೂರು ಮಠ (ಮೈಸೂರು ಶಾಖೆ) :** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ. ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ.ಕೆ.ಅನಂತರಾಮು ಅವರಿಂದ ಪ್ರವಚನ, ವಾಚನ–ಗಮಕ ವಿದ್ವಾನ್ ಕೃ.ರಾಮಚಂದ್ರ, ಸಾಮೂಹಿಕ ಪ್ರಾರ್ಥನೆ, ಸ್ಥಳ: ಮಠದ ಆವರಣ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6 ಗಂಟೆಯಿಂದ.
- **ಶರಣ ಜ್ಯೋತಿ ಪ್ರಸಾರಾಂಗ, ಶ್ರೀ ನಟರಾಜ ಪ್ರತಿಷ್ಠಾನ, ಶ್ರೀ ನಟರಾಜ ಬಾಲಕಿಯರ ಪದವಿಪೂರ್ವ ಕಾಲೇಜು, ಮೈಸೂರು ಆರ್ಟ್ ಗ್ಯಾಲರಿ :** ವೈರಾಗ್ಯನಿಧಿ ಅಲ್ಲಮಪ್ರಭು ಸಚಿತ್ರಕಥಾ ಪುಸ್ತಕ ಬಿಡುಗಡೆ ಸಮಾರಂಭ, ಸಾನ್ನಿಧ್ಯ : ಶ್ರೀ ಹೊಸಮಠದ ಶ್ರೀ ಚಿದಾನಂದ ಸ್ವಾಮೀಜಿ, ಪುಸ್ತಕ ಲೋಕಾರ್ಪಣೆ : ಹಿರಿಯ ಸಾಹಿತಿ ಪ್ರೊ. ಅರವಿಂದ ಮಾಲಗತ್ತಿ, ಬಹುಮಾನ ವಿತರಣೆ : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಅಧ್ಯಕ್ಷತೆ : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಉಪಸ್ಥಿತರು : ಹಿರಿಯ ಕಲಾವಿದ ಎಲ್. ಶಿವಲಿಂಗಪ್ಪ, ಸ್ಥಳ: ನಟರಾಜ ಸಭಾಂಗಣ, ಬೆಳಗ್ಗೆ 11ಕ್ಕೆ.
- **ಭವಾನಿ ಇ ಟೆಂಡರ್ಸ್ :** ಜಿಎಸ್‌ಟಿ ನೋಂದಣಿ ಮತ್ತು ಯುಪಿಐ ವ್ಯವಹಾರಗಳು ಕುರಿತು ಉಪನ್ಯಾಸ, ಸಂಪನ್ಮೂಲ ವ್ಯಕ್ತಿ: ವಕೀಲರು, ತೆರಿಗೆ ಸಲಹೆಗಾರ ಬಿ.ಸಿ.ಭಟ್, ಸ್ಥಳ: ರೋಟರಿ ಚಿಲ್ಡ್ರನ್ಸ್ ಶಾಲೆ, ಸಂಜೆ 4ರಿಂದ.
- **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಕದಂಬ ರಂಗ ವೇದಿಕೆ :** ಅಭಿನಂದನಾ ಸಮಾರಂಭ, ಅಭಿನಂದಿತರು: ಸಾಂಸ್ಕೃತಿಕ ಚಿಂತಕ ನಾಗರಾಜ್ ವಿ. ಬೈರಿ, ಅಭಿನಂದಿಸುವವರು : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್, ಅಧ್ಯಕ್ಷತೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಅಭಿನಂದಿತರ ಬಗ್ಗೆ : ಕವಿ ಡಾ. ಜಯಪ್ಪ ಹೊನ್ನಾಳಿ, ಪ್ರಾಸ್ತಾವಿಕ ನುಡಿ: ಕದಂಬ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ, ಸಂಜೆ 4 ರಿಂದ ಬೆಟ್ಟೇಗೌಡ ಮತ್ತು ತಂಡದವರಿಂದ ಸುಗಮ ಸಂಗೀತ ಕಾರ್ಯಕ್ರಮ, ಸ್ಥಳ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನ, ವಿಜಯನಗರ 1ನೇ ಹಂತ, ಸಂಜೆ 5ಕ್ಕೆ.
- **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್ :** ವಿದ್ವಾನ್ ರಾಕೇಶ್ ಸುಧೀರ್ ಅವರಿಂದ ವೇಣು ವಾದನ, ವಿದ್ವಾನ್ ತುಮಕೂರು ಯಶಸ್ವಿ–ಪಿಟೀಲು, ವಿದ್ವಾನ್ ಎಸ್. ಕುಮಾರಸ್ವಾಮಿ–ಮೃದಂಗ, ವಿದ್ವಾನ್ ಎಸ್. ಮಂಜುನಾಥ್–ಘಟಂ, ಸ್ಥಳ: ಜಯನಗರ ಶ್ರೀರಾಮ ಮಂದಿರ, ಸಂಜೆ 6 ರಿಂದ.

ಸುತ್ತೂರು ಶ್ರೀ ಕ್ಷೇತ್ರದಲ್ಲಿಂದು

- **ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ :** ಶ್ರಾವಣಮಾಸದ ಪೂಜಾನುಷ್ಠಾನ ಮತ್ತು ಪ್ರವಚನ ಸಮಾರೋಪ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಮ್ಮುಖ : ಬಿ.ಜಿ. ಪುರದ ಶ್ರೀ ಹೊಸಮಠದ ಶ್ರೀ ಚಂದ್ರಶೇಖರ ಸ್ವಾಮೀಜಿ, ಅಧ್ಯಕ್ಷತೆ: ಆಹಾರ ನಾಗರಿಕ–ಗ್ರಾಹಕ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಡಾ.ಮಂಟೇಸ್ವಾಮಿ, ಸಮಾರೋಪ ಭಾಷಣ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಬಹುಮಾನ ವಿತರಣೆ: ಚಾಮರಾಜನಗರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ವ್ಯವಸ್ಥಾಪಕ ಬಿ.ಎನ್.ನಾಗೇಂದ್ರಪ್ರಸಾದ್, ಪ್ರೊ.ಹೆಚ್.ಬಿ. ದೇವಣ್ಣ ಅವರಿಂದ ಲಕ್ಕಣ್ಣ ದಂಡೇಶ ವಿರಚಿತ 'ಶಿವತತ್ವ ಚಿಂತಾಮಣಿ' ಕೃತಿಯ ಪ್ರವಚನ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಾಧನ–ಶೋಧನ ಗ್ರಾಮೀಣ ಪರಿಸರದ ಉಪಕರಣಗಳು, ಲೇಖನ : ಡಾ. ಎಂ.ಎನ್. ಚಿಕ್ಕಮಾದು, ಪ್ರಸ್ತುತಿ : ಡಾ. ಮೈಸೂರು ಉಮೇಶ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಬಿ.ಶ್ರೀರಾಂಭಟ್ ಹಾಗೂ ಕೆ.ಬಿ.ಸುನೀತಾ ಆಚಾರ್ಯ, ವ್ಯಾಖ್ಯಾನ–ಕೆ.ಎಲ್.ಪದ್ಮಿನಿ ಹೆಗಡೆ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ – ಮಕ್ಕಳನ್ನು ಕಾಡುವ ಮಧುಮೇಹ ಮತ್ತು ಚಿಕಿತ್ಸೆ ಕುರಿತು ಡಾ.ಅಕ್ಷತಾ ಎ. ಅವರೊಂದಿಗೆ ಮಾತುಕತೆ ನಂತರ ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಲಭ್ಯವಿರುವ ವಿಶೇಷ ಆರೋಗ್ಯ ಸೌಲಭ್ಯಗಳು ಮತ್ತು ಆರೈಕೆ ಕುರಿತು ಡಾ. ಮಲ್ಲಿಕಾ ಬಿ. ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ –ಬೇದ್ರೆ ಮಂಜುನಾಥ್, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಸಂಗೀತ ಸಂಭ್ರಮ ನಾದಲಯ ಸಂಗಮ, ಪ್ರಸ್ತುತಿ : ಹೆಚ್.ಎಲ್.ಶಿವಶಂಕರಸ್ವಾಮಿ **ಮಧ್ಯಾಹ್ನ:** 12.05 ವನಿತಾ ವಿಹಾರ, 12.35 ದೇವರನಾಮ, 12.45 ಕಾದಂಬರಿ ವಿಹಾರ–ಎಂ.ಆರ್.ಶ್ರೀನಿವಾಸ ಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ: ಉಮೇಶ್. ಎಸ್. ಎಸ್., 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿದೀಪ–ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, 4.00 ಮಹಿಳಾರಂಗ–ಸಖೀ–ಸಾಹಿತ್ಯ–ಮಹಿಳಾ ಬರಹಗಾರರ ಜೊತೆ ಮಾತುಕತೆ, ಭಾಗವಹಿಸುತ್ತಾರೆ–ಗಾಯತ್ರಿ ಸುಂದರೇಶ್, ಪ್ರಸ್ತುತಿ–ನೇತ್ರಾ ಕೆ., 4.30 ವೃತ್ತಿ ಮಾರ್ಗದರ್ಶನ–ಜೆನೆಟಿಕ್ಸ್ ಮತ್ತು ಜಿನೋಮಿಕ್ಸ್ ವಿಷಯದಲ್ಲಿ ಇರುವ ಅಧ್ಯಯನ, ಸಂಶೋಧನೆ ಮತ್ತು ವೃತ್ತಿಪರ ಅವಕಾಶಗಳು ಕುರಿತು ಮೈಸೂರು ವಿಶ್ವವಿದ್ಯಾಲಯದ ಮಾನಸ ಗಂಗೋತ್ರಿಯ ಜೆನೆಟಿಕ್ಸ್ ಮತ್ತು ಜಿನೋಮಿಕ್ಸ್ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಛೇರ್ ಪರ್ಸನ್ ಡಾ. ಸುತ್ತೂರು ಎಸ್. ಮಾಲಿನಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 6.50 ಕೃಷಿರಂಗ–ಹವಾಮಾನ ಮಿತ್ರ, ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು –ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ, ಬೆಂಗಳೂರು, ಸಂಶೋಧನಾ ಸಾರ, ಕೃಷಿ ಕ್ಷೇತ್ರದ ಹೊಸ ಅವಿಷ್ಕಾರ, ಪ್ರಸ್ತುತಿ–ಆರ್. ಲೋಕೇಶ್ವರಿ, 7.45 ಕನ್ನಡದಲ್ಲಿ ಭಾಷಣ, 8.00 ಸಂಸತ್ ಸಮೀಕ್ಷಾ, 8.15 ಸಂಧ್ಯಾರಾಗ–ಅಕಾಶವಾಣಿಯ ಅತ್ಯಂತ ಅಭಿಮಾನಿ ಕೇಳುಗರಾದ ಬಹುಶ್ರುತರಾದ ಹಾಗೂ ಹಿರಿಯರಾದ ಎಂ.ಎನ್.ಭಕ್ತವತ್ಸಲಂ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಜಿ.ಶಾಂತಕುಮಾರ್, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, 10.00 ಸಂಸತ್‌ನ ಪ್ರಶ್ನೋತ್ತರ ಕಲಾಪಗಳ ಧ್ವನಿಮುದ್ರಣ

ಸಾವಿನ ಸಂಕಟದಲ್ಲಿರುವವರಿಗೆ 'ಸಂಸ್ಕಾರ'ದ ಸಂಕಟ!

ಸತ್ತವರ ಮೋಕ್ಷಕ್ಕೆ ಸಹಕಾರಿಯಾಗಬೇಕಿದ್ದ 'ಮುಕ್ತಿಧಾಮ'ವೇ ಸಮಸ್ಯೆಯಲ್ಲಿದೆ!

ಮೈಸೂರು, ಆ.21– ಸಾವು ನಿಶ್ಚಿತ. ಆದರೆ ಅಗಲಿದವರ ಅಂತ್ಯಸಂಸ್ಕಾರಕ್ಕೂ ಅಡ್ಡಿಯಾದರೆ ದುಃಖ ದುಪ್ಪಟ್ಟಾಗುತ್ತದೆ. ಬದುಕು ಮುಗಿಸಿದವರನ್ನು ನೆಮ್ಮದಿಯಾಗಿ ಕಳುಹಿಸಿಕೊಡಲು ಸಾಧ್ಯವಾಗಲಿಲ್ಲವಲ್ಲಾ ಎಂಬ ಭಾವ ಕಾಡುತ್ತಲೇ ಇರುತ್ತದೆ.

ಮೈಸೂರಿನ ವಿಜಯನಗರ ನಾಲ್ಕನೇ ಹಂತದಲ್ಲಿರುವ ಮುಕ್ತಿಧಾಮದಲ್ಲಿ ಅದೆಷ್ಟೋ ಜನ ಇಂತಹ ಸಂಕಟ ಅನುಭವಿಸುತ್ತಿದ್ದಾರೆ. ತಮ್ಮವರನ್ನು ಕಳೆದುಕೊಂಡ ದುಃಖದ ಜೊತೆಗೆ ನಿಗದಿತ ಸಮಯಕ್ಕೆ ನಿರಾಳದಿಂದ, ಶಾಸ್ತ್ರೋಕ್ತವಾಗಿ ಅಂತ್ಯಸಂಸ್ಕಾರ ನಡೆಸಲಾಗದ ಭಾವ ಬೇಗುದಿಯಲ್ಲಿ ಬೇಯುತ್ತಿದ್ದಾರೆ.

ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಹಿಂದಿನ ಮುಡಾ) ನಿರ್ವಹಿಸುತ್ತಿರುವ ಅತ್ಯಾಧುನಿಕ ಚಿತಾಗಾರವಾಗಿರುವ ಈ ಮುಕ್ತಿಧಾಮದಲ್ಲಿ ಅನಿಲ ಚಿತಾಗಾರ ಕೆಟ್ಟಿದೆಯಂತೆ. ಇನ್ನು ವಿದ್ಯುತ್ ಚಿತಾಗಾರದ ಕಾರ್ಯಕ್ಷಮತೆಯೂ ಅಷ್ಟಕ್ಕಷ್ಟೇ. ಒಂದು ದೇಹವನ್ನು ದಹಿಸಲು ಕನಿಷ್ಠ ಒಂದೂಕಾಲು ಗಂಟೆ ಬೇಕಾಗುತ್ತದೆ. ನಂತರ ಯಂತ್ರ ತಣಿಯಲು ಎರಡು ಗಂಟೆ ಆಗಬಹುದು. ಅಲ್ಲಿಯವರೆಗೆ ಅಂತಿಮ ಯಾತ್ರೆಯೂ ಸಾಗುವಂತಿಲ್ಲ. ಪಾರ್ಥಿವ ಶರೀರದ ಮುಂದೆ ರೋದಿಸುವುದನ್ನು ಬಿಟ್ಟು ಬೇರೇನೂ ಮಾರ್ಗವಿಲ್ಲ.

ಅಗಲಿದವರಿಗೆ ವಿದಾಯ ಹೇಳುವುದು ಭಾವನಾತ್ಮಕ ಸಂದರ್ಭ. ಅಗಲಿದವರ ಕುಟುಂಬದವರು, ಬಂಧು–ಬಾಂಧವರು, ಸ್ನೇಹಿತರು, ಪರಿಚಿತರು ಅಂತಿಮ ಸಂಸ್ಕಾರದಲ್ಲಿ ಉಪಸ್ಥಿತರಿರುತ್ತಾರೆ. ಆದರೆ ಮುಕ್ತಿಧಾಮದಲ್ಲಿ ನಿಗದಿತ ಸಮಯಕ್ಕೆ ಅಂತ್ಯಸಂಸ್ಕಾರ ನೆರವೇರದಿದ್ದರೆ ದುಃಖದ ಜೊತೆಗೆ ತೊಂದರೆಯೂ ಆಗುತ್ತದೆ. ಪಾರ್ಥಿವ ಶರೀರವಿಟ್ಟು ರೋದಿಸುತ್ತಿರುವವರಿಗೆ ಮಧ್ಯಾಹ್ನದವರೆಗೆ ಕಾಯಿರಿ ಎಂದರೆ ಅವರ ಮನಸ್ಸಿಗೆ ಯಾವ ರೀತಿಯಲ್ಲಿ ಘಾಸಿಯಾಗಬೇಡ?.



ಪರಿಚಿತರೊಬ್ಬರ ಅಂತ್ಯಸಂಸ್ಕಾರಕ್ಕೆಂದು ಮುಕ್ತಿಧಾಮಕ್ಕೆ ಹೋಗಿದ್ದವರೊಬ್ಬರು ಅಲ್ಲಿನ ಅವ್ಯವಸ್ಥೆ ಬಗ್ಗೆ ನೊಂದು ನುಡಿದಿದ್ದಾರೆ. ಮಧ್ಯಾಹ್ನ 12ಕ್ಕೆ ಅಂತ್ಯಸಂಸ್ಕಾರ ನಿಗದಿಪಡಿಸಿಕೊಂಡು ಹೋದರೆ ಅಲ್ಲಿ ಸಿಬ್ಬಂದಿಯೇ ಇರಲಿಲ್ಲ. ಆ ಬಗ್ಗೆ ವಿಚಾರಿಸಿದರೆ ಅನಿಲ ಚಿತಾಗಾರ ಕೆಟ್ಟಿದೆ, ವಿದ್ಯುತ್ ಚಿತಾಗಾರದಲ್ಲಿ ಬೆಳಗ್ಗೆ ಒಂದು ದೇಹ ದಹಿಸಿರುವುದರಿಂದ ಮತ್ತೆ ಬಳಸಲು ಕಾಲಾವಕಾಶ ಬೇಕಾಗುತ್ತದೆ. ಯಂತ್ರದ ಬಿಸಿ ಆರಿದ ನಂತರ ಬಳಸಬೇಕಿರುವುದರಿಂದ ಮಧ್ಯಾಹ್ನ 3 ಗಂಟೆಗೆ ಸಿಬ್ಬಂದಿ ಬರುತ್ತಾರೆ, ಅಲ್ಲಿಯವರೆಗೆ ಕಾಯಿರಿ ಎಂಬ ಉತ್ತರ ಬಂತು. ಮನುಷ್ಯನ ಅಂತಿಮ ಕಾರ್ಯಕ್ಕೂ ಗಂಟೆಗಟ್ಟಲೆ ಕಾಯಬೇಕೆಂದರೆ ಏನರ್ಥ?. ಸುಡುವ ಪದ್ಧತಿಯನ್ನಷ್ಟೇ ಪಾಲಿಸಿಕೊಂಡು ಬಂದವರು ಇಂತಹ ಸಂದಿಗ್ಧತೆಯನ್ನು ನಿಭಾಯಿಸುವುದಾದರೂ ಹೇಗೆ? ಭಾವನಾತ್ಮಕ ವಿಚಾರದಲ್ಲಿ ಯಾಕಿಷ್ಟು ನಿರ್ಲಕ್ಷ್ಯ? ಎಂದು ಪ್ರಶ್ನಿಸುವುದರ ಜೊತೆಗೆ ಸಂಬಂಧಪಟ್ಟವರು ಕೂಡಲೇ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ.

ಕಾವಾಕ್ಕೆ ಕಾಯಕಲ್ಪ ಕಲ್ಪಿಸಲು ಸಚಿವ ಶಿವರಾಜ್ ತಂಗಡಗಿಗೆ ಎಂಎಲ್ಸಿ ವಿವೇಕಾನಂದ ಮನವಿ



ಚಾಮರಾಜೇಂದ್ರ ದೃಶ್ಯಕಲಾ ಸರ್ಕಾರಿ ಕಾಲೇಜು ಕಟ್ಟಡ

ಮೈಸೂರು, ಆ.21– ಮೈಸೂರಿನ ಚಾಮರಾಜೇಂದ್ರ ದೃಶ್ಯಕಲಾ ಸರ್ಕಾರಿ ಕಾಲೇಜು(ಕಾವಾ) ಕಾಯಕಲ್ಪಕ್ಕೆ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಅವರು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ಎಸ್.ತಂಗಡಗಿ ಅವರಿಗೆ ಮನವಿ ಮಾಡಿದ್ದಾರೆ.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಮೈಸೂರಿನ ಕಲೆ ಮತ್ತು ಸಂಸ್ಕೃತಿಯ ಶ್ರೀಮಂತಿಕೆಯನ್ನು ಜಗತ್ತಿಗೆ ಸಾರುವ ಉದ್ದೇಶದಿಂದ 1906ರಲ್ಲಿ ಚಾಮರಾಜೇಂದ್ರ ತಾಂತ್ರಿಕ ಸಂಸ್ಥೆ ಆರಂಭಿಸಿದರು. ನಂತರದಲ್ಲಿ ಅದುವೇ ಚಾಮರಾಜೇಂದ್ರ ದೃಶ್ಯಕಲಾ ಸರ್ಕಾರಿ ಕಾಲೇಜು ಎಂದಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧೀನಕ್ಕೆ ಒಳಪಡುವ ಈ ಸಂಸ್ಥೆಯಲ್ಲಿ ಸಾಕಷ್ಟು ಸಮಸ್ಯೆಗಳಿರುವುದು ಗಮನಕ್ಕೆ ಬಂದಿದೆ. ಪ್ರಮುಖವಾಗಿ ವಿವಿಧ ವಿಷಯಗಳ ಬೋಧಕರ ಹುದ್ದೆಗಳು ಖಾಲಿ ಇದ್ದು, ಅತಿಥಿ ಉಪನ್ಯಾಸಕರ ಮೂಲಕವೇ ಕಾರ್ಯ ನಿರ್ವಹಿಸಲಾಗುತ್ತಿದೆ.




ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಅವರು ಸಚಿವ ಶಿವರಾಜ್ ತಂಗಡಗಿ ಅವರಿಗೆ ಮನವಿ ಸಲ್ಲಿಸಿದ ಸಂದರ್ಭ.

ರಾಜ್ಯದಲ್ಲಿ ಕಲಾ ಶಿಕ್ಷಣ ನೀಡುವ ಏಕೈಕ ಸರ್ಕಾರಿ ಶಿಕ್ಷಣ ಸಂಸ್ಥೆಯಾಗಿರುವ ಕಾವಾದಲ್ಲಿ ಕಲಿತವರು ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಕಲಾವಿದರಾಗಿ ರೂಪುಗೊಂಡಿದ್ದಾರೆ. ಆದರೆ ಈ ಹೆಗ್ಗಳಿಕೆಯ ಕಾಲೇಜಿನಲ್ಲಿ ಅತ್ಯಗತ್ಯವಾದ ವ್ಯವಸ್ಥಿತ ಆರ್ಟ್ ಗ್ಯಾಲರಿ ಇಲ್ಲವಾಗಿದೆ. ಕಾವಾ ನನ್ನ ಮತಕ್ಷೇತ್ರ ವ್ಯಾಪ್ತಿಗೆ ಬರುವುದರಿಂದ ಅಲ್ಲಿನ ಅವಶ್ಯಕತೆಗಳನ್ನು ತಮ್ಮ ಗಮನಕ್ಕೆ ತರುವುದು ನನ್ನ ಜವಾಬ್ದಾರಿ ಆಗಿದೆ. ಇಲಾಖೆಯ ಯಾವುದಾದರೂ ಅನುದಾನದಲ್ಲಿ ಕಾವಾ ಸಂಸ್ಥೆಯ ಕಾಯಕಲ್ಪ ಕೈಗೆತ್ತಿಕೊಳ್ಳಬೇಕು. ಇದು ಮಹಾರಾಜರ ಕೊಡುಗೆಯಾಗಿರುವುದರಿಂದ ವಿಶೇಷ ಆಸಕ್ತಿ ವಹಿಸಿ, ಬೇಡಿಕೆ ಈಡೇರಿಸಬೇಕೆಂದು ಒತ್ತಾಯಿಸಿದ್ದಾರೆ.

ಮತ ಖರೀದಿ ಆರೋಪ: ಸಿಎಂ ಸಿದ್ದರಾಮಯ್ಯ ವಿರುದ್ಧ ಚುನಾವಣಾ ಆಯೋಗಕ್ಕೆ ಬಿಜೆಪಿ ದೂರು

ಬೆಂಗಳೂರು, ಆ.21– 2018ರ ವಿಧಾನಸಭಾ ಚುನಾವಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮತಗಳನ್ನು ಖರೀದಿಸಿದ್ದಾರೆ ಎಂದು ಮಾಜಿ ಸಚಿವ ಸಿ.ಎಂ.ಇಬ್ರಾಹಿಂ ಅವರು ಹೇಳಿಕೆ ನೀಡಿದ್ದು, ಈ ಬಗ್ಗೆ ಕಾನೂನು ಕ್ರಮ ಕೈಗೊಳ್ಳುವಂತೆ ಕರ್ನಾಟಕ ಬಿಜೆಪಿ ನಾಯಕರ ನಿಯೋಗ ಗುರುವಾರ ರಾಜ್ಯ ಚುನಾವಣಾ ಆಯೋಗಕ್ಕೆ ದೂರು ನೀಡಿದೆ.



ಚುನಾವಣಾ ಆಯೋಗಕ್ಕೆ ಸಲ್ಲಿಸಿದ ದೂರಿನ ಪ್ರತಿಯನ್ನು ಬಿಜೆಪಿ ಮುಖಂಡರು ಪ್ರದರ್ಶಿಸಿದರು

ಮಾಜಿ ಎಂಎಲ್‌ಸಿ ಮತ್ತು ಮುಖ್ಯ ವಕ್ತಾರ ಸಿ.ಎನ್.ಅಶ್ವತ್ಥನಾರಾಯಣ್, ಮಾಜಿ ಎಂಎಲ್‌ಸಿಗಳಾದ ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಅರುಣ್ ಶಹಾಪುರ್ ಮತ್ತು ರಾಜ್ಯ ಕಾನೂನು ಕೋಶದ ಸಂಚಾಲಕ ವಸಂತಕುಮಾರ್ ಅವರನ್ನೊಳಗೊಂಡ ಬಿಜೆಪಿ ನಿಯೋಗ ಇಂದು ಬೆಂಗಳೂರಿನಲ್ಲಿರುವ ರಾಜ್ಯ ಚುನಾವಣಾ ಆಯೋಗದ ಕಚೇರಿಗೆ ತೆರಳಿ ದೂರು ಸಲ್ಲಿಸಿದೆ.

2024ರ ಲೋಕಸಭಾ ಚುನಾವಣೆಯಲ್ಲಿ ಹಾಸನ ಲೋಕಸಭಾ ಕ್ಷೇತ್ರದಲ್ಲಿ 7 ಕೋಟಿ ರೂ. ಹಂಚಬೇಕೆಂದು ಅರಸೀಕೆರೆ ಕಾಂಗ್ರೆಸ್ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಮಾತನಾಡಿರುವ ವಿಡಿಯೋ ಕುರಿತಂತೆಯೂ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಬಿಜೆಪಿ ನಿಯೋಗ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ದೂರು ನೀಡಿದೆ.

ಸಿಎಂ ಇಬ್ರಾಹಿಂ ಅವರು ಇತ್ತೀಚೆಗೆ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಷಣ ಮಾಡುವಾಗ, 2018 ರ ಕರ್ನಾಟಕ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ಹೇಳಿಕೆ ನೀಡಿದ್ದನ್ನು ನಿಮ್ಮ ಗಮನಕ್ಕೆ ತರುತ್ತಿದ್ದೇವೆ. ಬಾದಾಮಿ ವಿಧಾನಸಭಾ ಕ್ಷೇತ್ರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರವಾಗಿ ನಾನು ಮತ್ತು ಹಿರಿಯ ಕಾಂಗ್ರೆಸ್ ನಾಯಕ ಚಿಮ್ಮನಕಟ್ಟಿ 3,000 ಮತಗಳನ್ನು ಖರೀದಿಸಿದ್ದೇವೆ ಎಂದು ಸಿಎಂ ಇಬ್ರಾಹಿಂ ಹೇಳಿದ್ದರು. ನಾವು ಹಣವನ್ನು ಸಾಲವಾಗಿ ಪಡೆದು 3,000 ಮತಗಳನ್ನು ಖರೀದಿಸಿದ್ದೇವೆ. ಮತಗಳನ್ನು ಖರೀದಿಸುವ ಮೂಲಕ, ನಾವು ಸಿದ್ದರಾಮಯ್ಯ ಅವರ ಗೆಲುವನ್ನು ಖಚಿತಪಡಿಸಿಕೊಂಡಿದ್ದೇವೆ ಆರು ತಿಂಗಳ ನಂತರ, ಸಿದ್ದರಾಮಯ್ಯ ಸಾಲ ಮರುಪಾವತಿಸಿದ್ದಾರೆ ಎಂದು ಹೇಳಿರುವುದಾಗಿ ದೂರಿನಲ್ಲಿ ತಿಳಿಸಲಾಗಿದೆ.

ಸಿಎಂ ಇಬ್ರಾಹಿಂ ಹೇಳಿಕೆಯ ವಿಡಿಯೋ ಮಾಧ್ಯಮಗಳಲ್ಲಿ ವ್ಯಾಪಕವಾಗಿ ಪ್ರಸಾರ ಮಾಡಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಇಂತಹ ಮತ ಖರೀದಿ ಕೃತ್ಯವು 1951ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 123(1)(ಬಿ) ಅಡಿಯಲ್ಲಿ ಭ್ರಷ್ಟಾಚಾರವಾಗಿದೆ ಮತ್ತು ಅಂತಹ ಹೇಳಿಕೆಗಳು ನಿಜವಾಗಿದ್ದರೆ ಅಭ್ಯರ್ಥಿಯ ಆಯ್ಕೆಯನ್ನು ರದ್ದುಗೊಳಿಸಬೇಕು ಎಂದು ಬಿಜೆಪಿ ಆಗ್ರಹಿಸಿದೆ.

ಕೊಡಗು ಜಿಲ್ಲೆ ಅಡಿಕೆ ಬೆಳೆಯ ಸೋಂಕು ನಿವಾರಿಸಲು ಸಮಗ್ರ ಅಧ್ಯಯನಕ್ಕೆ ಮನವಿ

ಕೇಂದ್ರ ಕೃಷಿ ಸಚಿವ ಶಿವರಾಜ ಸಿಂಗ್ ಚೌಹಾಣ್ ಅವರಿಗೆ ಕರ್ನಾಟಕ ಸಂಸದರ ನಿಯೋಗ ಮನವಿ ; ಸಚಿವರಿಂದ ಸಕಾರಾತ್ಮಕ ಸ್ಪಂದನೆ



ನವದೆಹಲಿಯಲ್ಲಿ ಕೇಂದ್ರ ಕೃಷಿ ಸಚಿವ ಶಿವರಾಜ ಸಿಂಗ್ ಚೌಹಾಣ್ ಅವರೊಂದಿಗೆ ಕರ್ನಾಟಕ ಸಂಸದರ ನಿಯೋಗ ಸಮಾಲೋಚನೆ ನಡೆಸುತ್ತಿರುವುದು.

ಮೈಸೂರು,ಆ.21(ಪಿಎಂ)– ಕೊಡಗು ಜಿಲ್ಲೆಯಲ್ಲಿನ ಅಡಿಕೆ ಬೆಳೆಗೆ ತಗುಲುತ್ತಿರುವ ಸೋಂಕುಗಳ ನಿವಾರಣೆ ಸಂಬಂಧ ಅಧ್ಯಯನ ನಡೆಸಿ ಪರಿಹಾರ ಕಂಡುಕೊಳ್ಳಲು ಪ್ರತಿಷ್ಠಿತ ಸಂಶೋಧನಾ ಸಂಸ್ಥೆಗಳಿಂದ ಸಮಗ್ರ ಅಧ್ಯಯನ ನಡೆಸಬೇಕೆಂದು ಕೇಂದ್ರ ಕೃಷಿ ಸಚಿವ ಶಿವರಾಜ ಸಿಂಗ್ ಚೌಹಾಣ್ ಅವರಿಗೆ ಕರ್ನಾಟಕ ಸಂಸದರ ನಿಯೋಗ ಮನವಿ ಸಲ್ಲಿಸಿತು.

ನವದೆಹಲಿಯಲ್ಲಿ ಗುರುವಾರ ಶಿವರಾಜ ಸಿಂಗ್ ಚೌಹಾಣ್ ಅವರನ್ನು ಭೇಟಿ ಮಾಡಿದ ಸದರಿ ನಿಯೋಗವು, ಕೊಡಗು ಜಿಲ್ಲೆಯಲ್ಲಿ ಅಡಿಕೆ ಬೆಳೆಗಾರರು ಅನುಭವಿಸುತ್ತಿರುವ ತೊಂದರೆ ಹಾಗೂ ಸಂಕಷ್ಟಗಳನ್ನು ವಿವರವಾಗಿ ತಿಳಿಸಿತು. ಪ್ರಮುಖವಾಗಿ ಹಳದಿ ಎಲೆ, ಶಿಲೀಂಧ್ರ ಸೋಂಕು ಮತ್ತು ಅಡಿಕೆಯ ಮೇಲೆ ಪರಿಣಾಮ ಬೀರುವ ಇತರ ರೋಗಗಳಿಗೆ ಪರಿಹಾರ ಕಂಡುಹಿಡಿಯಲು ವೈಜ್ಞಾನಿಕ ಅಧ್ಯಯನಗಳಿಗೆ ಕ್ರಮ ವಹಿಸಲು ಮನವಿ ಮಾಡಿತು.

ಅಡಿಕೆಯ ಅಕ್ರಮ ಆಮದು ತಡೆಗಟ್ಟಲು ಹಾಗೂ ಅಡಿಕೆ ಮೇಲಿನ ಜಿಎಸ್‌ಟಿ ಇಳಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಹ ಮನವಿ ಮಾಡಲಾಯಿತು. ಅಲ್ಲದೆ, ಅಡಿಕೆ–ಎಲೆ ಜೈವಿಕ ವಿಘಟನೀಯ ತಟ್ಟೆಗಳ ರಫ್ತಿಗೆ ಅಡ್ಡಿಯಾಗುತ್ತಿರುವ ಇತ್ತೀಚಿನ ಯುಎಸ್ ಸಂಶೋಧನೆಗಳನ್ನು ಎದುರಿಸಲು ಸರಿಯಾದ ಭಾರತೀಯ ವೈಜ್ಞಾನಿಕ ಅಧ್ಯಯನಗಳನ್ನು ಕೈಗೊಳ್ಳಬೇಕೆಂದೂ ವಿನಂತಿಸಲಾಯಿತು.

ಇದಲ್ಲದೆ, ಕೊಡಗಿನಲ್ಲಿ ಇಳುವರಿಯ ಮೇಲೆ ಪರಿಣಾಮ ಬೀರುವ ಮಳೆ, ವಿಪತ್ತುಗಳು ಮತ್ತು ಹವಾಮಾನ ವೈಪರೀತ್ಯ ಪತ್ತೆಹಚ್ಚಲು ವಿಶ್ವಾಸಾರ್ಹ ವ್ಯವಸ್ಥೆಗಳೊಂದಿಗೆ ಕಾರ್ಯವಿಧಾನಗಳನ್ನು (ಕೇಂದ್ರ–ರಾಜ್ಯ ಸಮನ್ವಯ) ಕಾರ್ಯಗತಗೊಳಿಸಲು ಕೋರಲಾಯಿತು.

ನಿಯೋಗದ ಮನವಿಗೆ ಸ್ಪಂದಿಸಿದ ಕೇಂದ್ರ ಕೃಷಿ ಸಚಿವರು, ಅಡಿಕೆ ರೈತರ ಬಗ್ಗೆ ಈ ಹಿಂದೆ ಸಲ್ಲಿಸಿರುವ ವರದಿಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರಲ್ಲದೆ, ವಿಜ್ಞಾನಿಗಳ ತಂಡದೊಂದಿಗೆ ತೊಂದರೆಗೊಳಗಾದ ಪ್ರದೇಶಗಳಿಗೆ ಭೇಟಿ ನೀಡುವುದಾಗಿ ಭರವಸೆ ನೀಡಿದರು.

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಕೇಂದ್ರ ಭಾರಿ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ಗೋವಿಂದ ಕಾರಜೋಳ, ಮೈಸೂರು ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮತ್ತಿತರರು ಹಾಜರಿದ್ದರು.

ಬಿವಿಬಿ ಶಾಲೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ...



ಮೈಸೂರಿನ ವಿಜಯನಗರದ ಭಾರತೀಯ ವಿದ್ಯಾಭವನ (ಬಿವಿಬಿ) ಶಾಲೆಯಲ್ಲಿ 79ನೇ ಸ್ವಾತಂತ್ರ್ಯ ದಿನ ಆಚರಿಸಲಾಯಿತು. (ಎಡದಿಂದ) ಬಿವಿಬಿ ಮೈಸೂರು ಕೇಂದ್ರದ ಕಾರ್ಯಕಾರಿ ಸಮಿತಿ ಸದಸ್ಯರಾದ ಟಿ.ಎಸ್.ಗಂಗಾಧರ್, ಡಾ.ಜೆ.ವಿ.ಗಾಯತ್ರಿ, ಕಾರ್ಯಕ್ರಮದ ಗೌರವ ಅತಿಥಿಯಾದ ಲೆಫ್ಟಿನೆಂಟ್ ಕರ್ನಲ್ ಸಂಜೀವ್ ವೈ.ಕೋಡಾಥೆ ಅವರ ಪತ್ನಿ ಡಾ.ಗೀತಾ, ಬಿವಿಬಿ ಮೈಸೂರು ಕೇಂದ್ರದ ಗೌರವ ಖಜಾಂಚಿ ಡಾ.ಎ.ಟಿ.ಭಾಷ್ಯಂ, ಕಾರ್ಯಕ್ರಮದ ಮುಖ್ಯ ಅತಿಥಿಯಾದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ, ಬಿವಿಬಿ ಮೈಸೂರು ಕೇಂದ್ರದ ಅಧ್ಯಕ್ಷ ಡಾ.ಸಿ.ನಾಗಣ್ಣ, ಕಾರ್ಯಕ್ರಮದ ಗೌರವ ಅತಿಥಿ ಲೆಫ್ಟಿನೆಂಟ್ ಕರ್ನಲ್ ಸಂಜೀವ್ ವೈ.ಕೋಡಾಥೆ, ಬಿವಿಬಿ ಮೈಸೂರು ಕೇಂದ್ರದ ಗೌರವ ಕಾರ್ಯದರ್ಶಿ ಪಿ.ಎಸ್.ಗಣಪತಿ, ಬಿವಿಬಿ ಶಾಲೆಯ ಪ್ರಾಂಶುಪಾಲರಾದ ಎಸ್.ಲೇಖಾ ನಾಯರ್, ಆಡಳಿತಾಧಿಕಾರಿ ಎಸ್.ಆರ್.ರವಿಕುಮಾರ್, ಶಾಲೆಯ ಉಪ ಪ್ರಾಂಶುಪಾಲರಾದ ಹೆಚ್.ಎನ್.ಪ್ರಫುಲ್ಲಾ ಅವರನ್ನು ಚಿತ್ರದಲ್ಲಿ ಕಾಣಬಹುದು.

ರಾಜ್ಯ, ರಾಷ್ಟ್ರದ ಅಭಿವೃದ್ಧಿಯಲ್ಲಿ ಎಲ್ಲಾ ರೀತಿಯ ಉದ್ಯಮಗಳ ಪಾತ್ರವೂ ಮುಖ್ಯ

ಚಾ.ನಗರ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅಭಿಮತ

ಮೈಸೂರು, ಆ.21(ವಿವಿಹೆಚ್)– ರಾಜ್ಯ ಹಾಗೂ ರಾಷ್ಟ್ರದ ಆರ್ಥಿಕ ಅಭಿವೃದ್ಧಿಯಲ್ಲಿ ಎಂಎಸ್‌ಎಂಇ (ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು) ಪ್ರಮುಖ ಪಾತ್ರವಹಿಸುತ್ತವೆ. ಅವುಗಳ ಬೆಳವಣಿಗೆಗೆ ಪೂರಕವಾದ ವೇದಿಕೆ ಕಲ್ಪಿಸಬೇಕಿದೆ ಎಂದು ಚಾ.ನಗರ ಜಿಲ್ಲಾಧಿಕಾರಿ ಶಿಲ್ಪಾನಾಗ್ ಹೇಳಿದರು.

ಮೈಸೂರಿನ ವಿಜಯನಗರದಲ್ಲಿನ ಜಗನ್ನಾಥ ಸೆಂಟರ್ ಆರ್ಟ್ ಅಂಡ್ ಕಲ್ಚರ್ ಆವರಣದಲ್ಲಿ ಗುರುವಾರ ಕಾನ್ಫಿಡರೇಷನ್ ಆಂಡ್ ಇಂಡಿಯನ್ ಇಂಡಸ್ಟ್ರಿ ವತಿಯಿಂದ ನಡೆದ ಕೈಗಾರಿಕಾ ಪ್ರದರ್ಶನ ಮತ್ತು ಸಮ್ಮೇಳನದಲ್ಲಿ ಅವರು ಮಾತನಾಡಿದರು.

ಸರಕು ಮತ್ತು ಸೇವೆಗಳ ಕಲ್ಪಿಸುವ ಸಾಮರ್ಥ್ಯವನ್ನು ಎಂಎಸ್‌ಎಂಇ ಹೊಂದಿವೆ ಎಂದು ತಿಳಿಸಿದರು.

ಚಾಮರಾಜನಗರ ಜಿಲ್ಲೆಯಲ್ಲಿ ಬಂಡವಾಳ ಹೂಡಿಕೆಗೆ ಮುಕ್ತಾವಕಾಶ ಕಲ್ಪಿಸಲಾಗುತ್ತಿದೆ. ಜಿಲ್ಲೆಯಿಂದ ಉದ್ಯೋಗ ಅರಸಿ ಸಾಕಷ್ಟು ಮಂದಿ ಮೈಸೂರು ಸೇರಿದಂತೆ ಬೇರೆ ಬೇರೆ ಜಿಲ್ಲೆಗಳಿಗೆ ತೆರಳುತ್ತಿದ್ದು, ಇದರಿಂದ ಜಿಲ್ಲೆಯ ಅಭಿವೃದ್ಧಿಗೆ ತೊಡಕಾಗಿದೆ. ಕೈಗಾರಿಕೋದ್ಯಮಿಗಳು ಇಲ್ಲಿಯೇ ಬಂಡವಾಳ ಹೂಡಿಕೆ ಮಾಡಲು ಮುಂದಾದರೆ ಜಿಲ್ಲಾಡಳಿತದಿಂದ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಚಾಮರಾಜನಗರ ರಾಜ್ಯದ ಗಡಿ ಜಿಲ್ಲೆಯಾಗಿದ್ದು, ಅತೀ ಕಡಿಮೆ ಜನಸಂಖ್ಯೆ ಇರುವ ರಾಜ್ಯದ ಜಿಲ್ಲೆಗಳಲ್ಲಿ ಮೂರನೇ ಸ್ಥಾನ ಪಡೆದಿದೆ. ಕೈಗಾರಿಕಾಭಿವೃದ್ಧಿಗೆ ಪೂರಕವಾದ ವಾತಾವರಣ ಚಾಮರಾಜನಗರ ಜಿಲ್ಲೆಯಲ್ಲಿ ಇದ್ದು, ಕೈಗಾರಿಕೋದ್ಯಮಿಗಳು ಬಂಡವಾಳ ಹೂಡಿಕೆ ಮಾಡುವ ಮೂಲಕ ಗಡಿ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಬೇಕು ಎಂದು ಮನವಿ ಮಾಡಿದರು.



ಚಾ.ನಗರ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಕೈಗಾರಿಕಾ ವಸ್ತುಪ್ರದರ್ಶನವನ್ನು ಉದ್ಘಾಟಿಸಿದರು

ಕೈಗಾರಿಕಾ ವಸ್ತುಪ್ರದರ್ಶನ

ವ್ಯಾಪಾರ ವಹಿವಾಟು ಹೆಚ್ಚಿಸಲು, ಹೊಸ ಉತ್ಪನ್ನ ಪರಿಚಯಿಸಲು ಮತ್ತು ಉದ್ಯಮದ ಬೆಳವಣಿಗೆಗೆ ಕೈಗಾರಿಕಾ ವಸ್ತುಪ್ರದರ್ಶನ ಆಯೋಜಿಸಲಾಗಿದೆ. ಈ ಪ್ರದರ್ಶನವನ್ನು ಡಿಸಿ ಶಿಲ್ಪಾನಾಗ್ ಉದ್ಘಾಟಿಸಿದರು. ಶುಕ್ರವಾರವೂ ಈ ಪ್ರದರ್ಶನ ಇರಲಿದೆ. ಓಜೋನ್ ಜನರೇಟರ್, ಮಮ್ಮ ಮಿಲ್ಸ್ ನ್ಯೂಟ್ರಿಷನ್, ಸೋಲಾರ್ ಗ್ರೀನ್ ಟೆಕ್ನಾಲಜೀಸ್, ಬ್ರಶ್ ಟೆಕ್ ಇಂಡಿಯಾ, ಕಾಸ್ಪಿಯನ್ ಸ್ಮಾರ್ಟ್ ಮಾಪ್ ಸ್ವೀಪ್ ಸೇರಿದಂತೆ ವಿವಿಧ ಉದ್ಯಮಗಳ ಉತ್ಪನ್ನ ಪ್ರದರ್ಶಿಸಲಾಗಿದೆ.

ಗುಂಡ್ಲುಪೇಟೆಯಲ್ಲಿ ಕೃಷಿ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ದೊಡ್ಡ ಅವಕಾಶವಿದೆ. ಇಲ್ಲಿಂದ ಉತ್ಪನ್ನಗಳು ಮೌಲ್ಯವರ್ಧನೆಗಾಗಿ ಕೇರಳ ಮತ್ತು ತಮಿಳುನಾಡಿಗೆ ಹೋಗುತ್ತಿವೆ. ಎರಡು ರಾಜ್ಯಗಳಿಗೆ ಗಡಿ ಹಂಚಿಕೆಯಾಗಿದ್ದು, ಗುಂಡ್ಲುಪೇಟೆ ತಾಲೂಕನ್ನು ಕೇಂದ್ರವನ್ನಾಗಿ ಬಳಸಿಕೊಳ್ಳಬಹುದಾಗಿದೆ. ಕೆಐಎಡಿಬಿಯಿಂದ ಚಾಮರಾಜನಗರದಲ್ಲಿ ಕೈಗಾರಿಕಾ ವಲಯವನ್ನು ಸ್ಥಾಪಿಸಲಾಗಿದೆ. ಗುಂಡ್ಲುಪೇಟೆಯಲ್ಲಿಯೂ ತೋಟಗಾರಿಕೆ ಬೆಳೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಬೆಳೆಯುತ್ತಿರುವುದರಿಂದ ಆಹಾರ ಸಂಸ್ಕರಣಾ ಉದ್ಯಮಗಳ ಸ್ಥಾಪನೆಗೆ ವಿಪುಲ ಅವಕಾಶವಿದೆ. ಈ ನಿಟ್ಟಿನಲ್ಲಿ ಈ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಸಿಐಐ ಮೈಸೂರು ವಲಯ ಅಧ್ಯಕ್ಷ ನಾಗರಾಜ್ ಗರ್ಗೇಶ್ವರಿ, ಸೋಲೋಮನ್ ಪುಷ್ಪರಾಜ್, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಅಧ್ಯಕ್ಷ ಕೆ.ಬಿ.ಲಿಂಗರಾಜು, ರಬೀಂದ್ರ ಶ್ರೀಕಂಠನ್, ಸ್ಯಾಮ್ ಚೆರಿಯನ್, ರಾಧಿಕಾ ದಾಲ್, ಉತ್ಸವ್ ಅಗರ್‌ವಾಲ್ ಇದ್ದರು.

ನಕ್ಕರೆ ಅದೇ ಸ್ವರ್ಗ

ಮ್ಯಾನೇಜರ್: ಇವತ್ತಿನ ಪೇಪರ್ ಎಲ್ಲೋ?
ನೌಕರ : ಸಾರ್, ಅದನ್ನ ನಿನ್ನೆಯಿಂದ ಹುಡುಕುತ್ತಿದ್ದೇನೆ. ಸಿಗ್ತಾನೆ ಇಲ್ಲ.

ಮೈಸೂರು ಮಿತ್ರ
ಶುಕ್ರವಾರ, 22 ಆಗಸ್ಟ್ 2025
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಅವಶ್ಯಕತೆ ಇದ್ದಾಗ ಮಾತ್ರ ನಮ್ಮನ್ನು ನೆನಪು ಮಾಡುವವರೇ ಬುದ್ಧಿವಂತರು. ಅವರ ಮೇಲೆ ಅತಿಯಾದ ನಂಬಿಕೆ ಇಟ್ಟ ನಾವೇ ದಡ್ಡರು.

ವೇದ ಸುಳ್ಳಾದರೂ { ಆಯ ನೋಡಿ
ಗಾದೆ ಸುಳ್ಳಾಗದು { ಪಾಯ ಹಾಕು

ನಿಮ್ಮ ಪತ್ರಗಳು

■ ನಾಯಿಗಳ ಹಾವಳಿ ತಪ್ಪಿಸಿ

ಮಾನ್ಯರೆ,

ಮೈಸೂರಿನಲ್ಲಿ ಇತ್ತೀಚೆಗೆ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ಇದರಿಂದ ಜನರ ಪ್ರಾಣಗಳಿಗೆ ಹಾನಿ ಉಂಟಾಗುತ್ತಿದೆ. ಈ ಬೀದಿ ನಾಯಿಗಳ ಹಾವಳಿಯಿಂದಾಗಿ ಕೆಲವರು ಸಾವನ್ನಪ್ಪಿರುವುದನ್ನು ನೋಡಿದ್ದೇವೆ ಮತ್ತು ಕೇಳಿದ್ದೇವೆ. ಮನೆಯಲ್ಲಿ ಸಾಕುವ ನಾಯಿಗಳಿಗಿಂತ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ಸಾರ್ವಜನಿಕರಿಗೆ ರಸ್ತೆಯಲ್ಲಿ ಓಡಾಡಲು ತುಂಬಾ ತೊಂದರೆಯಾಗುತ್ತಿದೆ. ಏಕೆಂದರೆ ಮೊನ್ನೆಯಷ್ಟೇ ನನಗಾದ ಅನುಭವವೇ ಸಾಕ್ಷಿ. ನಜರ್‌ಬಾದ್‌ನ ಸಿಪಿಸಿ ಆಸ್ಪತ್ರೆಯ ಮುಂಭಾಗ ಟೀ ಅಂಗಡಿ ಮುಂದೆ ಟೀ ಕುಡಿಯುತ್ತಾ ನಿಂತಿದ್ದ ಸಂದರ್ಭದಲ್ಲಿ ಬೀದಿ ನಾಯಿ ಬಂದು ನನಗೆ ಕಚ್ಚಿದ್ದು, ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದುಕೊಂಡ ನಾನು ಐದು ಇಂಜೆಕ್ಷನ್ ತೆಗೆದುಕೊಂಡಿದ್ದೇನೆ. ಈ ರೀತಿಯ ತೊಂದರೆ ಬೇರೆ ಯಾರಿಗೂ ಆಗಬಾರದೆಂದು ನನ್ನ ಮನವಿ. ನೀಯತ್ತಿಗೆ ನಾಯಿ ಹೆಸರುವಾಸಿಯಾಗಿದೆ ಎಂದು ನಾವು ಎಲ್ಲೆಂದರಲ್ಲಿ ನಾಯಿಗಳಿಗೆ ಬಿಸ್ಕೆಟ್ ಹಾಕುವುದು, ಬನ್ನು ಹಾಕುವುದು, ಅದನ್ನು ಹಾರೈಸುವುದು ಮಾಡುವುದರಿಂದ ಕೆಲವೊಂದು ನಾಯಿಗಳು ನಮ್ಮ ಪ್ರಾಣಕ್ಕೆ ಹಾನಿ ಉಂಟು ಮಾಡುತ್ತವೆ. ಈ ಸಂಬಂಧ ಮೈಸೂರು ಮಹಾನಗರ ಪಾಲಿಕೆ ಸಿಬ್ಬಂದಿ ಇದರ ಬಗ್ಗೆ ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ಮನವಿ.

–ಸೈಯದ್ ಅಫ್ತಾಬ್, ಪತ್ರಿಕೋದ್ಯಮ ವಿದ್ಯಾರ್ಥಿ, ಮೈಸೂರು.

■ ಮೈಸೂರು ತಾಲೂಕು ಕಚೇರಿ ಸುತ್ತಮುತ್ತ ವಿದ್ಯುತ್ ಸರಬರಾಜು ಸ್ಥಗಿತ

ಮಾನ್ಯರೆ,

ಮೈಸೂರು ತಾಲೂಕು ಕಚೇರಿಸುತ್ತಮುತ್ತ ಹಲವಾರು ಬೇರೆ ಬೇರೆ ಸರ್ಕಾರಿ ಕಚೇರಿಗಳಿವೆ. ಜೊತೆಗೆ ಅವುಗಳಿಗೆ ಪೂರಕವಾಗಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡುವ ಖಾಸಗಿ ಕಂಪ್ಯೂಟರ್ ಕೇಂದ್ರಗಳು, ಪತ್ರ ಬರಹಗಾರರ ಕಚೇರಿಗಳು, ವಕೀಲರು ಮತ್ತು ನೋಟರಿ ಕಚೇರಿಗಳು, ದಿವ್ಯಾಂಗರು ನಡೆಸುವ ಹಲವು ಅಂಗಡಿಗಳಿವೆ. ಇವುಗಳು ಸುಗಮವಾಗಿ ಕಾರ್ಯನಿರ್ವಹಿಸಲು ವಿದ್ಯುಚ್ಛಕ್ತಿ ಪೂರೈಕೆ ಅತೀ ಅವಶ್ಯಕವಾಗಿದೆ. ಆದರೆ ಈ ಭಾಗದಲ್ಲಿ ದುರಸ್ತಿ ಮತ್ತು ನಿರ್ವಹಣೆ ಹೆಸರಿನಲ್ಲಿ ಹಗಲು ಹೊತ್ತಿನಲ್ಲೇ ವಿದ್ಯುತ್ ಪೂರೈಕೆಯನ್ನು ಆಗಾಗ ಸ್ಥಗಿತಗೊಳಿಸುತ್ತಾರೆ. ಇದರಿಂದಾಗಿ ಸರ್ಕಾರದ, ಖಾಸಗಿ ಸಂಸ್ಥೆಗಳ ಮತ್ತು ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ತೀವ್ರ ರೀತಿಯಲ್ಲಿ ತೊಂದರೆಯಾಗುತ್ತಿದೆ. ಈ ಬಗ್ಗೆ ಸಂಬಂಧಪಟ್ಟ ವಿದ್ಯುತ್ ಸರಬರಾಜು ನಿಗಮದ ಮೇಲಧಿಕಾರಿಗಳು ನಿಗಾ ವಹಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವರೆಂದು ಆಶಿಸೋಣವೇ? –ಎ.ಪಿ. ಶ್ರೀಕಂಠರಾಜೇ ಅರಸ್, ನ್ಯಾಯವಾದಿ, ನೋಟರಿ, ತಾಲೂಕು ಕಚೇರಿ ಹಿಂಭಾಗ, ಮೈಸೂರು.

■ ಕಳಚಿದ ಕನ್ನಡ ಪರ ಧ್ವನಿ



ಮಾನ್ಯರೆ,

ಕನ್ನಡ ಪರ ಹೋರಾಟಗಾರ ಸ.ರ. ಸುದರ್ಶನ್ ಅವರ ನಿಧನದ ಸುದ್ದಿ ಕೇಳಿ ತುಂಬಾ ಬೇಸರವಾಯಿತು. ಗೋಕಾಕ್ ಪರ ಚಳವಳಿಯಲ್ಲಿ ಭಾಗವಹಿಸಿದ್ದ, ಕನ್ನಡ ಪರ ಹೋರಾಟಗಳಲ್ಲಿ ಮುಂಚೂಣಿಯಲ್ಲಿದ್ದ, ಆರಂಭದಿಂದ ಇಲ್ಲಿಯವರೆಗೂ ಕನ್ನಡ ಕ್ರಿಯಾ ಸಮಿತಿ ಪ್ರಧಾನ ಕಾರ್ಯದರ್ಶಿಯಾಗಿ ಸಕ್ರಿಯರಾಗಿದ್ದ ಅವರು ಕನ್ನಡ ಪರ ವಿವಿಧ ಹುದ್ದೆಗಳನ್ನು ನಿರ್ವಹಿಸಿದ್ದರು. ವಿದ್ಯಾರ್ಥಿಯಾಗಿದ್ದಾಗಲೇ ಚೇತನ ಕನ್ನಡ ಸಂಘ ಕಟ್ಟಿದ್ದರು. ವಿದ್ಯಾರ್ಥಿಗಳಿಗೆ ಇಂಗ್ಲೀಷ್–ಕನ್ನಡ ನಿಘಂಟು ರಚನೆ, ಮೈಸೂರು ವಿವಿ ಪ್ರಸಾರಂಗದ ಉಪನಿರ್ದೇಶಕರಾಗಿ 4 ಸಂಪುಟಗಳ ನಿಘಂಟು ರಚನೆ ಮಾಡಿದ್ದರು. ಇತ್ತೀಚೆಗೆ ರಾಜ್ಯ ಶಿಕ್ಷಣ ನೀತಿ ಆಯೋಗ ಶಿಫಾರಸ್ಸು ಮಾಡಿದ್ದ ವರದಿಯಲ್ಲಿ ಪ್ರಥಮ ಭಾಷೆಯಾಗಿ ಕನ್ನಡ ಅಧ್ಯಯನ ಮಾಡಬೇಕು ಎಂಬ ಕಡ್ಡಾಯ ಇಲ್ಲದಿರುವ ಬಗ್ಗೆ ಆತಂಕ ವ್ಯಕ್ತಪಡಿಸಿ, ಲೋಪವನ್ನು ಸರಿಪಡಿಸಬೇಕು. ಇಲ್ಲದಿದ್ದರೆ ಮತ್ತೆ ಗೋಕಾಕ್ ಮಾದರಿಯ ಚಳುವಳಿ ಮಾಡುವ ಅನಿವಾರ್ಯ ಸೃಷ್ಟಿಯಾಗುತ್ತದೆ ಎಂದು ಪತ್ರಿಕಾ ಪ್ರಕಟಣೆ ನೀಡಿದ್ದರು. ಮಹಾರಾಜರು ಸ್ಥಾಪಿಸಿದ್ದ ಮೊಟ್ಟ ಮೊದಲ ಸರ್ಕಾರಿ ಬಾಲಕಿಯರ ಮಾದರಿ ಶಾಲೆಯ ನಿವೇಶನವನ್ನು ರಾಮಕೃಷ್ಣ ಆಶ್ರಮದವರಿಗೆ ವಿವೇಕಾನಂದರ ಸ್ಮಾರಕ ನಿರ್ಮಿಸಲು ನೀಡಿದಾಗ ಅದನ್ನು ಉಳಿಸಲು ಮೈಸೂರಿನ ವಿವಿಧ ಸಂಘಟನೆಗಳೊಡನೆ ಹಲವು ವರ್ಷ ಅವಿರತ ಹೋರಾಟ ಮಾಡಿದರೂ ಅದನ್ನು ಉಳಿಸಿ ಕೊಳ್ಳಲು ಸಾಧ್ಯವಾಗಲಿಲ್ಲ. 50 ವರ್ಷಗಳಷ್ಟು ಸುದೀರ್ಘ ಕಾಲ ಮೈಸೂರಿನಲ್ಲಿ ಕನ್ನಡದ ಧ್ವನಿಯಾಗಿದ್ದ ಚೇತನವೊಂದು ಕಣ್ಮರೆಯಾಗಿದೆ. ಇದು ಕನ್ನಡ ಭಾಷೆಗಾದ ನಷ್ಟ. ಅವರ ಹೋರಾಟ ಇನ್ನು ನೆನಪು ಮಾತ್ರ

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

■ ವೈದ್ಯರಿಲ್ಲದ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ



ಮಾನ್ಯರೆ,

ಮೈಸೂರು ಜಿಲ್ಲೆಯ ಅತೀ ಹಿಂದುಳಿದ ಹೆಚ್.ಡಿ.ಕೋಟೆ ತಾಲೂಕಿನ ಪಶು ಸಂಗೋಪನಾ ಇಲಾಖೆಯ ಅಡಿಯಲ್ಲಿ ಬರುವ ಎನ್. ಬೇಗೂರಿನ ಪಶು ಚಿಕಿತ್ಸಾ ಕೇಂದ್ರ ಹಲವಾರು ತಿಂಗಳಿಂದ ಪಶು ವೈದ್ಯರಿಲ್ಲದೆ ಇರುವುದರಿಂದ ಜಾನುವಾರುಗಳನ್ನು ಸಾಕಿರುವ ಜನತೆಯ ಕಷ್ಟ ಅಷ್ಟಿಷ್ಟಲ್ಲ. ಇಲ್ಲಿನ ಸುತ್ತಮುತ್ತಲ ಹತ್ತಾರು ಹಳ್ಳಿಗಳಲ್ಲಿ ಕೃಷಿಯನ್ನೇ ಅವಲಂಭಿಸಿರುವ ರೈತರು ಹೆಚ್ಚಿನ ಸಂಖ್ಯೆಯಲ್ಲಿ ತಮ್ಮ ಜೀವನೋಪಾಯಕ್ಕಾಗಿ ಕುರಿ, ಮೇಕೆ, ಹಸು, ಎಮ್ಮೆ, ಕೋಳಿ ಸಾಗಾಣಿಕೆಯಲ್ಲಿ ನಿರತರಾಗಿರುವುದು ಸರಿಯಷ್ಟೆ. ಹಲವಾರು ಬಾರಿ ಇಲ್ಲಿನ ಜನತೆ ಪಶು ಚಿಕಿತ್ಸಾ ಕೇಂದ್ರಕ್ಕೆ ವೈದ್ಯರನ್ನು ನೇಮಕ ಮಾಡುವ ವಿಚಾರದಲ್ಲಿ ಪಶು ಸಂಗೋಪನಾ ಇಲಾಖೆ ಅಧಿಕಾರಿಗಳು ಹಾಗೂ ಶಾಸಕರಿಗೆ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ ಎಂದು ಹೇಳುತ್ತಿರುವುದು ಸಾಮಾನ್ಯವಾಗಿದೆ. ತಮ್ಮ ಜಾನುವಾರುಗಳ ಆರೋಗ್ಯ ಸರಿ ಇಲ್ಲದಾಗ ತಾಲೂಕು ಕೇಂದ್ರಕ್ಕೆ ಸಾಗಿಸಲು, ಸಾಗಣೆ ವೆಚ್ಚ ಭರಿಸಲು ಸಾಧ್ಯವಿಲ್ಲದ ಕಾರಣ ಪಶು ಕೇಂದ್ರಕ್ಕೆ ಹೋಗುವುದೇ ಇಲ್ಲ. ಇದರಿಂದ ಹಲವಾರು ಜಾನುವಾರುಗಳು ಸಾವನ್ನಪ್ಪಿವೆ. ಆದಷ್ಟು ಬೇಗ ಪಶು ಸಂಗೋಪನಾ ಇಲಾಖೆಯು ವೈದ್ಯರನ್ನು ನೇಮಕ ಮಾಡಿ ರೈತರಿಗೆ ಅನುಕೂಲ ಮಾಡಿಕೊಡುವುದು ಅತ್ಯವಶ್ಯಕ.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಚಿಂತನೆ

ಆಗುವುದಿಲ್ಲವೆಂದಲ್ಲ, ಮನಸ್ಸು ಮಾಡಬೇಕಷ್ಟೆ...!



ನಮ್ಮ ಬಗ್ಗೆ ಕೆಲವು ಸಲ ನಮಗೇ ನಂಬಿಕೆ ಇಲ್ಲ. ಯಾವುದಾದರೂ ಕೆಲಸವನ್ನು ನಮಗೆ ವಹಿಸಿದಾಗ ಆರಂಭದಲ್ಲಿ ನಮಗೆ ಅದನ್ನು ಮಾಡುವುದು ಸಾಧ್ಯವಿಲ್ಲ ಎನ್ನಿಸುತ್ತದೆ. ಆ ಕೆಲಸವನ್ನು ಮಾಡಲು ಬೇರೆಯವರು ಇದ್ದಾರೆ ಎಂದಾಗ ಆ ಕೆಲಸವನ್ನು ಮಾಡಲು ನಮಗೆ ಮನಸ್ಸಾಗುವುದಿಲ್ಲ ಎಂದು ಹೇಳಿಬಿಡುತ್ತೇವೆ. ಆದರೆ ಅದೇ ಕೆಲಸವನ್ನು ಮಾಡಲು ಯಾರೂ ಇಲ್ಲ, ನಾನೇ ಮಾಡಬೇಕು ಎಂದಾಗ, ಹಾಗೂ ಅದು ಅನಿವಾರ್ಯವೂ ಆದಾಗ ಹೇಗೋ ಅದನ್ನು ಮಾಡಿಬಿಡುತ್ತೇವೆ. ನಂತರ ಆ ಕೆಲಸವನ್ನು ನಾನು ಮಾಡಿದೆನಾ, ನನ್ನಿಂದ ಅದು ಸಾಧ್ಯವಾಯಿತೇ? ಆ ಶಕ್ತಿ ನನಗೆ ಎಲ್ಲಿಂದ ಬಂತು? ಎಂದು ನಾವೇ ಪ್ರಶ್ನೆ ಹಾಕಿಕೊಂಡು ಆಶ್ಚರ್ಯಪಡುತ್ತೇವೆ.

ನನಗೆ ಪರಿಚಯವಿರುವ ಓರ್ವ ಹಿರಿಯ ನಾಗರಿಕರು ಬಹಳ ದಿನಗಳಿಂದ ನೆಲದ ಮೇಲೆ ಕೂರಲಾಗದೆ ಚಡಪಡಿಸುತ್ತಿದ್ದರು. ಯಾವುದಾದರೂ ಸಭೆ, ಸಮಾರಂಭಗಳಿಗೆ ಹೋದಾಗ ಊಟ ಮಾಡಬೇಕು ಎಂದಾದಾಗ ಕುರ್ಚಿ–ಟೇಬಲ್ ಹುಡುಕುತ್ತಿದ್ದರು. ಇವರಿಗೆ ಇತ್ತೀಚೆಗೆ ಪರಿಚಯವಾದವರೊಬ್ಬರು ಅವರಿಗೆ ಒಂದು ಆನ್‌ಲೈನ್ ಯೋಗ ತರಗತಿಗೆ ಸೇರುವಂತೆ ಸೂಚಿಸಿದರು. ಅದಕ್ಕೆ ಕೊಡಬೇಕಾದ ಶುಲ್ಕವನ್ನೂ ಅವರೇ ಭರಿಸಿದರು. ಹೀಗಾಗಿ ವಿಧಿ ಇಲ್ಲದೆ ಹೋದರೂ ಅರೆ ಮನಸಲ್ಲೇ ಆ ಯೋಗ ತರಗತಿಗೆ ಸೇರ್ಪಡೆಯಾದರು. ಕೇವಲ ಒಂದು ತಿಂಗಳಲ್ಲಿ ಅವರಲ್ಲಿ ಗಮನಾರ್ಹ ಪರಿವರ್ತನೆ ಕಾಣಲಾರಂಭಿಸಿತು. ಎರಡು ತಿಂಗಳಲ್ಲಿ ಆರಾಮವಾಗಿ ನೆಲದ ಮೇಲೆ ಕೂರುವಂತಾಯಿತು. ಈಗ ಮಾಮೂಲು ಸ್ಥಿತಿಗೆ ಬಂದಿದ್ದಾರೆ. ಇದು ಹೇಗೆ ಸಾಧ್ಯವಾಯಿತು ಎಂದು ಆಶ್ಚರ್ಯವಾಗುತ್ತದೆ. ಇದಕ್ಕೆ ಉತ್ತರ ಮನಸ್ಸಿದ್ದರೆ ಮಾರ್ಗ! ಅಲ್ಲಿಯವರೆಗೆ ನನಗೆ ನೆಲದ ಮೇಲೆ ಕೂತರೆ ಮತ್ತೆ ಮೇಲೇಳಲಾಗುವುದಿಲ್ಲ ಎಂಬ ಭಯದಿಂದ ಬಹಳ ವರ್ಷಗಳಿಂದ ನೆಲದ ಮೇಲೇ ಕೂರುತ್ತಿರಲಿಲ್ಲ. ಯಾವುದೇ ಔಷಧಿ, ಇಲ್ಲದೆಯೇ ಸ್ಥಿತಿ ಸುಧಾರಿಸಿದೆ ಎಂದರೆ ಅದಕ್ಕೆ ಮನಸ್ಸು ಹಾಗೂ ಒಂದು ಹಂತದಲ್ಲಿ ತೊಟ್ಟ ಛಲ. ಇಂತಹ ಅವಕಾಶಗಳನ್ನು ನಾವೇ ಸೃಷ್ಟಿಸಿಕೊಂಡರೆ ಹಲವು ಸಮಸ್ಯೆಗಳಿಂದ ಹೊರ ಬರಬಹುದು.

ನಮ್ಮದು ಒಂದು ಸಾಹಿತ್ಯ ಪರಿಷತ್ ಇದೆ. ಅದರಲ್ಲಿ ಅಲ್ಲಲ್ಲಿ 20–30 ಜನರ ಗುಂಪು ಮಾಡಲಾಗುತ್ತದೆ. ಅವರು ಪ್ರತಿ ತಿಂಗಳೂ ಒಂದು ಕಡೆ ಸೇರಬೇಕು. ಅವರಿಗೆ ಯಾವುದಾದರೂ ಒಂದು ವಿಷಯ ನೀಡಲಾಗುತ್ತದೆ. ಅದರ ಬಗ್ಗೆ ಅಲ್ಲಿಗೆ ಬಂದಿರುವವರೆಲ್ಲರೂ ಮಾತನಾಡಬೇಕು ಎಂದು ತಿಳಿಸಲಾಗಿದೆ. ಆರಂಭದಲ್ಲಿ ಕೆಲವರು ನನಗೆ ಸಾರ್ವಜನಿಕವಾಗಿ ಮಾತನಾಡಲು ಬರುವುದಿಲ್ಲ, ಬೇಕಿದ್ದರೆ ಬರೆದುಕೊಂಡು ಬಂದು ಓದುತ್ತೇನೆ ಎನ್ನುತ್ತಿದ್ದರು.

ಅದಕ್ಕೆ ಅವಕಾಶ ನೀಡಲಾಯಿತು. ಹಲವರು ನೇರವಾಗಿಯೇ ಮಾತನಾಡುತ್ತಾರೆ. ನಾನೂ ಹಾಗೆ ಮಾಡಲು ಏಕೆ ಪ್ರಯತ್ನಿಸಬಾರದು ಎಂಬ ಬಗ್ಗೆ ಕೆಲವರಲ್ಲಿ ಆಲೋಚನೆ ಪ್ರಾರಂಭವಾಯಿತು. ಮುಂದಿನ ಆರು ತಿಂಗಳಲ್ಲಿ ಅವರಲ್ಲಿ ಹಲವರು ಯಾವುದೇ ಬರವಣಿಗೆಯ ಸಹಾಯವಿಲ್ಲದೆ ಹತ್ತು, ಹದಿನೈದು ನಿಮಿಷ ಮಾತನಾಡುತ್ತಿದ್ದಾರೆ. ಇದಕ್ಕೂ ಮನಸ್ಸೇ ಕಾರಣವಾಯ್ತು ಅಲ್ಲವೆ?

ಹಾಗೆಯೇ ನಿಮಗೆ ಸಕ್ಕರೆ ಖಾಯಿಲೆ ಆರಂಭವಾಗಿದೆ. ನೀವು ದಿನಾ ಒಂದು ಗಂಟೆ ನಡೆಯಲೇಬೇಕು ಎಂದು ವೈದ್ಯರು ಹೇಳಿದಾಗ ಹೆದರಿಕೊಂಡಾದರೂ ಮರುದಿನದಿಂದಲೇ ನಡಿಗೆ ಪ್ರಾರಂಭಿಸಿದಾಯ್ತು! ಮುಂದೆ ಅದನ್ನು ಅಭ್ಯಾಸವಾಗಿ ಮಾಡಿಕೊಂಡದನ್ನು ನಾವು ಕಾಣುತ್ತೇವೆ. ಇಲ್ಲೂ ಹೆದರಿಕೆ ಹಾಗೂ ಮನಸ್ಸು ಎರಡೂ ಕಾರಣ ಎಂಬುದು ಮನದಟ್ಟಾಗುವುದಿಲ್ಲವೆ?

ಇಂತಹ ಮನೋಭಾವವನ್ನು ಹಲವು ವಿಷಯಗಳಲ್ಲಿ ನಾವು ಕಾಣಬಹುದಾಗಿದೆ. ಇತ್ತೀಚೆಗೆ ನಮ್ಮ ಪಕ್ಕದ ರಾಜ್ಯ, ಮಹಾರಾಷ್ಟ್ರದ ಪುಣೆಯಲ್ಲಿ ನಡೆದ ಒಂದು ಸಮಾಜದ ನಿರ್ಣಯ, ಉತ್ತರ ಕರ್ನಾಟಕದ ಪತ್ರಿಕೆಗಳಲ್ಲಿ ವರದಿಯಾಗಿತ್ತು. ಅದು ಮರಾಠ ಸಮುದಾಯದ ಒಂದು ನಿರ್ಣಯವಾಗಿತ್ತು. ಅದನ್ನು ನಾವೂ ಅನುಸರಿಸುವುದು ಸೂಕ್ತ ಎಂದು ಅದನ್ನು ಇಲ್ಲಿ ಉಲ್ಲೇಖಿಸಲಾಗಿದೆ. ಅಲ್ಲಿ ವರದಕ್ಷಿಣೆಗಾಗಿ ಪತಿಯ ಮನೆಯವರಿಂದ ಕಿರುಕುಳದಿಂದ ಓರ್ವ ಯುವತಿ ಪುಣೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಳು. ಇದಾದ ಬಳಿಕ ಆ ಮರಾಠ ಸಮುದಾಯದಲ್ಲಿ ಅದ್ಧೂರಿ ವಿವಾಹ ಹಾಗೂ ಅವರಲ್ಲಿ ಆಚರಿಸಲಾಗುತ್ತಿರುವ ಅಂಥ ಪದ್ಧತಿಗಳ ಕುರಿತಾದ ವ್ಯಾಪಕ ಚರ್ಚೆ ನಡೆಯಿತು. ಇದಾದ ನಂತರ ನಮ್ಮ ಸಮಾಜವು ಇಂತಹ ಪದ್ಧತಿಗಳ ವಿರುದ್ಧ ಒಟ್ಟಾಗಿ ಹೋರಾಡಬೇಕು. ಇದಕ್ಕಾಗಿ ವಿವಾಹಕ್ಕೆ ಸಂಬಂಧಿಸಿದ ಒಂದು ನೀತಿ ಸಂಹಿತೆಯನ್ನು ಜಾರಿಗೆ ತರಬೇಕು. ಅದನ್ನು ತಮ್ಮ ಸಮಾಜದ ಎಲ್ಲರೂ ಪಾಲಿಸಬೇಕು ಎಂದು ಒಕ್ಕೊರಲ ನಿರ್ಧಾರ ಕೈಗೊಳ್ಳಲಾಯಿತು. ಇದನ್ನು ಜಾರಿಗೆ ತರುವ ಪೂರ್ವದಲ್ಲಿ ಆ ಸಮುದಾಯದ ಸಂತರು, ಮಹಂತರು ಹಾಗೂ ಸಮಾಜದ ಮುಖಂಡರು ಒಟ್ಟಾಗಿ ಸೇರಿ 20 ಅಂಶಗಳ ಮರಾಠಾ ವಿವಾಹ ನೀತಿ ಸಂಹಿತೆಯನ್ನು ಜಾರಿಗೊಳಿಸುವ ಪ್ರತಿಜ್ಞೆ ಸ್ವೀಕರಿಸಿದರು.

ಆ ಸಭೆಯಲ್ಲಿ ಮಾತನಾಡಿದ ಪ್ರಮುಖರು ಹೇಳಿದ್ದೆಂದರೆ, ನಾವು ನಮ್ಮ ಹಳೆಯ ಸಂಪ್ರದಾಯಗಳನ್ನು ಮುಂದುವರೆಸಬೇಕು. ಆದರೆ ಕೆಲವು ತಪ್ಪು ಪದ್ಧತಿಗಳು ನಮ್ಮ ವಿವಾಹ ಸಮಾರಂಭಗಳಲ್ಲಿ ಸೇರಿಕೊಳ್ಳುತ್ತಿವೆ. ನಮ್ಮ ಸಮುದಾಯವು ಅದರ ಉದ್ದೇಶವನ್ನು ಅರಿತು, ನಮ್ಮದೇ ಆದ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಹೇಳಿದ್ದು, ಅದಕ್ಕೆ ಇಡೀ ಸಮುದಾಯ ಒಪ್ಪಿಗೆ ನೀಡಿದೆ. ಅದರಂತೆ ಕೆಲವು ನೀತಿ ಸಂಹಿತೆಯನ್ನು ಜಾರಿಗೊಳಿಸಲಾಗಿದೆ. ಅದರಲ್ಲಿನ ಮೊದಲ ನಿರ್ಣಯ ಎಂದರೆ ವಿವಾಹಕ್ಕೆ ಮಾಡುವ ಅನಗತ್ಯ ಹಾಗೂ ದುಂದು ವೆಚ್ಚಕ್ಕೆ ಕಡಿವಾಣ ಹಾಕಬೇಕು ಎಂಬುದು. ಇದು ಒಂದು ರೀತಿಯ ಮಹತ್ವದ ನಿರ್ಣಯ ಎನ್ನಿಸುತ್ತದೆ. ಇಂದು ಯಾರೋ ಹಣವಂತರು ಅದ್ದೂರಿಯಾಗಿ ಮದುವೆಗೆ ಖರ್ಚು ಮಾಡಿದರು ಎಂದು, ಅದನ್ನು ಆದರ್ಶವಾಗಿಟ್ಟುಕೊಂಡು ಹಣವಂತರಲ್ಲದವರೂ ಮದುವೆಗಾಗಿ ಸಾಲಸೋಲ ಮಾಡಿ ಮದುವೆ ಮಾಡುತ್ತಿರುವುದನ್ನು ನಾವು ಎಲ್ಲೆಲ್ಲೂ ಕಾಣುತ್ತೇವೆ. ಹಿಂದೆ ಮದುವೆ ಎಂಬುದು ಒಂದು ಪವಿತ್ರ ಆಚರಣೆ. ಅದು ಗಂಡು–ಹೆಣ್ಣಿನ ಜೊತೆಗೆ ಆ ಎರಡೂ ಮನೆತನಗಳನ್ನು ಒಂದು ಮಾಡಬೇಕೆಂಬ ಉದ್ದೇಶದಿಂದ ಬಂಧು–ಬಳಗದವರಷ್ಟೇ ಮಾಡುತ್ತಿದ್ದ ಕಾರ್ಯವಾಗಿರುತ್ತಿತ್ತು. ಹಾಗಾಗಿ ಅದಕ್ಕೆ ಪಾವಿತ್ರ್ಯತೆ ಇತ್ತು ಹಾಗೂ ಗಂಡು–ಹೆಣ್ಣಿನ ನಡುವೆ ನಾವು ನಮ್ಮ ಹಿರಿಯರ ಆಶಯಕ್ಕೆ ತಕ್ಕಂತೆ ನಡೆದುಕೊಳ್ಳಬೇಕು ಎಂಬ ಭಾವನೆ ಮೂಡುತ್ತಿತ್ತು. ಆದರೆ ಇಂದು ಮದುವೆಯಲ್ಲಿ ಶಾಸ್ತ್ರ–ಸಂಪ್ರದಾಯ ಹಾಗೂ ಮೂಲ ಉದ್ದೇಶವನ್ನು ಮರೆಮಾಚುವಂತೆ ಅದ್ದೂರಿತನ ತಂದು ಮದುವೆ ಶಾಸ್ತ್ರ ಒಂದು ನೆಪಮಾತ್ರಕ್ಕೆ ಅಥವಾ ಫೋಟೋ, ವಿಡಿಯೋಗಾಗಿ ಎಂಬಂತೆ ಬದಲಾಗುತ್ತಿದೆ. ಹಿಂದೆ ಮದುವೆ ಒಂದು ಸಾಂಪ್ರದಾಯಿಕ ಹಬ್ಬ ಎಂದು ಭಾವಿಸಿ ಮದುವೆ ಮಂಟಪದ ಪಾವಿತ್ರ್ಯತೆ ಕಾಪಾಡಲಾಗುತ್ತಿತ್ತು. ಆದರೆ ಇಂದು ಆ ಪಾವಿತ್ರ್ಯತೆ ಮರೆತು, ಅದನ್ನು ಒಂದು ಸಾರ್ವಜನಿಕ ಸಮಾರಂಭ ಎಂಬಂತೆ ಭಾವಿಸುತ್ತಿದ್ದೇವೆ. ಮೇಲಿನ ನಿರ್ಣಯವನ್ನು ನಾವೂ ಅಂಗೀಕರಿಸಿದರೆ ಅನವಶ್ಯಕ ವೆಚ್ಚ ಹಾಗೂ ಸಾಲ ಮಾಡುವಿಕೆ ಕಡಿಮೆ ಮಾಡಿಕೊಳ್ಳಬಹುದು. ಮದುವೆಯ ನಂತರ ಹುಡುಗಿಯ ತಂದೆ ಮಾಡಿದ ಸಾಲ ತೀರಿಸಲು ಪರದಾಡುವಾಗ ಯಾರೂ ಸಹಾಯಕ್ಕೆ ಬಾರದಿರುವುದನ್ನು ಗಮನಿಸಿದಾಗ ಇಂತಹ ಒಂದು ನಿರ್ಣಯವನ್ನು ನಮ್ಮ ಎಲ್ಲಾ ಸಮಾಜಗಳೂ ಸ್ವೀಕರಿಸುವುದು ಸೂಕ್ತ ಎಂದು ಕಂಡುಬರುತ್ತದೆ.

> “ ಮನುಷ್ಯನಿಗೆ ಅಸಾಧ್ಯವಾದುದು ಯಾವುದೂ ಇಲ್ಲ. ಆದರೆ ನಮ್ಮಲ್ಲಿ ಕೊರತೆ ಇರುವುದು ಅದನ್ನು ಮಾಡಲೇಬೇಕು ಎಂಬ ಮನೊಭಾವ. ಒಳ್ಳೆಯ ಕೆಲಸ ಕೆಲವರಿಂದಲೇ ಆರಂಭವಾಗುತ್ತದೆ ಎಂಬುದನ್ನು ನೆನಪಲ್ಲಿ ಇಟ್ಟುಕೊಳ್ಳಬೇಕು.

ಆ ಸಮಾಜ ಸ್ವೀಕರಿಸಿದ ಮತ್ತೊಂದು ನೀತಿ ಸಂಹಿತೆ ಎಂದರೆ ಪ್ರೀವೆಡ್ಡಿಂಗ್ ಶೂಟ್, ಡಿಜೆ ಸದ್ದು, ಆರತಕ್ಷತೆ ಹಾಗೂ ಅನಗತ್ಯ ಕ್ರಿಯೆಗಳನ್ನು ಸಂಪೂರ್ಣವಾಗಿ ನಿಷೇಧಿಸಬೇಕು ಎಂಬುದು. ಇದೂ ಸರಿಯಾದ ನಿರ್ಣಯ ಎನಿಸುತ್ತದೆ. ಮದುವೆಯ ಬಂಧ ಸರಿಯಾಗಬೇಕಾದರೆ ಅದು ಒಂದು ಶಿಸ್ತಿಗೆ ಬದ್ಧವಾಗಿರಬೇಕು. ಅದು ಪ್ರದರ್ಶನವಾಗಬಾರದು. ಮದುವೆ ಮನೆಯಲ್ಲಿ ಹುಚ್ಚೆದ್ದು ಕುಣಿಯುವುದು ಸರಿ ಎನಿಸುವುದಿಲ್ಲ. ಆರತಕ್ಷತೆಯ ಉದ್ದೇಶವೂ ವಧು–ವರರನ್ನು ತಮ್ಮ ನೆಂಟರು–ಇಷ್ಟರಿಗೆ ಪರಿಚಯಿಸಲು ಎಂಬುದಾಗಿದ್ದು, ಇಂದು ಬದಲಾದ ಸನ್ನಿವೇಶದಲ್ಲಿ ಆರತಕ್ಷತೆಗೆ ಯಾರು ಬಂದರು ಯಾರು ಹೋದರು ಎಂಬುದೇ ತಿಳಿಯುವುದಿಲ್ಲ. ಮದುವೆ ನಂತರ ವಿಡಿಯೋ ನೋಡಿ ಇಂತಹವರು ಬಂದಿದ್ದರು ಎಂದು ತಿಳಿದುಕೊಳ್ಳಬೇಕು. ಆದರೆ ಮದುವೆಯ ನಂತರ ಕುಳಿತು ಇಂತಹ ವಿಡಿಯೋ ವೀಕ್ಷಿಸಿದವರ ಸಂಖ್ಯೆ ಕೇವಲ ಬೆರಳೆಣಿಕೆಯಷ್ಟು ಎಂದು ಕಂಡು ಬರುತ್ತದೆ. ನಾವು ಆರ್ಥಿಕವಾಗಿ ಸಬಲರಾದರೆ ಸರಿ. ಆದರೆ ಯಾರೋ ಮಾಡಿದರು ಎಂದು ನಾವು ಹಾಗೆ ಮಾಡಲು ಹೋಗುವುದು ಅಂಧಾನುಕರಣೆ ಎನ್ನಿಸುತ್ತದೆ ಹಾಗೂ ಅದು ಅನಪೇಕ್ಷಣೀಯ ಎಂದೂ ಅನ್ನಿಸುತ್ತದೆ.

ಆ ಸಮಿತಿಯ ಮತ್ತೊಂದು ಮಹತ್ವದ ನಿರ್ಣಯ ಎಂದರೆ ಸಾಲ ಮಾಡಿ ಮದುವೆ ಮಾಡುವ ಪದ್ಧತಿ ಕೈಬಿಡಬೇಕು ಎಂಬುದಾಗಿದೆ. ಇದೂ ಒಂದು ರೀತಿಯ ಅವಶ್ಯಕ ನಿರ್ಣಯ ಎನ್ನಿಸುತ್ತದೆ. ಜೀವನದಲ್ಲಿ ಸಾಲ ಮಾಡುವುದು ಕೆಲವೊಂದು ಸಮಯದಲ್ಲಿ ಅನಿವಾರ್ಯ. ಆದರೆ ಹಾಗೆ ಸಾಲ ಮಾಡುವಾಗ ಮುಂದೆ ಅದನ್ನು ತೀರಿಸುವುದು ಹೇಗೆ? ಎಂಬ ಬಗ್ಗೆಯೂ ಚಿಂತಿಸಬೇಕಾಗುತ್ತದೆ, ದಾರಿ ಕಂಡುಕೊಂಡಿರಬೇಕಾಗುತ್ತದೆ ಸಾಲ ಕೊಡುವವರು ಇದ್ದಾರೆ ಎಂದು ಸಾಲ ಮಾಡಿದರೆ, ಕೊಟ್ಟವರು ಅದನ್ನು ಬಡ್ಡಿಸಹಿತ ವಸೂಲು ಮಾಡದೇ ಬಿಡುವುದಿಲ್ಲ. ಸಾಲ ತೀರಿಸಲಾಗದವರು ಆತ್ಮಹತ್ಯೆಯ ಯೋಚನೆ ಮಾಡುತ್ತಾರೆ ಎಂಬುದನ್ನೂ ನಾವು ಗಮನಿಸಬೇಕು.

ಸಮಾಜದ ಇನ್ನೊಂದು ನಿರ್ಣಯವು ಮದುವೆಗೆ ಆಹ್ವಾನಿಸುವವರ ಸಂಖ್ಯೆಯನ್ನು ಮುನ್ನೂರರಿಂದ ಐದು ನೂರಕ್ಕೆ ಸೀಮಿತಗೊಳಿಸಬೇಕು ಎಂಬುದಾಗಿದೆ. ಮದುವೆಯಲ್ಲಿ ದುಬಾರಿ ಉಡುಗೊರೆಗಳ ಬದಲಿಗೆ ಪುಸ್ತಕ, ಗಿಡಗಳ ಸಸಿಗಳನ್ನು ನೀಡಬೇಕು ಎಂಬುದು. ವಿವಾಹದ ನಂತರ ವಧುವಿನ ತಾಯಿ ಪದೇಪದೆ ಕರೆ ಮಾಡಿ ನವದಂಪತಿಯ ದಾಂಪತ್ಯ ಜೀವನದಲ್ಲಿ ಹಸ್ತಕ್ಷೇಪ ಮಾಡಬಾರದು ಎಂಬುದು ಇನ್ನೊಂದು ನಿರ್ಣಯ.

ಇಂತಹ ನಿರ್ಧಾರಗಳನ್ನು ನೋಡಿದಾಗ ಇದನ್ನು ಬಹಳ ವಿವೇಚನೆ ಉಪಯೋಗಿಸಿ ನಿರ್ಣಯ ಕೈಗೊಳ್ಳಲಾಗಿದೆ ಎಂದು ಕಂಡುಬರುತ್ತದೆ. ಇದನ್ನು ಓದಿದಾಗ ಹೀಗೆಲ್ಲಾ ನಡೆಯಲು ಸಾಧ್ಯವೇ? ಈಗಿನ ಆಚರಣೆಯನ್ನು ಹಾಗೆ ತಗ್ಗಿಸಬಹುದೇ? ಎಂಬ ಪ್ರಶ್ನೆ ಉದ್ಭವಿಸುತ್ತದೆ. ಆ ಸಮಾಜದ ಮುಖಂಡರು, ಧಾರ್ಮಿಕ ಮುಖಂಡರು ಸಹ ಒಳಗೊಂಡಿದ್ದರಿಂದ ಇಂತಹ ನಿರ್ಣಯ ಕೈಗೊಳ್ಳಲು ಅವರಿಗೆ ಸಾಧ್ಯವಾಗಿದೆ. ನಮ್ಮಲ್ಲೂ ಎಲ್ಲಾ ಸಮಾಜಗಳ ಪ್ರಮುಖರು, ಅಲ್ಲಿನ ಧರ್ಮಗುರುಗಳು ಇಂತಹ ಮನಸ್ಸು ಮಾಡಿದರೆ ಇಲ್ಲೂ ನಿರ್ಣಯ ಕೈಗೊಳ್ಳಬಹುದು. ಯಾರೋ ಒಬ್ಬರು ಇದನ್ನು ಅನುಸರಿಸಿದರೆ ಅವರು ಅಪಹಾಸ್ಯಕ್ಕೆ ಗುರಿಯಾಗಬೇಕಾಗುತ್ತದೆ. ಬದಲಿಗೆ ಸಮಾಜಗಳ ಬೆಂಬಲ ಇದ್ದರೆ ಹೀಗೆ ನಿರ್ಣಯ ಮಾಡಬಹುದು ಹಾಗೂ ಆ ನಿರ್ಣಯಕ್ಕೆ ಎಲ್ಲರೂ ಬದ್ಧರಾಗಿರುವಂತೆ ನೋಡಿಕೊಳ್ಳುವ ಕೆಲಸವನ್ನೂ ಇಂತಹ ಮುಖಂಡರು ಮಾಡಿದರೆ, ಕೆಲವೇ ಸಮಯದಲ್ಲಿ ಯಶಸ್ಸು ಕಾಣಬಹುದು.

ಇದು ಯಾವುದೂ ಮಾಡಲಾಗದ್ದು ಎಂದಲ್ಲ. ಆದರೆ ಮಾಡುವ ಮನಸ್ಸು ಮಾಡಬೇಕು. ಮನುಷ್ಯನಿಗೆ ಅಸಾಧ್ಯವಾದುದು ಯಾವುದೂ ಇಲ್ಲ. ಆದರೆ ನಮ್ಮಲ್ಲಿ ಕೊರತೆ ಇರುವುದು ಅದನ್ನು ಮಾಡಲೇಬೇಕು ಎಂಬ ಮನೊಭಾವ. ಒಳ್ಳೆಯ ಕೆಲಸ ಕೆಲವರಿಂದಲೇ ಆರಂಭವಾಗುತ್ತದೆ ಎಂಬುದನ್ನು ನೆನಪಲ್ಲಿ ಇಟ್ಟುಕೊಳ್ಳಬೇಕು.

ಸರ್ಕಾರದ ಗ್ಯಾರಂಟಿ ಬುಡಕಟ್ಟು ಸಮುದಾಯಕ್ಕೆ ತಲುಪಿಸುವ ನಿಟ್ಟಿನಲ್ಲಿ

‘ಗ್ಯಾರಂಟಿ ನಡಿಗೆ ಹಾಡಿ ಕಡೆಗೆ’ ಅಭಿಯಾನ

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಘೋಷಣೆ



ಡಾ. ಪುಷ್ಪಾ

ಮೈಸೂರು, ಆ.21(ಎಂಟಿವೈ)–ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯವನ್ನು ಬುಡಕಟ್ಟು ಸಮುದಾಯಕ್ಕೆ ಪರಿಣಾಮಕಾರಿಯಾಗಿ ತಲುಪಿಸುವ ನಿಟ್ಟಿನಲ್ಲಿ ‘ಗ್ಯಾರಂಟಿ ನಡಿಗೆ ಹಾಡಿ ಕಡೆಗೆ’ ಅಭಿಯಾನ ಆಯೋಜಿಸಲು ಉದ್ದೇಶಿಸಲಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರ್‌ನಾಥ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪಂಚಾಯತ್‌ನ ದೇವರಾಜ ಅರಸು ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಎಲ್ಲಾ ಜಾತಿ, ಧರ್ಮ, ಸಮುದಾಯಗಳ ಬಡ ಜನರು ಗೌರವಯುತವಾಗಿ ಜೀವನ ಸಾಗಿಸಲೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ರಾಜ್ಯದಾದ್ಯಂತ ಲಕ್ಷಾಂತರ ಕುಟುಂಬಗಳು ಗ್ಯಾರಂಟಿ ಯೋಜನೆಗಳ ಸದುಪಯೋಗಪಡಿಸಿಕೊಳ್ಳುತ್ತಿವೆ. ಆದರೆ, ವಿವಿಧ ಕಾರಣಗಳಿಂದ ಬುಡಕಟ್ಟು ಸಮುದಾಯಕ್ಕೆ ಗ್ಯಾರಂಟಿ ಯೋಜನೆಯ ಸೌಲಭ್ಯ ಪರಿಣಾಮಕಾರಿಯಾಗಿ ತಲುಪುತ್ತಿಲ್ಲ ಎಂಬ ಮಾಹಿತಿ ಗೊತ್ತಾಗಿದೆ. ಮೈಸೂರು ಜಿಲ್ಲೆಯಲ್ಲಿ 1010 ಬುಡಕಟ್ಟು ಸಮುದಾಯದವರು ಇದುವರೆಗೂ ಗ್ಯಾರಂಟಿ ಯೋಜನೆಯ ಸೌಲಭ್ಯ ಪಡೆದುಕೊಳ್ಳಲು ಮುಂದೆ ಬಂದಿಲ್ಲ. ಇದನ್ನು ಗಮನಿಸಿ ಬುಡಕಟ್ಟು ಸಮುದಾಯದ ಜನರಿಗೆ ಗ್ಯಾರಂಟಿ ಸೌಲಭ್ಯ ಒದಗಿಸಲು ‘ಗ್ಯಾರಂಟಿ ನಡಿಗೆ ಹಾಡಿ ಕಡೆಗೆ’ ವಿಶೇಷ ಅಭಿಯಾನ ನಡೆಸಲಾಗುತ್ತಿದೆ ಎಂದರು.



ಮೈಸೂರು ಜಿ.ಪಂ ಸಭಾಂಗಣದಲ್ಲಿ ಗುರುವಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಜಿಲ್ಲಾ ಸಮಿತಿಯ ಅಧ್ಯಕ್ಷ ಅರುಣ್‌ಕುಮಾರ್ ನೇತೃತ್ವದಲ್ಲಿ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಯುವ ನಿಧಿ ಉದ್ಯೋಗ ಮೇಳ: ಮೈಸೂರಿನಲ್ಲಿ ಸೆ.6ರಂದು ಬೃಹತ್ ಯುವ ನಿಧಿ ಉದ್ಯೋಗ ಮೇಳ ಆಯೋಜಿಸಲಾಗುವುದು. ಕಲ್ಬುರ್ಗಿಯಲ್ಲಿ ಆಯೋಜಿಸಿರುವ ಮೇಳದಲ್ಲಿ 30 ಸಾವಿರ ಯುವ ಜನರ ನೋಂದಣಿ ಆಗಿದೆ. ಮೈಸೂರಿನಲ್ಲಿ ನಡೆಯುತ್ತಿರುವುದು ವಿಭಾಗೀಯ ಮಟ್ಟದ ಮೇಳವಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಮೇಳಕ್ಕೆ ಚಾಲನೆ ನೀಡಲಿದ್ದಾರೆ ಎಂದರು.

ಗ್ಯಾರಂಟಿ ಅನುಷ್ಠಾನ ಜಿಲ್ಲಾ ಸಮಿತಿ ಅಧ್ಯಕ್ಷ ಅರುಣ್‌ಕುಮಾರ್ ಮಾತನಾಡಿ, ಗ್ಯಾರಂಟಿ ಯೋಜನೆಗೆ ಪಡಿತರ ಕಾರ್ಡ್, ಆಧಾರ್, ಬ್ಯಾಂಕ್ ಖಾತೆಯ ಅವಶ್ಯಕತೆ ಇದೆ. ಆದರೆ, ಸಾಕಷ್ಟು ಆದಿವಾಸಿಗಳ ಬಳಿ ಪಡಿತರ ಚೀಟಿ, ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಇಲ್ಲ. ಆದಿವಾಸಿಗಳಿಗೆ ಸರ್ಕಾರದ ಸೌಲಭ್ಯ ಪಡೆಯುವ ಮಾಹಿತಿ ಇರುವುದಿಲ್ಲ. ಹಾಗಾಗಿ ಅಧಿಕಾರಿಗಳು ಜಾಗೃತಿ ಮೂಡಿಸುವ ಕಾರ್ಯ ಮಾಡಬೇಕು ಎಂದು ಹೇಳಿದರು.

ಸಮಿತಿ ಉಪಾಧ್ಯಕ್ಷ ಶಿವಕುಮಾರ್ ಮಾತನಾಡಿ, ಕಳೆದ ಸಭೆಯಲ್ಲಿ ಅಧಿಕಾರಿಗಳು ನೀಡಿದ ವರದಿಯಂತೆ 1026 ಆದಿವಾಸಿಗಳು ನೋಂದಣಿ ಮಾಡಿಕೊಂಡಿರಲಿಲ್ಲ. ಅವರಲ್ಲಿ ಕೇವಲ 16 ಜನರು ಮಾತ್ರ ನೋಂದಣಿ ಮಾಡಿಕೊಂಡಿದ್ದಾರೆ. ಇನ್ನು 1010 ಬುಡಕಟ್ಟು ಸಮುದಾಯ ಫಲಾನುಭವಿಗಳು ನೋಂದಣಿ ಮಾಡಿಕೊಳ್ಳಬೇಕಾಗಿದೆ. ಆದಿವಾಸಿಗಳಿಗೆ ಸೌಲಭ್ಯ ತಲುಪಿಸುವ ವಿಚಾರದಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ತೋರುವುದು ಸರಿಯಲ್ಲ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಜತೆಗೆ ಐಟಿಡಿಪಿ ಅಧಿಕಾರಿಗಳು ಸಹ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಈ ಕುರಿತು ಪ್ರತಿಕ್ರಿಯಿಸಿದ ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯುಕೇಶ್ ಕುಮಾರ್, ಆದಿವಾಸಿಗಳಿಗೆ ಸೌಲಭ್ಯ ತಲುಪಿಸುವ ವಿಚಾರದಲ್ಲಿ ಅಧಿಕಾರಿಗಳು ಬದ್ಧತೆಯಿಂದ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಐಟಿಡಿಪಿ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಲಾಗುವುದು ಎಂದು ಹೇಳಿದರು.

ಸಮಿತಿ ಉಪಾಧ್ಯಕ್ಷ ಶಿವಕುಮಾರ್, ಚಂದ್ರಶೇಖರ್ ಮಾತನಾಡಿ ಗ್ಯಾರಂಟಿ ಯೋಜನೆಗಳನ್ನು ಸಮಗ್ರವಾಗಿ ಜಾರಿಗೊಳಿಸಲು ಅಧಿಕಾರಿಗಳು ಪಣ ತೊಡಬೇಕು ಎಂದರು. ಸಭೆಯಲ್ಲಿ ಜಿಲ್ಲಾ ಸಮಿತಿ ಉಪಾಧ್ಯಕ್ಷ ಹುಣಸೂರು ಬಸವಣ್ಣ, ಚಂದ್ರಶೇಖರ್, ಸದಸ್ಯರಾದ ಯೋಗೀಶ್, ಉದಯಶಂಕರ್, ಮಹದೇವು, ಉತ್ತನಹಳ್ಳಿ ಶಿವಣ್ಣ ಹಾಗೂ ಇತರರು ಇದ್ದರು.

ಫಲಾನುಭವಿಗಳ ಕೈ ಸೇರಿದ 28 ಸಾವಿರ ಕೋಟಿ ರೂ.!

ಜಿಪಂ ಮುಖ್ಯ ಯೋಜನಾಧಿಕಾರಿ ಪ್ರಭುಸ್ವಾಮಿ ಮಾಹಿತಿ ನೀಡಿ, ಗ್ಯಾರಂಟಿ ಯೋಜನೆ ಜಾರಿಯಾದ ಬಳಿಕ ಇದುವರೆಗೆ ಮೈಸೂರು ಜಿಲ್ಲೆಯ ಫಲಾನುಭವಿಗಳಿಗೆ ಯೋಜನೆಯ ಮೂಲಕ 28,278 ಕೋಟಿ ರೂ. ಲಭಿಸಿದೆ. ಕೆಲವು ತಾಂತ್ರಿಕ ದೋಷದಿಂದ ಕೆಲವರಿಗೆ ಹಣ ಸಕಾಲದಲ್ಲಿ ಪಾವತಿಯಾಗದೆ ಇರಬಹುದು. ಆದರೆ, ದೋಷ ಪರಿಹಾರವಾದ ನಂತರ ಎಲ್ಲರಿಗೂ ಹಂಚಿಕೆಯಾಗಲಿದೆ ಎಂದು ಹೇಳಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಭಗವಂತನ ಶ್ರದ್ಧೆಯಿಂದ ನೆನೆದರೆ ಕಷ್ಟಗಳೆಲ್ಲ ದೂರ

ಹಿರಿಯ ಪ್ರವಚನಕಾರ ಪ್ರೊ.ಕೆ.ಅನಂತರಾಮು ವಿವರಣೆ



ಪ್ರೊ.ಅನಂತರಾಮು



ಮೈಸೂರು, ಆ.21– ಭಗವಂತನನ್ನು ಶ್ರದ್ಧೆಯಿಂದ ನೆನೆದರೆ ಕಷ್ಟಗಳೆಲ್ಲವೂ ದೂರವಾಗುತ್ತವೆ ಎಂದು ಪ್ರಾಧ್ಯಾಪಕ, ಪ್ರವಚನಕಾರ ಪ್ರೊ.ಕೆ.ಅನಂತರಾಮು ಹೇಳಿದರು.

ಮೈಸೂರು ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಶ್ರೀ ಸುತ್ತೂರು ಮಠದಲ್ಲಿ ಶ್ರಾವಣ ಮಾಸದ 23ನೇ ದಿನದ ಪ್ರವಚನ ನೀಡುತ್ತಾ ತಿಳಿಸಿದರು. ಲಕ್ಕಣ್ಣ ದಂಡೇಶನ ಶಿವ ತತ್ತ್ವ ಚಿಂತಾಮಣಿಯಲ್ಲಿ ವಿವರಿಸಿರುವಂತೆ ಶಿವಭಕ್ತಿಯ ಬಲದಿಂದ ಎಲ್ಲ ವ್ಯಾಧಿಗಳು ಮಾಯವಾಗುತ್ತವೆ. ಅರವತ್ಮೂರು ಪುರಾತನರಲ್ಲಿ ಒಬ್ಬನಾದ ತಿರುವಾಳೂರಿನ ವಾಗೀಶನು ಶಿವಭಕ್ತ ಕುಟುಂಬದಲ್ಲಿ ಜನಿಸಿದವನು. ಆತನ ಮೊದಲ ಹೆಸರು ಧರ್ಮಶೇಖರ. ಆತನ ಸಹೋದರಿಯ ಹೆಸರು ವಲ್ಲಿನಾಚಿಯಾರ್. ಅವಳು ಅಪ್ಪಟ ಶಿವಭಕ್ತೆಯಾಗಿದ್ದಳು. ಅವಳ ವಿವಾಹದ ನಂತರ ಧರ್ಮಶೇಖರನು ಅನ್ಯಧರ್ಮಕ್ಕೆ ಹೋಗುತ್ತಾನೆ. ಅಲ್ಲಿನ ಧರ್ಮದ ಎಲ್ಲ ಶಾಸ್ತ್ರಗಳನ್ನು ಅಧ್ಯಯನ ಮಾಡಿ ಪಂಡಿತನಾಗುತ್ತಾನೆ. ಆ ಧರ್ಮಕ್ಕೆ ಮಕುಟಪ್ರಾಯ ಎನ್ನುವಷ್ಟರ ಮಟ್ಟಿಗೆ ಆತನ ಕೀರ್ತಿ ಹಬ್ಬಿರುತ್ತದೆ. ಸಹೋದರ ಅನ್ಯಧರ್ಮಕ್ಕೆ ಹೋಗಿದ್ದರಿಂದ ಸಹೋದರಿ ಸಾಕಷ್ಟು ದುಃಖಿಸುತ್ತಾಳೆ. ಧರ್ಮಶೇಖರನಿಗೆ ಒಂದು ದಿನ ಇದ್ದಕ್ಕಿದ್ದಂತೆ ಹೊಟ್ಟೆನೋವು ಕಾಣಿಸಿಕೊಳ್ಳುತ್ತದೆ. ಪಂಡಿತರು ಔಷಧೋಪಚಾರ ಮಾಡಿದರೂ ಅದು ಗುಣವಾಗುವುದಿಲ್ಲ, ಮತ್ತಷ್ಟು ಉಲ್ಬಣಗೊಳ್ಳುತ್ತದೆ. ಇದರಿಂದ ಧರ್ಮಶೇಖರನು ತನ್ನ ಸಾವು ಹತ್ತಿರವಾಯಿತೆಂದು ಭಾವಿಸುತ್ತಾನೆ. ತನ್ನ ಶಿಷ್ಯರಿಗೆ ಸಹೋದರಿಯ ಊರಿಗೆ ಕರೆದುಕೊಂಡು ಹೋಗಲು ತಿಳಿಸುತ್ತಾನೆ. ಅದರಂತೆ ಅವರು ಅಲ್ಲಿನ ಶಿವ ದೇವಾಲಯಕ್ಕೆ ಆತನನ್ನು ಕರೆತರುತ್ತಾರೆ. ಆತನ ಸಹೋದರಿಗೆ ವಿಷಯವನ್ನು ತಿಳಿಸುತ್ತಾರೆ. ನಂತರ ದೇವಾಲಯದಲ್ಲಿ ಆತನಿಗೆ ಶಿವದೀಕ್ಷೆ ನೀಡಿ ಶಿವಮಂತ್ರವನ್ನು ಬೋಧಿಸಲಾಗುತ್ತದೆ. ನಮಃ ಶಿವಾಯ ಮಂತ್ರದೊಂದಿಗೆ ಆತನ ಸಹೋದರಿ ವಿಭೂತಿ ಧರಿಸುತ್ತಾಳೆ. ಮುಂದೆ ಆತನ ವ್ಯಾಧಿ ಶಮನವಾಗುತ್ತದೆ. ಆತನು ವಾಗೀಶ್ವರ ಎಂಬ ಹೆಸರಿನಿಂದ ಅಪ್ಪಟ ಶಿವಭಕ್ತನಾದನೆಂದು ಲಕ್ಕಣ ದಂಡೇಶ ವಿವರಿಸಿದ್ದಾನೆ ಎಂದು ತಿಳಿಸಿದರು.

ಮೈಸೂರಲ್ಲಿ ಪಿಎಂಎಫ್ಎಂಇ ಯೋಜನೆಯಡಿ 131 ಉದ್ದಿಮೆ ಸ್ಥಾಪನೆ

ಕೃಷಿ ಇಲಾಖೆ ಜಂಟಿ ನಿರ್ದೇಶಕ ಕೆ.ಹೆಚ್.ರವಿ ಮಾಹಿತಿ

- ಉದ್ದಿಮೆ ಸ್ಥಾಪನೆಗೆ 15 ದಿನದಲ್ಲಿ 102 ಅರ್ಜಿ ಸಲ್ಲಿಕೆ
- ಶೇ.50ರಷ್ಟು ಸಬ್ಸಿಡಿ, 15 ಲಕ್ಷದವರೆಗೆ ಸಾಲ ಸೌಲಭ್ಯ
- ಹಳ್ಳಿಗರ ವಲಸೆ ತಪ್ಪಿಸಲು ಸ್ಥಳೀಯ ಉದ್ದಿಮೆ ಸ್ಥಾಪನೆ ಅಗತ್ಯ
- ಸೂಕ್ತ ಮಾರುಕಟ್ಟೆ ಸೌಲಭ್ಯ ಕಲ್ಪಿಸಿ, ಉದ್ದಿಮೆದಾರರ ಉತ್ತೇಜಿಸಿ



ಮೈಸೂರು ಜಿಲ್ಲಾ ಪಂಚಾಯತ್ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಗುರುವಾರ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ ಬಗ್ಗೆ ಆಯೋಜಿಸಿದ್ದ 'ಅರಿವು' ಕಾರ್ಯಕ್ರಮವನ್ನು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್ ಉದ್ಘಾಟಿಸಿದರು.

ಮೈಸೂರು, ಆ.21(ಬಿಎಲ್‌ಯು)– ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ಧಗೊಳಿಸುವಿಕೆ ಯೋಜನೆಯಲ್ಲಿ 131 ಜನರು ಉದ್ದಿಮೆದಾರರಾಗಿ ಹೊರಹೊಮ್ಮಿದ್ದಾರೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಕೆ.ಹೆಚ್.ರವಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಗುರುವಾರ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (ಪಿಎಂಎಫ್‌ಎಂಇ) ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಯೋಜನೆ ಬಗ್ಗೆ ಕಳೆದ 15 ದಿನದಿಂದ ಅರಿವು ಮೂಡಿಸುವ ಕಾರ್ಯಕ್ರಮ ನಡೆಸುತ್ತಿದ್ದು, ಈ ಅವಧಿಯಲ್ಲಿ 102 ಮಂದಿ ಅರ್ಜಿ ಸಲ್ಲಿಸಿದ್ದಾರೆ ಎಂದು ತಿಳಿಸಿದರು.

ಉದ್ದಿಮೆ ಸ್ಥಾಪನೆ ಮಾಡುವ ಸಂಬಂಧ ಅರ್ಜಿ ಸಲ್ಲಿಸಿದ ಎಲ್ಲರಿಗೂ ವಿವಿಧ ಬ್ಯಾಂಕ್‌ಗಳಲ್ಲಿ ಲಾಗಿನ್‌ಗೆ ಸೇರ್ಪಡೆ ಮಾಡಿ ಸಾಲ ಮಂಜೂರು ಮಾಡಿಸುವ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ರವಿ ಮಾಹಿತಿ ನೀಡಿದರು.

ಈ ಮೊದಲು ಆತ್ಮನಿರ್ಭರ ಭಾರತ್ ಅಭಿಯಾನದಡಿ ಒಂದು ಜಿಲ್ಲೆಗೆ ಒಂದು ಉತ್ಪನ್ನವಿತ್ತು. ಆದರೆ ಈಗ ಒಂದು ಜಿಲ್ಲೆಗೆ ಹಲವು ಉತ್ಪನ್ನ ಪರಿಕಲ್ಪನೆಯಲ್ಲಿ ವಿವಿಧ ಉದ್ಯಮಗಳು ಸ್ಥಾಪನೆಗೊಳ್ಳುತ್ತಿವೆ ಎಂದು ಹೇಳಿದರು.

ಈಗಾಗಲೇ ಸಲ್ಲಿಕೆಯಾಗಿರುವ 102 ಅರ್ಜಿಗಳಲ್ಲಿ 22 ಹಿಟ್ಟಿನ ಗಿರಣಿ, 10 ತೆಂಗಿನ ಉತ್ಪನ್ನಗಳು, 9 ಸಿರಿ ಧಾನ್ಯ ಉತ್ಪನ್ನಗಳು, 6 ಎಣ್ಣೆಕಾಳು, 10 ಬೇಕರಿ ಉತ್ಪನ್ನಗಳು, 2 ಮತ್ಸ್ಯ, 2 ಶುಂಠಿ, 2 ಬೆಲ್ಲ, 2 ಉಪ್ಪಿನಕಾಯಿ ಹಾಗೂ 2 ಅಕ್ಕಿ ಉತ್ಪನ್ನಗಳ ಉದ್ದಿಮೆ ಸ್ಥಾಪನೆಯಾಗುತ್ತಿವೆ ಎಂದು ರವಿ ಅಂಕಿ–ಅಂಶ ಸಹಿತ ವಿವರಿಸಿದರು.

ಇದೇ ವೇಳೆ ಮಾತನಾಡಿದ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್ ಅವರು, ಗ್ರಾಮೀಣ ಪ್ರದೇಶದ ಜನರು ಉದ್ಯೋಗಕ್ಕಾಗಿ ನಗರ ಪ್ರದೇಶಕ್ಕೆ ವಲಸೆ ಬರುವುದನ್ನು ತಪ್ಪಿಸಲು ಸ್ಥಳೀಯವಾಗಿ ಹಲವು ಉದ್ದಿಮೆಗಳು ಸ್ಥಾಪನೆಯಾಗುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಬಹಳಷ್ಟು ಮಹಿಳೆಯರು ಹಲವು ಉತ್ಪನ್ನಗಳನ್ನು ತಯಾರಿಸುತ್ತಾರೆ. ಆದರೆ ಅವುಗಳ ಮಾರಾಟಕ್ಕೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಇರುವುದಿಲ್ಲ. ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಇಲಾಖೆ ಮಹಿಳೆಯರು ಉತ್ಪಾದಿಸುವ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯ ಕಲ್ಪಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್.ಶಿವಪ್ರಕಾಶ್ ಅವರು, ಉದ್ದಿಮೆ ಸ್ಥಾಪಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಬ್ಸಿಡಿಸಹಿತ ಧನ ಸಹಾಯ ಮಾಡುತ್ತವೆ. ಇದನ್ನು ಎಲ್ಲರೂ ಸದುಪಯೋಗಪಡಿಸಿಕೊಂಡು ಸ್ವಾವಲಂಬಿಗಳಾಗ ಬೇಕು ಎಂದು ಮಾರ್ಗದರ್ಶನ ನೀಡಿದರು.

ಗ್ರಾಮೀಣ ಪ್ರದೇಶದಲ್ಲಿ ದೊರೆಯುವ ಕಚ್ಚಾ ವಸ್ತುಗಳನ್ನು ಬಳಸಿಕೊಂಡು ಹಲವು ಉತ್ಪನ್ನಗಳನ್ನು ತಯಾರಿಸಲು ಉದ್ದಿಮೆ ಸ್ಥಾಪಿಸಬೇಕು. ಇದಕ್ಕೆ ಶೇಕಡ 50ರಷ್ಟು ಸಬ್ಸಿಡಿ ಹಾಗೂ 15 ಲಕ್ಷ ರೂ. ಬ್ಯಾಂಕ್ ಸಾಲ ದೊರೆಯುತ್ತದೆ. ಇದನ್ನು ಸಮರ್ಪಕವಾಗಿ ಬಳಸಿಕೊಂಡು ಉದ್ದಿಮೆ ಸ್ಥಾಪನೆ ಮಾಡಿದರೆ ಬಹಳಷ್ಟು ಜನರಿಗೆ ಉದ್ಯೋಗ ದೊರೆಯುತ್ತದೆ. ಇದರಿಂದ ನಿರುದ್ಯೋಗ ಸಮಸ್ಯೆ ಸಹಜವಾಗಿ ಸ್ವಲ್ಪ ಮಟ್ಟಿಗೆ ಪರಿಹಾರವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಇದೇ ವೇಳೆ ಕಾರ್ಯಕ್ರಮದಲ್ಲಿ ಹಾಜರಿದ್ದ ಯಶಸ್ವಿ ಫಲಾನುಭವಿಗಳಾದ ಮೋಹನ್‌ಕುಮಾರ್ ಅವರು ಸಿರಿ ಧಾನ್ಯ ಹಾಗೂ ಎಣ್ಣೆ ಬೀಜದ ಉತ್ಪನ್ನ, ಶೃತಿ ಗಿರಿಧರ್ ಅವರು ಬೆಲ್ಲ ಉತ್ಪಾದನಾ ಘಟಕ, ಪ್ರಮೀತ್ ಅವರು ನಿರ್ಜಲೀಕರಣ ಉತ್ಪನ್ನಗಳ ಉತ್ಪಾದನೆ ಕುರಿತಂತೆ ತಮ್ಮ ಅನುಭವ ಹಂಚಿಕೊಂಡರು.

ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಯುಕೇಶ್ ಕುಮಾರ್, ನಗರಪಾಲಿಕೆ ಆಯುಕ್ತ ಷೇಕ್ ತನ್ವೀರ್ ಆಸೀಫ್, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಕಲ್ಮಳ್ಳಿ ಶಿವಕುಮಾರ್, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ಲೀಡ್ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕ ಎನ್.ಪಿ.ಕೃಷ್ಣಮೂರ್ತಿ, ಕೃಷಿ ಅಧಿಕಾರಿ ವೆಂಕಟೇಶ್ ಕಾರ್ಯಕ್ರಮದಲ್ಲಿ ಹಾಜರಿದ್ದರು.

ಮನುಷ್ಯನಿಗೆ ಆರೋಗ್ಯವೇ ನಿಜವಾದ ಸಂಪತ್ತು

ಬಸವಮಾರ್ಗ ಸಂಸ್ಥೆ ಸಂಸ್ಥಾಪಕ ಎಸ್.ಬಸವರಾಜು ಅಭಿಮತ; ಆರೋಗ್ಯ ಉಚಿತ ತಪಾಸಣೆ



ದಿವಂಗತ ಸೋನಿ ಎಂ.ಕರೀಗೌಡ ಅವರ 26ನೇ ಪುಣ್ಯಸ್ಮರಣೆ ಅಂಗವಾಗಿ ಬಸವಮಾರ್ಗ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರದಲ್ಲಿ ಆಯೋಜಿಸಿದ್ದ ಆರೋಗ್ಯ ಶಿಬಿರದಲ್ಲಿ ವೈದ್ಯರು ಆರೋಗ್ಯ ತಪಾಸಣೆ ಮಾಡಿದರು. ಎಸ್.ಬಸವರಾಜು ಚಿತ್ರದಲ್ಲಿ ಇದ್ದಾರೆ.

ಮೈಸೂರು,ಆ.21(ಪಿಎಂ)– ಮನುಷ್ಯನಿಗೆ ಆರೋಗ್ಯವೇ ನಿಜವಾದ ಸಂಪತ್ತು ಎಂದು ಬಸವಮಾರ್ಗ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರದ ಸಂಸ್ಥಾಪಕ ಎಸ್.ಬಸವರಾಜು ಹೇಳಿದರು.

ದಿವಂಗತ ಸೋನಿ ಎಂ.ಕರೀಗೌಡ ಅವರ 26ನೇ ಪುಣ್ಯಸ್ಮರಣೆ ಅಂಗವಾಗಿ ಬಸವಮಾರ್ಗ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರದಲ್ಲಿ ಆಯೋಜಿಸಿರುವ 53ನೇ ಕುಡಿತ ಬಿಡಿಸುವ ಉಚಿತ ಶಿಬಿರದ ಉದ್ಘಾಟನೆ ಪ್ರಯುಕ್ತ ಸಂಸ್ಥೆಯಲ್ಲಿ ಏರ್ಪಡಿಸಿದ್ದ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮನುಷ್ಯ ನಾನಾ ಬಯಕೆಗಳ ಹಿಂದೆ ಸದಾ ಓಡುತ್ತಿರುತ್ತಾನೆ. ಅವುಗಳನ್ನು ಪಡೆದುಕೊಳ್ಳುವ ಹಂಬಲದಲ್ಲಿ ತನ್ನ ಆರೋಗ್ಯವನ್ನು ಕೆಡಿಸಿಕೊಳ್ಳುತ್ತಿದ್ದಾನೆ. ಆರೋಗ್ಯ ಉತ್ತಮ ಸ್ಥಿತಿಯಲ್ಲಿ ಇದ್ದರೆ ಮನುಷ್ಯ ಏನನ್ನೂ ಬೇಕಾದರೂ ಪಡೆಯಬಹುದು ಎಂದರು.

ಆರೋಗ್ಯಕರವಾದ ಮೊಗ್ಗು ಮಾತ್ರ ಪೂರ್ಣವಾಗಿ ಅರಳಲು ಸಾಧ್ಯ. ಅದೇ ರೀತಿ ಆರೋಗ್ಯವಂತ ವ್ಯಕ್ತಿಗಳು ಮಾತ್ರ ಪೂರ್ಣ ಯಶಸ್ವಿಯಾಗಲು ಸಾಧ್ಯ. ನಿಜವಾದ ಆರೋಗ್ಯ ಎಂದರೆ ಕೇವಲ ದೈಹಿಕ ರೋಗಗಳಿಂದ ಮುಕ್ತವಾಗುವುದಲ್ಲ. ಮಾನಸಿಕ ಹಾಗೂ ಭಾವನಾತ್ಮಕವಾಗಿ ಶಾಂತವಾಗಿರುವ ಸ್ಥಿತಿಯೇ ನಿಜವಾದ ಆರೋಗ್ಯ ಎಂದು ಅಭಿಪ್ರಾಯಪಟ್ಟರು.

ಆರೋಗ್ಯ ಶಿಬಿರದಲ್ಲಿ ಎ.ಆರ್.ಆಸ್ಪತ್ರೆ ಹಾಗೂ ಡಾ.ಅಗರ್‌ವಾಲ್ ಕಣ್ಣಿನ ಆಸ್ಪತ್ರೆ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ ಸಾಮಾನ್ಯ ರೋಗಗಳು, ಬಿಪಿ, ಶುಗರ್, ಕಣ್ಣು, ದಂತ ಆರೋಗ್ಯ ತಪಾಸಣೆ ನಡೆಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ವ್ಯವಸ್ಥಾಪಕ ಮಹೇಶ್, ಯೋಗ ಶಿಕ್ಷಕ ನವೀನ್, ಸಿಬ್ಬಂದಿಯಾದ ಸಂಜಯ್, ನಂದೀಶ್ ಇತರರು ಇದ್ದರು.

ನ್ಯಾ.ನಾಗಮೋಹನದಾಸ್ ಒಳ ಮೀಸಲಾತಿ ವರದಿ ಅನುಷ್ಠಾನ ಸಂತಸ ತಂದಿದೆ

ಲೋಪ–ದೋಷ ಸರಿಪಡಿಸಿ ಅಲೆಮಾರಿ ಸಮುದಾಯಕ್ಕೂ ಮೀಸಲಾತಿ ನೀಡಿ



ಪುರುಷೋತ್ತಮ್

ಮೈಸೂರು, ಆ.21(ಜಿಎ)–ರಾಜ್ಯ ಸರ್ಕಾರ ನ್ಯಾಯಮೂರ್ತಿ ನ್ಯಾ.ನಾಗಮೋಹನದಾಸ್ ಅವರ ಒಳ ಮೀಸಲಾತಿ ವರದಿಯನ್ನು ಅನುಷ್ಠಾನಗೊಳಿಸಿರುವುದು ಸಂತಸದ ವಿಚಾರ. ಆದರೆ, ವರದಿಯಲ್ಲಿರುವ ಲೋಪ ದೋಷಗಳನ್ನು ಸರಿಪಡಿಸಿ ಅಲೆಮಾರಿ ಸಮುದಾಯಕ್ಕೆ ಮೀಸಲಾತಿ ನೀಡಬೇಕು ಎಂದು ಮಾಜಿ ಮೇಯರ್ ಪುರುಷೋತ್ತಮ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಹೊಲೆಯ–ಮಾದಿಗರು ದೊಡ್ಡ ಸಮುದಾಯ ಹೀಗಾಗಿ ಎರಡು ಸಮುದಾಯಗಳಿಗೆ ಸಮನಾಗಿ ಒಳ ಮೀಸಲಾತಿ ಜಾರಿಗೊಳಿಸಿದ ಕಾರಣ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಗೃಹ ಸಚಿವ ಜಿ.ಪರಮೇಶ್ವರ್, ಆಹಾರ ನಾಗರೀಕ ಸಚಿವ ಮುನಿಯಪ್ಪ ಮತ್ತು ಶಾಸಕ ನರೇಂದ್ರ ಸ್ವಾಮಿ ತಂಡಕ್ಕೆ ಧನ್ಯವಾದ ತಿಳಿಸಿದರು.

ಒಳ ಮೀಸಲಾತಿ ಅನುಷ್ಠಾನದಲ್ಲಿ ಘೋರ ಅನ್ಯಾಯವಾಗಿದೆ. ಇದರಿಂದ 59 ಅಲೆಮಾರಿ ಸಮುದಾಯಗಳು ಮೀಸಲಾತಿ ವಂಚಿತವಾಗಿವೆ. ಹೀಗಾಗಿ ಸಿ ವರ್ಗಕ್ಕೆ ನೀಡಿರುವ ಶೇ.5ರಷ್ಟು ಮೀಸಲಾತಿಯಲ್ಲಿ ಕೊಲಂಬ ಜಾತಿಗಳಿಗೆ ಶೇ.3ರಷ್ಟು ನೀಡಿ ಉಳಿದ ಪಾಲನ್ನು ಅಲೆಮಾರಿ ಸಮುದಾಯಕ್ಕೆ ನೀಡಿ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಸ್ಪೃಶ್ಯ ಜಾತಿಗಳನ್ನು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಕೈ ಬಿಟ್ಟು ಎಕೆ, ಎಡಿ, ಎಎ ಅಲ್ಲಿರುವ ಜನಸಂಖ್ಯೆಯನ್ನು ವೈಜ್ಞಾನಿಕವಾಗಿ ಅಧ್ಯಯನ ಮಾಡಿ ಹಂಚಿಕೆಯಾಗಬೇಕು. 4.72 ಲಕ್ಷ ಸಂಖ್ಯೆ ಜಾತಿವಾರು ಸೇರಿಸಬೇಕು. ಇದರ ಜೊತೆಗೆ ಡಾ.ಅಂಬೇಡ್ಕರ್ ಅವರ ಜಾತಿ ಮಹಾರ್ ಜಾತಿಗೆ ಎಲ್ಲರೂ ಸೇರಬೇಕು ಎಂದರು.

ಬೌದ್ಧರನ್ನು ಪರಿಶಿಷ್ಟ ಜಾತಿಯಲ್ಲೇ ಮುಂದುವರಿಸುವಂತೆ 1990ರಲ್ಲಿ ಸಂವಿಧಾನದಲ್ಲಿ ತಿದ್ದುಪಡಿಯಾಗಿರುವ ಅಂಶವನ್ನು ಕರ್ನಾಟಕ ಸರ್ಕಾರ ಜಾರಿಗೆ ತಂದು ನಾಗಮೋಹನದಾಸ್ ವರದಿ ವೈಜ್ಞಾನಿಕವಾಗಿ ಕೋಮು ಅಂಶಗಳ ಮೇಲೆ ಪರಿಷ್ಕರಣೆ ಒಳಪಡಿಸಬೇಕು ಎಂದು ಆಗ್ರಹಿಸಿದರು. ಡಾ.ಬಿ.ಆರ್.ಅಂಬೇಡ್ಕರ್ ಸಾಮಾಜಿಕ ಚಿಂತನೆ ಮತ್ತು ನ್ಯಾಯದ ಮೇಲೆ ನಮ್ಮ ಹಕ್ಕುಗಳನ್ನು ಹಂಚಿಕೊಂಡಿದ್ದೇವೆ. ಆದರೆ, ಅಂಬೇಡ್ಕರ್ ಆಶಯದಂತೆ ರಾಜಕೀಯ ಅಧಿಕಾರಕ್ಕಾಗಿ ನಾವೆಲ್ಲರೂ ಕೂಡ ಒಟ್ಟಾಗಿ ಕೆಲಸ ಮಾಡಬೇಕು. ನಮ್ಮಲ್ಲಿ ಭಾವನಾತ್ಮಕ ಸಂಬಂಧವಿದ್ದು, ನಮ್ಮ ವಿಮೋಚನೆ ಬದುಕಿಗಾಗಿ ಮುಂದುವರಿಯ ಬೇಕು. ಮುಂದಿನ ಪರಿಷ್ಕರಣೆ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದ ಜನಸಂಖ್ಯೆಗೆ ಅನುಗುಣವಾಗಿ ಹೆಚ್ಚಿಸಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ಲೇಖಕ ಸಿದ್ದಸ್ವಾಮಿ, ಪತ್ರಕರ್ತ ಸೋಮಯ್ಯ ಮಲೆಯೂರು, ತುಂಬಲ ರಾಮಣ್ಣ ಇದ್ದರು.

ಅಭಿನಂದನೆ...



ಸರ್ವ ಸಮ್ಮತ ಒಳ ಮೀಸಲಾತಿ ಜಾರಿಯಲ್ಲಿ ಪ್ರಮುಖ ಪಾತ್ರ ವಹಿಸಿದ, ಆ ಮೂಲಕ ಸಾಮಾಜಿಕ ನ್ಯಾಯ ಪ್ರತಿಪಾದಿಸಿದ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅವರನ್ನು ಬೆಂಗಳೂರಿನ ಅವರ ಮನೆಯಲ್ಲಿ ಭೇಟಿ ಮಾಡಿದ ಕರ್ನಾಟಕ ರಾಜ್ಯ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ವಕೀಲ ತಿಮ್ಮಯ್ಯ, ಪ್ರಧಾನ ಕಾರ್ಯದರ್ಶಿ, ವಕೀಲರಾದ ಎ.ಆರ್.ಕಾಂತರಾಜ್, ಡಿಸಿಸಿ ರೈತ ಘಟಕದ ಅಧ್ಯಕ್ಷ ಜಿ.ಮಹದೇವ, ಮುಖಂಡ ಮಧುಸೂದನ್ ಅಭಿನಂದಿಸಿದರು.

ಒಳ ಮೀಸಲಾತಿ ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾಗಿದೆ

ದಸಂಸ ನಾಯಕ ದೇವಗಳ್ಳಿ ಸೋಮಶೇಖರ್ ಅಸಮಾಧಾನ



ದೇವಗಳ್ಳಿ ಸೋಮಶೇಖರ್

ಮೈಸೂರು, ಆ.21 (ಎಂಕೆ)– ಪರಿಶಿಷ್ಟ ಜಾತಿ ಒಳ ಮೀಸಲಾತಿ ಹಂಚಿಕೆಯಲ್ಲಿ ರಾಜ್ಯ ಸರ್ಕಾರ ಖಾಜಿ ನ್ಯಾಯ ಮಾಡಿದೆ ಎಂದು ದಲಿತ ಸಂಘರ್ಷ ಸಮಿತಿ ರಾಜ್ಯ ಸಮಿತಿ ಮುಖಂಡ ದೇವಗಳ್ಳಿ ಸೋಮಶೇಖರ್ ಅಸಮಾಧಾನ ಹೊರಹಾಕಿದ್ದಾರೆ.

ಪರಿಶಿಷ್ಟ ಜಾತಿಯಲ್ಲಿರುವ 101 ಉಪಜಾತಿಗಳ ಜನರಿಗೆ ಒಳಮೀಸಲಾತಿ ಹಂಚಿಕೆ ಮಾಡಿರುವ ರಾಜ್ಯ ಸರ್ಕಾರ, ಬಲಗೈ ಮತ್ತು ಎಡಗೈಗೆ ತಲಾ ಶೇ.6ರಷ್ಟು ಹಾಗೂ ಕೊರಮ, ಕೊರಚ, ಬೋವಿ, ಲಂಬಾಣಿ, ಇನ್ನಿತರೆ ಸ್ಪೃಶ್ಯ ಜಾತಿಗಳಿಗೆ ಶೇ.5ರಷ್ಟು ಒಳಮೀಸಲಾತಿ ಘೋಷಣೆ ಮಾಡಿ ಇದೇ ಅಂತಿಮ ತೀರ್ಮಾನ ಎಂದಿರುವುದು ನ್ಯಾಯ ಸಮ್ಮತವಾಗಿಲ್ಲ ಎಂದಿದ್ದಾರೆ.

ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರು ಬಲಗೈ ಸಮುದಾಯದ ಉಪಜಾತಿಗಳನ್ನು ಒಂದುಗೂಡಿಸುವ ಬದಲು ಒಡೆದು ಚೂರು ಮಾಡಿದ್ದಾರೆ. ಅಲ್ಲದೆ ಸುಮಾರು ಒಂಭತ್ತು ಲಕ್ಷ ಬಲಗೈ ಸಮುದಾಯದ ಜನರು ಸಮೀಕ್ಷೆಯಿಂದ ವಂಚಿತರಾಗಿದ್ದು, ಅವರಿಗೆ ಮತ್ತೊಂದು ಅವಕಾಶ ನೀಡಬೇಕಿತ್ತು.

ಹೊಲೆಯ ಸಮುದಾಯದಲ್ಲಿ 24,72,103 ಜನರಿದ್ದಾರೆ ಎಂದು ತೋರಿಸಿ ಶೇ.5ರಷ್ಟು ಮೀಸಲಾತಿ ನೀಡಲಾಗಿತ್ತು. ನಂತರ ಪರಯ, ಛಲವಾದಿ, ಆದಿ ಕರ್ನಾಟಕ ಒಟ್ಟುಗೂಡಿಸಿದಾಗ ಬಲಗೈ ಜನಸಂಖ್ಯೆ 40 ಲಕ್ಷವಾಗಲಿದ್ದು, ಜನಸಂಖ್ಯೆ ಆಧಾರದಲ್ಲಿ ಶೇ.8ರಷ್ಟು ಒಳಮೀಸಲಾತಿ ಕೊಡುವ ಬದಲು ಶೇ.6ರಷ್ಟು ನೀಡುವ ಮೂಲಕ ಅಸಮರ್ಪಕ ಹಂಚಿಕೆ ಮಾಡಲಾಗಿದೆ. ಅಲ್ಲದೆ ಸ್ಪೃಶ್ಯ ಜಾತಿಗಳಿಗೆ ಶೇ.5ರಷ್ಟು ಒಳಮೀಸಲಾತಿ ನೀಡುವ ಬದಲು, ಸ್ವಲ್ಪ ಕಡಿಮೆ ಮಾಡಿ, ಅಲೆಮಾರಿ–ಅರೆ ಅಲೆಮಾರಿ ಮುಂತಾದ ಜಾತಿಗಳಿಗೆ ಹಂಚಿಕೆ ಮಾಡಿದ್ದರೆ ನ್ಯಾಯಯುತವಾಗಿರುತ್ತಿತ್ತು. ಆದರೆ ರಾಜ್ಯ ಸರ್ಕಾರ ಖಾಜಿ ನ್ಯಾಯದ ಮೂಲಕ ಘೋಷಣೆ ಮಾಡಿರುವ ಒಳ ಮೀಸಲಾತಿ ಸಾಮಾಜಿಕ ನ್ಯಾಯದ ವಿರುದ್ಧವಾಗಿದೆ ಎಂದು ದಸಂಸ ರಾಜ್ಯ ಸಮಿತಿ ಮುಖಂಡ ದೇವಗಳ್ಳಿ ಸೋಮಶೇಖರ್ ಪತ್ರಿಕಾ ಪ್ರಕಟಣೆ ಮೂಲಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇಂದು ವಿದ್ಯುತ್ ವ್ಯತ್ಯಯ

ಮೈಸೂರು: ತುರ್ತು ಕಾಮಗಾರಿ ನಿಮಿತ್ತ ಆ.22ರಂದು ಬೆಳಗ್ಗೆ 10ರಿಂದ ಸಂಜೆ 5.30ರವರೆಗೆ ರಾಮಾನುಜ ರಸ್ತೆ 1ರಿಂದ 9ನೇ ಕ್ರಾಸ್‌ವರೆಗೆ, ಹೊಸ ಬಂಡಿಕೇರಿ, ಜೆಎಸ್‌ಎಸ್ ಆಸ್ಪತ್ರೆ, ಅಗ್ರಹಾರ, ಬಸವೇಶ್ವರ ರಸ್ತೆ, ಚಾಮುಂಡಿಪುರಂನ ಹಲವು ಭಾಗಗಳು, ತ್ಯಾಗರಾಜ ರಸ್ತೆ, ಚಾಮುಂಡಿಬೆಟ್ಟ ಮತ್ತು ಪಾದ, ಗುಂಡೂರಾವ್‌ನಗರ, ದತ್ತನಗರ, ಮುನೇಶ್ವರನಗರ, ಗೌರಿಶಂಕರನಗರ, ನಂಜನಗೂಡು ಟೋಲ್‌ಗೇಟ್, ತಾವರೆಕೆರೆ, ಜಾಕಿ ಕ್ವಾಟ್ರಸ್, ರೇಸ್ ಕೋರ್ಸ್ ಹಿಂಭಾಗ, ಸಬರ್ಬ್ ಬಸ್ ನಿಲ್ದಾಣ, ನಜರ್‌ಬಾದ್, ಇಟ್ಟಿಗೆಗೂಡು, ಮೃಗಾಲಯದ ಸುತ್ತ–ಮುತ್ತ, ಸರ್ಕಾರಿ ಅತಿಥಿ ಗೃಹ ಮತ್ತು ಸುತ್ತಮುತ್ತ, ತಾಲೂಕು ಕಚೇರಿ, ಡಿ.ದೇವರಾಜ ಅರಸು ರಸ್ತೆ, ಬಿ.ಎನ್.ರಸ್ತೆ, ಚಾಮುಂಡಿ ಬೆಟ್ಟ, ಸಿದ್ಧಾರ್ಥನಗರ, ಕುರುಬಾರಹಳ್ಳಿ, ಜೆ.ಸಿ.ನಗರ, ಕೆ.ಸಿ.ನಗರ, ಜೆ.ಎಸ್.ಎಸ್ ಆಯುರ್ವೇದಿಕ್ ಸುತ್ತ–ಮುತ್ತ, ಅರಮನೆ ಸುತ್ತ–ಮುತ್ತಲಿನ ಪ್ರದೇಶಗಳು, ಶ್ರೀ ಹರ್ಷ ರಸ್ತೆ, ಸಯ್ಯಾಜೀರಾವ್ ರಸ್ತೆ, ಇರ್ವಿನ್ ರಸ್ತೆ ಸುತ್ತ–ಮುತ್ತಲಿನ ಪ್ರದೇಶ ಗಳು, ಧನ್ವಂತರಿ ರಸ್ತೆ ಹಾಗೂ ಶಿವರಾಂ ಪೇಟೆ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಡಾ.ಶಿವರಾಜಕುಮಾರ್‌ರಿಂದ ಸುಯೋಗ ಆಸ್ಪತ್ರೆಯಲ್ಲಿ ಲೇಸರ್ ಯಂತ್ರ ಉದ್ಘಾಟನೆ



ನಟ ಡಾ.ಶಿವರಾಜಕುಮಾರ್ ಅವರು ಸುಯೋಗ ಆಸ್ಪತ್ರೆಯಲ್ಲಿ ಸ್ಥಾಪಿಸಲಾದ ಅತ್ಯಾಧುನಿಕ ತಂತ್ರಜ್ಞಾನದ ಲೇಸರ್ ಯಂತ್ರವನ್ನು ಉದ್ಘಾಟಿಸಿದರು.

ಮೈಸೂರು, ಆ.21–ಖ್ಯಾತ ಚಿತ್ರನಟ ಡಾ.ಶಿವರಾಜಕುಮಾರ್ ಅವರು ಸುಯೋಗ ಆಸ್ಪತ್ರೆಯಲ್ಲಿ ಕಳೆದ ಎರಡು ದಿನಗಳಿಂದ 'ಬ್ಯಾಡ್' ಚಿತ್ರದಲ್ಲಿ ವೈದ್ಯನಾಗಿ ನಟಿಸಿರುವ ಚಿತ್ರೀಕರಣವನ್ನು ಕೈಗೊಳ್ಳಲಾಗಿತ್ತು.

ಇದೇ ವೇಳೆ ಸುಯೋಗ ಆಸ್ಪತ್ರೆಯಲ್ಲಿ ಸ್ಥಾಪಿಸಲಾದ ಅತ್ಯಾಧುನಿಕ ತಂತ್ರಜ್ಞಾನದ ಲೇಸರ್ ಯಂತ್ರ ಉದ್ಘಾಟಿಸಿ ಮಾತನಾಡಿ, ಸುಯೋಗ್ ಆಸ್ಪತ್ರೆಯು ಮೈಸೂರಲ್ಲಿ ಉತ್ತಮ ಆಸ್ಪತ್ರೆಯಾಗಿದೆ. ಅದರಲ್ಲೂ ಕೋವಿಡ್ ಸಮಯದಲ್ಲಿ ಆಸ್ಪತ್ರೆಯ ಸೇವೆ ಅನನ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಪ್ರತಿವರ್ಷ ಸುಯೋಗ ಆಸ್ಪತ್ರೆಯಲ್ಲಿ ಬಡವರಿಗೆ ಉಚಿತ ಆಂಜಿಯೋಗ್ರಾಮ್ ಹಾಗೂ ಆಂಜಿಯೋಪ್ಲಾಸ್ಟಿ ಮಾಡುವ ಮೂಲಕ ಮಾನವೀಯತೆ ಮೆರೆಯುತ್ತಿದೆ. ಸುಯೋಗ ಆಸ್ಪತ್ರೆಯು ಅಂತರರಾಷ್ಟ್ರೀಯ ಗುಣಮಟ್ಟದ ಆಸ್ಪತ್ರೆಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶ್ರೀಮತಿ ಗೀತಾ ಶಿವರಾಜಕುಮಾರ್, ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ಟ್ರಸ್ಟಿ ಶ್ರೀಮತಿ ಸುಧಾ ಯೋಗಣ್ಣ, ವ್ಯವಸ್ಥಾಪಕ ನಿರ್ದೇಶಕ ಡಾ.ಸುಯೋಗ್ ಯೋಗಣ್ಣ ಡಾ.ಅಭಿಷೇಕ್, ಡಾ.ಮೋಹನ್ ಹಾಗೂ ಆಸ್ಪತ್ರೆ ಸಿಬ್ಬಂದಿ ವರ್ಗ ಮತ್ತಿತರರು ಉಪಸ್ಥಿತರಿದ್ದರು.

ಅಭಿನಂದನೆ...



ಒಳಮೀಸಲಾತಿ ಜಾರಿಗೆ ತರುವಲ್ಲಿ ಪ್ರಮುಖ ಪಾತ್ರ ವಹಿಸಿದ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರನ್ನು ರಾಜಕೀಯ ಮುತ್ಸದ್ದಿ ದಿವಂಗತ ವಿ. ಶ್ರೀನಿವಾಸ್‌ಪ್ರಸಾದ್ ಅವರ ಪುತ್ರಿ ಪ್ರತಿಮಾ ಪ್ರಸಾದ್, ಯುವ ಮುಖಂಡ ಭರತ್ ರಾಮಸ್ವಾಮಿ ಭೇಟಿಯಾಗಿ, ಅಭಿನಂದಿಸಿದರು.

ಆ.30ರಂದು ಮೈಸೂರಲ್ಲಿ ಹಿರಿಯರ ನಡಿಗೆ ಕಾರ್ಯಕ್ರಮ

ಮೈಸೂರು, ಆ.21(ಜಿಎ)–ಮೈಸೂರಿನಲ್ಲಿ ಹಿರಿಯರ ನಡಿಗೆ(ಸ್ಟ್ರಾಲ್ ಎ ಥಾನ್) ಕಾರ್ಯಕ್ರಮವನ್ನು ವಯಾ ವಿಕಾಸ್ ವತಿಯಿಂದ ಆಗಸ್ಟ್ 30ರಂದು ಆಯೋಜಿಸಲಾಗಿದೆ ಎಂದು ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪವಿತ್ರ ರೆಡ್ಡಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿರಿಯರ ಸಬಲೀಕರಣದಲ್ಲಿ ನಿರತವಾಗಿರುವ ವಯಾ ವಿಕಾಸ್ ಸಂಸ್ಥೆಯಿಂದ ಮಾನಸ ಗಂಗೋತ್ರಿಯ ಓವೆಲ್ ಮೈದಾನದಲ್ಲಿ ಆ.30ರಂದು ಬೆಳಿಗ್ಗೆ 6.30ರಿಂದ 10ರವರೆಗೆ ಹಿರಿಯ ನಾಗರಿಕರಿಗೆ ಸ್ವಲ್ಪ ದೂರ ಓಡಾಟ (ಸ್ಟ್ರಾಲ್ ಎ ಥಾನ್) ಕಾರ್ಯಕ್ರಮ ಆಯೋಜಿಸಲಾಗಿದ್ದು, ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಚಾಲನೆ ನೀಡಲಿದ್ದಾರೆ. ಸಂಸ್ಥೆಯ ಚೇರ್ಮನ್ ಕ್ರಿಸ್ ಗೋಪಾಲಕೃಷ್ಣನ್, ಸ್ಥಾಪಕ ಸದಸ್ಯರಾದ ಡಾ.ದೇವಿಪ್ರಸಾದ್ ಶೆಟ್ಟಿ, ಅಲೆಕ್ಸಾಂಡರ್ ಥಾಮಸ್, ಗೌರಿ ಕುಮಾರ್, ಡಾ.ಶ್ರೀನಾಥ್ ರೆಡ್ಡಿ, ಡಾ.ಗಿರಿಧರ್ ಜೆ.ಗ್ಯಾನಿ, ಪ್ರೊ.ಬಿ.ವಿ.ನಂದಿಮಠ್ ಭಾಗವಹಿಸುವರು ಎಂದರು.

ಭಾಗವಹಿಸುವವರು ಆ.28ರೊಳಗೆ ನೋಂದಣಿ ಮಾಡಿಕೊಳ್ಳಬಹುದು ಎಂದ ಅವರು, ಸಂಸ್ಥೆಯು ಹಿರಿಯ ನಾಗರಿಕರಿಗೆ ಕಾನೂನು, ಆರೋಗ್ಯ ಮತ್ತು ಇತರ ಚಟುವಟಿಕೆಗಳ ಸೇವೆ ನೀಡು ತ್ತಿದ್ದು, ಆಸಕ್ತರು ಉಚಿತವಾಗಿ ಸದಸ್ಯರಾಗಬಹುದು. ಮಾಹಿತಿ ಹಾಗೂ ನೋಂದಣಿಗೆ ಮೊ.ಸಂ.95133 00821 ಸಂಪರ್ಕಿಸಬಹುದು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಸಲಹೆಗಾರ ಎಂ.ಶ್ರೀನಿವಾಸ್, ಶ್ರೀನಿವಾಸ್, ಚಂದ್ರಶೇಖರ್, ಆನಂದರಾವ್, ಆನಂದಮೂರ್ತಿ, ಉಮಾಕಾಂತ್ ಉಪಸ್ಥಿತರಿದ್ದರು.

ಗ್ರಾಮೀಣ ಮಕ್ಕಳಲ್ಲಿ ಅಪೌಷ್ಟಿಕತೆ; ನಗರ ಮಕ್ಕಳಿಗೆ ಸ್ಥೂಲಕಾಯ ಸಮಸ್ಯೆ!

- ಮಕ್ಕಳ ಆರೋಗ್ಯದ ಬಗ್ಗೆ ಮಾಧ್ಯಮಗಳು ಜಾಗೃತಿ ಮೂಡಿಸುವ ಅನಿವಾರ್ಯತೆ
- ಯುನಿಸೆಫ್ ಕೇಂದ್ರ ಕಚೇರಿ ಮುಖ್ಯಸ್ಥರಾದ ಡಾ.ಝೆಲಲೆಮ್ ಟಫ್ಸೆಸ್ ಸಲಹೆ



ಮೈವಿವಿ ವಿಜ್ಞಾನ ಭವನದಲ್ಲಿ ಪತ್ರಕರ್ತರಿಗೆ ಹಮ್ಮಿಕೊಂಡಿರುವ ಕಾರ್ಯಾಗಾರಕ್ಕೆ ಚಾಲನೆ ನೀಡಲಾಯಿತು.

ಮೈಸೂರು, ಆ.21(ಎಂಕೆ)– ಗ್ರಾಮೀಣ ಪ್ರದೇಶದ ಮಕ್ಕಳು ಅಪೌಷ್ಟಿಕತೆಯಿಂದ ಬಳಲು ತ್ತಿದ್ದರೆ, ನಗರ ಪ್ರದೇಶದ ಮಕ್ಕಳು ಸ್ಥೂಲ ಕಾಯದಂತಹ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ. ಹಾಗಾಗಿ ಮಕ್ಕಳ ಆರೋಗ್ಯದ ಕುರಿತು ಮಾಧ್ಯಮ ಗಳು ಜಾಗೃತಿ ಮೂಡಿಸುವ ಅನಿವಾರ್ಯತೆ ಇದೆ ಎಂದು ಯುನಿಸೆಫ್ ಕೇಂದ್ರ ಕಚೇರಿ ಮುಖ್ಯಸ್ಥ ಡಾ.ಝೆಲಲೆಮ್ ಟಫ್ಸೆಸ್ ಹೇಳಿದರು.

ಮೈಸೂರು ವಿವಿ ಮಾನಸಗಂಗೋತ್ರಿಯ ವಿಜ್ಞಾನ ಭವನದಲ್ಲಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗ ಹಾಗೂ ಯುನಿಸೆಫ್ ಸಹಭಾಗಿತ್ವದಲ್ಲಿ ಮಕ್ಕಳ ಕುರಿತ ಅರಿವಿಗಾಗಿ ರಾಜ್ಯದ ಪತ್ರಕರ್ತರಿಗೆ ಆಯೋಜಿಸಿದ್ದ 'ಹದಿಹರೆಯದವರ ಆರೋಗ್ಯ, ಪೌಷ್ಟಿಕತೆ: ಸಾಂಕ್ರಾಮಿಕವಲ್ಲದ ಕಾಯಿಲೆ ಮತ್ತು ರಸ್ತೆ ಸುರಕ್ಷತೆ' ಎರಡು ದಿನಗಳ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಮಕ್ಕಳು ಅಪೌಷ್ಠಿತೆ ಎದುರಿಸಿದರೆ, ನಗರ ಪ್ರದೇಶದ ಮಕ್ಕಳು ಜಂಕ್ ಫುಡ್‌ನಿಂದ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ತಿಳಿಸಿದರು.

ಗ್ರಾಮೀಣ ಮಕ್ಕಳಿಗಿಂತ ನಗರ ವಾಸಿಗಳಲ್ಲಿ ಅಸಾಂಕ್ರಾಮಿಕ ರೋಗಗಳಾದ ರಕ್ತದೊತ್ತಡ, ಅಸ್ತಮ, ಕಿಡ್ನಿ ಸಮಸ್ಯೆಗಳು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿವೆ. ಅಶಿಸ್ತಿನ ಜೀವನ ಶೈಲಿ, ಆಹಾರ ಪದ್ಧತಿಯಲ್ಲಿ ವ್ಯತ್ಯಾಸ, ವ್ಯಾಯಾಮ ಹಾಗೂ ಚಟುವಟಿಕೆ ಇಲ್ಲದ ಬದುಕು ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತಿದೆ. ಹಾಗಾಗಿ ಪತ್ರಿಕಾ ಹಾಗೂ ದೃಶ್ಯ ಮಾಧ್ಯಮಗಳು ಆರೋಗ್ಯದ ಅರಿವು ಮೂಡಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿ ಕೆಲಸ ಮಾಡಬೇಕು ಎಂದರು.

ವಿಶ್ವದಾದ್ಯಂತ ಲಕ್ಷಾಂತರ ಮಕ್ಕಳಲ್ಲಿ ಸಿಕಲ್‌ಸೆಲ್ (ಅನುವಂಶಿಕ ರಕ್ತದ ಕಾಯಿಲೆ) ಕಾಯಿಲೆ ಕಾಣಿಸಿಕೊಳ್ಳುತ್ತಿದ್ದು, ರಕ್ತಹೀನತೆ(ಅನೀಮಿಯಾ), ಉಸಿರಾಟದ ತೊಂದರೆಗಳು, ಅಂಗಾಂಗಗಳ ಹಾನಿ (ವಿಶೇಷವಾಗಿ ಮೂತ್ರಪಿಂಡಗಳು, ಯಕೃತ್ತು, ಶ್ವಾಸಕೋಶಗಳು ಮತ್ತು ಹೃದಯ) ಸಿಕಲ್ ಸೆಲ್ ಕಾಯಿಲೆ ಲಕ್ಷಣಗಳಾಗಿವೆ ಎಂದು ಎಚ್ಚರಿಸಿದರು.

ಹದಿಹರೆಯದ ಮಕ್ಕಳಿಗೆ ರಸ್ತೆ ಸುರಕ್ಷತೆ, ಸಂಚಾರ ನಿಮಯಗಳ ಅರಿವೆ ಇಲ್ಲದಂತಾಗಿದೆ. ಈ ವಿಚಾರದಲ್ಲಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಮಾಧ್ಯಮಗಳು ಮಾಡಬೇಕು. ಸಾಕಷ್ಟು ಜನರು ಹೆಲ್ಮೆಟ್ ಇಲ್ಲದೆ ಬೈಕ್ ಓಡಿಸುತ್ತಾರೆ. ಮೊಬೈಲ್‌ನಲ್ಲಿ ಮಾತಾಡಿಕೊಂಡು ವಾಹನ ಚಾಲನೆ ಮಾಡುತ್ತಿದ್ದು, ಇದರಿಂದ ಅಪಘಾತ ಪ್ರಮಾಣ ಹೆಚ್ಚುತ್ತಿದೆ. ಅಪಘಾತ ತಡೆಗಟ್ಟಲು ಕಠಿಣ ಕಾನೂನು ಜಾರಿಯಾಗಬೇಕು ಎಂದು ಆಗ್ರಹಿಸಿದರು. ಮೈಸೂರು ವಿವಿ ಪತ್ರಿಕೋದ್ಯಮ–ಸಮೂಹ ಸಂವಹನ ಅಧ್ಯಯನ ವಿಭಾಗದ ಮುಖ್ಯಸ್ಥೆ ಪ್ರೊ.ಎನ್.ಮಮತ, ಪ್ರಾಧ್ಯಾಪಕಿ ಪ್ರೊ.ಎಂ.ಎಸ್.ಸಪ್ನ, ಯುನಿಸೆಫ್ ಕೇಂದ್ರ ಕಚೇರಿ ಸಂಚಾಲಕ ಪ್ರಸೂನ್ ಸೇನ್ ಮತ್ತಿತರರಿದ್ದರು.

ಮೈಸೂರು ಮಿತ್ರ ಶುಕ್ರವಾರ 22 ಆಗಸ್ಟ್ 2025

ಧರ್ಮಸ್ಥಳ ವಿರುದ್ಧ ಅಪಪ್ರಚಾರ ಖಂಡಿಸಿ

ಪಾಂಡವಪುರದಲ್ಲಿ ಧರ್ಮಸ್ಥಳ ಭಕ್ತರಿಂದ ಪ್ರತಿಭಟನೆ

ಪಾಂಡವಪುರ, ಆ.21– ಪವಿತ್ರ ಧಾರ್ಮಿಕ ಕ್ಷೇತ್ರ ಧರ್ಮಸ್ಥಳದ ವಿರುದ್ಧ ವ್ಯವಸ್ಥಿತ ಅಪಪ್ರಚಾರ ಮಾಡುವ ಮೂಲಕ ಹಿಂದೂಗಳ ಭಾವನೆಗೆ ಧಕ್ಕೆ ತರಲಾಗುತ್ತಿದೆ ಎಂದು ಆರೋಪಿಸಿ ಶ್ರೀ ಕ್ಷೇತ್ರ ಧರ್ಮಸ್ಥಳದ ಭಕ್ತ ವೃಂದದ ಕಾರ್ಯಕರ್ತರು ಗುರುವಾರ ಬೃಹತ್ ಪ್ರತಿಭಟನೆ ನಡೆಸಿದರು.

ಪಟ್ಟಣದ ಐದುದೀಪ ಬಳಿ ಜಮಾವಣೆಗೊಂಡ ಶ್ರೀ ಕ್ಷೇತ್ರದ ಭಕ್ತರು ಅಲ್ಲಿಂದ ಡಾ.ರಾಜ್‌ಕುಮಾರ್ ವೃತ್ತ, ಹಳೇ ಬಸ್ ನಿಲ್ದಾಣ, ಡಿಸಿಸಿ ಬ್ಯಾಂಕ್ ರಸ್ತೆ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ಜಾಥಾ ನಡೆಸಿ ತಾಲೂಕು ಕಚೇರಿ ಮುತ್ತಿಗೆ ಹಾಕಿ ಅಪಪ್ರಚಾರದಲ್ಲಿ ತೊಡಗಿರುವ ವ್ಯಕ್ತಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪವಿತ್ರ ಧರ್ಮಸ್ಥಳ ಕ್ಷೇತ್ರ ಮತ್ತು ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರ ಹೆಸರಿಗೆ ಕಳಂಕ ತರುವ ನಿಟ್ಟಿನಲ್ಲಿ ವ್ಯವಸ್ಥಿತವಾದ ಪಿತೂರಿ ನಡೆಯುತ್ತಿದ್ದು, ಇದರಿಂದ ಹಿಂದೂಗಳ ಭಾವನೆಗೆ ಧಕ್ಕೆಯಾಗುತ್ತಿದೆ. ಒಬ್ಬ ಅನಾಮಿಕನ ಹೇಳಿಕೆ ಆಧರಿಸಿ ಕ್ಷೇತ್ರದ ಪಾವಿತ್ರ್ಯತೆ ಹಾಳು ಮಾಡಲಾಗುತ್ತಿದೆ ಎಂದು ಪ್ರತಿಭಟನಾಕಾರರು ಕಿಡಿಕಾರಿದರು.



ಧರ್ಮಸ್ಥಳ ಕ್ಷೇತ್ರದ ಭಕ್ತ ವೃಂದದವರು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಭಾಗವಹಿಸಿದ್ದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ಕೆಲವು ಕಿಡಿಗೇಡಿಗಳು ಉದ್ದೇಶಪೂರ್ವಕವಾಗಿ ಧರ್ಮಸ್ಥಳ ಕ್ಷೇತ್ರವನ್ನು ಕಲುಷಿತ ಮಾಡುವ ಹುನ್ನಾರ ನಡೆಸಿದ್ದಾರೆ. ಧರ್ಮಸ್ಥಳ ಕ್ಷೇತ್ರ ಮತ್ತು ಮಂಜುನಾಥ ಸ್ವಾಮಿಗೆ ಕಿಂಚಿತ್ತು ಕಳಂಕ ಆಗದ ರೀತಿಯಲ್ಲಿ ಭಕ್ತರಾಗಿ ನಾವು ನಮ್ಮ ಜವಾಬ್ದಾರಿ ನಿಭಾಯಿಸಬೇಕಿದೆ. ಪೂಜ್ಯ ವೀರೇಂದ್ರ ಹೆಗ್ಗಡೆ ಅವರ ಆಶೀರ್ವಾದದಿಂದ ಮಹಿಳೆಯರು ಆರ್ಥಿಕವಾಗಿ ಬಲವರ್ಧನೆಗೊಂಡಿದ್ದಾರೆ. ಅಪಪ್ರಚಾರದ ಕಳಂಕವನ್ನು ತೊಡೆದು ಹಾಕಲು ಕ್ಷೇತ್ರದ ಭಕ್ತರೆಲ್ಲರು ಒಗ್ಗೂಡಿ ಹೋರಾಟ ಮಾಡಬೇಕಾದ ಅನಿವಾರ್ಯತೆ ಇದೆ ಇದು ಯಾವುದೇ ಜಾತಿ, ಧರ್ಮ ಅಥವಾ ಪಕ್ಷದ ಹೋರಾಟ ಅಲ್ಲ. ನಾವೆಲ್ಲ ಮಂಜುನಾಥಸ್ವಾಮಿ ಭಕ್ತರಾಗಿ ಅಪಪ್ರಚಾರದ ವಿರುದ್ಧ ಹೋರಾಟ ನಡೆಸಬೇಕಿದೆ ಎಂದರು.

ಮೈಶುಗರ್ ಮಾಜಿ ಅಧ್ಯಕ್ಷ ಜೆ.ಶಿವಲಿಂಗೇಗೌಡ ಮಾತನಾಡಿ, 800 ವರ್ಷಗಳ ಇತಿಹಾಸವಿರುವ ಒಂದು ಕ್ಷೇತ್ರದ ಬಗ್ಗೆ ನಿಕೃಷ್ಟ ಮಟ್ಟದಲ್ಲಿ ಅಪಪ್ರಚಾರ ಮಾಡಲಾಗುತ್ತಿದೆ. ಇದರಲ್ಲಿ ಬಹುಮುಖ್ಯ ಪಾತ್ರ ವಹಿಸಿರುವ ಗಿರೀಶ್ ಮಟ್ಟಣ್ಣನವರ್, ಅಂಚನ್, ಯೂಟ್ಯೂಬರ್ ಎಂ.ಡಿ.ಸಮೀರ್, ಮಹೇಶ್ ಶೆಟ್ಟಿ ತಿಮರೋಡಿ, ಸಂತೋಷ್ ಶೆಟ್ಟಿ ಸೇರಿದಂತೆ ಈ ಷಡ್ಯಂತ್ರದ ಪಾಲುದಾರರಾಗಿರುವ ಪ್ರತಿಯೊಬ್ಬರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಬೇಕಿದೆ ಎಂದರು.

ತಹಸೀಲ್ದಾರ್ ಅವರ ಅನುಪಸ್ಥಿತಿಯಲ್ಲಿ ಕಂದಾಯ ಶಿರಸ್ತೇದಾರ್ ಮೋಹನ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಸೋಮವಾರ ಧರ್ಮಸ್ಥಳಕ್ಕೆ ರ‍್ಯಾಲಿ

ಸೋಮವಾರ ಬೆಳಗಿನ ಜಾವ ಮಂಡ್ಯ ಮತ್ತು ಮೈಸೂರು ಭಾಗದ ಸಾವಿರಾರು ಭಕ್ತರು ನೂರಾರು ಕಾರುಗಳಲ್ಲಿ ಧರ್ಮಸ್ಥಳ ಕ್ಷೇತ್ರಕ್ಕೆ ತೆರಳುವ ಸಂಕಲ್ಪ ಮಾಡಲಾಗಿದೆ. ಈ ರ‍್ಯಾಲಿಗೆ ಎಲ್ಲರೂ ಪಕ್ಷಾತೀತವಾಗಿ ಆಗಮಿಸಬೇಕು. ಬೆಳಗ್ಗೆ 4.30 ಗಂಟೆಗೆ ಕೆಆರ್‌ಎಸ್‌ನಿಂದ ಇಲವಾಲಕ್ಕೆ ಕಾರು ರ‍್ಯಾಲಿ ಹೊರಟು ಅಲ್ಲಿಂದ ಧರ್ಮಸ್ಥಳಕ್ಕೆ ಹೊರಡಲಾಗುವುದು. ಮಂಜುನಾಥನ ಆಶೀರ್ವಾದ ಪಡೆದು ವೀರೇಂದ್ರ ಹೆಗ್ಗಡೆ ಅವರಿಗೆ ಬೆಂಬಲ ಸೂಚಿಸಲಾಗುವುದು.

–ಸಿ.ಎಸ್.ಪುಟ್ಟರಾಜು.

ಅಪರಿಚಿತ ವಾಹನ ಡಿಕ್ಕಿ: ಬೈಕ್ ಸವಾರ ಸಾವು



ಭಾರತೀನಗರ: ಸಮೀಪದ ದೊಡ್ಡ ಅರಸಿನಕೆರೆ ಗೇಟ್ ಬಳಿ ಅಪರಿಚಿತ ವಾಹನ ಡಿಕ್ಕಿ ಹೊಡೆದು ವ್ಯಕ್ತಿಯೊಬ್ಬ ಮೃತಪಟ್ಟಿದ್ದಾನೆ.

ಮುಟ್ಟನಹಳ್ಳಿ ಗ್ರಾಮದ ದಿಲೀಪ್ ಉ॥ ಗಿರೀಶ್(35) ಮೃತ ದುರ್ದೈವಿ. ಗುರುವಾರ ಮುಂಜಾನೆ 3 ಗಂಟೆಯ ಸಮಯದಲ್ಲಿ ಕಾರ್ಯನಿಮಿತ್ತ ಗಿರೀಶ್ ಭಾರತೀನಗರಕ್ಕೆ ಬೈಕ್‌ನಲ್ಲಿ ತೆರಳುತ್ತಿದ್ದಾಗ ಮದ್ದೂರು ಮಳವಳ್ಳಿ ಹೆದ್ದಾರಿಯ ದೊಡ್ಡರಸಿನಕೆರೆ ಗೇಟ್ ಬಳಿ ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ದಿಲೀಪ್ ಗಂಭೀರವಾಗಿ ಗಾಯಗೊಂಡಿದ್ದು, ತಕ್ಷಣವೇ ಆತನನ್ನು ಸ್ಥಳೀಯರು ಕೆ.ಎಂ.ದೊಡ್ಡಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆ ಮಾಡಲು ಶವಾಗಾರದಲ್ಲಿರಿಸಲಾಗಿದೆ. ಕೆ.ಎಂ.ದೊಡ್ಡಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಬಿಜಿಎಸ್ ಶಿಕ್ಷಣ ಸಂಸ್ಥೆಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಆಚರಣೆ



ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಶ್ರೀಗಳು ಮತ್ತು ಗಣ್ಯರು.

ಕೆ.ಆರ್.ಪೇಟೆ,ಆ.21– ವಿದ್ಯಾರ್ಥಿಗಳಿಗೆ ಶಾಲಾ–ಕಾಲೇಜು ಹಂತದಲ್ಲಿಯೇ ಸಂಸ್ಕಾರವನ್ನು ಕಲಿಸಬೇಕು. ಪರೋಪಕಾರ, ಮಾನವೀಯ ಮೌಲ್ಯಗಳನ್ನು ಹೇಳಿಕೊಡಬೇಕು. ಈ ಮೂಲಕ ಸಮಾಜದಲ್ಲಿ ಉತ್ತಮ ವ್ಯಕ್ತಿಯಾಗಿ ಜೀವನ ನಡೆಸಲು ಶಿಕ್ಷಕರು ಮತ್ತು ಪೋಷಕರು ಸಹಕಾರಿಯಾಗಬೇಕು ಎಂದು ಮನ್‌ಮುಲ್ ನಿರ್ದೇಶಕ ಡಾಲು ರವಿ ಹೇಳಿದರು.

ಪಟ್ಟಣದ ಬಿಜಿಎಸ್ (ಎಜುಕೇಷನ್ ಸೆಂಟರ್) ಶಿಕ್ಷಣ ಸಂಸ್ಥೆಯಲ್ಲಿ ಆಯೋಜಿಸಿದ್ದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ತೆಂಡೇಕೆರೆ ಬಾಳೆಹೊನ್ನೂರು ಶಾಖಾ ಮಠದ ಶ್ರೀ ಗಂಗಾಧರ ಶಿವಾಚಾರ್ಯ ಸ್ವಾಮೀಜಿ, ಕಾಪನಹಳ್ಳಿ ಗವಿಮಠದ ಶ್ರೀ ಸ್ವತಂತ್ರ ಚೆನ್ನವೀರ ಸ್ವಾಮೀಜಿ, ಬೇಬಿಮಠದ ಶ್ರೀ ಶಿವಬಸವ ಸ್ವಾಮೀಜಿ ಮಕ್ಕಳಿಗೆ ಆಶೀರ್ವಚನ ನೀಡಿದರು. ಕಾರ್ಯಕ್ರಮದಲ್ಲಿ ಕೆ.ಆರ್.ಪೇಟೆಯ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ನಿರ್ದೇಶಕರಾದ ಬಿ.ನಂಜಪ್ಪ, ಲಾಯರ್ ವಿಜಯ್‌ಕುಮಾರ್, ಬೇಲದಕೆರೆ ಪಾಪೇಗೌಡ, ಪುರಸಭಾ ಅಧ್ಯಕ್ಷೆ ಪಂಕಜಾ ಪ್ರಕಾಶ್, ಪುರಸಭಾ ಸದಸ್ಯ ಬಸ್ ಸಂತೋಷ್‌ಕುಮಾರ್, ತಾಲೂಕು ರೈತ ಸಂಘದ ಕಾರ್ಯಾಧ್ಯಕ್ಷ ಮರುವನಹಳ್ಳಿ ಶಂಕರ್, ಕೆ.ಎಲ್. ಮಹೇಶ್, ಜಿ.ಪಿ.ರಾಜು, ದಿನೇಶ್.ಎಂ.ಆರ್, ಶಿಕ್ಷಕರು, ಪೋಷಕರು ಉಪಸ್ಥಿತರಿದ್ದರು.

ಜ್ಞಾನಮುದ್ರ ವಿದ್ಯಾಮಂದಿರದಲ್ಲಿ ಶ್ರೀಕೃಷ್ಣವೇಷ ಸ್ಪರ್ಧೆ



ಭಾರತೀನಗರ, ಆ.21– ವಿಷ್ಣುವಿನ ಮತ್ತೊಂದು ಅವತಾರವಾದ ಕೃಷ್ಣ ಸ್ನೇಹದ ಪ್ರತೀಕ ಎಂದು ಜ್ಞಾನಮುದ್ರ ವಿದ್ಯಾಸಂಸ್ಥೆಯ ಸಂಸ್ಥಾಪಕರಾದ ಶಿವಮ್ಮ ಶಿವಕುಮಾರ್ ಅಭಿಪ್ರಾಯ ವ್ಯಕ್ತಪಡಿಸಿದರು.

ಇಲ್ಲಿಗೆ ಸಮೀಪದ ಮಣಸಗೆರೆ ಗ್ರಾಮದ ಜ್ಞಾನಮುದ್ರ ವಿದ್ಯಾಮಂದಿರ ಶಾಲೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಠಮಿ ಅಂಗವಾಗಿ ಆಯೋಜಿಸಿದ್ದ ಶ್ರೀಕೃಷ್ಣವೇಷ ಸ್ಪರ್ಧೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಶ್ರೀಕೃಷ್ಣ ಬಡವನಾದ ಕುಚೇಲನ ಸ್ನೇಹವನ್ನು ಬಯಸಿದ್ದು, ಕುಚೇಲ ಶ್ರೀಕೃಷ್ಣನ ಸ್ನೇಹವನ್ನು ಎಲ್ಲೂ ದುರುಪಯೋಗಪಡಿಸಿಕೊಳ್ಳದೆ ಆತನ ಸೇವೆಯೇ ಸರ್ವಶ್ವವೆಂದು ಭಾವಿಸಿ ತಾನಿರುವವರೆವಿಗೂ ಆತನ ಸ್ನೇಹವನ್ನು ಉಳಿಸಿಕೊಂಡಿದ್ದನು. ಕೃಷ್ಣನು ಕೂಡ ಕುಚೇಲನ ಅಂತಸ್ತು ನೋಡದೆ ಸ್ನೇಹ ನೀಡಿದ ಮಹಾತ್ಮನಾಗಿದ್ದಾನೆಂದು ಸ್ಮರಿಸಿದರು.

ಇಂತಹ ಮಹಾನ್ ದೈವಾಂಶ ಸಂಭೂತ ವ್ಯಕ್ತಿಯ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸಲು ಸ್ಪರ್ಧೆಯನ್ನು ಆಯೋಜಿಸುತ್ತ ಬಂದಿರುವುದು ಹೆಚ್ಚು ಅರ್ಥಪೂರ್ಣವಾಗಿದೆ. ಇದೇ ರೀತಿ ಮುಂದಿನ ದಿನಗಳಲ್ಲಿ ಇದು ನಿರಂತರವಾಗಿ ಮುಂದುವರೆಯಲಿ ಎಂದು ಆಶಿಸಿದರು.

ಶಾಲೆಯ ಆಡಳಿತಾಧಿಕಾರಿ ಪ್ರಭಾವತಿ ಮಾತನಾಡಿ, ಮಹಾಭಾರತದಲ್ಲಿ ಪಾಂಡವರ ಪರ ನಿಂತ ಶ್ರೀಕೃಷ್ಣ ಕಡೆಯವರೆವಿಗೂ ಅವರೊಂದಿಗೆ ಸ್ನೇಹದೊಂದಿಗೆ ಇದ್ದು ಧರ್ಮಪಾಲನೆ ಮಾಡಿದ ಭಗವಂತನಾಗಿದ್ದಾನೆ. ಆತನ ಸ್ನೇಹ ಎಲ್ಲರಿಗೂ ಮಾದರಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳು ಶ್ರೀಕೃಷ್ಣ, ರುಕ್ಮಿಣಿ, ರಾಧೆಯ ವೇಷಭೂಷಣಗಳನ್ನು ತೊಟ್ಟು ಎಲ್ಲರನ್ನು ರಂಜಿಸಿದರು.

ತೀರ್ಪುಗಾರರಾಗಿ ಇನ್ನರ್‌ವ್ಹೀಲ್ ಕಬ್ಲ್‌ನ ಅಧ್ಯಕ್ಷೆ ಧರಣಿ, ಸಹಾಯಕ ಕೃಷಿ ಅಧಿಕಾರಿ ಕೆ.ಎಂ.ರೇಖಾ, ಲಕ್ಷ್ಮಿಸುರೇಂದ್ರ ಭಾಗವಹಿಸಿದ್ದರು. ಅತ್ಯುತ್ತಮ ಪ್ರದರ್ಶನ ನೀಡಿದ ಮಕ್ಕಳಿಗೆ ಬಹುಮಾನ ವಿತರಣೆ ಮಾಡಲಾಯಿತು. ಜೊತೆಗೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ಮಕ್ಕಳಿಗೂ ಸಮಾಧಾನಕರ ಬಹುಮಾನ ವಿತರಣೆ ಮಾಡಲಾಯಿತು.

ಈ ವೇಳೆ ಶಾಲೆಯ ಸಂಸ್ಥಾಪಕಿ ಸೌಮ್ಯ ರಾಜೇಶ್, ಶಾಲೆಯ ಟ್ರಸ್ಟಿ ತೇಜಸ್ವಿನಿ ತಿಪಿರೇಗೌಡ, ಪ್ರಾಂಶುಪಾಲ ಕೆ.ಎನ್.ಶೃತಿ ಸೇರಿದಂತೆ ಸಿಬ್ಬಂದಿಗಳು ಭಾಗವಹಿಸಿದ್ದರು

ಗಣಪತಿ ಪ್ರತಿಷ್ಠಾಪನೆಗೆ ಅನುಮತಿ ಕಡ್ಡಾಯ



ಸಭೆಯಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡುತ್ತಿರುವ ಜಿಲ್ಲಾಧಿಕಾರಿ ಡಾ.ಕುಮಾರ್, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ.

ಮಂಡ್ಯ, ಆ.21– ಸಾರ್ವಜನಿಕ ಸ್ಥಳಗಳಲ್ಲಿ ಗಣಪತಿ ಪ್ರತಿಷ್ಠಾಪಿಸಲು ಗುಂಪು, ಸಂಘ, ಸಂಸ್ಥೆಗಳು ಹಾಗೂ ಸಾರ್ವಜನಿಕರು ತಹಶೀಲ್ದಾರ್ ಕಚೇರಿಯಲ್ಲಿ ತೆರೆಯಲಾಗುವ ಏಕಗಾವಾಕ್ಷಿ ಕೇಂದ್ರದಲ್ಲಿ ನಿಗದಿತ ಅರ್ಜಿ ಭರ್ತಿ ಮಾಡಿ ಅನುಮತಿ ಪಡೆಯುವುದು ಕಡ್ಡಾಯ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ಕಚೇರಿ ಸಭಾಂಗಣದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಆನ್‌ಲೈನ್ ಮೂಲಕ ಸಭೆ ನಡೆಸಿ ಮಾತನಾಡಿದ ಅವರು, ಏಕ ಗವಾಕ್ಷಿ ಕೇಂದ್ರದಲ್ಲಿ ಪೊಲೀಸ್, ಅಗ್ನಿಶಾಮಕ, ಚೆಸ್ಕಾಂ, ಸ್ಥಳೀಯ ಸಂಸ್ಥೆಯ ಸಿಬ್ಬಂದಿಗಳು ಹಾಜರಿದ್ದು, ಸಲ್ಲಿಸುವ ಅರ್ಜಿ ಪರಿಶೀಲಿಸಿ 24 ಗಂಟೆಯೊಳಗಾಗಿ ವಿಲೇವಾರಿಯಾಗುವಂತೆ ನೋಡಿಕೊಳ್ಳಿ, ಸಾರ್ವಜನಿಕರು ಅಲೆದಾಡದಂತೆ ಎಚ್ಚರಿಕೆ ವಹಿಸಿ ಎಂದರು.

ಅರ್ಜಿಗಳನ್ನು ಪರಿಶೀಲಿಸುವ ವೇಳೆ ಗಣಪತಿಯ ಮೆರವಣಿಗೆ, ಭಾಗವಹಿಸುವ ಭಕ್ತಾಧಿಗಳ ಸಂಖ್ಯೆ, ವಿಸರ್ಜನೆ ಮಾಡುವ ಸ್ಥಳದ ಬಗ್ಗೆ ಪರಿಶೀಲಿಸಿ ಅನುಮತಿ ನೀಡಿದ ನಂತರ ಪ್ರತಿ ದಿನ ಅನುಮತಿ ನೀಡಿದ ವಿವರಗಳು, ಹೆಚ್ಚಿನ ನಿಗಾ ವಹಿಸಬೇಕಿರುವ ಸ್ಥಳಗಳ ಮಾಹಿತಿಯನ್ನು ಜಿಲ್ಲಾಡಳಿತ ಹಾಗೂ ಜಿಲ್ಲಾ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ತಿಳಿಸಿದರು.

ಹೋಬಳಿ ಹಾಗೂ ನಗರ ಮಟ್ಟದಲ್ಲಿ ಗಣಪತಿ ವಿಸರ್ಜನೆ ಮಾಡಲು ಸೂಕ್ತ ಎರಡು ಅಥವಾ ಮೂರು ಸ್ಥಳಗಳನ್ನು ಗುರುತಿಸಿ, ಸದರಿ ಸ್ಥಳಗಳಲ್ಲಿ ರಾತ್ರಿ ವೇಳೆ ವಿದ್ಯುತ್ ದೀಪ, ಬ್ಯಾರಿಕ್ಯಾಡಿಂಗ್, ನುರಿತ ಈಜುಗಾರರನ್ನು ನಿಯೋಜಿಸುವ ಬಗ್ಗೆ ತಾಲ್ಲೂಕು ಮಟ್ಟದಲ್ಲಿ ಸಭೆ ನಡೆಸಿ ಚರ್ಚಿಸಬೇಕು. ನಗರ ಸ್ಥಳೀಯ ಸಂಸ್ಥೆಗಳಿಂದ ಗಣಪತಿ ವಿಸರ್ಜನೆಗೆ ಟ್ಯಾಂಕರ್ ಗಳ ವ್ಯವಸ್ಥೆ ಮಾಡಿ, ಮಾರ್ಗದ ಬಗ್ಗೆ ಪ್ರಚಾರ ಕೈಗೊಳ್ಳಿ ಇದರಿಂದ ಬಹಳಷ್ಟು ಜನ ಟ್ಯಾಂಕರ್‌ನಲ್ಲಿ ಗಣಪತಿ ವಿಸರ್ಜನೆ ಮಾಡುತ್ತಾರೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿ, ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಹೆಚ್ಚಿನ ಸಿ.ಸಿ.ಟಿ.ವಿ. ಅಳವಡಿಸಬೇಕು. ಈಗಾಗಲೇ ನಾಗಮಂಗಲ ನಗರ ಪ್ರದೇಶದಲ್ಲಿ ಪರಿಶೀಲನೆ ನಡೆಸಿದ್ದು, ಸದರಿ ಸ್ಥಳದಲ್ಲಿ ದುರಸ್ತಿಯಾಗಿರುವ ಸಿ.ಸಿ.ಟಿ.ವಿಯನ್ನು ನಗರ ಸ್ಥಳೀಯ ಸಂಸ್ಥೆ ಅವರು ಕೂಡಲೇ ಸರಿಪಡಿಸಬೇಕು ಎಂದು ಸೂಚನೆ ನೀಡಿದರು.

ಏಕ ಗವಾಕ್ಷಿ ಕೇಂದ್ರದಲ್ಲಿ ಅನುಮತಿ ನೀಡುವ ಸಂದರ್ಭದಲ್ಲಿ ಧ್ವನಿವರ್ಧಕ ಬಳಕೆಗೆ ಸಂಬಂಧಿಸಿದಂತೆ ಸಹ ಬೇಕಿದ್ದಲ್ಲಿ ಅನುಮತಿ ಪಡೆದುಕೊಳ್ಳುವುದು ಎಂದರು.

ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದ ಮೂರ್ತಿ ಮಾತನಾಡಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಹೆಚ್ಚಿನ ನಿಗಾ ವಹಿಸಬೇಕು. ದೊಡ್ಡ ಮಟ್ಟದಲ್ಲಿ ಗಣಪತಿ ಪ್ರತಿಷ್ಠಾಪಿತರು ಅನುಮತಿ ಪಡೆದಿರುವ ಬಗ್ಗೆ ಪರಿಶೀಲಿಸಿ ಎಂದರು.

ಸಭೆಯಲ್ಲಿ ಅಪರ ಪೊಲೀಸ್ ವರಿಷ್ಠಾಧಿಕಾರಿ ತಿಮ್ಮಯ್ಯ, ಉಪವಿಭಾಗಾಧಿಕಾರಿ ಶಿವಮೂರ್ತಿ, ಮಂಡ್ಯ ತಹಶೀಲ್ದಾರ್ ವಿಶ್ವಾಥ್, ಮದ್ದೂರು ತಹಶೀಲ್ದಾರ್ ಪರಶುರಾಮ್ ಸತ್ತೀಗೇರಿ, ಪ್ರತಾಪ್ ಸೇರಿದಂತೆ ಇನ್ನಿತರರಿದ್ದರು.

ಒಂದನೇ ಪುಟದಿಂದ

ಮಹೇಶ್ ಶೆಟ್ಟಿ ತಿಮರೋಡಿ ಜೈಲಿಗೆ

ಪೊಲೀಸರು ಗುರುವಾರ ಬೆಳಗ್ಗೆ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಉಜಿರೆಯಲ್ಲಿರುವ ಅವರ ನಿವಾಸಕ್ಕೆ ತೆರಳಿದ್ದ ವೇಳೆ ಭಾರೀ ಹೈಡ್ರಾಮವೇ ನಡೆಯಿತು. ತಿಮರೋಡಿ ವಕೀಲರು ಹಾಗೂ ಬೆಂಬಲಿಗರು ಅವರ ಮನೆ ಮುಂದೆ ಜಮಾಯಿಸಿದ್ದರು. ಈ ಸಂದರ್ಭದಲ್ಲಿ, ತಿಮರೋಡಿ ಬೆಂಬಲಿಗರು, ವಕೀಲರು ಹಾಗೂ ಪೊಲೀಸರ ಮಧ್ಯೆ ವಾಗ್ವಾದ ನಡೆಯಿತು. ನಂತರ ಪೊಲೀಸರು ವಶಕ್ಕೆ ಪಡೆದುಕೊಂಡು ತೆರಳುವಾಗ ರೋಷಾವೇಶದಿಂದ ಮಾತನಾಡಿದ ತಿಮರೋಡಿ, 'ನನ್ನ ಜೀವಕ್ಕೆ ಏನಾದರೂ ಆದರೆ ಸರ್ಕಾರವೇ ಕಾರಣ. ಏನಾದರೂ ಆದರೆ ಬಿಜೆಪಿ ಅವರೇ ಕಾರಣ' ಎಂದರು.

ಏನಿದು ಪ್ರಕರಣ?: ಧರ್ಮಸ್ಥಳ ಪ್ರಕರಣ ಸಂಬಂಧ ಮಹೇಶ್ ಶೆಟ್ಟಿ ತಿಮರೋಡಿ ಮೇಲೆ ಹಲವಾರು ಮಂದಿಯ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡಿದ ಆರೋಪವಿದೆ ಅದೇ ರೀತಿ, ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ವಿರುದ್ಧವೂ ಅವಹೇಳನಕಾರಿಯಾಗಿ ಮಾತನಾಡಿದ್ದರು ಎಂಬ ಆರೋಪವಿದೆ ಈ ಬಗ್ಗೆ ಉಡುಪಿಯ ಬಿಜೆಪಿ ಮುಖಂಡರು ಬ್ರಹ್ಮಾವರ ಪೊಲೀಸರಿಗೆ ದೂರು ನೀಡಿದ್ದರು. ಅದರಂತೆ, ವಿಚಾರಣೆಗೆ ಹಾಜರಾಗುವಂತೆ ತಿಮರೋಡಿಗೆ ಬ್ರಹ್ಮಾವರ ಪೊಲೀಸರು ನೋಟಿಸ್ ನೀಡಿದ್ದರು.

ತಿಮರೋಡಿಗೆ 2 ಬಾರಿ ಪೊಲೀಸರು ನೋಟಿಸ್ ಕೊಟ್ಟಿದ್ದರು. ಕೊನೆಯದಾಗಿ ಬುಧವಾರ ನೋಟಿಸ್ ನೀಡಲಾಗಿತ್ತು. ಗುರುವಾರ ಬೆಳಗ್ಗೆ 9 ಗಂಟೆಯೊಳಗೆ ವಿಚಾರಣೆಗೆ ಹಾಜರಾಗುವಂತೆ ಸೂಚನೆ ನೀಡಲಾಗಿತ್ತು. ಆದರೆ, ಆ ನೋಟಿಸ್‌ಗೆ, '15 ದಿನಗೊಳಗೆ ಹಾಜರಾಗುತ್ತೇನೆ' ಎಂದು ತಿಮರೋಡಿ ಉತ್ತರಿಸಿದ್ದರು. ಪೊಲೀಸರು ಕೊಟ್ಟ ನೋಟಿಸ್‌ನಲ್ಲೇ ಉತ್ತರಿಸಿ ಸಹಿ ಮಾಡಿದ್ದರು. ಈ ಬೆಳವಣಿಗೆ ನಂತರ ಪೊಲೀಸರು ಅವರ ನಿವಾಸಕ್ಕೆ ದೌಡಾಯಿಸಿದ್ದಾರೆ. ನಂತರ ಅವರನ್ನು ವಶಕ್ಕೆ ಪಡೆಯಲಾಗಿದ್ದು, ಇದೀಗ ಬಂಧಿಸಲಾಗಿದೆ.

ನಿರೀಕ್ಷಣಾ ಜಾಮೀನು ಮಂಜೂರು

ಧರ್ಮಸ್ಥಳದಲ್ಲಿ ನೂರಾರು ಶವಗಳ ಹೂತಿಟ್ಟ ಪ್ರಕರಣದ ಬಗ್ಗೆ ಪ್ರಚೋದನಕಾರಿ ವಿಡಿಯೋ ಮಾಡಿದ್ದ ಯೂಟ್ಯೂಬರ್ ಎಂ.ಡಿ.ಸಮೀರ್ ವಿರುದ್ಧ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಸಮೀರ್ ಎಐ ಬಳಸಿ ತಪ್ಪು ಮಾಹಿತಿ ಹರಡಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಅಲ್ಲದೆ ಧರ್ಮಸ್ಥಳ ಭಕ್ತರು ಮತ್ತು ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಸಮೀರ್‌ನನ್ನು ಬಂಧಿಸುವಂತೆ ಆಗ್ರಹಿಸಿದ್ದರು. ಇನ್ನು ಇತ್ತೀಚೆಗೆ ಕುಣಿಗಲ್ ಪೊಲೀಸ್ ಠಾಣೆಯಲ್ಲೂ ದೂರು ದಾಖಲಾಗಿತ್ತು.

ಹಣದ ಆಸೆಗೆ ಹೀಗೆ ಮಾಡಿರಬಹುದು...

ನನಗೆ ಹೊಡೆಯುವುದು, ಬಡಿಯುವುದು ಮಾಡುತ್ತಿದ್ದ. ನನ್ನಿಂದ ವಿಚ್ಛೇದನ ಪಡೆಯುವಾಗ ಮಕ್ಕಳಿಗೆ ಜೀವನಾಂಶ ಕೊಡುವುದನ್ನು ತಪ್ಪಿಸಿಕೊಳ್ಳಲೆಂದೇ ನಾನು ಜೀವನಕ್ಕಾಗಿ ಯಾವುದೇ ಕೆಲಸ ಮಾಡುತ್ತಿಲ್ಲ ಎಂದು ಕೋರ್ಟ್‌ಗೆ ಸುಳ್ಳು ಹೇಳಿದ್ದ. ಇದರಿಂದಾಗಿ ನನಗೆ ಕೋರ್ಟ್‌ನಲ್ಲಿ ನ್ಯಾಯ ಸಿಗಲಿಲ್ಲ. ಮಕ್ಕಳನ್ನು ತನ್ನ ತಾಯಿಯೇ ಸಾಕಿದರು ಎಂದು ಆಕೆ ಅಳಲು ತೋಡಿಕೊಂಡಿದ್ದಾರೆ.

ಧರ್ಮಸ್ಥಳದಲ್ಲಿ ಕಸ ಗುಡಿಸುತ್ತಿದ್ದ: ನಮ್ಮ ಮದುವೆಯಾದ ಬಳಿಕ ನಾನು ಆತನ ಜೊತೆ 7 ವರ್ಷ ಧರ್ಮಸ್ಥಳದ ನೇತ್ರಾವತಿ ಬಳಿ ಸಣ್ಣ ಮನೆಯಲ್ಲಿ ವಾಸ ಮಾಡುತ್ತಿದ್ದೆ. ಅಲ್ಲಿ ಆತ ಕಸ ಗುಡಿಸುವುದು, ಶೌಚಾಲಯ ತೊಳೆಯುವುದು ಇಂತಹ ಸಣ್ಣಪುಟ್ಟ ಕೆಲಸಗಳನ್ನು ಮಾಡುತ್ತಿದ್ದ. ಧರ್ಮಸ್ಥಳದಲ್ಲಿ ಅತ್ಯಾಚಾರ ಮತ್ತು ಕೊಲೆಯಾದ ಯುವತಿಯರು, ಮಹಿಳೆಯರ ನೂರಾರು ಶವಗಳನ್ನು ಹೂತು ಹಾಕಿದ್ದೇನೆ ಎಂದು ಆತ ಹೇಳಿರುವುದು ಶುದ್ಧ ಸುಳ್ಳು. ಧರ್ಮಸ್ಥಳದಲ್ಲಿ ಈ ರೀತಿಯ ಘಟನೆಗಳ ಬಗ್ಗೆ ತನಗೆ ಎಂದಿಗೂ ಹೇಳಿರಲಿಲ್ಲ. ಹಣದ ಆಸೆಯಿಂದ ಆತ ಹೀಗೆ ಮಾಡಿರಬಹುದು ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ. ಧರ್ಮಸ್ಥಳವೆಂದರೆ ನಮ್ಮೆಲ್ಲರಿಗೂ ಪ್ರೀತಿ, ಆ ಸ್ಥಳಕ್ಕೆ ಅವನು ಅನ್ಯಾಯ ಮಾಡಬಾರದು. ಹೆಗ್ಗಡೆಯವರು ತುಂಬಾ ಒಳ್ಳೆಯವರು ಎಂದು ಹೇಳಿದರು. ಒಂದು ಕಡೆ ಗುಂಡಿ ತೋಡಿದರೂ ಏನು ಸಿಕ್ಕಿಲ್ಲ ಅಂದರೆ ಏನೋ ಕಿತಾಪತಿ ಮಾಡುತ್ತಿದ್ದಾನೆ ಎನ್ನಿಸುತ್ತದೆ. ಎರಡನೇ ಹೆಂಡತಿ ಆತನನ್ನು ಮದುವೆಯಾದ ಮೇಲೆ ನಮಗೆ ಏನು ಮಾಡಿದ್ದೀಯಾ ಎಂದು ಬೈಯುತ್ತಿದ್ದಳಂತೆ. ಆಕೆಯ ಒತ್ತಡ ಹಾಗೂ ಆಮಿಷಕ್ಕೆ ಒಳಗಾಗಿ ಅವನು ಈ ರೀತಿ ಮಾಡುತ್ತಿದ್ದಾನೆ ಎಂದು ಮೊದಲ ಪತ್ನಿ ಗಂಭೀರ ಆರೋಪ ಮಾಡಿದ್ದಾರೆ.

ತನ್ನ ಅಣ್ಣ–ತಮ್ಮಂದಿರಿಗೂ ಬಾಯಿಗೆ ಬಂದಂತೆ ಬೈಯ್ಯುತ್ತಿದ್ದ. 2ನೇ ಮದುವೆಯಾಗಲು ನನಗೆ ಚಿತ್ರಹಿಂಸೆ ಕೊಟ್ಟು ಓಡಿಸಿದ ಎಂದು ಆಕೆ ನೋವಿನಿಂದ ಹೇಳಿದ್ದಾರೆ. ಕೆಲಸ ಕೊಟ್ಟ, ಅನ್ನ ಕೊಟ್ಟ ಜಾಗಕ್ಕೆ ಅನ್ಯಾಯ ಮಾಡಬಾರದು. ದೇವಸ್ಥಾನದ ಹೆಸರು ಕೆಡಿಸುತ್ತಿರುವ ಅವನು ಹಾಳಾಗಬೇಕು. ಅವನು ಸತ್ತು ಹೆಣವಾದರೂ ನಾವು ಹೋಗಿ ನೋಡುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅನಾಮಿಕನ ಅಣ್ಣ ಮತ್ತು ಮನೆಯವರೆಲ್ಲ ಒಳ್ಳೆಯವರು. ಆತ ತನಗೆ ಹೊಡೆದಾಗಲೂ ಅವರು ತನ್ನ ಪರವಾಗಿ ನಿಂತಿದ್ದರು ಎಂದು ತಿಳಿಸಿದ್ದಾರೆ. ಟಿವಿಯಲ್ಲಿ ಅವನನ್ನು ನೋಡಿದ ತಕ್ಷಣವೇ ಅವನ ದೇಹದ ಆಕಾರ ಮತ್ತು ನೇತ್ರಾವತಿಯಲ್ಲಿ ಕೆಲಸ ಮಾಡಿದ್ದನ್ನು ಹೇಳಿದಾಗ ಆತ ತನ್ನ ಮಾಜಿ ಪತಿ ಎಂದು ಖಚಿತವಾಯಿತು ಎಂದಿದ್ದಾರೆ.

ಸೆ.27ಕ್ಕೆ ಏರ್ ಶೋ

ಜಿಲ್ಲಾಡಳಿತ ರಕ್ಷಣಾ ಸಚಿವಾಲಯದೊಂದಿಗೆ ಸಂಪರ್ಕದಲ್ಲಿದೆ. ಈ ಬಾರಿಯ ಸಾಹಸ ಪ್ರದರ್ಶನ ಹೆಚ್ಚು ಆಕರ್ಷಕವಾಗಿಸಲು ಎಲ್ಲಾ ರೀತಿಯ ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದರು.

ಪ್ರವಾಸಿಗರಲ್ಲಿ ದೇಶ ಭಕ್ತಿ ತುಂಬುತ್ತದೆ: ಏರ್‌ಶೋಗೆ ಅನುಮತಿ ನೀಡಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಬರೆದಿರುವ ಪತ್ರದಲ್ಲಿ, ಈ ಸಾಲಿನ ದಸರಾ ಮಹೋತ್ಸವ 11 ದಿನ ನಡೆಯಲಿದ್ದು, ಹಲವು ಕಾರ್ಯಕ್ರಮಗಳ ವೀಕ್ಷಣೆಗೆ ದೇಶ–ವಿದೇಶದಿಂದ ಮೈಸೂರಿಗೆ ಲಕ್ಷಾಂತರ ಪ್ರವಾಸಿಗರು ಆಗಮಿಸುತ್ತಾರೆ. ಇಂತಹ ಸಂದರ್ಭದಲ್ಲಿ ಏರ್ ಶೋ ಆಯೋಜಿಸುವುದರಿಂದ ಜನರಲ್ಲಿ ದೇಶಭಕ್ತಿಯೊಂದಿಗೆ ಭಾರತೀಯ ಸೇನೆಯ ಬಗ್ಗೆ ಗೌರವ ಹೆಚ್ಚಾಗುತ್ತದೆ. ಈ ಹಿನ್ನೆಲೆಯಲ್ಲಿ ಈ ಬಾರಿ ದಸರಾ ಮಹೋತ್ಸವದ ವೇಳೆ ವೈಮಾನಿಕ ಪ್ರದರ್ಶನ ನಡೆಸಲು ಅನುಮೋದನೆ ನೀಡಿರುವುದಕ್ಕೆ ರಾಜ್ಯ ಸರ್ಕಾರದ ಪರವಾಗಿ ಧನ್ಯವಾದ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ರಕ್ಷಣಾ ಸಚಿವರಿಗೆ ಆಹ್ವಾನ: ಮುಖ್ಯಮಂತ್ರಿ ಸಿದ್ದರಾಮಯ್ಯ, ದಸರಾ ಮಹೋತ್ಸವದಲ್ಲಿ ತಾವೂ ಪಾಲ್ಗೊಳ್ಳುವಂತೆಯೂ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಆಹ್ವಾನಿಸಿದ್ದಾರೆ. ನಿಮ್ಮ ಉಪಸ್ಥಿತಿ ಕರ್ನಾಟಕದ ನಾಗರಿಕರಿಗೆ ಸಂತಸ ತರಲಿದೆ. ಅಲ್ಲದೆ, ಭಾರತೀಯ ಸೇನೆ, ಸಶಸ್ತ್ರ ಪಡೆಗಳ ಬಗ್ಗೆ ಜನರಲ್ಲಿರುವ ಗೌರವ ಮತ್ತು ಮೆಚ್ಚುಗೆಯ ಸಂಬಂಧವನ್ನು ಮತ್ತಷ್ಟು ಬಲಗೊಳಿಸಲಿದೆ ಎಂದಿದ್ದಾರೆ.

ಸಭೆಯಲ್ಲಿ ಚರ್ಚೆ: ಬೆಂಗಳೂರಲ್ಲಿ ನಡೆದ ದಸರಾ ಉನ್ನತ ಮಟ್ಟದ ಸಭೆಯ ನಂತರ, ದಸರಾ ವಿಶೇಷ ಅಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಅವರು ವೈಮಾನಿಕ ಪ್ರದರ್ಶನಕ್ಕಾಗಿ ಕೇಂದ್ರ ರಕ್ಷಣಾ ಸಚಿವಾಲಯದಿಂದ ಯುದ್ಧ ವಿಮಾನಗಳು ಮತ್ತು ಜೆಟ್‌ಗಳನ್ನು ಒದಗಿಸುವಂತೆ ರಾಜ್ಯ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಪತ್ರ ಬರೆದಿದ್ದರು. ಇದಕ್ಕೆ ಶಾಲಿನಿ ರಜನೀಶ್ ಅವರು ರಕ್ಷಣಾ ಸಚಿವಾಲಯಕ್ಕೆ ಪ್ರಸ್ತಾವನೆ ಸಲ್ಲಿಸಿ, ಏರ್ ಶೋಗೆ ಅನುಮತಿ ದೊರಕಿಸಲು ಶ್ರಮಿಸಿದ್ದರು.

ದಸರಾ ಮಹೋತ್ಸವಲ್ಲಿ ಈ ಹಿಂದೆ, 2017, 2018, 2019 ಮತ್ತು 2023ರಲ್ಲಿ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದಲ್ಲಿ ಏರ್ ಶೋ ನಡೆದಿತ್ತು. ಅಪಾರ ಸಂಖ್ಯೆಯ ಪ್ರೇಕ್ಷಕರು ಆಗಸದಲ್ಲಿ ಭಾರತೀಯ ವಾಯುಪಡೆಯ ಲೋಹದ ಹಕ್ಕಿಗಳ ಸಾಹಸ ದೃಶ್ಯಕ್ಕೆ ಮಾರು ಹೋಗಿದ್ದರು.

ಜಂಬೂ ಸವಾರಿ ಮೆರವಣಿಗೆ ವೇಳೆ ಲ್ಯಾನ್ಸ್‌ಡೌನ್, ದೇವರಾಜ ಮಾರ್ಕೆಟ್ ಸೇರಿ ಶಿಥಿಲಗೊಂಡ ಕಟ್ಟಡಗಳ ಮೇಲೇರಲು ನಿರ್ಬಂಧ

ಸುರಕ್ಷತಾ ದಸರಾ ದೃಷ್ಟಿಯಿಂದ ಜಿಲ್ಲಾಡಳಿತ ಕಟ್ಟುನಿಟ್ಟಿನ ನಿರ್ಧಾರ

ಮೈಸೂರು, ಆ.21(ಎಂಕೆ)– ಮೈಸೂರು ದಸರಾ ಮಹೋತ್ಸವ ಪ್ರಮುಖ ಆಕರ್ಷಣೆಯಾದ ಜಂಬೂ ಸವಾರಿ ಮೆರವಣಿಗೆಯ ವೀಕ್ಷಣೆಗೆ ಇನ್ನೂ ಮುಂದೆ ಲ್ಯಾನ್ಸ್‌ಡೌನ್ ಮತ್ತು ದೇವರಾಜ ಮಾರುಕಟ್ಟೆ ಕಟ್ಟಡ ಏರುವಂತಿಲ್ಲ...!



ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಜಂಬೂಸವಾರಿ ಸಾಗುವ ಮಾರ್ಗದಲ್ಲಿರುವ ಲ್ಯಾನ್ಸ್‌ಡೌನ್ ಕಟ್ಟಡ, ದೇವರಾಜ ಮಾರುಕಟ್ಟೆ ಕೆ.ಆರ್.ವೃತ್ತದಲ್ಲಿರುವ ವಿಶ್ವೇಶ್ವರಯ್ಯ ಕಟ್ಟಡ, ಸರ್ಕಾರಿ ಆಯುರ್ವೇದ ಕಾಲೇಜು ಮತ್ತು ಸಯ್ಯಾಜಿರಾವ್ ರಸ್ತೆಯಲ್ಲಿರುವ ಇತರೆ ಶಿಥಿಲಗೊಂಡಿರುವ ಕಟ್ಟಡಗಳ ಮೇಲೆ ಸಾರ್ವಜನಿಕರ ಪ್ರವೇಶಕ್ಕೆ ಸಂಪೂರ್ಣ ನಿರ್ಬಂಧ ವಿಧಿಸಲಾಗಿದೆ.

ಜಂಬೂಸವಾರಿ ವೀಕ್ಷಣೆಗೆ ರಾಜಮಾರ್ಗದುದ್ದಕ್ಕೂ ಸೇರುವ ಲಕ್ಷಾಂತರ ಭಕ್ತಾದಿಗಳ ಹಿತದೃಷ್ಟಿಯಿಂದ ಜಿಲ್ಲಾಡಳಿತ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದ್ದು, ಶಿಥಿಲಗೊಂಡಿರುವ ಕಟ್ಟಡಗಳನ್ನೇರುವುದಕ್ಕೆ ಕಡಿವಾಣ ಹಾಕಿದೆ. ಪ್ರತೀ ವರ್ಷವೂ ಶಿಥಿಲಗೊಂಡಿರುವ ಪಾರಂಪರಿಕ ಕಟ್ಟಡಗಳ ಮೇಲೆ ಹತ್ತಬೇಡಿ ಎಂದು ಎಚ್ಚರಿಕೆ ನೀಡುತ್ತಿದ್ದರೂ ಸಾವಿರಾರು ಮಂದಿ ಕಟ್ಟಡಗಳ ಮೇಲೆ ಹತ್ತಿ ವೀಕ್ಷಣೆ ಮಾಡುತ್ತಿದ್ದರು. ಆದರೆ, ಈ ವರ್ಷದಿಂದ ಮುಂಜಾಗ್ರತೆ ದೃಷ್ಟಿಯಿಂದ ಯಾರೊಬ್ಬರನ್ನು ಶಿಥಿಲಗೊಂಡಿರುವ ಕಟ್ಟಡಗಳ ಮೇಲೆ ಹತ್ತದಂತೆ ನೋಡಿಕೊಳ್ಳಲು ಕ್ರಮವಹಿಸಲಾಗಿದೆ.

ಸುರಕ್ಷಿತ ಮತ್ತು ಯಾವುದೇ ಅಹಿತಕರ ಘಟನೆಗಳಿಲ್ಲದ ವಿಜಯದಶಮಿ ಮೆರವಣಿಗೆ ನಡೆಸುವುದು ಜಿಲ್ಲಾಡಳಿತದ ಮೊದಲ ಆದ್ಯತೆಯಾಗಿದ್ದು, ರಾಜಮಾರ್ಗದಲ್ಲಿರುವ ದುರ್ಬಲ ಹಾಗೂ ಶಿಥಿಲಗೊಂಡಿರುವ ಲ್ಯಾನ್ಸ್‌ಡೌನ್ ಕಟ್ಟಡ, ದೇವರಾಜ ಮಾರುಕಟ್ಟೆ, ಕೆ.ಆರ್. ವೃತ್ತದಲ್ಲಿರುವ ವಿಶ್ವೇಶ್ವರಯ್ಯ ಕಟ್ಟಡ, ಸರ್ಕಾರಿ ಆಯುರ್ವೇದ ಕಾಲೇಜು ಹಾಗೂ ಇತರೆ ಪಾರಂಪರಿಕ ಕಟ್ಟಡಗಳ ಮೇಲೆ ಹತ್ತಿ ಜಂಬೂಸವಾರಿ ವೀಕ್ಷಣೆಗೆ ಸಂಪೂರ್ಣವಾಗಿ ನಿರ್ಬಂಧ ಹೇರಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ್ ರೆಡ್ಡಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಜನರು ಮೆರವಣಿಗೆ ವೀಕ್ಷಿಸಲು ಶಿಥಿಲಗೊಂಡಿರುವ ಕಟ್ಟಡಗಳ ಛಾವಣಿಯ ಮೇಲೆ ಹತ್ತುವುದನ್ನು ತಡೆಯಲು ಮುಂಚಿತವಾಗಿಯೇ ಕ್ರಮ ಕೈಗೊಳ್ಳಲಿದ್ದು, ಪೊಲೀಸರ ನಿಯೋಜನೆಯೊಂದಿಗೆ ದಿನವಿಡೀ ಕಟ್ಟಡಗಳನ್ನು ಬಂದ್ ಮಾಡಲಾಗುವುದು. ಕಟ್ಟಡಗಳ ಸುತ್ತಲೂ ಬ್ಯಾರಿಕೇಡ್ ಅಳವಡಿಸಿ, ಯಾರೊಬ್ಬರು ಕಟ್ಟಡಗಳ ಮೇಲೆ ಹೋಗದಂತೆ ತಡೆಯಲು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು. ಮರಗಳನ್ನು ಹತ್ತುವ ಜನರು ಮತ್ತು ಗೋಪುರಗಳಂತಹ ಎತ್ತರದ ಸ್ಥಳಗಳ ಯಾರೂ ಹತ್ತದಂತೆ ಗಮನಿಸಲು ಪೊಲೀಸರಿಗೆ ಸೂಚಿಸಲಾಗಿದೆ. ರಸ್ತೆ ಬದಿಯಲ್ಲಿ ಕುಳಿತು ವೀಕ್ಷಣೆ ಮಾಡುವುದಕ್ಕೆ ಯಾವುದೇ ನಿರ್ಬಂಧಗಳಿಲ್ಲ. ಲಕ್ಷಾಂತರ ಜನರ ಸುರಕ್ಷತೆಗಾಗಿ ಸೂಕ್ತಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಪರಿಸರ ಸ್ನೇಹಿ ಗಣಪ

ಹೊರರಾಜ್ಯದ ಜಾನುವಾರು ಮೇಯಿಸಲು ನಿರ್ಬಂಧ: ಕುರಿಗಾಹಿಗಳಿಗೆ ತೊಂದರೆ ನೀಡದಂತೆ ಅರಣ್ಯಾಧಿಕಾರಿಗಳಿಗೆ ಸೂಚಿಸಲಾಗಿದೆ. ಮಲೆಮಹದೇಶ್ವರ ಬೆಟ್ಟದಲ್ಲಿ 5 ಹುಲಿಗಳ ಸಾವು ಘಟನೆ ತನಿಖೆ ವರದಿಯಲ್ಲಿ ತಮಿಳುನಾಡಿನಿಂದ ಸಾವಿರಾರು ಜಾನುವಾರುಗಳನ್ನು ತಂದು ನಮ್ಮ ಅರಣ್ಯದಲ್ಲಿ ಮೇಯಿಸುವ ಅಂಶ ಗಮನಕ್ಕೆ ಬರುತ್ತಿದ್ದಂತೆ ಹೊರರಾಜ್ಯದ ಜಾನುವಾರು ಮೇಯಿಸುವುದಕ್ಕೆ ನಿಷೇಧ ಹೇರಲಾಗಿದೆ.

ಸುಪ್ರೀಂಕೋರ್ಟ್ ಆದೇಶದಂತೆ ಡೀಮ್ಡ್ ಅರಣ್ಯ ಕುರಿತು ಮರುಸಮೀಕ್ಷೆ ನಡೆಯುತ್ತಿದ್ದು, ಅರಣ್ಯ ಇಲ್ಲದ ಪ್ರದೇಶ ಕೈಬಿಡುವ ಮತ್ತು ಸೇರಿಸುವ ಬಗ್ಗೆ ಪರಾಮರ್ಶಿಸಲಾಗುವುದು. ಅರಣ್ಯ ಭೂಮಿಯನ್ನು ಅರಣ್ಯೇತರ ಉದ್ದೇಶ ಬಳಕೆಗೆ ಪರಿವೇಶ್ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿ, ಶುಲ್ಕ ಪಾವತಿಸಿ ನಿಯಮಾನುಸಾರ ಅನುಮತಿ ಪಡೆಯಲು ಅವಕಾಶವಿದೆ ಎಂದರು.

ವಿದ್ಯಮಾನಗಳ ಮಾಹಿತಿ ಪಡೆದ ಅಮಿತ್ ಶಾ

ವಿರೋಧಿ ಗುಂಪು ಹೊರಬಂದರೆ, ಉದ್ಭವಿಸುವ ಪರಿಸ್ಥಿತಿಯಲ್ಲಿ ಪರ್ಯಾಯ ಸರ್ಕಾರ ರಚನೆ ಸಾಧ್ಯಾಸಾಧ್ಯತೆ ಬಗ್ಗೆ ಮಾಹಿತಿ ಪಡೆದಿದ್ದಾರೆ. ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಕೆಲವರು ನಿಮ್ಮ ಸಂಪರ್ಕದಲ್ಲಿದ್ದಾರೆ. ಅವರ ಮುಂದಿನ ನಿಲುವೇನು. ಅಧಿಕಾರ ಹಸ್ತಾಂತರ ಆದಲ್ಲಿ, ಇವರುಗಳ ಪಾತ್ರವೇನು ಎಂಬ ಮಾಹಿತಿ ಪಡೆದಿದ್ದಾರೆ.

ಜೊತೆಗೆ ಕರ್ನಾಟಕದಲ್ಲಿ ಒಳ ಮೀಸಲಾತಿ ಜಾರಿಯಿಂದ ಕಾಂಗ್ರೆಸ್‌ಗೆ ರಾಜಕೀಯ ಲಾಭ ತರಲಿದೆಯೇ? ಸಮುದಾಯದ ಇತರ ಒಳ ಪಂಗಡಗಳು ಸರ್ಕಾರದ ತೀರ್ಮಾನ ಒಪ್ಪುತ್ತವೆಯೇ?

ಎಡಗೈ, ಲಂಬಾಣಿ ಹಾಗೂ ಬೋವಿ ಸೇರಿದಂತೆ ಇತರೆ ಸಣ್ಣಪುಟ್ಟ ಸಮುದಾಯಗಳು ಕರ್ನಾಟಕದಲ್ಲಿ ಬಿಜೆಪಿ ಬೆಂಬಲಿಸಿಕೊಂಡು ಬಂದಿವೆ. ಬಲಗೈ ಸಮುದಾಯ ಮಾತ್ರ ಅಂದಿನಿಂದ ಕಾಂಗ್ರೆಸ್ ಜೊತೆಯೇ ಇದೆ.

ಪರಿಶಿಷ್ಟ ಜಾತಿಯಲ್ಲಿನ 103 ಪಂಗಡಗಳು, ಒಳ ಮೀಸಲಾತಿ ನಿರ್ಧಾರಕ್ಕೆ ಸಮ್ಮತಿಸಲಿವೆಯೇ ಎಂಬ ಮಾಹಿತಿ ಕೇಳಿದ್ದಾರೆ. ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ವರಿಷ್ಠರ ನಡುವೆ ಉಂಟಾಗಿರುವ ಕಂದಕದ ಬಗ್ಗೆ ಮಾಹಿತಿ ನೀಡಿರುವುದಲ್ಲದೆ, ಎಐಸಿಸಿಯ ಯಾವುದೇ ನಾಯಕರು ಮುಖ್ಯಮಂತ್ರಿ ಪರ ಇಲ್ಲ. ಮುಖ್ಯಮಂತ್ರಿ ಆಪ್ತ ಕೆ.ಎನ್. ರಾಜಣ್ಣ ಅವರನ್ನು ಸಂಪುಟದಿಂದ ವಜಾಗೊಳಿಸುವಂತಹ ಎಐಸಿಸಿಯ ಕಠಿಣ ತೀರ್ಮಾನಕ್ಕೆ ಸಿದ್ದರಾಮಯ್ಯ ತಲೆಬಾಗಲೇಬೇಕಾಯಿತು. ರಾಜಣ್ಣ ಅವರನ್ನು ಉಳಿಸಿಕೊಳ್ಳಲು ಸಿದ್ದರಾಮಯ್ಯ ನಡೆಸಿದ ಯತ್ನ ಕೊನೆವರೆಗೂ ಫಲ ನೀಡಲಿಲ್ಲ. ಇದೇ ಅವರಿಗೆ ದೊರೆತ ಹಿನ್ನಡೆಯ ಮೊದಲ ಸುಳಿವು.

ಸಿದ್ದರಾಮಯ್ಯ ಬೆಂಬಲಿಗರಿಗೂ ಅಧಿಕಾರ ಹಸ್ತಾಂತರದ ಮನವರಿಕೆ ಆಗಿದೆ. ಈ ಬಣ ಶಿವಕುಮಾರ್ ಅವರನ್ನು ಯಾವುದೇ ಕಾರಣಕ್ಕೂ ಬೆಂಬಲಿಸುವುದಿಲ್ಲ ಎಂಬ ಸಂದೇಶ ನೀಡಿದ್ದಾರೆ.

ಈ ನಡುವೆ ದಲಿತ ಸಮುದಾಯ ಮುಖ್ಯಮಂತ್ರಿ ಹುದ್ದೆಗಾಗಿ ಬೇಡಿಕೆ ಇಟ್ಟಿರುವ ಎಲ್ಲಾ ಮಾಹಿತಿಯನ್ನು ಶಾ ಅವರಿಗೆ ಕುಮಾರಸ್ವಾಮಿ ವಿವರಿಸಿದ್ದಾರೆ. ರಾಜ್ಯ ಬಿಜೆಪಿ ನಾಯಕತ್ವಕ್ಕೂ ಸಂಬಂಧಿಸಿದಂತೆ ಕೆಲವು ವಿವರವನ್ನು ಅಮಿತ್ ಶಾ ಪಡೆದಿದ್ದಾರೆ.

ಇತ್ತೀಚೆಗೆ ಅಮಿತ್ ಶಾ, ಕರ್ನಾಟಕ ರಾಜಕಾರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಅವರಿಂದಲೂ ಮಾಹಿತಿ ಪಡೆದಿದ್ದನ್ನು ಸ್ಮರಿಸಬಹುದು.

ಅಮಿತ್ ಶಾ ಭೇಟಿ ನಂತರ ಕುಮಾರಸ್ವಾಮಿ ಟ್ವೀಟ್ ಮಾಡಿ, ರಾಜ್ಯ ಮತ್ತು ರಾಷ್ಟ್ರಕ್ಕೆ ಸಂಬಂಧಿಸಿದ ಮಹತ್ವದ ವಿಷಯಗಳು ಹಾಗೂ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆಯುತ್ತಿರುವ ಅಭಿವೃದ್ಧಿಗಳ ಬಗ್ಗೆ ಕೇಂದ್ರ ಗೃಹ ಸಚಿವರ ಜೊತೆ ಚರ್ಚಿಸಿದೆ. ಅಭಿವೃದ್ಧಿ ಪಥದಲ್ಲಿ ಶಾ ಮಾರ್ಗದರ್ಶನ ಮತ್ತು ಬೆಂಬಲ ಅತ್ಯಂತ ಮೌಲ್ಯಯುತವಾಗಿದೆ ಎಂದಿದ್ದಾರೆ.

ಮುಸುಕುಧಾರಿ ವಿರುದ್ಧ ಹುಟ್ಟೂರಲ್ಲಿ ಆಕ್ರೋಶ

ಹೋಗಿದ್ದರು ಎನ್ನಲಾಗಿದೆ. ಗ್ರಾಮ ಬಿಟ್ಟು ಹೋದ ಮೇಲೆ ಆತ ಧರ್ಮಸ್ಥಳದಲ್ಲಿ ಕೆಲಸಕ್ಕೆ ಸೇರಿದ್ದ. ಅಲ್ಲಿ ಭಕ್ತಾಧಿಗಳ ಬಟ್ಟೆ, ಒಡವೆ ಕದಿಯುತ್ತಿದ್ದ. ಅದು ಧರ್ಮಸ್ಥಳ ಧರ್ಮಾಧಿಕಾರಿಯವರಿಗೆ ಗೊತ್ತಾಗಿ ಅಲ್ಲಿಂದ ಓಡಿಸಿದ್ದರು. ಮತ್ತೆ ಗ್ರಾಮಕ್ಕೆ ಬಂದು ಇಲ್ಲಿಯೇ ನೆಲೆಸಿದ್ದ. ಇಲ್ಲಿಯೂ ಜಗಳ ಮಾಡಿಕೊಂಡು ಊರು ಬಿಟ್ಟು ಹೋಗಿದ್ದ. ಆಗಾಗ ಗ್ರಾಮಕ್ಕೆ ಬಂದು ಹೋಗುತ್ತಿದ್ದ. ಆತನ ಅಣ್ಣ ಒಳ್ಳೆಯವನು ಎರಡು ತಿಂಗಳ ಹಿಂದೆ ಬಂದಿದ್ದ. ಈತ ಸುಳ್ಳು ಹೇಳಿಕೊಂಡು ತಿರುಗುತ್ತಿದ್ದ. ದುಡ್ಡಿನ ದುರಾಸೆ ಇರುವುದರಿಂದ ಕಳ್ಳತನ ಮಾಡುತ್ತಿದ್ದ. ಗ್ರಾಮದಲ್ಲಿ ಈತನ ಬಗ್ಗೆ ಒಳ್ಳೆಯ ಅಭಿಪ್ರಾಯ ಇರಲಿಲ್ಲ. ಬಟ್ಟೆ ತೆಗೆದುಕೊಂಡು ಬಂದು ಗ್ರಾಮಸ್ಥರಿಗೆ ಕೊಟ್ಟು ಸ್ವಾಮಿಯವರು ಕೊಟ್ಟಿದ್ದಾರೆ ಎಂದು ಹೇಳುತ್ತಿದ್ದ. ಹಣದ ಆಸೆಗಾಗಿ ಈ ರೀತಿ ಮಾಡುತ್ತಿದ್ದಾನೆ ಎಂದು ಗ್ರಾಮಸ್ಥರು ಆತನ ಜಾತಕ ಬಿಚ್ಚಿಟ್ಟಿದ್ದಾರೆ.

ಮೈಸೂರು ಮಿತ್ರ

ಶುಕ್ರವಾರ 22 ಆಗಸ್ಟ್ 2025

ಸೆ.1ಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮೈಸೂರು ಭೇಟಿ

● ಅಖಿಲ ಭಾರತ ವಾಕ್–ಶ್ರವಣ ಸಂಸ್ಥೆ ವಜ್ರ ಮಹೋತ್ಸವದಲ್ಲಿ ಭಾಗಿ ● ಡಿಸಿ ಲಕ್ಷ್ಮೀಕಾಂತ ರೆಡ್ಡಿ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮದ ಪೂರ್ವಭಾವಿ ಸಭೆ



ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೆ.1ರಂದು ಮೈಸೂರಿಗೆ ಆಗಮಿಸುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಅವರು ಗುರುವಾರ ಮೈಸೂರು ಜಿಪಂ ಸಭಾಂಗಣದಲ್ಲಿ ಕಾರ್ಯಕ್ರಮದ ಸಿದ್ಧತೆ ಕುರಿತಂತೆ ಪೂರ್ವಭಾವಿ ಸಭೆ ನಡೆಸಿದರು.

ಮೈಸೂರು, ಆ.21(ಬಿಎಲ್‌ಯು)– ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೆ.1ರಂದು ಮೈಸೂರಿಗೆ ಭೇಟಿ ನೀಡಲಿದ್ದು, ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ (ಎಐಐಎಸ್‌ಎಚ್) ವಜ್ರ ಮಹೋತ್ಸವ (ಡೈಮಂಡ್ ಜೂಬಿಲಿ) ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ವೇಳೆ ಮುರ್ಮು, ಮೈಸೂರಿನ ರ್ಯಾಡಿಸನ್ ಬ್ಲೂ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ಈ ಕುರಿತು ಪೂರ್ವಭಾವಿಯಾಗಿ ಮೈಸೂರು ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆ ನಡೆಸಿದರು.

ರಾಷ್ಟ್ರಪತಿಗಳ ಮೈಸೂರು ಭೇಟಿ ಹಿನ್ನೆಲೆಯಲ್ಲಿ ಯಾವುದೇ ಭದ್ರತಾ ಲೋಪವಾಗದಂತೆ ಮುಂಜಾಗ್ರತೆ ವಹಿಸಬೇಕು. ಶಿಷ್ಟಾಚಾರ ಉಲ್ಲಂಘನೆ ಆಗಕೂಡದು. ರಾಷ್ಟ್ರಪತಿಗಳು, ನಗರದ ರ್ಯಾಡಿಸನ್ ಬ್ಲೂ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಲಿದ್ದು, ಅಲ್ಲಿಯೂ ಯಾವುದೇ ಲೋಪವಾಗದಂತೆ ಅಗತ್ಯ ಕ್ರಮಕೈಗೊಳ್ಳಬೇಕು ಎಂದರು.

ರಾಷ್ಟ್ರಪತಿಗಳು ಹಾದು ಹೋಗುವ ಮಾರ್ಗದಲ್ಲಿ ರಸ್ತೆ ವ್ಯವಸ್ಥಿತವಾಗಿರಬೇಕು. ರಿಂಗ್ ರಸ್ತೆ ಹಾಗೂ ಆಯಿಷ್‌ನಿಂದ ರ್ಯಾಡಿಸನ್ ಬ್ಲೂವರೆಗಿನ ಎಲ್ಲಾ ರಸ್ತೆಗಳಲ್ಲಿ ಸ್ವಚ್ಛತೆ ಕೈಗೊಳ್ಳಬೇಕು. ನಗರಪಾಲಿಕೆ, ಎಂಡಿಎ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಈ ಸಂಬಂಧ ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು. ರಾಷ್ಟ್ರಪತಿಗಳಿಗೆ ಶಿಷ್ಟಾಚಾರದಂತೆ ವೈದ್ಯಕೀಯ ಸೌಲಭ್ಯ ಒದಗಿಸುವುದು ಆರೋಗ್ಯ ಇಲಾಖೆಯ ಜವಾಬ್ದಾರಿ. ತಜ್ಞ ವೈದ್ಯರು, ಸಿಬ್ಬಂದಿ ಹಾಗೂ ಸುಸಜ್ಜಿತ ಆಂಬ್ಯುಲೆನ್ಸ್‌ಗಳು ಸನ್ನದ್ಧವಾಗಿರಬೇಕು ಎಂದು ಸೂಚನೆ ನೀಡಿದರು. ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಡಿಸಿಪಿ ಸುಂದರರಾಜ್, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್, ನಗರಪಾಲಿಕೆ ಆಯುಕ್ತ ಷೇಕ್ ತನ್ವೀರ್ ಆಸೀಫ್, ಎಡಿಸಿ ಡಾ.ಪಿ.ಶಿವರಾಜ್ ಸಭೆಯಲ್ಲಿ ಹಾಜರಿದ್ದರು.

ಕೆಲವು ರಸ್ತೆಗಳಿಗೆ ಶೃಂಗಾರ ಭಾಗ್ಯ

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಮೈಸೂರು ಭೇಟಿ ಹಿನ್ನೆಲೆಯಲ್ಲಿ ನಗರದ ಕೆಲವು ರಸ್ತೆಗಳು ಸುಧಾರಣೆ ಹಾಗೂ ಶೃಂಗಾರಗೊಳ್ಳುತ್ತಿವೆ. ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಗೆ ಹೋಗುವ ಮಾರ್ಗದಲ್ಲಿ ಹಳ್ಳ ಬಿದ್ದಿದ್ದ ರಸ್ತೆಗಳಿಗೆ ಈಗ ಡಾಂಬರೀಕರಣ ಭಾಗ್ಯ ದೊರೆತಿದೆ.

ಕುಕ್ಕರಹಳ್ಳಿ ಕೆರೆ ರಸ್ತೆಯ ವಿಶ್ವವಿದ್ಯಾನಿಲಯದ ಗೆಸ್ಟ್‌ಹೌಸ್‌ನಿಂದ ಆಯಿಷ್‌ವರೆಗೆ ರಸ್ತೆಗಳಿಗೆ ತೇಪೆ ಹಾಕುವ ಕೆಲಸ ಭರದಿಂದ ಸಾಗಿದೆ. ಅಲ್ಲದೆ ಈ ರಸ್ತೆ ಬದಿಯಲ್ಲಿ ಬೆಳೆದಿದ್ದ ಗಿಡಗಂಟಿಗಳನ್ನು ತೆರವು ಮಾಡಲಾಗುತ್ತಿದ್ದು, ರಸ್ತೆ ಇಕ್ಕೆಲಗಳಲ್ಲಿದ್ದ ಹಳ್ಳಗಳನ್ನು ಮುಚ್ಚಲಾಗುತ್ತಿದೆ. ಸದ್ಯ ರಾಷ್ಟ್ರಪತಿಗಳ ಭೇಟಿಯಿಂದಲಾದರೂ ಈ ರಸ್ತೆಗಳಿಗೆ ತೇಪೆ ಭಾಗ್ಯ ದೊರೆಯಿತಲ್ಲ ಎಂದು ಇಲ್ಲಿ ನಿತ್ಯ ಸಂಚರಿಸುವ ಸಾರ್ವಜನಿಕರು ಸಮಾಧಾನಪಡುವಂತಾಗಿದೆ.



ಕುಕ್ಕರಹಳ್ಳಿ ಕೆರೆ ರಸ್ತೆಯ ಮೈಸೂರು ವಿಶ್ವವಿದ್ಯಾನಿಲಯದ ಗೆಸ್ಟ್ ಹೌಸ್‌ನಿಂದ ಆಯಿಷ್‌ವರೆಗಿನ ರಸ್ತೆಗೆ ತೇಪೆ ಹಾಕುತ್ತಿರುವುದು.



ಮೈಸೂರು ಪೊಲೀಸ್ ಆಯುಕ್ತರ ಅಧ್ಯಕ್ಷತೆಯಲ್ಲಿ ಶಾಂತಿ ಸಭೆ...

ಮೈಸೂರು ನಗರ ಪೊಲೀಸ್ ಆಯುಕ್ತರ ಕಚೇರಿಯ ಸಭಾಂಗಣದಲ್ಲಿ ಗುರುವಾರ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರ ಅಧ್ಯಕ್ಷತೆಯಲ್ಲಿ ಗೌರಿಗಣೇಶ ಹಾಗೂ ಈದ್ ಮಿಲಾದ್ ಹಬ್ಬಗಳ ಪ್ರಯುಕ್ತ ಎಲ್ಲಾ ಧಾರ್ಮಿಕ ಮುಖಂಡರ ಶಾಂತಿ ಸಮಿತಿ ಸಭೆ ನಡೆಯಿತು. ಹಬ್ಬ ಆಚರಣೆ ವೇಳೆ ಅನುಸರಿಸಬೇಕಾದ ನಿಯಮಗಳ ಬಗ್ಗೆ ಮತ್ತು ಶಾಂತಿ ಸೌಹಾರ್ದಯುತವಾಗಿ ಹಬ್ಬಗಳನ್ನು ಆಚರಿಸುವ ಕುರಿತು ಸಭೆಯಲ್ಲಿ ಎಲ್ಲಾ ಧಾರ್ಮಿಕ ಮುಖಂಡರಿಗೆ ಪೊಲೀಸ್ ಆಯುಕ್ತರು ತಿಳುವಳಿಕೆ ನೀಡಿದರು. ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಡಿಸಿಪಿ ಕೆ.ಎಸ್.ಸುಂದರ್ ರಾಜ್ ಸೇರಿದಂತೆ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

ನಾಳೆ ಬಿವಿಬಿಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ



ತ್ಯಾಗರಾಜು



ದಾಸಪ್ಪ



ಜಯರಾಂ



ಕಿರಣ್‌ಕುಮಾರ್



ಯಶಸ್ವಿ

ಮೈಸೂರು, ಆ. 21– ಬೆಂಗಳೂರಿನ ಇನ್ಫೋಸಿಸ್ ಪ್ರತಿಷ್ಠಾನ ಮತ್ತು ಬೆಂಗಳೂರು–ಮೈಸೂರು ಭಾರತೀಯ ವಿದ್ಯಾಭವನದ ಸಂಯುಕ್ತ ಆಶ್ರಯದಲ್ಲಿ ಆ.23ರಂದು ಸಂಜೆ 6 ಗಂಟೆಗೆ ವಿಜಯನಗರ 1ನೇ ಹಂತದ ಭಾರತೀಯ ವಿದ್ಯಾಭವನದಲ್ಲಿ 149ನೇ ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ವಿದ್ವಾನ್ ಎಂ. ತ್ಯಾಗರಾಜು ಅವರಿಂದ ಸಂತೂರ್ ವಾದನ ಏರ್ಪಡಿಸಲಾಗಿದೆ.

ಎಂ.ತ್ಯಾಗರಾಜು ಅವರಿಗೆ ಸಂಗೀತದಲ್ಲಿ ಅಪಾರ ಆಸಕ್ತಿ ಇತ್ತು. ಚಿಕ್ಕ ವಯಸ್ಸಿನಲ್ಲೇ ಸಂಗೀತ ಕಲಿಯಲು ಪ್ರಾರಂಭಿಸಿದರು. ಅವರು ವಿದುಷಿ ಡಾ.ಗೌರಿ ಕುಪ್ಪುಸ್ವಾಮಿ ಅವರಿಂದ ಗಾಯನ ಮತ್ತು ವಿದ್ವಾನ್ ಮಹದೇವಪ್ಪ ಮತ್ತು ಮೈಸೂರು ಮಂಜುನಾಥ್ ಅವರಲ್ಲಿ ವಯೋಲಿನ್ ತರಬೇತಿ ಪಡೆದಿದ್ದಾರೆ. ಸಂತೂರ್, ಪಿಟೀಲು, ಮ್ಯಾಂಡೋಲಿನ್, ಕೀಬೋರ್ಡ್, ಗಾಯನ, ಕರ್ನಾಟಕ ಮತ್ತು ಪಾಶ್ಚಾತ್ಯ ಸಂಗೀತ ಸಂಯೋಜನೆಯಲ್ಲೂ ಅಪಾರ ಅನುಭವ ಹೊಂದಿದ್ದಾರೆ.

ಅವರು ಮೂರು ದಶಕಗಳಿಂದಲೂ ಸಂಗೀತ ಕಲಿಸುತ್ತಾ ಬಂದಿದ್ದು, ಹಿಂದೂಸ್ಥಾನಿ ಮ್ಯೂಸಿಕ್ ಸಂತೂರ್ ಮೇಲೆ ಕರ್ನಾಟಕ ಸಂಗೀತ ನುಡಿಸುವ ಬಗ್ಗೆ ಸಂಶೋಧನೆ ಮಾಡಿದ್ದಾರೆ. ಆಕಾಶವಾಣಿಯಲ್ಲಿ ಸಂತೂರ್ ವಾದನದಲ್ಲಿ ಪ್ರಥಮ ದರ್ಜೆ ಕಲಾವಿದರಾಗಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದಿಂದ (ಗಾಯನ ಮತ್ತು ವಯೋಲಿನ್) ಸಂಗೀತದಲ್ಲಿ ಪದವಿ ಪಡೆದಿದ್ದು, ಬೆಂಗಳೂರು ವಿಶ್ವವಿದ್ಯಾನಿಲಯದಿಂದ (ಗಾಯನ ಮತ್ತು ವಯೋಲಿನ್) ಮಾಸ್ಟರ್ ಇನ್ ಮ್ಯೂಸಿಕ್ ಪದವಿ ಪಡೆದಿದ್ದಾರೆ.

ಆರ್. ದಾಸಪ್ಪ– ತಬಲ, ಎಂ.ಎಸ್. ಜಯರಾಮ್ – ಮೃದಂಗ, ಕಿರಣ್ ಕುಮಾರ್–ಘಟಂ ಮತ್ತು ತುಮಕೂರು ಯಶಸ್ವೀ–ಪಿಟೀಲು ವಾದನದಲ್ಲಿ ಸಹಕಾರ ನೀಡಲಿದ್ದಾರೆ.

ಅಲೆಮಾರಿ ಸಮುದಾಯಕ್ಕೆ ಮೀಸಲಾತಿ ಕಲ್ಪಿಸದಿದ್ದರೆ ಒಳ ಮೀಸಲಾತಿ ಹೋರಾಟ ಮುಂದುವರಿಕೆ

ಮೈಸೂರು, ಆ.21(ಜಿಎ)–ಒಳ ಮೀಸಲಾತಿ ಅನುಷ್ಠಾನದ ಲೋಪಗಳನ್ನು ಸರಿಪಡಿಸಿ, ಅಲೆಮಾರಿ ಸಮುದಾಯಕ್ಕೆ ಮೀಸಲಾತಿ ಕಲ್ಪಿಸಬೇಕು. ಇಲ್ಲವಾದರೆ, ಒಳ ಮೀಸಲಾತಿ ಹೋರಾಟ ಮುಂದುವರಿಯಲಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಆರ್.ಮೋಹನ್‌ರಾಜ್ ತಿಳಿಸಿದರು.


ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಸಚಿವ ಸಂಪುಟ ಸಭೆಯಲ್ಲಿ ಪರಿಶಿಷ್ಟ ಜಾತಿ ಒಳ ಮೀಸಲಾತಿಯನ್ನು ಜಾರಿಗೊಳಿಸಿರುವುದು ಸ್ವಾಗತಾರ್ಹ. ಆದರೆ, ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾಗಿ ಅಲೆಮಾರಿ ಸಮುದಾಯವನ್ನು ಮೀಸಲಾತಿಯಿಂದ ಹೊರಗಿಟ್ಟು ಅನ್ಯಾಯ ಮಾಡಲಾಗಿದೆ ಎಂದು ದೂರಿದರು.

ನಾಗಮೋಹನದಾಸ್, ಎ.ಜೆ.ಸದಾಶಿವ ಹಾಗೂ ಎ.ಜೆ.ಮಾಧುಸ್ವಾಮಿ ವರದಿಗಳ ಪ್ರಕಾರ ದುರ್ಬಲ ವರ್ಗವಾದ ಅಲೆಮಾರಿ ಸಮುದಾಯಗಳಿಗೆ ಶೇ.1ರಷ್ಟು ಮೀಸಲಾತಿ ನಿಗದಿಪಡಿಸಲಾಗಿತ್ತು. ಆದರೆ, ಇಂದಿನ ವರದಿ ಅನುಷ್ಠಾನದಲ್ಲಿ ಪರಿಶಿಷ್ಟ ಜಾತಿಯ ವರ್ಗೀಕರಣದಲ್ಲಿ ಅಲೆಮಾರಿ ಸಮುದಾಯಗಳನ್ನು ಕಾಂಗ್ರೆಸ್ ಸರ್ಕಾರ ನಿರ್ಲಕ್ಷಿಸಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಲೆಮಾರಿ ಸಮುದಾಯದ 59 ಜಾತಿಗಳು ತಮ್ಮ ಹೊಟ್ಟೆಪಾಡಿಗಾಗಿ ಊರೂರು ಅಲೆಯುತ್ತಾರೆ. ಶಿಕ್ಷಣದಿಂದ ವಂಚಿತರಾದ ಸಮುದಾಯಗಳು ಇದಾಗಿದೆ. ತಮ್ಮ ಮಕ್ಕಳೊಂದಿಗೆ ಹೊಟ್ಟೆಪಾಡಿಗಾಗಿ ಊರಿಂದ ಊರಿಗೆ ವಲಸೆ ಹೋಗುವ ಈ ಸಮುದಾಯಗಳಿಗೆ ಸರಿಯಾದ ನೆಲೆಯಿಲ್ಲ. ಆರೋಗ್ಯವಂತು ಕೇಳಲಿಕ್ಕೆ ಆಗುವುದಿಲ್ಲ. ಶೋಷಿತರಲ್ಲಿ ಅತ್ಯಂತ ಹಿಂದುಳಿದ ಸಮುದಾಯವೆಂದರೆ ಈ ಅಲೆಮಾರಿಗಳು. ಇಂತಹ ಅತಿ ಶೋಷಿತ ಸಮುದಾಯವನ್ನು ಮೀಸಲಾತಿಯಿಂದ ಕೈ ಬಿಟ್ಟಿರುವುದು ಸಾಮಾಜಿಕ ನ್ಯಾಯ ದ್ರೋಹ ಎಂದು ತಿಳಿಸಿದರು.

ಶೋಷಿತ ಸಮುದಾಯವನ್ನು ಸರ್ಕಾರ ಈಗ ಒಳ ಮೀಸಲಾತಿ ಜಾರಿಯಲ್ಲಿ ಬಲಾಢ್ಯ ಸಮುದಾಯ ಪಟ್ಟಿಯಲ್ಲಿ ಸೇರಿಸಿದ್ದಾರೆ. ಇವರ ಬದುಕು ಉತ್ತಮಗೊಳ್ಳಬೇಕಾದರೆ ಇವರಿಗೆ ಪ್ರತ್ಯೇಕ ಮೀಸಲಾತಿ ನೀಡಬೇಕು. ಕೂಡಲೇ ಸಚಿವ ಸಂಪುಟದ ತೀರ್ಮಾನದ ಹಿನ್ನೆಯಲ್ಲಿ ಶೇ.1ರಷ್ಟು ಮೀಸಲಾತಿಯನ್ನು ಅಲೆಮಾರಿ ಸಮುದಾಯಕ್ಕೆ ಮೀಸಲಿಡಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ನಾಗರಾಜು, ಮರಿಸ್ವಾಮಿ, ಕೃಷ್ಣ, ವರದರಾಜು, ರಾಜು ಇದ್ದರು.

ಸಂವಿಧಾನದ 130ನೇ ತಿದ್ದುಪಡಿಗೆ ಮಾಜಿ ಕಾರ್ಪೊರೇಟರ್ ಆಕ್ಷೇಪ



ಕೆ.ವಿ.ಮಲ್ಲೇಶ್

ಮೈಸೂರು, ಆ. 21– ಸಂವಿಧಾನ (130ನೇ ತಿದ್ದುಪಡಿ) 2025 ಮಸೂದೆ ಜಾರಿಗೆ ಮುಂದಾಗಿರುವ ಕೇಂದ್ರ ಸರಕಾರದ ನಡೆ ಪ್ರತಿಪಕ್ಷಗಳ ನಾಯಕರನ್ನು ಅಳಿಯುವ ಹುನ್ನಾರವಾಗಿದೆ ಎಂದು ಅನಿಕೇತನ ಸೇವಾ ಟ್ರಸ್ಟ್ ಅಧ್ಯಕ್ಷ ಹಾಗೂ ಮೈಸೂರು ನಗರಪಾಲಿಕೆ ಮಾಜಿ ಸದಸ್ಯ ಕೆ.ವಿ. ಮಲ್ಲೇಶ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಸತತ 30 ದಿನಗಳು ಜೈಲಿನಲ್ಲಿದ್ದರೆ ಪ್ರಧಾನ ಮಂತ್ರಿ, ಮುಖ್ಯಮಂತ್ರಿಗಳನ್ನು 31ನೇ ದಿನ ಹುದ್ದೆಯಿಂದ ವಜಾಗೊಳಿಸುವ ಈ ಮಸೂದೆ ಒಕ್ಕೂಟ ವ್ಯವಸ್ಥೆಗೆ ಸಂಪೂರ್ಣ ವಿರುದ್ಧವಾಗಿದೆ. ನಮ್ಮ ಸಂವಿಧಾನದ ಪ್ರಕಾರ ಯಾವುದೇ ವ್ಯಕ್ತಿಯ ಮೇಲಿನ ಆರೋಪ ಸಾಬೀತಾಗುವವರೆಗೂ ಆತ ಆರೋಪಿ ಅಷ್ಟೆ, ಆರೋಪ ಸಾಬೀತಾದ ನಂತರವಷ್ಟೇ ಅಪರಾಧಿ. ಆದರೆ, ಹೊಸ ಮಸೂದೆ ಪ್ರಕಾರ ಆರೋಪಿತ ಜೈಲಿಗೆ ಹೋದ 31ನೇ ದಿನ ತನ್ನ ಸ್ಥಾನದಿಂದ ವಜಾಗೊಳ್ಳುತ್ತಾನೆ. ಇದು ಸಹಜ ನ್ಯಾಯಕ್ಕೆ ವಿರುದ್ಧವಾಗಿದೆ. ಅಲ್ಲದೆ, ಇಲ್ಲಿ ನ್ಯಾಯಾಂಗದ ಕೆಲಸವನ್ನು ಕಾರ್ಯಾಂಗವೇ ಮಾಡಲು ಹೊರಟಿರುವುದು ಸರಿಯಲ್ಲ. ಪ್ರಸ್ತುತ ದಿನಗಳಲ್ಲಿ ಅಧಿಕಾರಸ್ಥರ ಮೇಲಿನ ಆರೋಪಗಳು ಸಾಮಾನ್ಯವಾಗಿಬಿಟ್ಟಿವೆ. ರಾಜಕೀಯ ತಂತ್ರ, ಕುತಂತ್ರದ ಜತೆಗೆ ದ್ವೇಷ ರಾಜಕಾರಣ ಮೇರೆಮೀರಿದೆ. ಬಿಜೆಪಿ ಸರಕಾರ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ದಿನದಿಂದಲೂ ದ್ವೇಷ ರಾಜಕಾರಣ ಮಾಡುತ್ತಲೇ ಬಂದಿದೆ. ವಿರೋಧ ಪಕ್ಷಗಳ ನಾಯಕರನ್ನು ಹಣಿಯಲು ಇನ್ನಿಲ್ಲದಂತೆ ಪ್ರಯತ್ನಿಸುತ್ತಿರುವುದು ಬಹಿರಂಗ ಸತ್ಯ. ಹೊಸ ಮಸೂದೆ ಕೂಡ ಪ್ರತಿಪಕ್ಷ ನಾಯಕರನ್ನು ಬೆದರಿಸುವ ತಂತ್ರವಷ್ಟೆ. ಇತ್ತೀಚಿನ ದಿನಗಳಲ್ಲಿ ಜಾರಿ ನಿರ್ದೇಶನಾಲಯ, ಸಿಬಿಐಗಳ ನಡೆ ಅತ್ಯಂತ ವಿವಾದಾಸ್ಪದವಾಗಿದೆ. ಅದರ ಮುಂದುವರಿದ ಭಾಗವೆಂಬಂತೆ ಈ ಮಸೂದೆ ಕಂಡುಬರುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಜನ ನೀಡಿರುವ ತೀರ್ಪನ್ನು ದುರ್ಬಳಕೆ ಮಾಡಿಕೊಳ್ಳದೇ ಉಳಿದಿರುವ ಅವಧಿಯಲ್ಲಾದರೂ ಈ ದೇಶದ ಜನರ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಿ ಎಂದು ಅವರು ಹೇಳಿದ್ದಾರೆ.

ಮಹಾರಾಜ ಟ್ರೋಫಿ: ಮೈಸೂರಿಗೆ ಸತತ 2ನೇ ಸೋಲು

ನಾಯಕ ಶ್ರೇಯಸ್ ಗೋಪಾಲ್ ಆಲ್‌ರೌಂಡ್ ಆಟ; ಡ್ರ್ಯಾಗನ್ಸ್‌ಗೆ ಜಯ



ಮೈಸೂರು, ಆ.21(ವಿವಿಹೆಚ್)– ನಾಯಕ ಶ್ರೇಯಸ್ ಗೋಪಾಲ್ ಅವರ ಆಲ್‌ರೌಂಡ್ ಆಟದ ನೆರವಿನಿಂದ ಮಂಗಳೂರು ಡ್ರ್ಯಾಗನ್ಸ್ ಅತಿಥೇಯ ಮೈಸೂರು ವಾರಿಯರ್ಸ್ ಅನ್ನು 52 ರನ್‌ಗಳಿಂದ ಮಣಿಸಿತು. ಇದರೊಂದಿಗೆ ಮೈಸೂರು ವಾರಿಯರ್ಸ್ ಸತತ 2ನೇ ಸೋಲು ಅನುಭವಿಸಿತು.

ಇಲ್ಲಿನ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಮೈದಾನದಲ್ಲಿ ಗುರುವಾರ ಮಧ್ಯಾಹ್ನ ನಡೆದ ಮೊದಲ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಮಂಗಳೂರು ಡ್ರ್ಯಾಗನ್ಸ್ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 173 ರನ್ ಗಳಿಸಿತು. ಈ ಮೊತ್ತ ಬೆನ್ನತ್ತುವಲ್ಲಿ ವಿಫಲವಾದ ಮೈಸೂರು ವಾರಿಯರ್ಸ್ 17.1 ಓವರ್‌ಗಳಲ್ಲಿ 121 ರನ್‌ಗಳಿಗೆ ಆಲೌಟ್ ಆಗಿ ಸೋಲನುಭವಿಸಿತು.

ಮಂಗಳೂರು: ಡ್ರ್ಯಾಗನ್ಸ್ ಪರ ಇನ್ನಿಂಗ್ಸ್ ಆರಂಭಿಸಿದ ಲೋಚನ್ ಗೌಡ 34(31), ಬಿ.ಆರ್.ಶರತ್ 25(16) ಮೊದಲ ವಿಕೆಟ್‌ಗೆ 52 ರನ್ ಜೊತೆಯಾಟವಾಡಿ ತಂಡಕ್ಕೆ ಉತ್ತಮ ಆರಂಭ ಒದಗಿಸಿದರು. ಬಳಿಕ ಬಂದ ಆದರ್ಶ್ ಪ್ರಜ್ವಲ್ 5(4) ಹಾಗೂ ಕೆ.ವಿ.ಅನೀಶ್ 6(6) ಗಳಿಸಿ ಬಹುಬೇಗ ನಿರ್ಗಮಿಸಿದರು. ಈ ವೇಳೆ ಒಂದಾದ ನಾಯಕ ಶ್ರೇಯಸ್ ಗೋಪಾಲ್ 29(22) ಮತ್ತು ಮ್ಯಾಕ್ನಿಲ್ 31(17) ತಂಡಕ್ಕೆ ಚೇತರಿಕೆ ನೀಡಿದರು. ಕೊನೆಯಲ್ಲಿ ಅಬ್ಬರಿಸಿದ ಎಸ್.ಶಿವರಾಜ್ ಅಜೇಯ 27(14) ರನ್ ಗಳಿಸಿದರು. ಉಳಿದಂತೆ ತಿಪ್ಪಾರೆಡ್ಡಿ 5(8), ಕ್ರಾಂತಿ ಕುಮಾರ್ ಅಜೇಯ 2(2) ರನ್ ಗಳಿಸಿ ತಂಡಕ್ಕೆ ನೆರವಾದರು.

ವಾರಿಯರ್ಸ್ ಪರ ಯಶೋವರ್ಧನ್ ಪರಂತಪ್ 3, ಪ್ರಸಿದ್ಧ ಕೃಷ್ಣ ಹಾಗೂ ಕುಶಾಲ್ ವದ್ವಾನಿ ತಲಾ 2 ವಿಕೆಟ್ ಕಬಳಿಸಿದರು.

ಮೈಸೂರು: ಸ್ಪರ್ಧಾತ್ಮಕ ಮೊತ್ತ ಬೆನ್ನತ್ತಿದ ವಾರಿಯರ್ಸ್ ಪವರ್ ಪ್ಲೇನಲ್ಲೇ ಎಸ್.ಯು.ಕಾರ್ತಿಕ್ 8(4), ಎಂ.ವೆಂಕಟೇಶ್ 2(8), ಹರ್ಷಿಲ್ ಧರ್ಮಾನಿ 1(4), ನಾಯಕ ಮನೀಶ್ ಪಾಂಡೆ 12(7) ಸೇರಿದಂತೆ ಪ್ರಮುಖ 4 ವಿಕೆಟ್ ಕಳೆದುಕೊಂಡು ಆರಂಭಿಕ ಆಘಾತ ಅನುಭವಿಸಿತು. ಒಂದೆಡೆ ವಿಕೆಟ್ ಬೀಳುತ್ತಿದ್ದರೂ, ಮತ್ತೊಂದೆಡೆ ಸಿ.ಎ.ಕಾರ್ತಿಕ್ 34(21) ರನ್ ಗಳಿಸಿ ಅಲ್ಪ ಹೋರಾಟ ನೀಡಿದರಾದರೂ ತಂಡವನ್ನು ಗೆಲುವಿನ ದಡ ಸೇರಿಸಲು ಸಾಧ್ಯವಾಗಲಿಲ್ಲ. ಅಂತಿಮವಾಗಿ ಕೆ.ಎಸ್.ಲಂಕೇಶ್ 11(12), ಯಶೋವರ್ಧನ್ ಪರಂತಪ್ 28(20), ಎಸ್.ಶರತ್ 14(18), ಕೆ.ಗೌತಮ್ ಡಕ್‌ಔಟ್, ಶಿಖರ್ ಶೆಟ್ಟಿ 7(7) ರನ್ ಗಳಿಸಿದರು.

ಮಂಗಳೂರು ಪರ ಕ್ರಾಂತಿ ಕುಮಾರ್ 4 ಹಾಗೂ ನಾಯಕ ಶ್ರೇಯಸ್ ಗೋಪಾಲ್ 3 ವಿಕೆಟ್ ಕಿತ್ತು ಗಮನ ಸೆಳೆದರು. ರೋಹಿತ್ ಮೋರೆ, ಮಾಕ್ನಿಲ್ ಮತ್ತು ಸಚಿನ್ ಶಿಂಧೆ ತಲಾ ಒಂದೊಂದು ವಿಕೆಟ್ ಪಡೆದರು. ಶ್ರೇಯಸ್ ಗೋಪಾಲ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಇಂದಿನ ಪಂದ್ಯಗಳು

ಪಂದ್ಯ–23: ಹುಬ್ಬಳ್ಳಿ ಟೈಗರ್ಸ್ vs ಗುಲ್ಬರ್ಗಾ ಮಿಸ್ಟಿಕ್ಸ್ (ಮಧ್ಯಾಹ್ನ 3.15)

ಪಂದ್ಯ–24: ಶಿವಮೊಗ್ಗ ಲಯನ್ಸ್ vs ಮಂಗಳೂರು ಡ್ರ್ಯಾಗನ್ಸ್ (ಸಂಜೆ 7.15)

ಲಯನ್ಸ್ ವಿರುದ್ಧ ಗೆದ್ದು ಅಗ್ರಸ್ಥಾನಕ್ಕೇರಿದ ಬ್ಲಾಸ್ಟರ್ಸ್



ಮೈಸೂರು, ಆ.21(ವಿವಿಹೆಚ್)– ರೋಹನ್ ಪಾಟೀಲ್ ಅವರ ಅರ್ಧ ಶತಕದ ನೆರವಿನಿಂದ ಬೆಂಗಳೂರು ಬ್ಲಾಸ್ಟರ್ಸ್ ಶಿವಮೊಗ್ಗ ಲಯನ್ಸ್ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಇದರೊಂದಿಗೆ ಆಡಿರುವ 7 ಪಂದ್ಯಗಳ ಪೈಕಿ 6ರಲ್ಲಿ ಸೋತು ಶಿವಮೊಗ್ಗ ಲಯನ್ಸ್ ಬಹುತೇಕ ಟೂರ್ನಿಯಿಂದ ಹೊರಬಿದ್ದಿದೆ.

ಮಾನಸ ಗಂಗೋತ್ರಿ ಗ್ಲೇಡ್ಸ್ ಕ್ರೀಡಾಂಗಣದಲ್ಲಿ ಗುರುವಾರ ಸಂಜೆ ನಡೆದ ಪಂದ್ಯದಲ್ಲಿ ಶಿವಮೊಗ್ಗ ನೀಡಿದ 112 ರನ್‌ಗಳ ಸಾಧಾರಣ ಗೆಲುವಿನ ಗುರಿ ಬೆನ್ನತ್ತಿದ ಬೆಂಗಳೂರು 14.4 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 117 ರನ್ ಬಾರಿಸಿ 7 ವಿಕೆಟ್‌ಗಳಿಂದ ಗೆದ್ದು ಬೀಗಿತು. ತಂಡದ ಪರ 45 ಎಸೆತಗಳಲ್ಲಿ 3 ಸಿಕ್ಸರ್, 7 ಬೌಂಡರಿ ಒಳಗೊಂಡ ಅಜೇಯ 74 ರನ್ ಗಳಿಸಿದ ರೋಹನ್ ಪಾಟೀಲ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರೇ, ಭುವನ್ ರಾಜಾ 14, ಸೂರಜ್ ಅಹುಜಾ 20 ರನ್ ಗಳಿಸಿದರು. ಶಿವಮೊಗ್ಗ ಪರ ವಾಸುಕಿ ಕೌಶಿಕ್, ಧ್ರುವ್ ಪ್ರಭಾಕರ್ ಹಾಗೂ ಡಿ.ಅವಿನಾಶ್ ತಲಾ ಒಂದೊಂದು ವಿಕೆಟ್ ಪಡೆದರು.

ಇದಕ್ಕೂ ಮುನ್ನಾ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಶಿವಮೊಗ್ಗ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 111 ರನ್‌ಗಳ ಸಾಧಾರಣ ಮೊತ್ತ ದಾಖಲಿಸಿತು. ತಂಡದ ಪರ ನಿಹಾಲ್ ಉಲ್ಲಾಳ್ 14, ಅನೀಶ್ವರ್ ಗೌತಮ್ 23, ಅನಿರುದ್ಧ ಜೋಶಿ 19, ಹಾರ್ದಿಕ್ ರಾಜಾ 13, ಅವಿನಾಶ್ 12, ಧುರಿ 18 ರನ್ ಗಳಿಸಿದರು. ಬೆಂಗಳೂರು ಪರ ಮಾಧವ್ ಪ್ರಕಾಶ್ ಬಜಾಜ್ 4, ಎಂ.ಜಿ.ನವೀನ್ 3, ಶುಭಾಂಗ್ ಹೆಗ್ಡೆ 1 ವಿಕೆಟ್ ಪಡೆದರು.


ದೇಶ - ವಿದೇಶ

ಭಾರತಕ್ಕೆ ಪಲಾಯನ ಮಾಡಿದ್ದ ಎಫ್‌ಬಿಐನ ಮೋಸ್ಟ್ ವಾಂಟೆಡ್ ಮಹಿಳೆ ಬಂಧನ



ನ್ಯೂಯಾರ್ಕ್: ಆರು ವರ್ಷದ ಮಗನನ್ನು ಕೊಂದು ವಿಚಾರಣೆಯಿಂದ ತಪ್ಪಿಸಿಕೊಳ್ಳಲು ಭಾರತಕ್ಕೆ ಪಲಾಯನ ಮಾಡಿದ ಮಹಿಳೆಯನ್ನು ಅಮೆರಿಕದ ಎಫ್‌ಬಿಐ ಅಧಿಕಾರಿಗಳು ಬಂಧಿಸಿದ್ದಾರೆ. ಎಫ್‌ಬಿಐನ ಟಾಪ್ 10 ಮೋಸ್ಟ್ ವಾಂಟೆಡ್ ಪಟ್ಟಿಯಲ್ಲಿರುವ ಸಿಂಡಿ ರೊಡ್ರಿಗಸ್ ಸಿಂಗ್(40) ಎಂಬಾಕೆಯನ್ನು ಬಂಧಿಸಲಾಗಿದೆ ಎಂದು ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್ (ಎಫ್‌ಬಿಐ) ನಿರ್ದೇಶಕ ಕಾಶ್ ಪಟೇಲ್ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ತನ್ನ ಮಗನನ್ನು ಕೊಂದ ಆರೋಪ ಆಕೆಯ ಮೇಲಿದೆ. ಭಾರತೀಯ ಅಧಿಕಾರಿಗಳು ಮತ್ತು ಇಂಟರ್‌ಪೋಲ್‌ನ ಸಮನ್ವಯದೊಂದಿಗೆ ಸಿಂಗ್ ಅವರನ್ನು ಭಾರತದಲ್ಲಿ ಎಫ್‌ಬಿಐ ಬಂಧಿಸಿದೆ. ಅವರನ್ನು ಅಮೆರಿಕಕ್ಕೆ ಸಾಗಿಸಲಾಗಿದೆ ಮತ್ತು ಟೆಕ್ಸಾಸ್ ಅಧಿಕಾರಿಗಳಿಗೆ ಹಸ್ತಾಂತರಿಸಲಾಗುವುದು ಎಂದು ಅದು ಹೇಳಿದೆ. ಆಕೆಯ ಮಗನಿಗೆ ತೀವ್ರ ಬೆಳವಣಿಗೆಯ ಅಸ್ವಸ್ಥತೆ, ಸಾಮಾಜಿಕ ಅಸ್ವಸ್ಥತೆ, ಮೂಳೆ ಸಾಂದ್ರತೆ ಸಮಸ್ಯೆಗಳು ಮತ್ತು ದೀರ್ಘಕಾಲದ ಶ್ವಾಸಕೋಶದ ಕಾಯಿಲೆ ಸೇರಿದಂತೆ ಹಲವಾರು ಆರೋಗ್ಯ ಮತ್ತು ಬೆಳವಣಿಗೆಯ ಸಮಸ್ಯೆಗಳಿದ್ದವು ಎಂದು ಅಧಿಕಾರಿಗಳನ್ನು ಉಲ್ಲೇಖಿಸಿ ಸುದ್ದಿಸಂಸ್ಥೆಯೊಂದು ವರದಿ ಮಾಡಿದೆ.

ಸಾಲ ತೀರಿಸಲಾಗದೆ ಹೈದರಾಬಾದ್‌ನಲ್ಲಿ ಕಲಬುರಗಿಯ ಕುಟುಂಬದವರ ಆತ್ಮಹತ್ಯೆ



ಮಿಯಾಪುರ: ಸಾಲದ ಒತ್ತಡದಿಂದ ಬೇಸತ್ತ ಕಲಬುರಗಿಯ ಕುಟುಂಬವೊಂದು ಹೈದರಾಬಾದ್‌ನಲ್ಲಿ ಸಾಮೂಹಿಕವಾಗಿ ಆತ್ಮಹತ್ಯೆ ಮಾಡಿಕೊಂಡ ಘಟನೆ ನಡೆದಿದೆ. ಹೈದರಾಬಾದ್‌ನ ಮಿಯಾಪುರದಲ್ಲಿ ಕಲಬುರಗಿಯ ಒಂದೇ ಕುಟುಂಬದ ಐವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೃತರನ್ನು ನರಸಿಂಹ (60), ವೆಂಕಟಮ್ಮ(55), ಅಳಿಯ ಅನಿಲ್(32), ಮಗಳು ಕವಿತಾ (24) ಮತ್ತು ಅಪ್ಪು(2) ಎಂದು ಗುರುತಿಸಲಾಗಿದೆ. ಆರ್ಥಿಕ ಸಂಕಷ್ಟದಿಂದ ಈ ದುರ್ಘಟನೆ ಸಂಭವಿಸಿರಬಹುದು ಎಂದು ಶಂಕಿಸಲಾಗಿದೆ. ನರಸಿಂಹ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದರು. ಅವರಿಗೆ ಮೂವರು ಹೆಣ್ಣು ಮಕ್ಕಳಿದ್ದಾರೆ. ಅವರಲ್ಲಿ ಒಬ್ಬ ಮಗಳು, ಅಳಿಯ ಮತ್ತು ಮೊಮ್ಮಗುವಿನೊಂದಿಗೆ ಮಕ್ತಾ ಮಹಬೂಬ್‌ಪೇಟೆಯಲ್ಲಿ ವಾಸಿಸುತ್ತಿದ್ದರು. ಮೃತಪಟ್ಟವರೆಲ್ಲರೂ ಕಲಬುರಗಿಯ ಲಕ್ಷ್ಮಯ್ಯ ಅವರ ಕುಟುಂಬಕ್ಕೆ ಸೇರಿದವರು. ಅವರು ಕೆಲವು ದಿನಗಳಿಂದ ಹೈದರಾಬಾದ್‌ನಲ್ಲಿ ವಾಸಿಸುತ್ತಿದ್ದರು. ಬುಧವಾರ ರಾತ್ರಿ ಅವರೆಲ್ಲರೂ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಶಂಕಿಸಲಾಗಿದೆ ಎಂದು ಮಿಯಾಪುರ ಪೊಲೀಸರು ತಿಳಿಸಿದ್ದಾರೆ. ಆರ್ಥಿಕ ಸಮಸ್ಯೆಗಳೇ ಈ ಆತ್ಮಹತ್ಯೆಗೆ ಕಾರಣವಾಯಿತೇ ಅಥವಾ ಬೇರೆ ಏನಾದರೂ ಕಾರಣವಿದೆಯೇ ಎಂದು ಪೊಲೀಸರು ತನಿಖೆ ನಡೆಸಲಾಗುತ್ತಿದೆ.

ಹಿಂಸಾಚಾರ ಪ್ರಕರಣಗಳಲ್ಲಿ ಇಮ್ರಾನ್ ಖಾನ್‌ಗೆ ಜಾಮೀನು



ಇಸ್ಲಾಮಾಬಾದ್: ಮೇ 9ರ ಹಿಂಸಾಚಾರಕ್ಕೆ ಸಂಬಂಧಿಸಿದ 8 ಪ್ರಕರಣಗಳಲ್ಲಿ ಜೈಲಿನಲ್ಲಿರುವ ಮಾಜಿ ಪ್ರಧಾನಿ ಇಮ್ರಾನ್ ಖಾನ್‌ಗೆ ಪಾಕಿಸ್ತಾನದ ಸುಪ್ರೀಂಕೋರ್ಟ್ ಗುರುವಾರ ಜಾಮೀನು ನೀಡಿದೆ.

2023ರ ಮೇ 9ರಂದು ಇಸ್ಲಾಮಾಬಾದ್‌ನಲ್ಲಿ ಕಾನೂನು ಜಾರಿ ಅಧಿಕಾರಿಗಳು ಖಾನ್ ಅವರನ್ನು ವಶಕ್ಕೆ ಪಡೆದಿದ್ದನ್ನು ವಿರೋಧಿಸಿ ಅವರ ಬೆಂಬಲಿಗರು ವಿಧ್ವಂಸಕ ಕೃತ್ಯ ಮತ್ತು ಹಿಂಸಾಚಾರ ನಡೆಸಿದ್ದರು. ಗಲಭೆಯಲ್ಲಿ ಪಾತ್ರಕ್ಕೆ ಸಂಬಂಧಿಸಿದಂತೆ ಖಾನ್ ಮತ್ತು ಅವರ ಪಾಕಿಸ್ತಾನ ತೆಹ್ರೀಕ್–ಇ–ಇನ್ಸಾಫ್(ಪಿಟಿಐ) ಪಕ್ಷದ ನಾಯಕರ ವಿರುದ್ಧ ಹಲವು ಪ್ರಕರಣಗಳನ್ನು ದಾಖಲಿಸಲಾಗಿತ್ತು. ಖಾನ್ ಅವರ ಪರ ವಕೀಲ ಸಲ್ಮಾನ್ ಸಫ್ದರ್ ಮತ್ತು ಪಂಜಾಬ್ ವಿಶೇಷ ಪ್ರಾಸಿಕ್ಯೂಟರ್ ಜುಲ್ಫಿಕರ್ ನಖ್ವಿ ಅವರ ವಾದಗಳನ್ನು ಆಲಿಸಿದ ನಂತರ ಸುಪ್ರೀಂಕೋರ್ಟ್‌ನ ಮೂವರು ಸದಸ್ಯರ ಪೀಠವು ಜಾಮೀನು ನೀಡಿದೆ. ಮುಖ್ಯ ನ್ಯಾಯಮೂರ್ತಿ ಅಫ್ರಿದಿ ನೇತೃತ್ವದ ಪೀಠದಲ್ಲಿ ನ್ಯಾಯಮೂರ್ತಿಗಳಾದ ಶಫಿ ಸಿದ್ದಿಕಿ, ಮಿಯಾಂಗುಲ್ ಔರಂಗಜೇಬ್ ಇದ್ದರು. ಗಲಭೆ ಪ್ರಕರಣಗಳಲ್ಲಿ ಜಾಮೀನು ಸಿಕ್ಕರೂ ಅಲ್ ಖಾದಿರ್ ಟ್ರಸ್ಟ್ ಪ್ರಕರಣದಲ್ಲಿ ಶಿಕ್ಷೆ ಆಗಿರುವ ಹಿನ್ನೆಲೆ ಖಾನ್ ಜೈಲಿನಿಂದ ಬಿಡುಗಡೆ ಆಗುವುದಿಲ್ಲ ಎಂದು ಬುಖಾರಿ ಹೇಳಿದ್ದಾರೆ.


ಫೇಸ್‌ಬುಕ್ ಗೆಳತಿ ನೋಡಲು ಬಂದು ಗೂಸಾ ತಿಂದ ಯುವಕ



ಭೋಪಾಲ್: ಫೇಸ್‌ಬುಕ್‌ನಲ್ಲಿ ಪರಿಚಯವಾದ ಗೆಳತಿಯನ್ನು ಹುಡುಕಿಕೊಂಡು ಬಂದ ಯುವಕನನ್ನು ಕುಟುಂಬದವರು ಕಂಬಕ್ಕೆ ಕಟ್ಟಿ ಹಾಕಿ, 13 ಗಂಟೆಗಳ ಕಾಲ ಥಳಿಸಿರುವ ಘಟನೆ ಮಧ್ಯ ಪ್ರದೇಶದಲ್ಲಿ ನಡೆದಿದೆ.

ಫೇಸ್‌ಬುಕ್‌ನಲ್ಲಿ ಸ್ನೇಹ ಬೆಳೆಸಿಕೊಂಡಿದ್ದ ಹುಡುಗಿಯನ್ನು ಭೇಟಿಯಾಗಲು 100 ಕಿ.ಮೀ ಪ್ರಯಾಣಿಸಿ ರೇವಾ ಜಿಲ್ಲೆಯ ವ್ಯಕ್ತಿ ಬಾಲಕಿಯನ್ನು ಭೇಟಿಯಾಗಲು ಮೌಗಂಜ್‌ನ ಪಿಪ್ರಾಹಿ ಗ್ರಾಮಕ್ಕೆ ಹೋದಾಗ ಆಕೆ ಕುಟುಂಬದವರು ಆತನ ಕೈಕಾಲುಗಳನ್ನು ಹಗ್ಗದಿಂದ ಕಟ್ಟಿ ಹಾಕಿ, ರಾತ್ರಿ 9 ಗಂಟೆಯಿಂದ ಮರುದಿನ ಬೆಳಿಗ್ಗೆ 10 ಗಂಟೆವರೆಗೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. 13 ಗಂಟೆಗಳ ಕಾಲ ನಡೆದ ಈ ಹಲ್ಲೆಯನ್ನು ಚಿತ್ರೀಕರಿಸಲಾಗಿದೆ ಎಂದು ಹೇಳಲಾಗಿದ್ದು, ಹಲವಾರು ಕ್ಲಿಪ್‌ಗಳನ್ನು ಈಗ ವ್ಯಾಪಕವಾಗಿ ಹಂಚಿಕೊಳ್ಳಲಾಗುತ್ತಿದೆ. ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ. ಆ ಹುಡುಗ ಬೈಕುಂಠ್‌ಪುರದವನಾಗಿದ್ದು, ಫೇಸ್‌ಬುಕ್‌ನಲ್ಲಿ ಅಪ್ರಾಪ್ತ ಬಾಲಕಿಯೊಂದಿಗೆ ಸ್ನೇಹ ಬೆಳೆಸಿದ್ದಲ್ಲದೇ ಭೇಟಿಯಾಗಲು ಬಂದಿದ್ದ.

ವಿಶ್ವದ ಅತ್ಯಂತ ಮೃದು ನ್ಯಾಯಾಧೀಶ ಫ್ರಾಂಕ್ ಕ್ಯಾಪ್ರಿಯೊ ಇನ್ನಿಲ್ಲ



ನ್ಯೂಯಾರ್ಕ್: ತಮ್ಮ 'ಕಾಟ್ ಇನ್ ಪ್ರಾವಿಡೆನ್ಸ್' ಎಂಬ ರಿಯಾಲಿಟಿ ಕೋರ್ಟ್ ಶೋ ಮೂಲಕ ಅಂತಾರಾಷ್ಟ್ರೀಯ ಜನಪ್ರಿಯತೆ ಪಡೆದಿದ್ದ ನ್ಯಾಯಾಧೀಶ ಫ್ರಾಂಕ್ ಕ್ಯಾಪ್ರಿಯೊ 88ನೇ ವಯಸ್ಸಿನಲ್ಲಿ ನಿಧನರಾಗಿದ್ದಾರೆ. ವಿಶ್ವದ ಅತ್ಯಂತ ಮೃದು ನ್ಯಾಯಾಧೀಶ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದ ಅವರು ಮೇದೋಜ್ಜೀರಕ ಗ್ರಂಥಿಯ ಕ್ಯಾನ್ಸರ್‌ನಿಂದ ಬಳಲುತ್ತಿದ್ದರು. ಅವರ ಸಾವಿಗೆ ಒಂದು ದಿನ ಮೊದಲು ತಾವು ಕ್ಯಾನ್ಸರ್ ವಿರುದ್ಧ ಹೋರಾಟ ಮುಂದುವರಿಸುತ್ತಿದ್ದೇನೆ ಹಾಗೂ ಎಲ್ಲರೂ ತನಗಾಗಿ ಪ್ರಾರ್ಥಿಸಿ ಎಂದು ಕೋರುವ Instagram ಪೋಸ್ಟ್ ಅನ್ನು ಹಂಚಿಕೊಂಡಿದ್ದರು. ದುರದೃಷ್ಟವಶಾತ್, ಕಾಯಿಲೆಯಲ್ಲಿ ನನಗೆ ಹಿನ್ನಡೆಯಾಗಿದೆ ಮತ್ತು ನಾನು ಆಸ್ಪತ್ರೆಗೆ ಮರಳಿದ್ದೇನೆ. ನಾನು ಈ ಕಠಿಣ ಯುದ್ಧವನ್ನು ಮುಂದುವರಿಸುತ್ತಿದ್ದೇನೆ. ನಿಮ್ಮ ಪ್ರಾರ್ಥನೆಗಳು ನನ್ನ ಚೈತನ್ಯವನ್ನು ಹೆಚ್ಚಿಸುತ್ತವೆ. ನಾನು ಮತ್ತೊಮ್ಮೆ ಕೇಳಿಕೊಳ್ಳುತ್ತೇನೆ, ಹೆಚ್ಚೇನಲ್ಲ. ನಿಮ್ಮ ಪ್ರಾರ್ಥನೆಗಳಲ್ಲಿ ನನ್ನನ್ನು ನೆನಪಿಸಿಕೊಳ್ಳಿ, ನಾನು ಪ್ರಾರ್ಥನೆಯ ಶಕ್ತಿಯನ್ನು ತುಂಬಾ ನಂಬುವವನು ಎಂದು ಪೋಸ್ಟ್‌ನಲ್ಲಿ ನುಡಿದಿದ್ದರು. ನ್ಯಾಯಾಲಯದಲ್ಲಿ ಆರೋಪಿಗಳ ಮೇಲೆ ಅವರು ತೋರುತ್ತಿದ್ದ ಅಪಾರ ಸಹಾನುಭೂತಿಗಾಗಿ ಕ್ಯಾಪ್ರಿಯೊ ಅವರನ್ನು 'ವಿಶ್ವದ ಅತ್ಯಂತ ಮೃದು ನ್ಯಾಯಾಧೀಶ' ಎಂದು ವರ್ಣಿಸಲಾಗುತ್ತಿತ್ತು.

ಸ್ನೇಹಿತನ ವಾಹನ ತರಲು ಹೋದ ವ್ಯಕ್ತಿ ಅಪಘಾತದಲ್ಲಿ ದುರ್ಮರಣ


ವಿನೋದ್

ವಿರಾಜಪೇಟೆ,ಆ.21– ಅನಾರೋಗ್ಯ ಪೀಡಿತನಾಗಿದ್ದ ಸ್ನೇಹಿತನ ವಾಹನ ತರಲು ಹೋದ ವ್ಯಕ್ತಿ ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದ ಧಾರುಣ ಘಟನೆ ತಾಲೂಕಿನ ಕಣ್ಣಂಗಾಲ ಗ್ರಾಮದಲ್ಲಿ ಸಂಭವಿಸಿದೆ.

ತಾಲೂಕಿನ ಚೆಂಬೆಬೆಳ್ಳೂರು ಗ್ರಾಮ ಪಂಚಾಯಿತಿ ದೇವಣಗೇರಿ ಗ್ರಾಮದ ಬಾಳೇರಿ ಪೈಸಾರಿ ನಿವಾಸಿ ಪೂಣಿ ಅವರ ಪುತ್ರ ಕೂಲಿ ಕಾರ್ಮಿಕ ಹೆಚ್.ಬಿ.ವಿನೋದ್ (38) ಅಪಘಾತಕ್ಕೆ ಬಲಿಯಾದ ದುರ್ದೈವಿ.

ಮೃತ ವ್ಯಕ್ತಿ ಹಲವು ವರ್ಷಗಳ ಹಿಂದೆ ಆಟೋ ಚಾಲಕನಾಗಿದ್ದ ಎನ್ನಲಾಗಿದೆ. ನಂತರದಲ್ಲಿ ಚಾಲಕ ವೃತ್ತಿ ಬಿಟ್ಟು ಕೂಲಿ ಕೆಲಸಕ್ಕೆ ತೆರಳುತಿದ್ದ. ವಿನೋದ್‌ಗೆ ವಿವಾಹವಾಗಿ ಒಂದು ಮಗುವಿದೆ ಎಂದು ಕುಟುಂಬದ ಮೂಲಗಳಿಂದ ತಿಳಿದು ಬಂದಿದೆ.

ದೇವಣಗೇರಿ ನಿವಾಸಿಯಾಗಿದ್ದ ಸ್ನೇಹಿತ ದೇವಯ್ಯ ಅನಾರೋಗ್ಯದಿಂದ ಬಳಲುತ್ತಿದ್ದು, ಇವರು ಹೊಂದಿರುವ ಆಟೋ ಒಂಟಿ ಅಂಗಡಿ ಗ್ರಾಮದಲ್ಲಿ ನಿಂತಿತ್ತು. ಸ್ನೇಹಿತ ವಿನೋದ್‌ಗೆ ಆಟೋವನ್ನು ಮನೆಗೆ ತಂದು ಬಿಡಲು ಸೂಚಿಸಿದ್ದರು ಎನ್ನಲಾಗಿದೆ. ಸ್ನೇಹಿತನ ಬಳಿಯಿಂದ ಕೀಲಿ ಪಡೆದು ಕೊಂಡು ಬುಧವಾರ ಒಂಟಿ ಅಂಗಡಿಗೆ ತೆರಳಿದ್ದ ವಿನೋದ್ ಸ್ನೇಹಿತನ ಆಟೋ (ಕೆಎ–12ಎ–7240) ಚಾಲನೆ ಮಾಡಿಕೊಂಡು ಮನೆಯತ್ತ ಬರುತ್ತಿದ್ದ ಸಮಯದಲ್ಲಿ ಕಣ್ಣಂಗಾಲ–ಚೆಂಬೆಬೆಳ್ಳೂರು–ವಿರಾಜಪೇಟೆ ತೆರಳುವ ಮಾರ್ಗದಲ್ಲಿ ಎದುರಿನಿಂದ ವೇಗವಾಗಿ ಬಂದ ಮಾರುತಿ ಶಿಫ್ಟ್ ಕಾರು (ಕೆಎ–12ಎಂಬಿ–1871) ಆಟೋಗೆ ಡಿಕ್ಕಿ ಹೊಡೆದಿದೆ. ಇದರಿಂದ ವಿನೋದ್ ತಲೆ ಭಾಗಕ್ಕೆ ಗಂಭೀರವಾಗಿ ಗಾಯಗಳಾಗಿದ್ದು ಸ್ಥಳದಲ್ಲೆ ಮೃತಪಟ್ಟಿದ್ದಾರೆ.

ದೇವಣಗೇರಿ ಗ್ರಾಮದ ನಿವಾಸಿ ಹೆಚ್.ವಿ. ವಸಂತ ನೀಡಿದ ದೂರಿನ ಮೇರೆಗೆ ವಿರಾಜಪೇಟೆ ಗ್ರಾಮಾಂತರ ಠಾಣೆಯಲ್ಲಿ ಕಾರು ಚಾಲಕ ಕಟ್ಟೆಮಾಡು ನಿವಾಸಿ ಪೌತಿ ಅಪ್ಪಚ್ಚು ಎಂಬುವವರ ಪುತ್ರ ನಂದೇಟಿರತಮನ್ ಪೊನ್ನಣ್ಣ ಅವರ ವಿರುದ್ಧ ಪ್ರಕರಣದಾಖಲಾಗಿದೆ.

ಸೆ.7, ನಾರಾಯಣ ಗುರುಗಳ ಜಯಂತಿ ಆಚರಣೆ

ವಿರಾಜಪೇಟೆ, .21– ಬಿಲ್ಲವ ಸೇವಾ ಸಂಘದ ವತಿಯಿಂದ ಸೆ.7 ರಂದು ಭಾನುವಾರ ಶ್ರೀ ನಾರಾಯಣ ಗುರುಗಳ 171ನೇ ಜಯಂತಿಯನ್ನು ಬಿಟ್ಟಂಗಾಲದ ಶ್ರೀ ನಾರಾಯಣ ಗುರು ಮಂದಿರದಲ್ಲಿ ಆಚರಿಸಲಾಗುವುದು ಎಂದು ವಿರಾಜಪೇಟೆ ತಾಲೂಕು ಬಿಲ್ಲವ ಸೇವಾ ಸಮಾಜದ ಅಧ್ಯಕ್ಷ ಬಿ.ಎಂ.ಗಣೇಶ್ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಾರಾಯಣ ಗುರುಗಳ ಜಯಂತಿ ಅಂಗವಾಗಿ ಬಿಲ್ಲವ ಸೇವಾ ಸಮಾಜದ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಪಡೆದ ಸದಸ್ಯರುಗಳ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. ವಿದ್ಯಾರ್ಥಿಗಳು ಅಂಕಪಟ್ಟಿ, ಆಧಾರ್ ಕಾರ್ಡ್ ಮತ್ತು ಭಾವಚಿತ್ರ ಹಾಗೂ ದೂರವಾಣಿ ಸಂಖ್ಯೆಯನ್ನು ಆ.30ರೊಳಗೆ ಜರ್ನಾರ್ಧನ್ ಪೂಜಾರಿ 9611002998, ಗಣೇಶ್ ಪೂಜಾರಿ 9945526358 ಅನ್ನು ಸಂಪರ್ಕಿಸಬಹುದಾಗಿದೆ.

ವಿರಾಜಪೇಟೆ ಬಿಲ್ಲವ ಸೇವಾ ಸಂಘದ ವತಿಯಿಂದ ಈಗಾಗಲೇ ಮರಣನಿಧಿ ಚಾಲ್ತಿಯಲ್ಲಿದ್ದು ಪ್ರತಿವರ್ಷ ನವೀಕರಣ ಖಡ್ಡಾಯವಾಗಿದ್ದು ಸೆ.7 ಕೊನೆಯ ದಿನವಾಗಿದೆ. ನವೀಕರಿಸದೆ. ಉಳಿದ ಸದಸ್ಯರ ಮರಣನಿಧಿ ರದ್ದುಗೊಳ್ಳಲಿದೆ ಎಂದು ಹೇಳಿದರು. ಗೋಷ್ಠಿಯಲ್ಲಿ ಸದಸ್ಯರಾದ ಬಿ.ಎನ್.ಕಿಶೋರ್, ಬಿ.ಎಲ್.ಹರೀಶ್, ಬಿ.ಎ.ಸುರೇಶ್ ಉಪಸ್ಥಿತರಿದ್ದರು.

ಇಂದು ಫ್ರೆಶರ್ಸ್ ಡೇ

ಕುಶಾಲನಗರ: ಇಲ್ಲಿನ ಬೈಚನಹಳ್ಳಿಯಲ್ಲಿರುವ ಮಹಾತ್ಮಗಾಂಧಿ ಪದವಿ ಕಾಲೇಜಿನಲ್ಲಿ ಆ.22 ರಂದು ಫ್ರೆಶರ್ಸ್ ಡೇ ಏರ್ಪಡಿಸಲಾಗಿದೆ.

ಅಂದು ಬೆಳಗ್ಗೆ 10.30 ಗಂಟೆಗೆ ನಡೆಯುವ ಸಮಾರಂಭವನ್ನು ಸೋಮವಾರಪೇಟೆ ವಿಭಾಗದ ಡಿವೈಎಸ್ಪಿ ಪಿ.ಚಂದ್ರಶೇಖರ್ ಉದ್ಘಾಟಿಸಲಿದ್ದಾರೆ. ಸಂಸ್ಥೆಯ ಅಧ್ಯಕ್ಷ ಎಂ.ಎಂ.ಶಂಭುಲಿಂಗಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಎಂಜಿಎಂ ಪದವಿ ಕಾಲೇಜಿನ ಪ್ರಾಂಶುಪಾಲೆ ಟಿ.ಎ.ಲೀಖಿತಾ, ವಿವೇಕಾನಂದ ಕಾಲೇಜಿನ ಪ್ರಾಂಶುಪಾಲೆ ಬಿ.ಎಸ್.ಕ್ಲಾರ ರೇಷ್ಮಾ ಭಾಗವಹಿಸಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಂಗ್ಲಾ ವಲಸಿಗರು, ರೋಹಿಂಗ್ಯಾಗಳಿಂದ ಕೊಡವ ಲ್ಯಾಂಡ್‌ಗೆ ಅಪಾಯ:ಎನ್.ಯು.ನಾಚಪ್ಪ

ಕೊಡವ ಲ್ಯಾಂಡ್‌ನಲ್ಲಿ ನೆಲೆ ಕಲ್ಪಿಸಲು, ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಲು ಹುನ್ನಾರ ಆರೋಪ


ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ ಸಿದ್ದಾಪುರದಲ್ಲಿ 10ನೇ ಮಾನವ ಸರಪಳಿ ಜನಜಾಗೃತಿ ನಡೆಸಲಾಯಿತು.

ಮಡಿಕೇರಿ,ಆ.21– ಮತ ಬ್ಯಾಂಕ್‌ಗಾಗಿ ಬಾಂಗ್ಲಾ ದೇಶಿಗರು ಹಾಗೂ ರೋಹಿಂಗ್ಯಾಗಳಿಗೆ ಪವಿತ್ರ ಕೊಡವ ಲ್ಯಾಂಡ್‌ನಲ್ಲಿ ನೆಲೆ ಕಲ್ಪಿಸಲು ಮತ್ತು ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಲು ಹುನ್ನಾರ ನಡೆಯುತ್ತಿದೆ ಎಂದು ಕೊಡವ ನ್ಯಾಷನಲ್ ಕೌನ್ಸಿಲ್ ಅಧ್ಯಕ್ಷ ಎನ್.ಯು. ನಾಚಪ್ಪ ಗಂಭೀರ ಆರೋಪ ಮಾಡಿದ್ದಾರೆ.

ರಾಷ್ಟ್ರೀಯ ಜನಗಣತಿಯೊಂದಿಗೆ ಜನಾಂಗವಾರು ಮಾಹಿತಿ ಕಲೆಹಾಕುವ ಸಂದರ್ಭದಲ್ಲಿ ಕೊಡವರಿಗಾಗಿ ಪ್ರತ್ಯೇಕ ಕೋಡ್ ಮತ್ತು ಕಾಲಮ್ ಅನ್ನು ಸೇರಿಸಬೇಕು ಎಂದು ಒತ್ತಾಯಿಸಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ ಸಿದ್ದಾಪುರದಲ್ಲಿ 10ನೇ ಮಾನವ ಸರಪಳಿ ಜನಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ನಾಚಪ್ಪ ಅಕ್ರಮ ಬಾಂಗ್ಲಾ ವಲಸಿಗರು ಹಾಗೂ ರೋಹಿಂಗ್ಯಾಗಳಿಂದ ಕೊಡವ ಲ್ಯಾಂಡ್‌ಗೆ ಅಪಾಯವಿದೆ ಎಂದು ಆತಂಕ ವ್ಯಕ್ತಪಡಿಸಿದರು. ಬಾಂಗ್ಲಾ ದೇಶಿಗರು ಹಾಗೂ ರೋಹಿಂಗ್ಯಗಳನ್ನು ಮತದಾರರ ಪಟ್ಟಿಯಲ್ಲಿ ಸೇರಿಸಿ ಅವರ ಇರುವಿಕೆಯನ್ನು ಸಕ್ರಮಗೊಳಿಸುವ ಮತ್ತು ಕೊಡವ ನೆಲದಲ್ಲಿ ನೆಲೆ ನೀಡುವ ಪ್ರಯತ್ನಗಳು ನಡೆಯುತ್ತಿದೆ. ಕೊಡವ ನೆಲದ ಆಯಕಟ್ಟಿನ ಜಾಗಗಳಲ್ಲಿ ಬುಡಕಟ್ಟು ಮತ್ತು ಅಲ್ಪಸಂಖ್ಯಾತ ಎನ್ನುವ ನಕಲಿ ಹೊದಿಕೆ ಹಾಕಿ ನೂರಾರು ಏಕರೆ ಜಾಗವನ್ನು ಮಂಜೂರು ಮಾಡಲು ಹವಣಿಸಲಾಗುತ್ತಿದೆ ಎಂದು ಅವರು ಹೇಳಿದರು.

ಈ ಪ್ರಯತ್ನ ಜನಸಂಖ್ಯಾ ಪಲ್ಲಟಕ್ಕೆ ಕಾರಣವಾಗಲಿದ್ದು, ಇದು ಆತಂಕಾರಿ ಬೆಳವಣಿಗೆಯಾಗಿದೆ. ಕೊಡವ ನೆಲದ ನಿಜ ವಾರಸುದಾರರಾದ ಕೊಡವರನ್ನು ಮತದಾರರ ಪಟ್ಟಿಯಿಂದ ಕೈಬಿಟ್ಟು ಬಾಂಗ್ಲಾ ಮತ್ತು ಮಾಯನ್ಮಾರ್‌ನ ರಾಖಿನೆ ಪ್ರಾಂತ್ಯದ ರೋಹಿಂಗ್ಯಾಗಳನ್ನು ಮತದಾರರ ಪಟ್ಟಿಯಲ್ಲಿ ಸೇರಿಸುವ ಸಂಚು ನಡೆದಿದೆ ಎಂದು ಆರೋಪಿಸಿದರು.

ಜನಗಣತಿಯ ಸಂದರ್ಭ ಪ್ರತ್ಯೇಕ ಕಾಲಮ್ ಮತ್ತು ಕೋಡ್ ಸೇರಿಸುವುದರಿಂದ ಕೊಡವ ಸಮುದಾಯಕ್ಕೆ ಆಗಬಹುದಾದ ಲಾಭಗಳನ್ನು ಸರ್ವ ಕೊಡವರು ಅರಿತುಕೊಳ್ಳಬೇಕು. ಕೊಡವರ ಸಾಂವಿಧಾನಿಕ ಹಕ್ಕುಗಳಿಗಾಗಿ ಸಿಎನ್‌ಸಿ ನಡೆಸುವ ಶಾಂತಿಯುತ ಹೋರಾಟಕ್ಕೆ ಕೈಜೋಡಿಸಬೇಕೆಂದು ಕರೆ ನೀಡಿದರು.

2026ರ ಮತಕ್ಷೇತ್ರ ಪುನರ್ ವಿಂಗಡಣೆ ನಿರ್ಣಯದ ಸಂದರ್ಭ ಸಂಸತ್ತು ಮತ್ತು ವಿಧಾನಸಭೆಯಲ್ಲಿ ಕೊಡವರಿಗೆ ಪ್ರತ್ಯೇಕ ವಿಶೇಷ ರಾಜಕೀಯ ಸ್ಥಾನಮಾನ ಕಲ್ಪಿಸಬೇಕು. ವಿಶ್ವರಾಷ್ಟ್ರ ಸಂಸ್ಥೆಯ ಅಂತರಾಷ್ಟ್ರೀಯ ಕಾನೂನಿನಡಿ ಕೊಡವ ಸಮುದಾಯವನ್ನು ಸಂರಕ್ಷಿಸಬೇಕು ಸೇರಿದಂತೆ ವಿವಿಧ ಬೇಡಿಕೆಗಳ ಕುರಿತು ಸರ್ಕಾರದ ಗಮನ ಸೆಳೆಯಲಾಗುತ್ತಿದೆ ಎಂದು ತಿಳಿಸಿದರು.

ಕೊಡವ ಸಮುದಾಯದ ಹಕ್ಕೊತ್ತಾಯಗಳಿಗೆ ಮತ್ತು ಜಾಗೃತಿ ಮೂಡಿಸುವುದಕ್ಕಾಗಿ ಮಾನವ ಸರಪಳಿ ಕಾರ್ಯಕ್ರಮ ಶಾಂತಿಯುತವಾಗಿ ಕೊಡವಲ್ಯಾಂಡ್‌ನಾದ್ಯಂತ ನಡೆಯುತ್ತಿದೆ. ಸಿದ್ದಾಪುರ ಭಾಗದ ಕೊಡವ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿರುವುದರಿಂದ ಸಿಎನ್‌ಸಿಯ ಹೋರಾಟದ ಬಲ ಮತ್ತಷ್ಟು ಹೆಚ್ಚಿದೆ ಎಂದು ಎನ್.ಯು.ನಾಚಪ್ಪ ಹೇಳಿದರು.

ಕಾರ್ಯಕ್ರಮದಲ್ಲಿ ಚೋಳಪಂಡ ಜ್ಯೋತಿ ನಾಣಯ್ಯ, ನಂದಿನೆರವಂಡ ರೇಖಾ ನಾಚಪ್ಪ ಕಾವಡಿಚಂಡ ಕಮಲಾ, ಕಮೋಡೋರ್ ಕುಕ್ಕೇರ ಕೇಶು ಉತ್ತಪ್ಪ, ಕುಕ್ಕೇರ ಜಯ ಚಿಣ್ಣಪ್ಪ, ಚೇರಂಡ ಸುಭಾಷ್, ಚೇಂದಂಡ ಚುಮ್ಮಿ ಪೂವಯ್ಯ, ಪಾಲಚಂಡ ಜಾಲಿ ತಮ್ಮಯ್ಯ, ಕಾಡುಮಂಡ ತಮ್ಮಯ್ಯ, ಮೂಕೊಂಡ ದಿಲೀಪ್, ಅಜ್ಜಿನಿಕಂಡ ಸನ್ನಿ, ನೆಲ್ಲಮಕ್ಕಡ ವಿವೇಕ್ ಮತ್ತಿತರರು ಪಾಲ್ಗೊಂಡಿದ್ದರು.

ಧರ್ಮಸ್ಥಳ, ಧರ್ಮದರ್ಶಿ ವಿರುದ್ಧ ಅಪಪ್ರಚಾರ ಖಂಡಿಸಿ

ಕುಶಾಲನಗರದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ


ಕುಶಾಲನಗರದಲ್ಲಿ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಕುಶಾಲನಗರ: ಶ್ರೀ ಕ್ಷೇತ್ರ ಧರ್ಮಸ್ಥಳದ ಶ್ರೀ ಮಂಜುನಾಥಸ್ವಾಮಿ ದೇವಾಲಯ ಹಾಗೂ ಧರ್ಮದರ್ಶಿ ವೀರೇಂದ್ರ ಹೆಗ್ಗಡೆ ಕುಟುಂಬಕ್ಕೆ ಕಳಂಕ ತರಲು ಒಳಸಂಚು ನಡೆಸುತ್ತಿರುವವರ ಬಗ್ಗೆ ಸೂಕ್ತ ನಡೆಸಿ ಕಾನೂನು ಕ್ರಮಕೈಗೊಳ್ಳಬೇಕೆಂದು ಒತ್ತಾಯಿಸಿ, ಕೊಡಗು ಜಿಲ್ಲಾ ಜನಜಾಗೃತಿ ವೇದಿಕೆ ಮತ್ತು ಶ್ರೀ ಧರ್ಮಸ್ಥಳ ಭಕ್ತಾಭಿಮಾನಿ ವೇದಿಕೆ ಹಾಗೂ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಕುಶಾಲನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ಬೈಚನಹಳ್ಳಿ ಮಾರಮ್ಮ ದೇವಸ್ಥಾನ ಬಳಿಯಿಂದ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದ ಭಕ್ತ ವೃಂದ ವಿವಿಧ ನಾಮಫಲಕಗಳನ್ನು ಹಿಡಿದು ಘೋಷಣೆಗಳನ್ನು ಕೂಗುತ್ತಾ ಮೆರವಣಿಗೆಯಲ್ಲಿ ಸಾಗಿದರು. ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಕೆಲಕಾಲ ಮಾನವ ಸರಪಳಿ ರಚಿಸಿ, ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಪಾಲ್ಗೊಂಡ ಶನಿವಾರಸಂತೆ ಬಳಿಯ ಮುಳ್ಳೂರು ಮಠದ ಶ್ರೀ ಬಸವಲಿಂಗ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ಅನಾದಿ ಕಾಲದಿಂದಲೂ ಹಿಂದೂ ಧಾರ್ಮಿಕ ಕೇಂದ್ರ, ಮಠ ಮಾನ್ಯಗಳ ಮೇಲೆ ನಿರಂತರ ದಾಳಿ ನಡೆಯುತ್ತಿದೆ. ಇದರಿಂದ ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಪಿತೂರಿ ನಡೆಯುತ್ತಿದೆ. ಹಿಂದಿನಿಂದಲೂ ಧಾರ್ಮಿಕ ಶ್ರದ್ಧಾಕೇಂದ್ರಗಳ ಮೇಲೆ ಅಪಪ್ರಚಾರ ಮಾಡಿದರೂ ಕೂಡ ಭಕ್ತರಿಗೆ ಕ್ಷೇತ್ರದ ಬಗ್ಗೆ ಶ್ರದ್ಧೆ ಕಡಿಮೆಯಾಗುವುದಿಲ್ಲ ಎಂಬುದು ತಿಳಿಯಬೇಕು. ಧಾರ್ಮಿಕ ಕ್ಷೇತ್ರಗಳ ಮೇಲೆ ವೈಚಾರಿಕತೆ ಹೆಸರಿನಲ್ಲಿ ದಾಳಿ ನಡೆಸಲಾಗುತ್ತಿದೆ. ಯಾವುದೇ ರೀತಿಯ ಕುತಂತ್ರ ನಡೆಸಿದರೂ ಹಿಂದೂ ಧರ್ಮ ಅಳಿಸಲು ಸಾಧ್ಯವಿಲ್ಲ. ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಮಾಡುತ್ತಿರುವ ಯೂಟ್ಯೂಬರ್‌ಗಳಿಗೆ ಕ್ಷೇತ್ರದ ಮಂಜುನಾಥ ಹಾಗೂ ಅಣ್ಣಪ್ಪ ಸ್ವಾಮಿ ತಕ್ಕ ಶಿಕ್ಷೆ ನೀಡಿ ಅವರನ್ನು ನಾಶ ಮಾಡುತ್ತದೆ ಎಂದು ಎಚ್ಚರಿಕೆ ನೀಡಿದರು. ಕೊಡಗು ಜನ ಜಾಗೃತಿ ವೇದಿಕೆ ಸದಸ್ಯ ನಿಸರ್ಗ ಸ್ವಾಮಿ, ಕೊಡಗು ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಪುಂಡರೀಕಾಕ್ಷ ಮಾತನಾಡಿದರು.

ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತದಿಂದ ರಥಬೀದಿ ಮೂಲಕ ಮೆರವಣಿಗೆಯಲ್ಲಿ ತಹಶೀಲ್ದಾರ್ ಕಚೇರಿಗೆ ತೆರಳಿದ ಪ್ರತಿಭಟನಾಕಾರರು ಕಿಡಿಗೇಡಿಗಳ ವಿರುದ್ದ ಸೂಕ್ತ ಕ್ರಮಕ್ಕೆ ಆಗ್ರಹಿಸಿ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಕೊಡಗು ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಎ.ಟಿ.ರಂಗಸ್ವಾಮಿ, ವೇದಿಕೆ ಸದಸ್ಯರಾದ ಎ.ಎಸ್.ಚಂದ್ರಶೇಖರ್ ಆವರ್ತಿ, ಎಚ್.ಎಂ.ಚಂದ್ರು ಎಸ್.ಕೆಸತೀಶ್, ಕೆ.ಎಸ್.ರಾಜಶೇಖರ್, ವಿವಿಧ ಸಂಘಟನೆಗಳ ಮುಖಂಡರು ಪಾಲ್ಗೊಂಡಿದ್ದರು.

ಪುನೀತ್ ಕೆರೆಹಳ್ಳಿ ಬಂಧನ, ಬಿಡುಗಡೆ



ಕುಶಾಲನಗರದಲ್ಲಿ ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸುತ್ತಿದ್ದ ಸ್ಥಳಕ್ಕೆ ರಾಷ್ಟ್ರ ರಕ್ಷಣಾ ಪಡೆ ಸಂಸ್ಥಾಪಕ ಪುನೀತ್ ಕೆರೆಹಳ್ಳಿ ದಿಢೀರ್ ಭೇಟಿ ನೀಡಿದರು. ಈ ವೇಳೆ ಗಣಪತಿ ದೇವಾಲಯ ಆವರಣದಲ್ಲಿ ಹಿಂದೂ ಸಂಘಟನೆಗಳ ಕಾರ್ಯಕರ್ತರು ಹಾಗೂ ಪ್ರತಿಭಟನಾಕಾರರು ಜೈ ಶ್ರೀರಾಮ್ ಘೋಷಣೆ ಕೂಗಿದರು. ಪೂರ್ವಾನುಮತಿ ಪಡೆಯದೇ ಪ್ರತಿಭಟನೆಯಲ್ಲಿ ಪಾಲ್ಗೊಂಡ ಪುನೀತ್ ಕೆರೆಹಳ್ಳಿಯನ್ನು ವೇದಿಕೆಯಿಂದ ಕೆಳಗಿಸಲು ಪೊಲೀಸರು ಮುಂದಾದರು.

ಈ ಸಂದರ್ಭದಲ್ಲಿ ಪೊಲೀಸರು ಮತ್ತು ಪ್ರತಿಭಟನಾಕಾರರ ನಡುವೆ ಮಾತಿನ ಚಕಮಕಿ ನಡೆಯಿತು. ಅನುಮತಿ ಪಡೆಯದೆ ಪುನೀತ್ ಪ್ರತಿಭಟನೆಯಲ್ಲಿ ಭಾಗಿಯಾಗಿರುವುದು ಹಾಗೂ ಬಹಿರಂಗ ಸಭೆಯಲ್ಲಿ ಮಾತನಾಡುವುದನ್ನು ನಿರ್ಬಂಧಿಸಲಾಗಿದೆ ಎಂದು ಮಾಹಿತಿ ನೀಡಿ ಪೊಲೀಸರು ಪುನೀತ್ ಕೆರೆಹಳ್ಳಿಯನ್ನು ವಶಕ್ಕೆ ಪಡೆದರು. ಬಳಿಕ ಕೊಡಗಿನ ಗಡಿಯಾಚೆ ಬೈಲಕುಪ್ಪೆ ಪೊಲೀಸ್ ಠಾಣೆಗೆ ಪುನೀತ್ ಕೆರೆಹಳ್ಳಿಯನ್ನು ಹಸ್ತಾಂತರಿಸಿದರು.

ಅರಣ್ಯ ಇಲಾಖೆಯ ಜನವಿರೋಧಿ ನೀತಿಗಳನ್ನು ಖಂಡಿಸಿ ರೈತರ ಪ್ರತಿಭಟನೆ


ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಶೈಲೇಂದ್ರ ಮಾತನಾಡಿದರು.

ಕೊಳ್ಳೇಗಾಲ, ಆ.21– ಕರ್ನಾಟಕ ರಾಜ್ಯ ರೈತ ಸಂಘದ ಜಾಗೇರಿ ಘಟಕದ ನೇತೃತ್ವದಲ್ಲಿ, ಅರಣ್ಯ ಇಲಾಖೆಯ ಜನವಿರೋಧಿ ನೀತಿಗಳನ್ನು ಖಂಡಿಸಿ ಮತ್ತು ನಾಗರಿಕರ ಮೂಲಭೂತ ಹಕ್ಕುಗಳ ಕಸಿದಿರುವ ಬಗ್ಗೆ ತೀವ್ರ ವಿರೋಧ ವ್ಯಕ್ತಪಡಿಸಿ ಸತ್ತೇಗಾಲ ಗ್ರಾಮ ಪಂಚಾಯಿತಿ ಮುಂದೆ ಬೃಹತ್ ಪ್ರತಿಭಟನೆ ನಡೆಯಿತು.

ಸತ್ತೇಗಾಲ ಹ್ಯಾಂಡ್ ಪೋಸ್ಟ್‌ನಲ್ಲಿ ಜಮಾಯಿಸಿದ್ದ ನೂರಾರು ರೈತರು, ಧಿಕ್ಕಾರದ ಘೋಷಣೆಗಳೊಂದಿಗೆ ಗ್ರಾಮ ಪಂಚಾಯಿತಿಯವರೆಗೆ ಪಾದಯಾತ್ರೆ ನಡೆಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ರೈತ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಶೈಲೇಂದ್ರ ಮಾತನಾಡಿ, ಸರ್ಕಾರದ ಅರಣ್ಯ ನೀತಿ ಜನವಿರೋಧಿಯಾಗಿದ್ದು, ಅದು ಗ್ರಾಮೀಣ ಜನತೆ ಮತ್ತು ರೈತ ಸಮುದಾಯದ ಬದುಕಿಗೆ ಅಪಾಯ ಉಂಟು ಮಾಡುತ್ತಿದೆ ಎಂದು ಕಿಡಿಕಾರಿದರು

ಸ್ಥಳಕ್ಕೆ ತಹಶಿಲ್ದಾರ್ ಬಸವರಾಜು, ತಾ.ಪಂ ಇಒ ಗುರುಶಾಂತಪ್ಪ ಬೆಳ್ಳುಂಡಗಿ, ಎಸಿಎಫ್ ಶಿವರಾಮು, ಆರ್.ಎಫ್.ಒ ರವಿಕುಮಾರ್ ಪುರಾಣಿಕಮಠ ಆಗಮಿಸಿ ಪರಿಸ್ಥಿತಿಯನ್ನು ಸಮಾಲೋಚಿಸಿದರು.

ರೈತ ಮುಖಂಡ ಬಸವರಾಜು, ಉಪಾಧ್ಯಕ್ಷ ಚಾರ್ಲಿ, ಲಿಂಗರಾಜು, ವಸಂತಕುಮಾರ್, ಸ್ಥಳೀಯ ಕಚೇರಿಯ ಮಹದೇವ, ಲಾರೆನ್ಸ್, ಮಾರ್ಟಳ್ಳಿಯ ಅರಪುದರಾಜ್, ಮಹಿಳಾ ಜಿಲ್ಲಾ ಅಧ್ಯಕ್ಷೆ ಮಾದಮ್ಮ, ಜಾನ್ ಕೆನಾಡಿ, ಪೆರಿಯಾನಾಯಗಂ, ಭಾಸ್ಕರ್,ಜಾಗೇರಿ ಸದಸ್ಯ ಮುರಗೇಶ್, ಅರೋಗ್ಯ, ಭೈರ, ಕೆಂಪರಾಜು, ವಿಜಿ, ಶಿವಮಲ್ಲಿ, ಶಾಂತಮೇರಿ, ವಸಂತಮೇರಿ ಮುಂತಾದವರು ಪ್ರತಿಭಟನೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು.

ಎಫ್‌ಆರ್‌ಎಸ್ ನಿಲ್ಲಿಸುವಂತೆ ಒತ್ತಾಯಿಸಿ ಸಿಡಿಪಿಓಗೆ ಮನವಿ

ಕಪ್ಪುಪಟ್ಟಿ ಧರಿಸಿ ಮಧ್ಯಾಹ್ನದವರೆಗೆ ಕರ್ತವ್ಯ


ಮುಖಚರ್ಯೆ ಗುರುತಿಸುವ ಕ್ರಮ (ಎಫ್‌ಆರ್‌ಎಸ್) ನಿಲ್ಲಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿಐಟಿಯು) ತಾಲೂಕು ಸಮಿತಿ ಪದಾಧಿಕಾರಿಗಳು ಚಾ.ನಗರದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗೆ ಮನವಿ ಸಲ್ಲಿಸಿದರು.

ಚಾಮರಾಜನಗರ, ಆ.21– ಮುಖಚರ್ಯೆ ಗುರುತಿಸುವ ಕ್ರಮ(ಎಫ್‌ಆರ್‌ಎಸ್) ನಿಲ್ಲಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ(ಸಿಐಟಿಯು) ತಾಲೂಕು ಸಮಿತಿ ಪದಾಧಿಕಾರಿಗಳು, ಸದಸ್ಯರು ಕಪ್ಪುಪಟ್ಟಿ ಧರಿಸಿ ಮಧ್ಯಾಹ್ನದವರೆಗೆ ತರಗತಿ ನಡೆಸಿ ನಂತರ ನಗರದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ನಾಗೇಶ್ ಅವರಿಗೆ ಮನವಿ ಸಲ್ಲಿಸಿದರು.

ನಗರದ ಜಿಡಬ್ಲ್ಯೂಡಿ ಕಾಲೋನಿಯಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯ ಮುಂಭಾಗದಲ್ಲಿ ಸಂಘದ ಅಧ್ಯಕ್ಷೆ ಎ.ನಾಗಮಣಿ ಅವರ ನೇತೃತ್ವದಲ್ಲಿ ಜಮಾಯಿಸಿದ ಪದಾಧಿಕಾರಿಗಳು, ಸದಸ್ಯರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಭಾರತದಲ್ಲಿ ಮಾನವ ಅಭಿವೃದ್ಧಿ ಸೂಚ್ಯಾಂಕಕ್ಕಿರುವ ಏಕೈಕ ಯೋಜನೆ ಐಸಿಡಿಎಸ್ ಮಾತ್ರ ಈ ಯೋಜನೆಗೆ ಇಂದು 50 ವರ್ಷಗಳಾಗುತ್ತಾ ಬರುತ್ತಿದೆ. ಈ ಯೋಜನೆಯನ್ನು ಸರಳೀಕರಿಸಿ ಫಲಾನುಭವಿಗಳನ್ನು ಆಕರ್ಷಿಸಲು ಸರ್ಕಾರಗಳು ಕ್ರಮಗಳನ್ನು ರೂಪಿಸಬೇಕಿತ್ತು. ಆದರೆ ಅದರ ಬದಲಾಗಿ ಸಂಕೀರ್ಣಗೊಳಿಸಲಾಗುತ್ತಿದೆ. ಯಾವುದೇ ಸೌಲಭ್ಯಗಳನ್ನು ಕೊಡದೇ ಮುಖಚರ್ಯೆ ಗುರ್ತಿಸುವ ಕ್ರಮ(ಎಫ್‌ಆರ್‌ಎಸ್)ನ್ನು ಅಳವಡಿಸಿದ್ದರಿಂದ ಕ್ಷೇತ್ರಮಟ್ಟದಲ್ಲಿ ಹಲವಾರು ತೊಂದರೆಗಳನ್ನು ಅನುಭವಿಸುವಂತಾಗಿದೆ.

2013 ರ ಆಹಾರ ಭದ್ರತಾ ಕಾಯ್ದೆಯ ಆಶಯವೇನೆಂದರೆ ಯಾವುದೇ ಫಲಾನುಭವಿ ಹಸಿವಿನಿಂದ ನರಳಬಾರದು ಮತ್ತು ಸುಪ್ರಿಂ ಕೋರ್ಟ್ ನಿರ್ದೇಶನದ ಆಶಯವೇನೆಂದರೆ, ಆಧಾರ ಕಾರ್ಡ್ ಇಲ್ಲ ಎಂಬ ನೆಪದಲ್ಲಿ ಸಬ್ಸಿಡಿ ಹಾಗೂ ಉಚಿತವಾಗಿ ಸಿಗುವ ಸೌಲಭ್ಯಗಳಿಂದ ಫಲಾನುಭವಿಗಳಿಗೆ ವಂಚನೆಯಾಗಬಾರದು. ಈ ಆಶಯಗಳನ್ನು ಸಂರಕ್ಷಣೆ ಮಾಡಬೇಕಾದ ಸರ್ಕಾರಗಳು ಇಂದು ಎಫ್‌ಆರ್‌ಎಸ್ ಕಡ್ಡಾಯಗೊಳಿಸುವ ಮುಖಾಂತರ ಫಲಾನುಭವಿಗಳ ಹಕ್ಕನ್ನು ನಿರಾಕರಿಸುತ್ತಿವೆ. ಎಫ್‌ಆರ್‌ಎಸ್ ಮುಖಾಂತರ ಸಂಗ್ರಹಿಸುವ ಫಲಾನುಭವಿಗಳ ವೈಯಕ್ತಿಕ ಮಾಹಿತಿ ಸೋರಿಕೆಯಾಗುತ್ತದೆ. ವಿಪರೀತ ಸೈಬರ್ ವಂಚನೆಗಳು ಹೆಚ್ಚಾಗುತ್ತಿವೆ.

ನಮ್ಮ ಮನವಿಗೆ ಸ್ಪಂದಿಸದಿದ್ದರೆ ನವೆಂಬರ್ ಮತ್ತು ಡಿಸೆಂಬರ್‌ನಲ್ಲಿ ಕೇಂದ್ರ ಸಚಿವರ ಮನೆಯ ಮುಂದೆ ಅನಿರ್ದಿಷ್ಟಾವಧಿಯ ಹೋರಾಟ ರೂಪಿಸಲಾಗುವುದು ಎಂದು ಮನವಿಯಲ್ಲಿ ಸಂಘದ ಅಧ್ಯಕ್ಷೆ ಎ.ನಾಗಮಣಿ ಎಚ್ಚರಿಸಿದ್ದಾರೆ. ಸಂಘದ ಕಾರ್ಯದರ್ಶಿ ಶಾಹಿದಾಬಾನು, ಖಜಾಂಚಿ ಎನ್.ಎಸ್.ಗುರುಲಿಂಗಮ್ಮ ಉಪಾಧ್ಯಕ್ಷೆ, ಚಿಕ್ಕತಾಯಮ್ಮ, ನಾಗಮ್ಮ, ಶಹನಾಜ್ ಬೇಗಂ, ರಾಣಿ, ನಂದಿನಿ, ಪುಷ್ಪ ಹಾಜರಿದ್ದರು.

ಒಳ ಮೀಸಲಾತಿ ಸ್ವಾಗತಿಸಿ ಚಾ.ನಗರದಲ್ಲಿ ಸಂಭ್ರಮಾಚರಣೆ


ಒಳ ಮೀಸಲಾತಿ ಹಂಚಿಕೆ ಸ್ವಾಗತಿಸಿ ಸಿಹಿ ಹಂಚಿ ಸಂಭ್ರಮಾಚರಣೆ ಮಾಡುತ್ತಿರುವುದು.

ಚಾಮರಾಜನಗರ: ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ದಲಿತ ಸಮುದಾಯಕ್ಕೆ ಒಳ ಮೀಸಲಾತಿಯಲ್ಲಿ ಎಡಗೈ, ಬಲಗೈ ಸಮುದಾಯಕ್ಕೆ ತಲಾ ಶೇ.6ರಷ್ಟು ಘೋಷಣೆ ಮಾಡಿದ ಹಿನ್ನೆಲೆಯಲ್ಲಿ ಎರಡೂ ಸಮುದಾಯದ ಮುಖಂಡರು ನಗರದಲ್ಲಿ ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.

ನಗರದಲ್ಲಿ ದಲಿತ ಮುಖಂಡರಾದ ವೆಂಕಟರಮಣಸ್ವಾಮಿ ಪಾಪು, ಜಿ.ಪಂ ಮಾಜಿ ಉಪಾಧ್ಯಕ್ಷ ಅಯ್ಯನಪುರ ಶಿವಕುಮಾರ್ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಮುಖಂಡರು ರಾಜ್ಯ ಸರ್ಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಜೈಕಾರ ಕೂಗಿ ಸಿಹಿ ಹಂಚಿ ಸಂಭ್ರಮಿಸಿದರು.

ಎಡಗೈ, ಬಲಗೈ ಸಮುದಾಯ ಬಾಯಿ ಬಾಯಿ: ಒಳಮೀಸಲಾತಿಗಾಗಿ ಕಳೆದ 30 ವರ್ಷಗಳಿಂದ ಹೋರಾಟ ಮಾಡಿಕೊಂಡು ಬರಲಾಗಿದ್ದು. ಬಲಗೈ–ಎಡಗೈ ಸಮುದಾಯಗಳಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಎರಡೂ ಸಮುದಾಯಗಳು ತಲಾತಲಾಂತರದಿಂದ ಅಣ್ಣ ತಮ್ಮಂದಿರ ರೀತಿಯಲ್ಲಿ ಬಂದಿದ್ದೇವೆ. ನ್ಯಾ. ನಾಗಮೋಹನ್‌ದಾಸ್ ವರದಿಯಿಂದ ಏನಾಗಿಬಿಡುತ್ತದೋ ಎಂಬ ಆತಂಕ ಇತ್ತು. ಸಿದ್ಧರಾಮಯ್ಯನವರ ಸರ್ಕಾರ ಎರಡೂ ಸಮುದಾಯಗಳಿಗೆ ತಲಾ ಶೇ.6ರಷ್ಟು ಮೀಸಲಾತಿ ಕೊಟ್ಟು ಸಮಾನತೆ ಕಲ್ಪಿಸಿಕೊಟ್ಟಿದೆ. ಎಡಗೈ, ಬಲಗೈ ಸಮುದಾಯ ಬಾಯಿ ಬಾಯಿ ಆಗಿದ್ದೇವೆ. ಈ ಮೂಲಕ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಜಿ.ಪಂ. ಮಾಜಿ ಉಪಾಧ್ಯಕ್ಷ ಅಯ್ಯನಪುರ ಶಿವಕುಮಾರ್ ಮಾತನಾಡಿ, ಒಳ ಮೀಸಲಾತಿ ಸಮೀಕ್ಷಾ ವರದಿ ಸರ್ಕಾರಕ್ಕೆ ಸಲ್ಲಿಕೆಯಾದ ನಂತರ ಹಂಚಿಕೆಯಲ್ಲಿ ಎಡಗೈ, ಬಲಗೈ ಕಿತ್ತಾಡುತ್ತವೆ. ಅದರ ಉಪಯೋಗವನ್ನು ನಾವು ಪಡೆಯಬೇಕೆಂದು ಕೆಲವು ರಾಜಕೀಯ ಇಚ್ಛಾಶಕ್ತಿಗಳ ಚಿಂತನೆಯಾಗಿತ್ತು. ಆದರೆ ಸಿದ್ದರಾಮಯ್ಯನವರು ವಿಶೇಷ ಸಂಪುಟ ಸಭೆಯಲ್ಲಿ ಉತ್ತಮವಾದ ತೀರ್ಮಾನಕೈಗೊಂಡು ಎರಡೂ ಸಮುದಾಯಗಳಿಗೆ ನ್ಯಾಯ ಕಲ್ಪಿಸಿಕೊಟ್ಟಿದ್ದಾರೆ. ಎಡಗೈ, ಬಲಗೈ ಸಮುದಾಯದ ಸಚಿವರೆಲ್ಲರೂ. ಒಗ್ಗೂಡಿ ಒಳ್ಳೆಯ ತೀರ್ಮಾನ ತೆಗೆದುಕೊಂಡಿದ್ದಾರೆ. ಎಡಗೈ, ಬಲಗೈ ಸಮುದಾಯಗಳಿಗೆ ತಲಾ ಶೇ.6ರಷ್ಟು, ಇತರೆ ಸಮುದಾಯಗಳಿಗೆ ಶೇ.5ರಷ್ಟು ಮೀಸಲಾತಿ ಅವಕಾಶ ಕಲ್ಪಿಸಿಕೊಟ್ಟಿದ್ದಾರೆ. ಎಡಗೈ, ಬಲಗೈ ಸಮುದಾಯ ಒಂದು ದೇಹವಾಗಿದ್ದು, ಒಂದೇ ದೇಹ ಎರಡು ಅಂಗಗಳು ಮುಂದಿನ ದಿನಗಳಲ್ಲಿ ಎರಡು ಸಮುದಾಯಗಳು ಒಟ್ಟಾಗಿಯೇ ಇರುತ್ತೇವೆ. ಎಡಗೈ, ಅಥವಾ ಬಲಗೈ ಸಮುದಾಯಕ್ಕಾಗಲಿ ಅನ್ಯಾಯವಾದರೆ ಹೋರಾಟ ಮಾಡುತ್ತೇವೆ ಎಂದರು.

ವಕೀಲರಾದ ದಲಿತರಾಜ್, ಮುಖಂಡರಾದ ಮೋಹನ್ ನಗು, ನಲ್ಲೂರು ಮಹದೇವಸ್ವಾಮಿ, ಜ್ಯೋತಿಗೌಡನಪುರ ನಾಗರಾಜು, ನಾಗೇಶ್, ಶಿವಣ್ಣ ರಂಗಸ್ವಾಮಿ ಭಾಗವಹಿಸಿದ್ದರು.

ಅಭಿವೃದ್ಧಿ, ಆಡಳಿತ ಸುಧಾರಣೆಗೆ ಅರಸು ಕೊಡುಗೆ ಅಪಾರ


ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಪಿ.ಮರಿಸ್ವಾಮಿ ಉದ್ಘಾಟಿಸಿದರು.

ಚಾಮರಾಜನಗರ, ಆ.21– ಹಿಂದುಳಿದ ವರ್ಗಗಳ ನೇತಾರರಾಗಿದ್ದ ಡಿ.ದೇವರಾಜ ಅರಸು ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಹಲವಾರು ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ರಾಜ್ಯದ ಅಭಿವೃದ್ಧಿಗೆ, ಆಡಳಿತ ಸುಧಾರಣೆಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಕಾವೇರಿ ಜಲಾನಯನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಿ.ಮರಿಸ್ವಾಮಿ ತಿಳಿಸಿದರು.

ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಸಾಮಾಜಿಕ ಕ್ರಾಂತಿಯ ಹರಿಕಾರ, ದೀನದಲಿತರ ಧೀಮಂತ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಈ ನಾಡು ಕಂಡ ಪ್ರಬುದ್ಧ ರಾಜಕಾರಣಿ ಡಿ.ದೇವರಾಜ ಅರಸು ಎಂದರೆ ತಪ್ಪಾಗಲಾರದು. ಮೈಸೂರು ಜಿಲ್ಲೆಯ ಹುಣಸೂರು ತಾಲೂಕಿನ ಕಲ್ಲಹಳ್ಳಿಯಲ್ಲಿ 1915ರಲ್ಲಿ ಜನಿಸಿದ ಅರಸು ರೈತಾಪಿ ವರ್ಗದವರು. ಗ್ರಾಮೀಣ ಜನ–ಜೀವನವನ್ನು ಹತ್ತಿರದಿಂದ ಬಲ್ಲವರಾಗಿದ್ದರು. ಹಳ್ಳಿಗಳಲ್ಲಿ ಯಾವುದೇ ವಿವಾದಗಳು, ನ್ಯಾಯಪಂಚಾಯ್ತಿಗಳನ್ನು ಸೌಹಾರ್ದಯುತವಾಗಿ ಬಗೆಹರಿಸುವ ಮೂಲಕ ಉತ್ತಮ ನಾಯಕತ್ವಗುಣ ಹೊಂದಿದ್ದರು ಎಂದರು.

ಸಾಮಾಜಿಕ ಕಾಳಜಿಯ ದೂರದೃಷ್ಟಿ ಹೊಂದಿದ್ದ ಅರಸು ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ರಾಜ್ಯದ ಅಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡಿ ಇಡೀ ದೇಶದ ಗಮನ ಸೆಳೆದರು. ಮೈಸೂರು ರಾಜ್ಯಕ್ಕೆ ಕರ್ನಾಟಕವೆಂದು ಮರುನಾಮಕರಣ, ಶೋಷಿತರನ್ನು ಮುಖ್ಯವಾಹಿನಿಗೆ ತರಲು ಜೀತಪದ್ಧತಿ ನಿಷೇಧ, ಭೂಸುಧಾರಣೆಗಾಗಿ ಉಳುವವನೇ ಭೂಮಿ ಒಡೆಯ ಸೇರಿದಂತೆ ಅನೇಕ ಯೋಜನೆಗಳನ್ನು ಜಾರಿಗೊಳಿಸಿದರು. ಎಲ್.ಜಿ. ಹಾವನೂರ ಅಧ್ಯಕ್ಷತೆಯಲ್ಲಿ ಹಿಂದುಳಿದ ವರ್ಗಗಳ ಆಯೋಗ ರಚಿಸಿದ ಅರಸು ಅವರು ಹಿಂದುಳಿದವರಿಗೆ ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಕಲ್ಪಿಸಿ ಎಲ್ಲರಿಗೂ ಸಾಮಾಜಿಕ ನ್ಯಾಯ ಒದಗಿಸಿದರು ಎಂದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹಮದ್ ಅಸ್ಗರ್ ಮುನ್ನಾ ಅವರು ಮಾತನಾಡಿದರು.

ಮುಖ್ಯಭಾಷಣ ಮಾಡಿದ ಹಿರಿಯ ಸಾಹಿತಿ ಹಾಗೂ ಸಂಸ್ಕೃತಿ ಚಿಂತಕರಾದ ಪ್ರೊ ಕಾಳೇಗೌಡ ನಾಗವಾರ ಮಾತನಾಡಿ, ಕರ್ನಾಟಕದಲ್ಲಿ ಆದರ್ಶ ಸಮಾಜ ಕಟ್ಟಿ ಸರ್ವ ಜನಾಂಗದ ಶಾಂತಿಯ ತೋಟ ಮಾಡಲು ದೇವರಾಜ ಅರಸು ಅವರ ಶ್ರಮ ಶ್ಲಾಘನೀಯವಾದದ್ದು. ಅವರ ಸಂಪರ್ಕಕ್ಕೆ ಬಂದ ರಾಜಕಾರಣಿಗಳು ಮಾನವೀಯ ಕಾಳಜಿಯನ್ನು ಮೈಗೂಡಿಸಿಕೊಂಡಿದ್ದಾರೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಎಚ್.ವಿ. ಚಂದ್ರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಡೀ ದೇಶದಲ್ಲಿಯೇ ಮಾದರಿ ಯೋಜನೆ, ಕಾರ್ಯಕ್ರಮಗಳನ್ನು ರೂಪಿಸಿ ಯಶಸ್ವಿಗೊಳಿಸಿದ ರಾಜಕಾರಣಿ ಎಂದರೆ, ಅದು ದೇವರಾಜ ಅರಸು ಮಾತ್ರ ಹಿಂದುಳಿದವರ, ದಮನಿತರ ಆಶಾಕಿರಣವಾಗಿದ್ದ ಅರಸು ಅವರು ರೈತಾಪಿ ಜನರ ಅನುಕೂಲಕ್ಕಾಗಿ ಪ್ರಮುಖ ನೀರಾವರಿ ಯೋಜನೆಗಳಿಗೆ ಆದ್ಯತೆ ನೀಡಿದರು. ಶಿಕ್ಷಣ, ಆರೋಗ್ಯ, ಉದ್ಯೋಗವಕಾಶಗಳಿಗೆ ಒತ್ತು ನೀಡಿದ ಅರಸು ಜನಮಾನಸದಲ್ಲಿ ಇಂದಿಗೂ ಚಿರಸ್ಮರಣೀಯರಾಗಿದ್ದಾರೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಸದ್ಭಾವನಾ ದಿನದ ಅಂಗವಾಗಿ ಪ್ರತಿಜ್ಞಾವಿಧಿ ಬೋಧಿಸಿದರು. ಇದೇ ವೇಳೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಎಸ್. ಶಶಿಧರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಎಸ್.ವಿಶ್ವನಾಥ್, ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ನಗರದ ಶ್ರೀ ಚಾಮರಾಜೇಶ್ವರ ದೇವಾಲಯದಿಂದ ಜಿಲ್ಲಾಡಳಿತ ಭವನದವರೆಗೆ ಬೆಳ್ಳಿರಥದಲ್ಲಿ ಡಿ. ದೇವರಾಜ ಅರಸು ಅವರ ಭಾವಚಿತ್ರ ಮೆರವಣಿಗೆ ನಡೆಯಿತು.

■ ಸತ್ಯಮೂರ್ತಿ ತೋಳಹುಣಸೆ

ಸೆ. 12 ರಂದು

S/O ಮುತ್ತಣ್ಣ ತೆರೆಗೆ



ಸು ಫ್ರಮ್ ಸೋ' ಭರ್ಜರಿ ಯಶಸ್ಸಿನ ನಂತರ ಕನ್ನಡ ಚಿತ್ರಗಳ ಬೇಡಿಕೆ ಹೆಚ್ಚಾಗಿದೆ. ಪುರಾತನ ಫಿಲಂಸ್ ನಿರ್ಮಾಣದ ಶ್ರೀಕಾಂತ್ ಹುಣಸೂರು ನಿರ್ದೇಶನದ ಡೈನಾಮಿಕ್ ಹೀರೊ ದೇವರಾಜ್ ಅವರ ದ್ವಿತೀಯ ಪುತ್ರ ಪ್ರಣಮ್ ದೇವರಾಜ್ ನಾಯಕನಾಗಿ ನಟಿಸಿರುವ 'S/O ಮುತ್ತಣ್ಣ' ಚಿತ್ರ ಕೂಡ ಅಪ್ಪ – ಮಗನ ಬಾಂಧವ್ಯವನ್ನು ಬಣ್ಣಿಸುವ ಕೌಟುಂಬಿಕ ಕಥಾಹಂದರ ಹೊಂದಿರುವ ಚಿತ್ರವಾಗಿದ್ದು, ಈ ಚಿತ್ರದ ಕಥೆಗೆ ಮಲಯಾಳಂನಲ್ಲೂ ಬೇಡಿಕೆ ಹೆಚ್ಚಾಗಿದೆ. ಹಾಗಾಗಿ ಆ.22 ರಂದು ಬಿಡುಗಡೆಯಾಗಬೇಕಿದ್ದ 'S/O ಮುತ್ತಣ್ಣ' ಚಿತ್ರವನ್ನು ಸೆ.12 ರಂದು ಬಿಡುಗಡೆ ಮಾಡಲು ಚಿತ್ರತಂಡ ನಿರ್ಧರಿಸಿದೆ. ಕನ್ನಡ, ತೆಲುಗು, ಮಲಯಾಳಂನಲ್ಲಿ ಏಕಕಾಲಕ್ಕೆ ಚಿತ್ರ ಅದ್ದೂರಿಯಾಗಿ ಬಿಡುಗಡೆಯಾಗಲಿದೆ.

ಈಗಾಗಲೇ ಟೀಸರ್ ಹಾಗೂ ಹಾಡುಗಳ ಮೂಲಕ ಜನರ ಮನಸ್ಸಿಗೆ ಹತ್ತಿರವಾಗಿರುವ ಈ ಚಿತ್ರದ ಟ್ರೇಲರ್ ಆ.22 ರಂದು ಬಿಡುಗಡೆಯಾಗಲಿದೆ. ಬಹು ನಿರೀಕ್ಷಿತ ಈ ಚಿತ್ರದ ಬಿಡುಗಡೆಗಾಗಿ ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ.

ಕನ್ನಡ, ತೆಲುಗು ಹಾಗೂ ಮಲಯಾಳಂನಲ್ಲಿ ಏಕಕಾಲಕ್ಕೆ ಪ್ರಣಮ್ ದೇವರಾಜ್ ಅಭಿನಯದ ಈ ಚಿತ್ರ ಬಿಡುಗಡೆ

ಪ್ರಣಮ್ ದೇವರಾಜ್ ಅವರಿಗೆ ನಾಯಕಿಯಾಗಿ ದಿಯಾ ಖ್ಯಾತಿಯ ಖುಷಿ ರವಿ ಅಭಿನಯಿಸಿದ್ದಾರೆ. ಇದೊಂದು ತಂದೆ – ಮಗನ ಬಾಂಧವ್ಯದ ಚಿತ್ರವಾಗಿದ್ದು, ರಂಗಾಯಣ ರಘು ನಾಯಕನ ತಂದೆಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಸುಚೇಂದ್ರ ಪ್ರಸಾದ್, ಗಿರೀಶ್ ಶಿವಣ್ಣ, ತಬಲ ನಾಣಿ, ಶ್ರೀನಿವಾಸ್ ಪ್ರಭು, ಸುಧಾ ಬೆಳವಾಡಿ, ಅರುಣ್ ಚಕ್ರವರ್ತಿ ಮುಂತಾದವರು ತಾರಾಬಳಗದಲ್ಲಿದ್ದಾರೆ.



ಸಚಿನ್ ಬಸ್ರೂರು ಸಂಗೀತವಿರುವ 'S/O ಮುತ್ತಣ್ಣ' ಸಿನಿಮಾದ ಹಾಡುಗಳನ್ನು ಯೋಗರಾಜ್ ಭಟ್, ಜಯಂತ್ ಕಾಯ್ಕಿಣಿ ಬರೆದಿದ್ದಾರೆ. ಸ್ಕೇಟಿಂಗ್ ಕೃಷ್ಣ ಛಾಯಾಗ್ರಹಣ ಹಾಗೂ ಹರೀಶ್ ಕೊಮ್ಮೆ ಅವರ ಸಂಕಲನ ಬಹು ನಿರೀಕ್ಷಿತ ಈ ಚಿತ್ರಕ್ಕಿದೆ.

'ಏಳುಮಲೆ'ಯಲ್ಲಿ ಮಹದೇಶ್ವರನ ಮೊರೆ ಹೋದ ಪ್ರೇಮಿಗಳು

ತರುಣ್ ಸುಧೀರ್ ನಿರ್ಮಿಸುತ್ತಿರುವ ಬಹು ನಿರೀಕ್ಷಿತ ಚಿತ್ರ ಏಳುಮಲೆ, ತರುಣ್ ಜತೆ ಸಹ ನಿರ್ದೇಶಕರಾಗಿದ್ದ ಪುನೀತ್ ರಂಗಸ್ವಾಮಿ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಅಟ್ಲಾಂಟಾ ನಾಗೇಂದ್ರ ಚಿತ್ರದ ಸಹ ನಿರ್ಮಾಪಕರು.

ಕನ್ನಡ, ತಮಿಳು, ತೆಲುಗು ಭಾಷೆಯಲ್ಲಿ ನಿರ್ಮಾಣವಾಗಿರುವ ಈ ಚಿತ್ರದಲ್ಲಿ ನಾಗಾರ್ಜುನ್ ಶರ್ಮಾ ರಚನೆಯ 'ಕಾಪಾಡೋ ದ್ಯಾವ್ರೆ' ಎಂಬ ಹಾಡನ್ನು ಇತ್ತೀಚೆಗೆ ಹಿರಿಯ ನಟಿಯರಾದ ಶೃತಿ, ಸುಧಾರಾಣಿ ಹಾಗೂ ತಾರಾ ಅನುರಾಧಾ ಕನ್ನಡ, ತಮಿಳು ಹಾಗೂ ತೆಲುಗು ಭಾಷೆಯ ಹಾಡನ್ನು ಬಿಡುಗಡೆಗೊಳಿಸಿ ಚಿತ್ರತಂಡಕ್ಕೆ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ನಿರ್ಮಾಪಕ ತರುಣ್ ಸುಧೀರ್, ನಿರ್ದೇಶಕ ಪುನೀತ್ ರಂಗಸ್ವಾಮಿ, ನಾಯಕ ರಾಣಾ, ನಾಯಕಿ ಪ್ರಿಯಾಂಕಾ, ಸಂಗೀತ ನಿರ್ದೇಶಕ ಡಿ.ಇಮ್ಮಾನ್, ಗಾಯಕಿ ಮಂಗ್ಲಿ, ಚಿತ್ರವನ್ನು ಅರ್ಪಿಸುತ್ತಿರುವ ರಾಜುಗೌಡ್ರು ಈ ಸಮಾರಂಭದಲ್ಲಿ ಉಪಸ್ಥಿತರಿದ್ದರು. ಕರ್ನಾಟಕ ಹಾಗೂ ತಮಿಳುನಾಡಿನ ಗಡಿಭಾಗದಲ್ಲಿ ಕನ್ನಡ-ತಮಿಳು ಹುಡುಗ-ಹುಡುಗಿಯ ನಡುವಿನ ಪೇಮಕಥೆ ಇದಾಗಿದೆ.

ಕನ್ನಡ ಹಾಡಿಗೆ ಚಾಲನೆ ನೀಡಿದ ತಾರಾ ಅನುರಾಧಾ ಮಾತನಾಡಿ, ಹಾಡು ನೋಡಿ ತುಂಬಾ ಖುಷಿಯಾಯ್ತು. ರಾಣಾ, ಪ್ರಿಯಾಂಕಾ ತುಂಬಾ ಚೆನ್ನಾಗಿ ಕಾಣಿಸುತ್ತಾರೆ. ತರುಣ್ ಏನೇ ಮಾಡಿದ್ರೂ ಫಸ್ಟ್‌ಕ್ಲಾಸ್ ಆಗಿರುತ್ತದೆ



ಅನ್ನೋದು ನಿಜವಾಗಿದೆ ಎಂದು ಹಾರೈಸಿದರು.

ನಟಿ ಸುಧಾರಾಣಿ ಮಾತನಾಡುತ್ತಾ, ಕನ್ನಡ ಚಿತ್ರರಂಗಕ್ಕೆ ಮತ್ತೆ ಅದೇ ಹೊಳಪು, ಮೆರುಗು ಏಳುಮಲೆ ಸಿನಿಮಾದ ಟೀಸರ್, ಹಾಡು ನೋಡಿದಾಗ ಸಿಗುತ್ತಿದೆ. ಇಡೀ ಚಿತ್ರತಂಡದ ಡೆಡಿಕೇಷನ್ ಸ್ಕ್ರೀನ್ ಮೇಲೆ ಕಾಣಿಸುತ್ತಿದೆ. ಕಲಾಸರಸ್ವತಿ ಎಲ್ಲರನ್ನೂ ಕೈ ಬೀಸಿ ಕರೆಯಲ್ಲ. ಕರೆದಾಗ ಅದನ್ನು ಭಕ್ತಿ, ನಿಷ್ಠೆಯಿಂದ ಮುಂದುವರೆಸಬೇಕು. ಆ ಅವಕಾಶ ರಾಣಾ, ಪ್ರಿಯಾಂಕಾಗೆ ಸಿಕ್ಕಿದೆ. ಅದನ್ನು ಇಬ್ಬರೂ ಸದುಪಯೋಗಪಡಿಸಿಕೊಂಡಿದ್ದಾರೆ. ತರುಣ್ ನಟನೆ, ನಿರ್ದೇಶನ ಎರಡರಲ್ಲೂ ಹೆಸರು ಮಾಡಿದ್ದಾರೆ. ಈಗ ನಿರ್ಮಾಪಕರಾಗಿ ಒಳ್ಳೊಳ್ಳೆ ಸಿನಿಮಾ ಮಾಡುತ್ತಿದ್ದಾರೆ ಎಂದು ಹೇಳಿದರು.

ಸಂಗೀತ ನಿರ್ದೇಶಕ ಡಿ.ಇಮ್ಮಾನ್ ಮಾತನಾಡಿ, ತರುಣ್ ಅದ್ಭುತ ವ್ಯಕ್ತಿ. ಏಳುಮಲೆ ಒಂದು ಸುಂದರ ಪ್ರೇಮಕಥೆ. ಈ ಚಿತ್ರದಲ್ಲಿ ರಾಣಾ, ಪ್ರಿಯಾಂಕಾ ಚೆನ್ನಾಗಿ ನಟಿಸಿದ್ದಾರೆ. ನಾನು ಚಿತ್ರಕ್ಕೆ ಸಂಗೀತ ನಿರ್ದೇಶನ ಮಾಡಿದ್ದೇನೆ. ಅದ್ವೈತ್ ತುಂಬಾ ಒಳ್ಳೆ ಕೆಲಸ ಮಾಡಿದ್ದಾರೆ ಎಂದು ಹೇಳಿದರು.

ಕರ್ನಾಟಕ-ತಮಿಳುನಾಡು ಗಡಿಭಾಗದ ಭಾವನಾತ್ಮಕ ಪ್ರೇಮಕಥೆ ಒಳಗೊಂಡಿರುವ 'ಏಳುಮಲೆ' ಚಿತ್ರದಲ್ಲಿ ರಕ್ಷಿತಾ ಸೋದರ ರಾಣಾ ಕನ್ನಡದ ಹುಡ್ಗ ಹರೀಶ್ ಆಗಿ ನಟಿಸುತ್ತಿದ್ದಾರೆ. ಮೈಸೂರಿನ ಹುಡುಗಿ ಪ್ರಿಯಾಂಕ ಆಚಾರ್ ತಮಿಳು ಹುಡುಗಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಜೊತೆಗೆ ಜಗಪತಿ ಬಾಬು, ನಾಗಾಭರಣ, ಕಿಶೋರ್‌ಕುಮಾರ್, ಸರ್ದಾರ್ ಸತ್ಯ, ಜಗಪ್ಪ ನಟಿಸಿದ್ದಾರೆ. ಚಾಮರಾಜನಗರ, ಸೇಲಂ, ಈರೋಡ್ ಸೇರಿದಂತೆ ಗಡಿಭಾಗದಲ್ಲಿ ಚಿತ್ರೀಕರಣ ನಡೆಸಲಾಗಿದೆ ಅದ್ವೈತ್ ಗುರುಮೂರ್ತಿ ಅವರ ಛಾಯಾಗ್ರಹಣ, ಕೆ.ಎಂ.ಪ್ರಕಾಶ್ ಅವರ ಸಂಕಲನ, ನಾಗಾರ್ಜುನ ಶರ್ಮಾ, ಪುನೀತ್ ರಂಗಸ್ವಾಮಿ ಅವರ ಸಂಭಾಷಣೆ ಈ ಚಿತ್ರಕ್ಕಿದೆ

ಆ.29ಕ್ಕೆ ಕ್ರೈಂ ಥ್ರಿಲ್ಲರ್ 'ಉಸಿರು' ಬಿಡುಗಡೆ



ಕೇಳಿದ್ದು ಸುಳ್ಳಾಗಬಹುದು, ನೋಡಿದ್ದು ಸುಳ್ಳಾಗಬಹುದು, ನಿಧಾನಿಸಿ ಯೋಚಿಸಿದಾಗ ನಿಜ ತಿಳಿಯುವುದು' ಎಂಬ ಕಾನ್ಸೆಪ್ಟ್ ಮೇಲೆ ತಯಾರಾದ ಚಿತ್ರ ಉಸಿರು. ಶ್ರೀಮತಿ ಲಕ್ಷ್ಮಿ ಹರೀಶ್ ಅವರು ನಿರ್ಮಿಸಿರುವ, ಕ್ರೈಂ, ಥ್ರಿಲ್ಲರ್ ಕಥಾಹಂದರ ಒಳಗೊಂಡ ಈ ಚಿತ್ರ ಇದೇ ತಿಂಗಳ 29ರಂದು ಮೈಸೂರು, ಮಂಡ್ಯ ಸೇರಿದಂತೆ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ, ತಿಲಕ್ ಶೇಖರ್, ಪ್ರಿಯಾ ಹೆಗ್ಡೆ ನಟಿಸಿರುವ ಈ ಚಿತ್ರಕ್ಕೆ ಪನೇಮ್ ಪ್ರಭಾಕರ್ ಆಕ್ಷನ್ ಕಟ್ ಹೇಳಿದ್ದಾರೆ.

ಆರ್.ಎಸ್.ಗಣೇಶ್ ನಾರಾಯಣನ್ ಅವರ ಸಂಗೀತ ಸಂಯೋಜನೆ ಈ ಚಿತ್ರಕ್ಕಿದ್ದು, ಭೈರವ ರಾಮ ಸಂಭಾಷಣೆ, ಸಾಹಿತ್ಯ ರಚಿಸಿದ್ದಾರೆ. ಸಹ ನಿರ್ಮಾಪಕ ಹರೀಶ್ ಅವರು ಚಿಕ್ಕ ಪಾತ್ರವೊಂದರಲ್ಲಿ ಕಾಣಿಸಿಕೊಂಡಿದ್ದಾರೆ. ಮೈಸೂರಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡ ಮಾಹಿತಿ ಹಂಚಿಕೊಂಡಿತು.

ಆಗುಂತಕನೊಬ್ಬನಿಂದ ಹೆಂಡತಿಯ ಪ್ರಾಣಕ್ಕೆ ಸಂಚಕಾರ ಬಂದಾಗ ಪೊಲೀಸ್ ಅಧಿಕಾರಿ ತನ್ನ ಪತ್ನಿಯನ್ನು ಹೇಗೆ ಕಾಪಾಡಿಕೊಳ್ಳುತ್ತಾನೆ ಎನ್ನುವುದೇ ಉಸಿರು ಕಾನ್ಸೆಪ್ಟ್, ಬೆಂಗಳೂರು, ಮಡಿಕೇರಿ, ಚಿಕ್ಕಮಗಳೂರು, ಮೂಡಿಗೆರೆ ಸುತ್ತಮುತ್ತ ಚಿತ್ರೀಕರಿಸಲಾಗಿದೆ.

ನಿರ್ಮಾಪಕಿ ಲಕ್ಷ್ಮಿ ಹರೀಶ್ ಮಾತನಾಡುತ್ತಾ, ಪ್ರಭಾಕರ್ ಈ ಕಥೆ ಹೇಳಿದಾಗ, ಸ್ಟೋರಿಲೈನ್ ತುಂಬಾ ಇಷ್ಟವಾಗಿ ಈ ಸಿನಿಮಾ ಮಾಡಿದೆ ನಿಮ್ಮ ಸಹಕಾರ ಬೇಕು ಎಂದು ವಿನಂತಿಸಿದರು . ನಿರ್ದೇಶಕ ಪ್ರಭಾಕರ್ ಮಾತನಾಡಿ, ಚಿತ್ರದಲ್ಲಿ ಕಂಟೆಂಟೇ ಹೀರೋ. ಗಂಡನ ಪ್ರೀತಿ, ಸ್ನೇಹ ಸಂಬಂಧ ಹೀಗೆ ಎಲ್ಲಾ ರೀತಿಯ ಎಮೋಶನ್ಸ್ ಇರಲಿದ್ದು, ಪ್ರತಿ ಪಾತ್ರಕ್ಕೂ ಅದರದೇ ಆದ ಪ್ರಾಮುಖ್ಯತೆಯಿದೆ. ಟ್ರೈಲರ್‌ಗೆ ಒಳ್ಳೆ ಪ್ರತಿಕ್ರಿಯೆ ಬರುತ್ತಿದೆ ಎಂದರು.

ನಾಯಕ ನಟ ತಿಲಕ್ ಶೇಖರ್ ಮಾತನಾಡುತ್ತಾ, ಈ ಚಿತ್ರದಲ್ಲಿ ನಾನೊಬ್ಬ ಇನ್‌ವೆಸ್ಟಿಗೇಶನ್ ಆಫೀಸರ್ ಆಗಿ ನಟಿಸಿದ್ದೇನೆ, ಈ ತರಹದ ಕಾನ್ಸೆಪ್ಟ್ ನಾನು ಎಲ್ಲೂ ಕೇಳಿಲ್ಲ, ಡೈರೆಕ್ಟರ್ ಬಂದು ನನಗೆ ಕಥೆ ಹೇಳಿದಾಗ ಟೈಟಲ್ ಸೂಟ್ ಆಗಲ್ಲ ಅನಿಸಿತ್ತು ಆದರೆ ಶೂಟಿಂಗ್ ಮಾಡ್ತಾ ಹೋದಂತೆ ಕ್ಲಾರಿಟಿ ಸಿಕ್ತು ಇದು ತುಂಬಾ ಲೇಯರ್ಸ್‌ಗಳಿರೋ ಚಿತ್ರ. ರಿಲೀಸ್ ಹಂತಕ್ಕೆ ಬರಲು ನಿರ್ಮಾಪಕರು ತುಂಬಾ ಕಷ್ಟಪಟ್ಟಿದ್ದಾರೆ ಎಂದು ಹೇಳಿದರು,



ಸಿನಿಪದಬಂಧ-590



ಉಮ್ಮತ್ತೂರು ಇಂದುಶೇಖರ್
ಮೊ.9880820462

1		2		■	3	4			■	5
	■		■	■	■		■	■	■	
	■	■	6	■	7			8		
9						■	■		■	■
	■	■		■		■	10			
■	■	11	■	■		■	■		■	■
12				■		■	13	■	■	14
■	■		■	■	15					
16				17		■		■	■	
	■	■	■		■	■	■	18	■	
	■	19				■	20			

ಹೆಸರು ____________________

ವಿಳಾಸ ____________________

____

ದೂರವಾಣಿ ಸಂಖ್ಯೆ ____________________

ಎಡದಿಂದ ಬಲಕ್ಕೆ

1. "ನಾವು ಬಂದೇವಾ... ಬಂದೇವಾ ಶ್ರೀಶೈಲ ನೋಡಲಿಕ್ಕ.... ", 4
3. ರವಿಚಂದ್ರನ್‌ನ ಘಟಿಸಲಾಗದ ಚಿತ್ರ 4
7. ಕಮಲ್ – ರಮೇಶ್ – ಶೃತಿ 6
9. ವಿಷ್ಣು – ಮಾಧವಿ ಅಭಿನಯಕ್ಕೆ ಭಾರ್ಗವ ನಿರ್ದೇಶಕ 6
10. ಕೊನೆಯಲ್ಲಿ ಪಕ್ಷಿಯೊಂದನ್ನು ಇರಿಸಿಕೊಂಡ ಅಲೆ 4
12. ಡಿವಿಜಿ ನೆನಪಿಸಿಕೊಳ್ಳಿ ದ್ವಾರಕೀಶ್ ಚಿತ್ರ ಪ್ರತ್ಯಕ್ಷ ! 4
15. ಮಾಲಾಶ್ರೀ ದ್ವಿಪಾತ್ರಾಭಿನಯದ ಚಿತ್ರ 6
16. ಟಿ. ಪಿ. ವೇಣುಗೋಪಾಲ್ ಅವರ "ಸಿಹಿ ಮಿಲನ" 6
19. ಹತ್ತರ ಉತ್ತಮ ಹಾಡುಗಳಿಗೆ ಹೀಗೆನ್ನಿ 4
20. ಯಶ್ – ಮೇಘನಾರಾಜ್ ಅಭಿನಯದ ವ್ಯಾಘ್ರ 4

ಮೇಲಿನಿಂದ ಕೆಳಕ್ಕೆ

1. ಶ್ರೀನಾಥ್ – ಆರತಿ ಅಭಿನಯದಲ್ಲಿ ಹರಿದ ಪರಿಶುದ್ಧ ನದಿ 5
2. ಪಟ್ಟಣಕ್ಕೆ ಬಂದ ಜಗ್ಗೇಶ್ 2
4. ರವಿಚಂದ್ರನ್ ಯುದ್ಧದಲ್ಲಿ ಹಳ್ಳಿಯಿದೆ 3
5. ಪಿ. ಮಹೇಶ್ ಸುಖಧರೆಯ ಸಡಗರ 3
6. ಕೊಳ್ಳೆ, ದರೋಡೆಗೆ ಇನ್ನೊಂದು ಪದ 3
7. ವಿಷ್ಣು, ಶ್ರೀನಾಥ್, ಮಂಜುಳಾ ಅಭಿನಯಕ್ಕೆ ವಿಜಯ್ ನಿರ್ದೇಶಕ 3
8. ಮೆಹೆಂದಿ ಹೆಸರಿನ ಚಿತ್ರ 4
11. "ಸೇಡು" ತೀರಿಸಿಕೊಂಡ ಚಿತ್ರ 4
13. ಆಂಗ್ಲದ ಹಣ ಹೊಂದಿರುವ ನಟಿ 3
14. ಮಿಸ್ ಲೀಲಾವತಿ ಚಿತ್ರದ ಹಾಡೊಂದರ ಆರಂಭ ಸೌಂದರ್ಯ ಅಭಿನಯವಿದೆ 5
16. ವೃಕ್ಷದ ನಡುವೆ ಗಂಡು ನವಿಲಿದೆ 3
17. ಪ್ರಜ್ವಲ್ ದೇವರಾಜ್ ಎಬ್ಬಿಸಿದ "ಗದ್ದಲ" 3
18. ಕಸ್ತೂರಿಯ ಬುದ್ಧಿವಂತ ಇಲ್ಲಿ ತಲೆಕೆಳಗು 2

ಸಿನಿ ಪದಬಂಧ 589ರ ಉತ್ತರ

ಇಂ	ಡಿ	ಪೆಂ	ಡೆ	ನ್ಸ್	ಡೇ	■	ರಾ	ಷ್ಟ್ರ	ಗೀ	ತೆ
ದಿ	■	■	■	■	ವಿ	■	ಜ	■	■	■
ನ	■	ಶಾಂ	■	ಮೇ	ಡ್	ಇ	ನ್	ಇಂ	ಡಿ	ಯಾ
ಭಾ	ರ	ತಿ	■	■	■	■	ನಾ	■	■	■
ರ	■	ಕ್ರಾಂ	■	ಸ	ತ್ಯಂ	■	ಗೇಂ	■	ಭಾ	■
ತ	■	ತಿ	■	ತ್ಯ	■	■	ದ್ರ	■	ರ	■
■	ಭ	■	■	ಮೇ	■	ತಿ	■	ಶ್ವೇ	ತ	■
■	ವ್ಯ	■	ನ	ವ	■	ರಂ	■	■	ಜ	■
■	ಭಾ	ಗ್ಯ	■	ಜ	ನ	ಗ	ಣ	ಮ	ನ	■
■	ರ	■	■	ಯ	■	ಧ್ವ	■	■	ನಿ	■
■	ತ	ನು	ಜಾ	ತೆ	■	ಜ	ನ	ನಿ	■	■

ವಿಜೇತರು: ಎಂ.ಎಸ್. ಪ್ರಭಾ, ನಂ.13/1, ಐಶ್ವರ್ಯ ನಿಲಯ, ಎನ್ ಬ್ಲಾಕ್, 60 ಅಡಿ ರಸ್ತೆ, ಕುಂಬಾರಕೊಪ್ಪಲು, ಮೈಸೂರು-16

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015



ಇಂದಿನಿಂದ ಸಸ್ಪೆನ್ಸ್ ಥ್ರಿಲ್ಲರ್ 'ಶೋಧ'

ಅಯ್ಯನ ಮನೆ ವೆಬ್‌ಸರಣಿಯ ಸಕ್ಸಸ್ ಬೆನ್ನಲ್ಲೇ ಜೀ5 ಮತ್ತೊಂದು ವೆಬ್ ಸರಣಿಯನ್ನ ಪ್ರೇಕ್ಷಕರ ಮುಂದೆ ತರುತ್ತಿದೆ. ಆ.22ರಿಂದ 'ಶೋಧ' ಎಂಬ ಸಸ್ಪೆನ್ಸ್, ಥ್ರಿಲ್ಲರ್ ವೆಬ್ ಸೀರೀಸ್ ಮೂಡಿಬರಲಿದೆ. ಈ ವೆಬ್ ಸರಣಿಗೆ ಸುಹಾಸ್ ನವರತ್ನ ಅವರು ಕಥೆ ಬರೆದಿದ್ದು, ಸುನಿಲ್ ಮೈಸೂರು ನಿರ್ದೇಶನ ಮಾಡಿದ್ದಾರೆ. ಕೆಆರ್‌ಜಿ ಸ್ಟುಡಿಯೋಸ್ ಬ್ಯಾನರ್ ಅಡಿ ನಿರ್ಮಾಣವಾಗಿರುವ ಆರು ಎಪಿಸೋಡ್‌ಗಳುಳ್ಳ ಸಸ್ಪೆನ್ಸ್, ಥ್ರಿಲ್ಲರ್ ವೆಬ್ ಸೀರೀಸ್ ಇದಾಗಿದ್ದು ಈಗಾಗಲೇ 'ಶೋಧ' ಟ್ರೇಲರ್ ರಿಲೀಸಾಗಿದೆ.

ಪ್ರಾಚೀನ ಕೊಡವ ಜಾನಪದ ಹಾಗೂ ಸಮಕಾಲೀನ ನೈತಿಕ ಸಂದಿಗ್ಧತೆಗಳ ಅಂಶಗಳನ್ನೊಳಗೊಂಡ ಕಥೆಯೇ ಶೋಧದ ಕಂಟೆಂಟ್. ಪವನ್‌ಕುಮಾರ್ ಅವರು ರೋಹಿತ್ ಎಂಬ ವಕೀಲನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಸಿರಿ ರವಿಕುಮಾರ್, ಅರುಣ್‌ಸಾಗರ್ ಮತ್ತು ಅನುಷಾ ರಂಗನಾಥ್ ಪ್ರಮುಖ ತಾರಾಬಳಗದಲ್ಲಿದ್ದಾರೆ. ವಕೀಲ ವೃತ್ತಿಯಲ್ಲಿ ಹೆಸರು ಮಾಡಿರುವ ರೋಹಿತ್ ಪತ್ನಿ ನಿಗೂಢವಾಗಿ ಕಣ್ಮರೆಯಾಗ್ತಾಳೆ. ಆಗ ರೋಹಿತ್ ಪ್ರಪಂಚ ತೆರೆದುಕೊಳ್ಳುತ್ತದೆ. ಕಳೆದು ಹೋದ ಪತ್ನಿ, ಆತನಿಗೆ ಮರಳಿ ಸಿಕ್ತಾಳೆಯೇ ಎಂಬುದೇ ಕ್ಲೈಮ್ಯಾಕ್ಸ್, ಈ ಕುತೂಹಲಕರ ಕಥೆಯಲ್ಲಿ ಅನೇಕ ತಿರುವುಗಳು ಸಿಗುತ್ತವೆ.



ಕವಲುದಾರಿ, ಸಕುಟುಂಬ ಸಮೇತ, ಸ್ವಾತಿಮುತ್ತಿನ ಮಳೆ ಹನಿಯ ಸಿನಿಮಾಗಳ ಮೂಲಕ ಖ್ಯಾತಿಗಳಿಸಿರುವ ಸಿರಿ ರವಿಕುಮಾರ್ ಈಗ ಥ್ರಿಲ್ಲರ್ ಕಥಾಹಂದರದ 'ಶೋಧ' ಸರಣಿಯ ಭಾಗವಾಗಿದ್ದಾರೆ.

ಜೀ 5 ಕನ್ನಡದ ಮುಖ್ಯಸ್ಥ ದೀಪಕ್ ಶ್ರೀರಾಮುಲು ಮಾತನಾಡಿ, ಅಯ್ಯನಮನೆ ನಂತರ, ಶೋಧದ ಮೂಲಕ ಪ್ರೇಕ್ಷಕರಿಗೆ ಮತ್ತೊಂದು ಶಕ್ತಿಶಾಲಿ ಕಥೆಯನ್ನು ತರಲು ನಾವು ಉತ್ಸುಕರಾಗಿದ್ದೇವೆ. ಕೆ.ಆರ್.ಜಿ.ಸ್ಟುಡಿಯೋಸ್‌ನ ಪ್ರತಿಭಾವಂತರ ತಂಡ ಮತ್ತು ಪವನ್‌ಕುಮಾರ್‌ರಂತಹ ಬಹುಮುಖ ಕಲಾವಿದರೊಂದಿಗೆ ಈ ಸರಣಿ ನಿಜವಾಗಿಯೂ ವಿಶೇಷವಾಗಿದೆ ಎಂದು ಹೇಳಿದ್ದಾರೆ.

ನಟ ಪವನ್‌ಕುಮಾರ್ ಮಾತನಾಡಿ, ನಾನು ಮೊದಲು ಶೋಧ ಚಿತ್ರಕಥೆಯನ್ನು ಓದಿದಾಗ, ಅದರ ತಿರುವುಗಳಿಂದ ಮಾತ್ರವಲ್ಲ, ಕಥೆಯು ಎಷ್ಟು ಆಳವಾಗಿ ಮಾನವೀಯವಾಗಿತ್ತು ಎಂಬುದಕ್ಕೂ ಆಕರ್ಷಿತನಾದೆ. ನಾನು ನಿರ್ವಹಿಸುವ ರೋಹಿತ್ ಪಾತ್ರ ಕಂಡು ನೀವು ಆಶ್ಚರ್ಯಪಡದೆ ಇರಲು ಸಾಧ್ಯವಿಲ್ಲ. ಜೀ5 ಮತ್ತು ಕೆಆರ್‌ಜಿ ಸ್ಟುಡಿಯೋಸ್ ಸಹಯೋಗದೊಂದಿಗೆ ಇದು ಅದ್ಭುತ ಪಯಣವಾಗಿದೆ. ನೀವು ರೋಹಿತ್ ಪ್ರಪಂಚಕ್ಕೆ ಕಾಲಿಟ್ಟಾಗ, ಕೊನೆಯ ಹಂತದವರೆಗೂ ಪ್ರತಿಯೊಂದು ಸತ್ಯವನ್ನು ಪ್ರಶ್ನಿಸುತ್ತಲೇ ಇರುತ್ತೀರಿ ಎಂದರು.

ದಶಕಗಳಿಂದ ಕಾಡುತ್ತಿರುವ ಸಮಸ್ಯೆಗಳ ಪರಿಹಾರಕ್ಕೆ ಅನುದಾನ ನೀಡಿ

ವಿಧಾನಸಭೆ ಅಧಿವೇಶನದಲ್ಲಿ ಶಾಸಕ ಜಿ.ಡಿ.ಹರೀಶ್‌ಗೌಡ ಆಗ್ರಹ

ಹುಣಸೂರು, ಆ.21– ತಾಲೂಕಿನ ಜ್ವಲಂತ ಸಮಸ್ಯೆಗಳೊಂದಿಗೆ ದಶಕಗಳಿಂದ ಕಾಡುತ್ತಿರುವ ಸಮಸ್ಯೆಗಳ ಪರಿಹಾರಕ್ಕೆ ಅನುದಾನ ನೀಡುವಂತೆ ವಿಧಾನಸಭೆ ಅಧಿವೇಶನದಲ್ಲಿ ಶಾಸಕ ಜಿ.ಡಿ.ಹರೀಶ್ ಗೌಡ ಸರ್ಕಾರವನ್ನು ಆಗ್ರಹಿಸಿದರು.

ಗುರುವಾರ ರೂಲ್ ನಂ.69ರ ಅಡಿ ಅನುದಾನದ ಕೊರತೆ ಕುರಿತು ವಿಪಕ್ಷಗಳಿಗೆ ಮಾತನಾಡಲು ನೀಡಿದ್ದ ಅವಕಾಶ ಸದುಪಯೋಗಪಡಿಸಿಕೊಂಡ ಶಾಸಕ ಜಿ.ಡಿ.ಹರೀಶ್‌ಗೌಡ ಕಳೆದ 20 ವರ್ಷಗಳಿಂದ ಹುಣಸೂರು ನಗರವನ್ನು ಕಾಡುತ್ತಿರುವ ಲಕ್ಷ್ಮಣತೀರ್ಥ ನದಿ ಶುದ್ಧೀಕರಣ ಮತ್ತು ಯುಜಿಡಿ ಸಂಪೂರ್ಣಗೊಳಿಸಲು ಅನುದಾನ ಕೋರಿದರು.

ತಾಲೂಕಿನ ಜೀವನದಿ ಲಕ್ಷ್ಮಣತೀರ್ಥ ನಗರದ ಹೃದಯ ಭಾಗದಲ್ಲಿ ಹರಿದು ಕೆಆರ್‌ಎಸ್ ಮೂಲಕ ಕಾವೇರಿ ನದಿ ಸೇರುತ್ತದೆ. ಆದರೆ ನದಿ ಒಡಲಿಗೆ ನಗರ ವ್ಯಾಪ್ತಿಯ ಒಳಚರಂಡಿ ನೀರು ಸೇರಿ ನದಿ ಸಂಪೂರ್ಣ ಕಲುಷಿತಗೊಂಡಿದೆ. ವಿಪರ್ಯಾಸವೆಂದರೆ ಇದೇ ನೀರನ್ನು ಬೆಂಗಳೂರು ಮತ್ತು ಮೈಸೂರಿನ ಜನರು ಕುಡಿಯಲು ಬಳಸುತ್ತಿದ್ದಾರೆ. ಹಾಗಾಗಿ ನಗರ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿ ಕೈಗೊಳ್ಳಲು ಹಾಗೂ ನದಿ ಶುದ್ಧೀಕರಣಕ್ಕೆ ಅನುದಾನ ನೀಡುವಂತೆ ಕೋರಿದರು.

ರೈತರ ಒಕ್ಕಲೆಬ್ಬಿಸಬೇಡಿ: ನಾಡಿನ ಪರಂಪರೆಯ ಸಂಕೇತವಾಗಿರುವ ನಾಡಹಬ್ಬ ದಸರಾ ಮಹೋತ್ಸವಕ್ಕೆ ಮುನ್ನುಡಿಯಾಗಿ ಗಜಪಯಣ ನಮ್ಮ ತಾಲೂಕಿನ



ನಾಗರಹೊಳೆ ರಾಷ್ಟ್ರೀಯ ಉದ್ಯಾನದಂಚಿನ ವೀರನಹೊಸಳ್ಳಿಯಿಂದ ಆರಂಭಗೊಳ್ಳುತ್ತದೆ. ಆದರೆ ಕಾಡಂಚಿನ ಗ್ರಾಮಗಳಲ್ಲಿ ಅನಾದಿ ಕಾಲದಿಂದಲೂ ವ್ಯವಸಾಯ ಮಾಡಿಕೊಂಡು ಬಂದಿರುವ ಸಣ್ಣ ಹಿಡುವಳಿದಾರನ್ನು ಒಕ್ಕಲೆಬ್ಬಿಸಲು ಅರಣ್ಯ ಇಲಾಖೆ ನೋಟೀಸ್ ನೀಡುತ್ತಿದೆ. ಸರ್ಕಾರ ಬಡ ರೈತರನ್ನು ಒಕ್ಕಲೆಬ್ಬಿಸದಂತೆ ಕ್ರಮವಹಿಸಲಿ ಎಂದು ಆಗ್ರಹಿಸಿದರು.

ಕಳೆದ 4 ವರ್ಷಗಳ ಹಿಂದೆ ತಾಲೂಕಿನಾದ್ಯಂತ ಸುರಿದ ಭಾರೀ ಮಳೆಗೆ ಮನೆ ಕಳೆದುಕೊಂಡ ಕುಟುಂಬಗಳಿಗೆ ಸರ್ಕಾರ ಪರಿಹಾರ ಘೋಷಿಸಿತ್ತು. ಅದರಂತೆ ರೈತರು ಈವರೆಗೆ ಕೇವಲ ಬೇಸ್‌ಮೆಂಟ್ ಮಾತ್ರ ಹಾಕಿಕೊಂಡು ಅನುದಾನಕ್ಕಾಗಿ ಕಾಯುತ್ತಿದ್ದು, ನಾಲ್ಕು ವರ್ಷಗಳೇ ಸಂದರೂ ಅನುದಾನ ಬಂದಿಲ್ಲ. ಶೀಘ್ರ ಅನುದಾನ ಮಂಜೂರು ಮಾಡಿಕೊಡಲು ಆಗ್ರಹಿಸಿದ ಅವರು, ಗಂಗಾ ಕಲ್ಯಾಣ ಯೋಜನೆಯಡಿ ಬೋರ್‌ವೆಲ್ ಕೊರೆಸಿಕೊಂಡಿದ್ದಾರೆ. ಆದರೆ ವಿದ್ಯುತ್ ಸಂಪರ್ಕ ಮಾತ್ರ ಇಲ್ಲ. ವಿದ್ಯುತ್ ಸಂಪರ್ಕಕ್ಕೆ ಕ್ರಮ ವಹಿಸಬೇಕು ಎಂದ ಅವರು ತಾಲೂಕಿನಾದ್ಯಂತ ಪಶು ವೈದ್ಯಕೀಯ ಇಲಾಖೆ, ಪ್ರಾಥಮಿಕ ಆರೋಗ್ಯ ಕೇಂದ್ರ, ಹುಣಸೂರು ನಗರಸಭೆ ಮುಂತಾದ ಕಡೆ ಸಿಬ್ಬಂದಿ ಕೊರತೆ ಕಾಡುತ್ತಿದ್ದು, 'ಡಿ' ಗ್ರೂಪ್ ನೌಕರರೂ ಕೂಡ ಇಲ್ಲದೆ ಸಮಸ್ಯೆಗಳು ಬಿಗಡಾಯಿಸುತ್ತಿವೆ. ಹೀಗಾಗಿ ಶೀಘ್ರ ನೇಮಕಾತಿ ಮಾಡಿಕೊಡಬೇಕು. ಹುಣಸುರು ನಗರ ವ್ಯಾಪ್ತಿಯ ಎಲ್ಲಾ ರಸ್ತೆಗಳು ಸಂಚಾರಕ್ಕೆ ಸಂಚಕಾರ ತಂದಿದ್ದು, ರಸ್ತೆ ದುರಸ್ತಿಯಾಗದೇ ಸಾರ್ವಜನಿಕರು ತೊಂದರೆಗೊಳಗಾಗಿದ್ದಾರೆ. ಅನುದಾನದ ಲಭ್ಯತೆಯಿಲ್ಲದೇ ಸಮಸ್ಯೆ ಮತ್ತಷ್ಟು ಬಿಗಡಾಯಿಸುತ್ತಿದೆ ಎಂದರು.

ಅಹಿಂದ ತಾಲೂಕು: ತಾಲೂಕಿನಲ್ಲಿ ಹಿಂದುಳಿದ ಸಮುದಾಯಗಳೇ ಬಹುತೇಕ ಪ್ರಮಾಣದಲ್ಲಿ (ಶೇ.65) ವಾಸಿಸುತ್ತಿವೆ. ಆದರೆ ಈ ಸಮುದಾಯಗಳ ಏಳಿಗೆಗಾಗಿ ಅನುದಾನ ಕೊರತೆ ಕಾಡುತ್ತಿದೆ. ಕಳೆದ 2 ವರ್ಷಗಳಲ್ಲಿ ಎಸ್‌ಇಪಿ ಯೋಜನೆಯಡಿ 1 ಕೋಟಿ ಹಾಗೂ ಟಿಎಸ್‌ಪಿ ಯೋಜನೆಯಡಿ 75 ಲಕ್ಷ ರೂ. ಅನುದಾನ ಮಂಜೂರಾಗಿದ್ದು, ಪ್ರಗತಿ ಕಾಲೋನಿ ಯೋಜನೆಗಳ ಅನುಷ್ಠಾನಕ್ಕೆ ಹಿನ್ನಡೆಯುಂಟಾಗಿದೆ ಎಂದರು.

'ಬಿ' ಖಾತೆ ಉದ್ದೇಶವೇನು: ರಾಜ್ಯಾದ್ಯಂತ 'ಬಿ' ಖಾತೆ ಆಂದೋಲನದಡಿ ಅತಂತ್ರ ಸ್ಥಿತಿಯಲ್ಲಿದ್ದ ಆಸ್ತಿ ಮಾಲೀಕರು ನಿಟ್ಟುಸಿರು ಬಿಟ್ಟಿದ್ದಾರೆ ನಿಜ. ಆದರೆ 'ಬಿ' ಖಾತೆಯಾದ ನಿವೇಶನಗಳಿಗೆ ಕಟ್ಟಡ ನಿರ್ಮಾಣಕ್ಕೆ ಪರವಾನಗಿ ನೀಡುತ್ತಿಲ್ಲ. ಹಾಗಿದ್ದರೆ 'ಬಿ' ಖಾತೆ ಮಾಡಿರುವುದು ಕೇವಲ ಕಂದಾಯ ವಸೂಲಿಗಾಗಿ ಎಂದಾಗುತ್ತಿದೆ. ಆದ್ದರಿಂದ ಸರ್ಕಾರ ಈ ಕೂಡಲೇ 'ಬಿ' ಖಾತೆಯಾದ ಆಸ್ತಿಗಳಿಗೂ ಕಟ್ಟಡ ನಿರ್ಮಾಣಕ್ಕೆ ಪರವಾನಗಿ ನೀಡಬೇಕೆಂದು ಒತ್ತಾಯಿಸಿದರು.

ಅರಸು ಪುಣ್ಯಭೂಮಿಯಲ್ಲಿ ಮೂಲ ಸೌಕರ್ಯವಿಲ್ಲ

ನಾಡನ್ನು ಸುದೀರ್ಘವಾಗಿ ಆಳಿದ ಸಾಮಾಜಿಕ ನ್ಯಾಯದ ಹರಿಕಾರ ಡಿ.ದೇವರಾಜ ಅರಸು ಹುಟ್ಟೂರು ಹುಣಸೂರು ತಾಲೂಕಿನ ಕಲ್ಲಹಳ್ಳಿ ಗ್ರಾಮದ ರಸ್ತೆ ಸಂಪೂರ್ಣ ಹಾಳಾಗಿದೆ. ಮಾಜಿ ಸಿಎಂ ಡಿ.ದೇವರಾಜ ಅರಸು ಪ್ರತಿನಿಧಿಸಿದ್ದ ಕ್ಷೇತ್ರವನ್ನು ಇಂದು ಜನರ ಆಶೀರ್ವಾದದೊಂದಿಗೆ ನಾನು ಪ್ರತಿನಿಧಿಸುತ್ತಿರುವುದು ನನ್ನ ಸೌಭಾಗ್ಯವಾದರೂ ಅರಸು ಹುಟ್ಟೂರು ಮೂಲ ಸೌಕರ್ಯದಿಂದ ವಂಚಿತವಾಗಿದೆ. ಅರಸು ಬೆಳೆದ ಮನೆ ಸ್ಮಾರಕವಾಗಬೇಕೆಂದು ಹಲವು ಬಾರಿ ಮನವಿ ಸಲ್ಲಿಸಲಾಗಿದೆ. ಅರಸು ಪ್ರತಿಪಾದಿಸಿದ ತತ್ವ, ಸಿದ್ಧಾಂತದಡಿ ರಚಿತವಾದ ಈ ಸರ್ಕಾರ ಅರಸು ಹುಟ್ಟೂರಿನ ಅಭಿವೃದ್ಧಿಗೆ ಅನುದಾನ ನೀಡಬೇಕೆಂದು ಶಾಸಕ ಜಿ.ಡಿ.ಹರೀಶ್‌ಗೌಡ ಕೋರಿದರು.

ಅತ್ತಿಗೋಡಲ್ಲಿ ಗಿರಿಜಾ ಕಲ್ಯಾಣ ಮಹೋತ್ಸವ



ಅತ್ತಿಗೋಡು ಗ್ರಾಮದ ಈಶ್ವರ ದೇವಾಲಯದಲ್ಲಿ ಗಿರಿಜಾ ಕಲ್ಯಾಣ ನಡೆಯಿತು.

ಬೆಟ್ಟದಪುರ, ಆ.21– ಪಿರಿಯಾಪಟ್ಟಣ ತಾಲೂಕಿನ ಅತ್ತಿಗೋಡು ಗ್ರಾಮದ ಈಶ್ವರ ದೇವಾಲಯದಲ್ಲಿ ಗಿರಿಜಾ ಕಲ್ಯಾಣ ಮಹೋತ್ಸವ ನಡೆಯಿತು.

ಗಿರಿಜಾ ಕಲ್ಯಾಣ ಅಂಗವಾಗಿ ದೇವಾಲಯವನ್ನು ಬಗೆ ಬಗೆಯ ಹೂ, ಬಣ್ಣ ಬಣ್ಣದ ದೀಪಗಳಿಂದ ಅಲಂಕರಿಸಲಾಗಿತ್ತು. ಮುಂಜಾನೆಯೇ ಈಶ್ವರನಿಗೆ ವಿಶೇಷ ಪೂಜೆ ಸಲ್ಲಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಉತ್ಸವ ಮೂರ್ತಿ ಮೆರವಣಿಗೆ ನಡೆಸಲಾಯಿತು. ಬಳಿಕ ದೇವಾಲಯದ ಪ್ರಧಾನ ಅರ್ಚಕರಾದ ಅಮರಯ್ಯ ಶಾಸ್ತ್ರಿ ಸೇರಿದಂತೆ ಇನ್ನಿತರರ ನೇತೃತ್ವದಲ್ಲಿ ಅಭಿಷೇಕ, ಪುಷ್ಪಾಭಿಷೇಕ ನೆರವೇರಿಸಿ ವಿವಿಧ ಪೂಜೆಗಳೊಂದಿಗೆ ಶಿವ ಪಾರ್ವತಿಯರ ಗಿರಿಜಾ ಕಲ್ಯಾಣ ನಡೆಸಲಾಯಿತು.

ಈ ವೇಳೆ ದೇವಾಲಯ ಸಮಿತಿ ಅಧ್ಯಕ್ಷ, ವಿಧಾನಸೌಧ ನಿವೃತ್ತ ಅಧಿಕಾರಿ ಕಾಂತರಾಜ್ ಕಾರ್ಯಕ್ರಮದ ಉಸ್ತುವಾರಿ ವಹಿಸಿದ್ದರು. ಯಡಿಯೂರು ಸಿದ್ಧಗಂಗೇಶ್ವರ ಅಭಿವೃದ್ಧಿ ಪ್ರಾಧಿಕಾರದ ಗೌರವಾಧ್ಯಕ್ಷ ಅಶೋಕ್, ಉಪಾಧ್ಯಕ್ಷ ಕಾಂತರಾಜು, ವಿಜಯಕುಮಾರ್, ಪ್ರವೀಣ್, ಗ್ರಾಮದ ಯಜಮಾನ ಗೌರೀಶ್, ಕಮಿಟಿಯ ನಿರ್ದೇಶಕರಾದ ಕೆಂಗಣ್ಣ ಶೆಟ್ಟಿ, ವಿರೂಪಾಕ್ಷ, ನಾಗರಾಜ, ಪ್ರಸನ್ನ, ಫಣೀಂದ್ರ, ಮಾದೇಶ, ಮಹಾಂತ, ಸುರೇಶ್, ಶ್ರೀಶೈಲ. ಮಹದೇವ್ ಸೇರಿದಂತೆ ಇತರರಿದ್ದರು. ಈ ಸಂದರ್ಭ ಭಕ್ತರಿಗೆ ಅನ್ನದಾನ ಏರ್ಪಡಿಸಲಾಗಿತ್ತು.

ಹೆಮ್ಮಿಗೆ ಪಿಎಸಿಎಸ್‌ಗೆ 8.74 ಲಕ್ಷ ರೂ. ನಿವ್ವಳ ಲಾಭ

ತಲಕಾಡು, ಆ.21– ಇಲ್ಲಿನ ಹೆಮ್ಮಿಗೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ 2024–25ನೇ ಸಾಲಿನಲ್ಲಿ 8,74,799 ರೂ. ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಹೆಚ್.ವಿ.ಶೇಷಾದ್ರಿ ತಿಳಿಸಿದರು.

ಹೆಮ್ಮಿಗೆ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ನಡೆದ 2024–25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘದ ಷೇರುದಾರರು ಹಾಗೂ ನಿರ್ದೇಶಕರ ಸಹಕಾರದಿಂದ ಸಂಘವು ವರ್ಷದಿಂದ ವರ್ಷಕ್ಕೆ ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತಿದೆ. ಸಂಘ ಲಾಭ ಗಳಿಸಿರುವುದರಿಂದ ಮುಂದಿನ ದಿನಗಳಲ್ಲಿ ಹೆಚ್ಚು ರೈತರಿಗೆ ಸಾಲ ಕೊಡುವ ಮೂಲಕ ಅವರು ಆರ್ಥಿಕವಾಗಿ ಸದೃಢರಾಗಲು ಸಂಘ ಸಹಕಾರಿಯಾಗಲಿದೆ ಎಂದರು.

ಪ್ರಸಕ್ತ ವರ್ಷ ಸಂಘ 515 ರೈತರಿಗೆ 6,28,26000 ರೂ. ಕೆಸಿಸಿ ಸಾಲ ವಿತರಿಸಿದೆ. 105 ಮಂದಿಗೆ 55.44 ಲಕ್ಷ ಪಶು ಸಂಗೋಪನೆ ಸಾಲ, ಮಹಿಳಾ ಸ್ವ ಸಹಾಯ ಸಂಘಕ್ಕೆ 10 ಲಕ್ಷ ರೂ., 29 ಹೊಸ ಷೇರುದಾರರಿಗೂ 29.46 ಲಕ್ಷರೂ. ಸಾಲ ನೀಡಲಾಗಿದೆ. ಸಾಲ ಪಡೆದ ರೈತರು ಸಕಾಲಕ್ಕೆ ಮರುಪಾವತಿ ಮಾಡುವ ಮೂಲಕ ಸಹಕಾರ ಸಂಘದ ಬೆಳವಣಿಗೆಗೆ ಸಹಕಾರ ನೀಡಬೇಕು. ಆ ಮೂಲಕ ರೈತರು ಕೂಡ ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದರು.



ವಾರ್ಷಿಕ ಮಹಾಸಭೆಯನ್ನು ಸಂಘದ ಅಧ್ಯಕ್ಷ ಹೆಚ್.ವಿ.ಶೇಷಾದ್ರಿ ಉದ್ಘಾಟಿಸಿದರು.

ಈ ವೇಳೆ 2025–26ನೇ ಸಾಲಿನ ಸಂಘದ ಲೆಕ್ಕ ಪರಿಶೋಧನೆ ಮಾಡಿಸಲು ಲೆಕ್ಕ ಪರಿಶೋಧಕರನ್ನು ನೇಮಿಸಿಕೊಳ್ಳುವ ಬಗ್ಗೆ, ನಿಷ್ಕ್ರಿಯವಿರುವ ಎಸ್‌ಬಿ ಖಾತೆ ಮೊಬಲಗನ್ನು ಕಟ್ಟಡ ನಿಧಿಗೆ ವರ್ಗಾಯಿಸುವ ವಿಚಾರ, 1000 ರೂ.ಗೆ ಕಡಿಮೆ ಇರುವ ಷೇರುಗಳನ್ನು ಹಾಗೂ ಷೇರುದಾರರುಗಳನ್ನು ಅಮಾನತು ಖಾತೆಗೆ ವರ್ಗಾಯಿಸುವ ವಿಚಾರ ಹಾಗೂ 20 ವರ್ಷಗಳಿಗಿಂತ ಹಳೇ ಸಾಲಗಳನ್ನು ನಷ್ಟದ ಖಾತೆಗೆ ವರ್ಗಾಯಿಸುವ ವಿಚಾರದ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಿತು.

ಈ ವೇಳೆ ಸಂಘದ ಉಪಾಧ್ಯಕ್ಷ ರಾಮೇಗೌಡ, ನಿರ್ದೇಶಕರಾದ ಹೆಚ್.ಸಿ. ಹೆಮ್ಮಯ್ಯ, ಕೆ.ಎಸ್.ಮಹದೇವಸ್ವಾಮಿ, ಪುಟ್ಟಸ್ವಾಮಿ, ಬಸವರಾಜು, ಜಾಕೀರ್ ಖಾನ್, ರುಕ್ಮಿಣಿ, ಮಹದೇವಮ್ಮ, ಮಹದೇವಪ್ಪ ಸಿ.ಸೋಮಣ್ಣ, ಜಯಪ್ಪ, ಪ್ರಭಾರ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೇಮಂತ್ ಹೆಮ್ಮಿಗೆ, ಚಿಕ್ಕಹೊನ್ನಯ್ಯ ಸೇರಿದಂತೆ ಮತ್ತಿತರರಿದ್ದರು.


ರೈತರು ಸಕಾಲದಲ್ಲಿ ಸಾಲ ಮರುಪಾವತಿಸಿದರೆ

ಮುಂದಿನ ಸಾಲಿನಲ್ಲಿ ಶೂನ್ಯ ಬಡ್ಡಿ ದರದಲ್ಲಿ ಸಾಲ

ಆಲಗೂಡು ಪಿಎಸಿಎಸ್ ಅಧ್ಯಕ್ಷ ಪಿ.ನಟರಾಜು ಘೋಷಣೆ

ತಿ.ನರಸೀಪುರ, ಆ.21– ರೈತರು ಸಕಾಲದಲ್ಲಿ ಸಾಲ ಮರುಪಾವತಿ ಮಾಡಿದರೇ ಮುಂದಿನ ಸಾಲಿನಲ್ಲಿ ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡಲಾಗುತ್ತದೆ ಎಂದು ಸಂಘದ ನೂತನ ಅಧ್ಯಕ್ಷ ಪಿ.ನಟರಾಜು ತಿಳಿಸಿದರು.

ಪಟ್ಟಣದ ಪುರಸಭೆ ವ್ಯಾಪ್ತಿಯ ಹೆಳವರಹುಂಡಿ ಗ್ರಾಮದ ಆಲಗೂಡು ಕೃಷಿ ಪತ್ತಿನ ಸಹಕಾರ ಸಂಘದ ಕಚೇರಿಯಲ್ಲಿ 2024–25ನೇ ಸಾಲಿನ ವಾರ್ಷಿಕ ಮಹಾ ಸಭೆಯಲ್ಲಿ ಮಾತನಾಡಿದ ಅವರು, ಪ್ರಥಮ ಬಾರಿಗೆ ರೈತರು, ಮತದಾರರು ನಮ್ಮ ಮೇಲೆ ವಿಶ್ವಾಸ ಇಟ್ಟು ನಮ್ಮ ಗುಂಪಿಗೆ ಬೆಂಬಲ ನೀಡಿದ್ದೀರಾ. ನಿಮ್ಮ ಋಣ ತೀರಿಸಲು ಹತ್ತು ಹಲವು ಯೋಜನೆಗಳನ್ನು ರೂಪಿಸುವುದಾಗಿ ತಿಳಿಸಿದ ಅವರು, ಷೇರುದಾರರು ಮರಣ ಹೊಂದಿದರೇ, ಅವರ ಕುಟುಂಬದವರಿಗೆ ಸಂಘದಿಂದ ಧನಸಹಾಯ ನೀಡಲಾಗುವುದು ಎಂದರು.



ಆಲಗೂಡು ಡಾ.ಎಸ್.ಚಂದ್ರಶೇಖರ್, ಹೆಳವರಹುಂಡಿ ಜೆ.ಕೆ.ಮಹದೇವಯ್ಯ ಅವರನ್ನು ಸನ್ಮಾನಿಸಲಾಯಿತು.

ಸಂಘದ ಸಿಇಓ ಎಂ.ಗುರುಮಲ್ಲ (ಸೋಮಣ್ಣ) ಮಾತನಾಡಿ, 1288 ರೈತರಿಗೆ 96,43,089 ರೂ. ಮೌಲ್ಯದ ಷೇರು ನೀಡಲಾಗಿದೆ. ಸಂಘ 72,90,933 ರಷ್ಟು ಚರ ಆಸ್ತಿ ಹೊಂದಿದ್ದು, ಜಿಲ್ಲಾ ಹಾಗೂ ವಿವಿಧ ಬ್ಯಾಂಕ್‌ನಿಂದ ರೈತರಿಗೆ 1,34,87,283 ಕೆಸಿಸಿ ಬೆಳೆ ಸಾಲ, 630 ಜನಕ್ಕೆ 8,71,21,000 SHG ಸಾಲ ಹಾಗೂ 59 ಜನಕ್ಕೆ 65,26,165 ವ್ಯಾಪಾರ ಅಭಿವೃದ್ಧಿ ಸಾಲ ನೀಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಸಂಘವು 2,44,629 ರೂ. ನಿವ್ವಳ ಲಾಭ ಗಳಿಸಿದೆ. ಸಂಘದ ಸದಸ್ಯರು ಯಶಸ್ವಿನಿ ವಿಮಾ ಸೌಲಭ್ಯ ಪಡೆಯಲು ಸಂಘದಿಂದ 100 ರೂ. ಪ್ರೋತ್ಸಾಹಧನ ಹಾಗೂ ಮರಣ ಹೊಂದಿದ ಸದಸ್ಯರಿಗೆ ಮರಣ ನಿಧಿಯಿಂದ 5 ಸಾವಿರ ರೂ. ಸಹಾಯಧನ ನೀಡಲಾಗುವುದು ಎಂದರು.

ಇದೇ ವೇಳೆ ಆಲಗೂಡು ಡಾ.ಎಸ್. ಚಂದ್ರಶೇಖರ್ ಹಾಗೂ ಹೆಳವರಹುಂಡಿ ಜೆ.ಕೆ.ಮಹದೇವಯ್ಯ ಅವರನ್ನು ಸನ್ಮಾನಿಸಲಾಯಿತು. ಜಿಲ್ಲಾ ಬ್ಯಾಂಕ್ ಪ್ರತಿನಿಧಿ ಎನ್.ಎಸ್.ಶೇಖರ್, ಉಪಾಧ್ಯಕ್ಷ ನಂಜುಂಡ, ನಿರ್ದೇಶಕರಾದ ಎಂ.ಕೆ.ಸಹದೇವ, ಬಿ. ವೀರಭದ್ರಪ್ಪ, ನಾಗಣ್ಣ, ಮಹದೇವ, ಶಿವಣ್ಣ, ಮಹದೇವಮ್ಮ, ಚಿಕ್ಕನಂಜಯ್ಯ, ಕಾಂತಮ್ಮ, ಹೆಚ್.ಮರಿಸ್ವಾಮಿ, ಮಲ್ಲಣ್ಣ, ಜಯಣ್ಣ, ಕುಮುದಾ ನಾಯಕ, ಕೆ.ಎಸ್.ರೇಖಾ, ರೈತರು, ಷೇರುದಾರರು ಹಾಜರಿದ್ದರು

ದೇವರಾಜ ಅರಸು ಆಡಳಿತ ರಾಜ್ಯದ ಇತಿಹಾಸದಲ್ಲಿ ಒಂದು ಮೈಲಿಗಲ್ಲು

ಹುಣಸೂರು, ಆ.21– ಸಾಮಾಜಿಕ ನ್ಯಾಯದ ಹರಿಕಾರ, ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರು ಕೇವಲ ರಾಜಕೀಯ ನಾಯಕರಾಗಿರಲಿಲ್ಲ. ಅವರ ದೂರದೃಷ್ಟಿಯ ಆಡಳಿತ ಮತ್ತು ಕ್ರಾಂತಿಕಾರಿ ನಿರ್ಧಾರಗಳು ಕರ್ನಾಟಕದ ಇತಿಹಾಸದಲ್ಲಿ ಒಂದು ಮೈಲಿಗಲ್ಲು ಎಂದು ಶಾಸಕ ಜಿ.ಡಿ. ಹರೀಶ್‌ಗೌಡ ಬಣ್ಣಿಸಿದರು.



ದೇವರಾಜ ಅರಸು ಪ್ರತಿಮೆಗೆ ಶಾಸಕ ಜಿ.ಡಿ.ಹರೀಶ್‌ಗೌಡ ಮಾಲಾರ್ಪಣೆ ಮಾಡಿದರು.

ಮಾಜಿ ಸಿಎಂ ಡಿ.ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆ ಅಂಗವಾಗಿ ನಗರದ ಅರಸು ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಡಿ.ದೇವರಾಜ ಅರಸು ಅವರು ಸಮಾಜದ ಕಟ್ಟಕಡೆ ವ್ಯಕ್ತಿ ಬಗ್ಗೆಯೂ ಕಾಳಜಿ ವಹಿಸಿ, ಅವರ ಅಭಿವೃದ್ಧಿಗಾಗಿ ಶ್ರಮಿಸಿದರು. ಅವರ ಆಡಳಿತದಲ್ಲಿ ಸಾಮಾಜಿಕ ನ್ಯಾಯ ಮತ್ತು ಸಮಾನತೆ ಪ್ರಮುಖ ಧ್ಯೇಯಗಳಾಗಿದ್ದವು. ಅವರು ಜಾರಿಗೆ ತಂದ ಕೆಲವು ಪ್ರಮುಖ ಕಾರ್ಯಕ್ರಮಗಳಲ್ಲಿ ಉಳುವವನಿಗೆ ಭೂಮಿ ಒಡೆಯ, ಹಾವನೂರು ಆಯೋಗ, ಕರ್ನಾಟಕ ರಾಜ್ಯೋ ತ್ಸವ, ಸರಳ ಮತ್ತು ನೇರ ಆಡಳಿತ ಅವರ ಕೊಡುಗೆಗಳು ಎಂದರು.

ಚಿನ್ನದೊಂದಿಗೆ ಕಾರ್ಮಿಕ ಪರಾರಿ

ಮೈಸೂರು, ಆ.21– ಚಿನ್ನಾಭರಣ ತಯಾರಕನೊಬ್ಬ ಚಿನ್ನದ ಗಟ್ಟಿಯೊಂದಿಗೆ ಪರಾರಿಯಾಗಿದ್ದಾನೆಂದು ಮೈಸೂರಿನ ಲಷ್ಕರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಶ್ರೀಕೃಷ್ಣ ಗೋಲ್ಡ್ ಸ್ಮಿತ್ ಅಂಗಡಿ ಮಾಲೀಕ ಸುಕಾಂತ್ ಕೋಲಿ ನೀಡಿದ ದೂರಿನನ್ವಯ ಪಶ್ಚಿಮ ಬಂಗಾಳದ ರೊಹಮನ್ ವಿರುದ್ಧ ಪ್ರಕರಣ ದಾಖಲಾಗಿದ್ದು, ಚಿನ್ನಾಭರಣ ತಯಾರಿಕೆ ಕೆಲಸ ಮಾಡಿಕೊಂಡಿದ್ದ ಈತ ಇತ್ತೀಚೆಗೆ ನೀಡಿದ್ದ 189 ಗ್ರಾಂ ಚಿನ್ನದ ಗಟ್ಟಿಯೊಂದಿಗೆ ಊರಿಗೆ ಪರಾರಿಯಾಗಿದ್ದಾನೆ ಎಂದು ದೂರಲಾಗಿದೆ.

ಸರಗೂರಲ್ಲಿ ಕುಂದು ಕೊರತೆ ವಿಚಾರಣೆ ಸಭೆ

ಸರಗೂರು, ಆ.21– ಪಟ್ಟಣದ ಡಾ.ಬಿ. ಆರ್.ಅಂಬೇಡ್ಕರ್ ಭವನದಲ್ಲಿ ಲೋಕಾಯುಕ್ತ ಕುಂದುಕೊರತೆ ವಿಚಾರಣೆ ಸಭೆ ನಡೆಯಿತು.

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಸಲ್ಲಿಸಲಾದ ಅರ್ಜಿಗಳ ಕ್ರಮದ ಬಗ್ಗೆ ಚರ್ಚೆ ನಡೆಸಲಾಯಿತು. ಈ ವೇಳೆ ಸ್ಥಳೀಯ ಮುಖಂಡರು ಪೌತಿ ಖಾತೆಗಾಗಿ ನೆಮ್ಮದಿ ಕೇಂದ್ರಕ್ಕೆ ಅಲೆಯುವಂತಾಗಿದೆ. ಸಾಗುವಳಿ ಚೀಟಿ ನೀಡಲು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ದೂರು ಸಲ್ಲಿಸಿದರು.

ಹಳ್ಳಿಗಳಲ್ಲಿ ರಾಜಾರೋಷವಾಗಿ ಅಕ್ರಮ ಮದ್ಯ ಮಾರಾಟ ನಡೆಯುತ್ತದೆ ಎಂದು ದೂರು ಸಲ್ಲಿಸಿದರೇ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಇದರಿಂದ ಜನರು ಮದ್ಯ ವ್ಯಸನರಾಗಿ ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ. ಸರಗೂರು ಪಟ್ಟಣದ ಕುಡಿಯುವ ನೀರಿನ ಟ್ಯಾಂಕ್ ಸ್ವಚ್ಛಗೊಳಿಸಿಲ್ಲ. ಈ ಬಗ್ಗೆ ಗಮನ ಹರಿಸಬೇಕು. ಎಂ.ಸಿ. ತಳಲು ನುಗು ನದಿಯಿಂದ ಯಶವಂತಪುರ ಗ್ರಾಮದವರೆಗೆ ನಿರ್ಮಾಣವಾಗಿರುವ ಸಣ್ಣ ಏತ ನೀರಾವರಿ ಯೋಜನೆಯಿಂದ ಬಾಲನಕಟ್ಟೆ, ಗೂಡುಕಟ್ಟೆ ಹಾಗೂ ಎಂ.ಸಿ.ತಳಲು ಕೆರೆ ಅಭಿವೃದ್ಧಿಪಡಿಸಿ ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿ ಪೂರ್ಣಗೊಂಡಿಲ್ಲ. ಕಳಪೆ ಕಾಮಗಾರಿ ನಡೆದು ಈ ಬಗ್ಗೆ ವಿಚಾರಿಸಲು ಅಧಿಕಾರಿಗಳು ಸಂಪರ್ಕಕ್ಕೆ ಸಿಗುತ್ತಿಲ್ಲ. ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕಾನೂನು ಕ್ರಮ ಜರುಗಿಸಿ ಯೋಜನೆ ಅನುಷ್ಠಾನಗೊಳಿಸಬೇಕು ಎಂದು ಆಗ್ರಹಿಸಿದರು.



ಕಾರ್ಯಕ್ರಮದಲ್ಲಿ ಲೋಕಾಯುಕ್ತ ಅಧಿಕಾರಿಗಳಿಗೆ ದೂರು ಸಲ್ಲಿಸಲಾಯಿತು.

ಯಶವಂತಪುರ ಗ್ರಾಮದ ಸರ್ಕಾರಿ ಖಾಲಿ ನಿವೇಶನಗಳು ಒತ್ತುವರಿಯಾಗಿವೆ. ಈ ಬಗ್ಗೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದಾರೆ. ಅಂಗನವಾಡಿ ಕೇಂದ್ರಕ್ಕೆ ಕಟ್ಟಡ ನಿರ್ಮಾಣ ಮಾಡಲು ಸೂಕ್ತ ಖಾಲಿ ನಿವೇಶನವನ್ನು ಗುರುತಿಸಬೇಕು. ಸರ್ಕಾರಿ ಎಲ್ಲಾ ಖಾಲಿ ನಿವೇಶನಗಳನ್ನು ಗುರುತಿಸಿ ನಾಮಫಲಕ ಅಳವಡಿಸಬೇಕು ಎಂಬುದು ಸೇರಿದಂತೆ ವಿವಿಧ ದೂರುಗಳು ಸಲ್ಲಿಕೆಯಾದವು.

ಲೋಕಾಯುಕ್ತ ಡಿವೈಎಸ್ಪಿ ರವಿಕುಮಾರ್ ಮಾತನಾಡಿ, ಸಾರ್ವಜನಿಕರ ಸಮಸ್ಯೆಗಳ ಪರಿಹಾರಕ್ಕಾಗಿ ಕುಂದುಕೊರತೆ ವಿಚಾರಣಾ ಸಭೆ ನಡೆಸಲಾಗುತ್ತಿದ್ದು, ಒಟ್ಟು 46 ದೂರುಗಳು ಬಂದಿವೆ. ಈ ಎಲ್ಲಾ ದೂರುಗಳಿಗೂ ಸಂಬಂಧಪಟ್ಟ ಇಲಾಖಾಧಿಕಾರಿಗಳು ಜವಾಬ್ದಾರಿ ವಹಿಸಿ ಪರಿಹಾರ ಸೂಚಿಸುವುದರೊಂದಿಗೆ ವರದಿ ಮಾಡಬೇಕು. ಯಾವುದೇ ಅಧಿಕಾರಿಗಳು ಲಂಚಕ್ಕಾಗಿ ಒತ್ತಾಯಿಸಿದರೆ ಅಂತವರ ವಿರುದ್ಧ ಕ್ರಮ ಜರುಗಿಸಲು ಮೇಲಾಧಿಕಾರಿಗಳಿಗೆ ವರದಿ ಮಾಡಲಾಗುತ್ತದೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿ ತಹಸೀಲ್ದಾರ್ ಮೋಹನ ಕುಮಾರಿ ಮಾತನಾಡಿದರು. ಲೋಕಯುಕ್ತ ಅಧಿಕಾರಿ ವೆಂಕಟೇಶ್, ಸಿಪಿಐ ಪ್ರಸನ್ನಕುಮಾರ್, ಆದಿಕರ್ನಾಟಕ ಮಹಾಸಭಾ ಅಧ್ಯಕ್ಷ ಶಿವಣ್ಣ, ಕಸಾಪ ಅಧ್ಯಕ್ಷ ಎಂ.ಕೆಂಡಗಣ್ಣಸ್ವಾಮಿ, ಗ್ರಾಪಂ ಸದಸ್ಯ ಶಿವಲಿಂಗಯ್ಯ, ರಮೇಶ್, ಮಹೇಶ್, ಗೋವಿಂದರಾಜು, ಮುಖಂಡರಾದ ಮಲ್ಲೇಶ್, ರಾಜಣ್ಣ, ಬಿಲ್ಲಯ್ಯ, ನಾಗರಾಜು, ಸಣ್ಣಸ್ವಾಮಿ, ಸೋಮಣ್ಣ, ಚಿನ್ನಯ್ಯ, ಶ್ರೀನಿವಾಸ್, ಮಂಜುನಾಥ್, ಪ್ರಭಾಕರ್, ನಂದೀಶ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ವಿಕಲಚೇತನರ ಮನೆ ಬಾಗಿಲಿಗೆ ಯುಡಿಐಡಿ ಕಾರ್ಡ್ ವಿತರಣೆ



ಕಾರ್ಯಕ್ರಮವನ್ನು ತಹಸೀಲ್ದಾರ್ ಶ್ರೀನಿವಾಸ್ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಆ.21– ಪಟ್ಟಣದ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಸಾರ್ವಜನಿಕ ಆಸ್ಪತ್ರೆ ಹೆಚ್.ಡಿ.ಕೋಟೆ ಇವರ ಸಹಯೋಗದಲ್ಲಿ 'ವಿಕಲಚೇತನರ ಮನೆ ಬಾಗಿಲಿಗೆ ಯುಡಿಐಡಿ ಕಾರ್ಡ್ ವಿತರಣೆ' ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತಹಸೀಲ್ದಾರ್ ಶ್ರೀನಿವಾಸ್, ಆರೋಗ್ಯ, ವಿಶೇಷಚೇತನರು ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯಿಂದ ಈ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಸರ್ಕಾರಿ ಸೌಲಭ್ಯ ಪಡೆಯಲು ಯುಡಿಐಡಿ ಕಾರ್ಡ್ ಬೇಕಾಗುತ್ತದೆ. ಆದ್ದರಿಂದ ವಿಶೇಷಚೇತನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯುಡಿಐಡಿ ಕಾರ್ಡ್ ಪಡೆಯಬೇಕು ಎಂದರು.

ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್ ಮಾತನಾಡಿ, ತಾಲೂಕಿನಲ್ಲಿ 350 ಮಂದಿ ವಿಶೇಷಚೇತನರು ಯುಡಿಐಡಿ ಕಾರ್ಡ್ ಮಾಡಿಸಬೇಕಿದೆ. ಆದ್ದರಿಂದ ಕಾರ್ಯಕ್ರಮ ಆಯೋಜಿಸಲಾಗಿದೆ. ಸರ್ಕಾರದ ಸೌಲಭ್ಯಗಳನ್ನು ವಿಶೇಷಚೇತನರಿಗೆ ನೀಡಲು ಯುಡಿಐಡಿ ಕಾರ್ಡ್ ಕಡ್ಡಾಯ. ಆದ್ದರಿಂದ ಈ ಕಾರ್ಯಕ್ರಮವನ್ನು ಸದುಪಯೋಗಪಡಿಸಿ ಕೊಂಡು ಕಾರ್ಡ್ ಪಡೆದುಕೊಳ್ಳುವಂತೆ ತಿಳಿಸಿದರು.

ಈ ವೇಳೆ 150 ವಿಶೇಷಚೇತನರು ಯುಡಿಐಡಿ ಕಾರ್ಡ್ ಮಾಡಿಸಲು ತಜ್ಞವೈದ್ಯರಿಂದ ತಪಾಸಣೆ ಮಾಡಿಸಿಕೊಂಡರು. ವೈದ್ಯಾಧಿಕಾರಿ ಡಾ.ಪೂರ್ಣಿಮಾ, ತಾಲೂಕು ವಿಕಲ ಚೇತನರ ಕಾರ್ಯಕರ್ತ ಮಹದೇವಯ್ಯ, ಕಣ್ಣಿನ ತಜ್ಞ ಡಾ.ರಾಜಶೇಖರ್, ಕಿವಿ ಮತ್ತು ಮೂಗಿನ ತಜ್ಞ ಡಾ.ಶಿವಕುಮಾರ್, ಮೂಳೆ ತಜ್ಞ ಡಾ.ಶ್ರೀನಿವಾಸ್ ಮೂರ್ತಿ ಸೇರಿದಂತೆ ಇನ್ನಿತರರಿದ್ದರು.

ಗ್ರಾಹಕರಿಗೆ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ ಸಹಕಾರಿ

ಕೆನರಾ ಬ್ಯಾಂಕ್ ಎಜಿಎಂ ಉಮೇಶ್ ಆಶಯ

ತಿ.ನರಸೀಪುರ, ಆ.21– ಸಾಮಾಜಿಕ ಭದ್ರತಾ ಯೋಜನೆಗಳನ್ನು ತಲುಪಿಸುವ ನಿಟ್ಟಿನಲ್ಲಿ ಕೆನರಾ ಬ್ಯಾಂಕ್ ಹಮ್ಮಿಕೊಂಡಿರುವ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ ಗ್ರಾಹಕರಿಗೆ ಸಹಕಾರಿಯಾಗಿದೆ ಎಂದು ಕೆನರಾ ಬ್ಯಾಂಕ್ ಎಜಿಎಂ ಉಮೇಶ್ ಆಶಯ ವ್ಯಕ್ತಪಡಿಸಿದರು.

ತಾಲೂಕಿನ ವಾಟಾಳು ಗ್ರಾಮದಲ್ಲಿ ಕೆನರಾ ಬ್ಯಾಂಕ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 3 ತಿಂಗಳ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಯಾವುದೇ ಸಮಾಜದ ಅಭಿವೃದ್ಧಿಗೆ ಹಣಕಾಸು ಬಹುಮುಖ್ಯ. ರಸ್ತೆ, ಕೈಗಾರಿಕೆ ಹಾಗೂ ಯಾವುದೇ ಅಭಿವೃದ್ಧಿ ಕಾಮಗಾರಿಗಳಿಗೂ ಹಣ ಅವಶ್ಯಕ. ಅದಕ್ಕಾಗಿ ಗ್ರಾಮಸ್ಥರು ಹಾಗೂ ಗ್ರಾಹಕರಿಗೆ ಬ್ಯಾಂಕ್‌ನಿಂದ ದೊರಕುವ ಸಾಲ ಸೌಲಭ್ಯಗಳು, ಹಣಕಾಸಿನ ಸದ್ಬಳಕೆ ಕುರಿತು ಅರಿವು ಮೂಡಿಸಲು ಕಾರ್ಯಕ್ರಮ ಆಯೋಜಿಸುತ್ತಿದ್ದೇವೆ ಎಂದರು.

ಪ್ರಸ್ತುತ ಸೈಬರ್ ಕ್ರೈಂಗಳು ಹೆಚ್ಚಾಗಿದ್ದು, ಅಕ್ಷರಸ್ಥರು ವಂಚನೆಗೆ ಒಳಗಾಗುತ್ತಿದ್ದು, ಜಾಗೃತಿ ಬಹುಮುಖ್ಯ. ಸೈಬರ್ ವಂಚಕರು ನಾನಾ ರೀತಿ ನಿಮ್ಮನ್ನು ವಂಚಿಸಬಹುದು. ನಿಮ್ಮನ್ನು ನಂಬಿಸಿ ನಿಮ್ಮಿಂದಲೇ ಒಟಿಪಿ ಪಡೆದು ನಿಮ್ಮ ಖಾತೆಯಿಂದ ಹಣ ಡ್ರಾ ಮಾಡುತ್ತಾರೆ. ಯಾವುದೋ ಒಂದು ಲಿಂಕ್ ಕಳುಹಿಸಿ ನಿಮಗೆ ಲಾಟರಿ ಬಂದಿದೆ. ಲಿಂಕ್ ಒತ್ತಿದರೆ ನಿಮ್ಮ ಖಾತೆಗೆ ಲಾಟರಿ ಹಣ ಜಮಾ ಮಾಡುತ್ತೇವೆ ಎಂದು ಮೋಸ ಮಾಡುತ್ತಾರೆ. ಇತ್ತೀಚೆಗೆ ನಿಮ್ಮ ವ್ಯಾಟ್ಸಪ್‌ಗೆ ಫೋಟೋ ಕಳುಹಿಸುತ್ತಾರೆ. ಅದನ್ನು ಒತ್ತಿದರೆ ನಿಮ್ಮ ಖಾತೆ ಸಂಪೂರ್ಣ ವಿವರ ಅವರಿಗೆ ಹೋಗಿ ನೀವು ವಂಚನೆಗೊಳಗಾಗುತ್ತೀರಾ. ಹಾಗಾಗಿ ಇಂತಹ ಸೈಬರ್ ವಂಚಕರ ಬಗ್ಗೆ ಎಚ್ಚರದಿಂದಿರಬೇಕು ಎಂದು ಎಚ್ಚರಿಸಿದರು.



ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನವನ್ನು ಕೆನರಾ ಬ್ಯಾಂಕ್ ಎಜಿಎಂ ಉಮೇಶ್ ಉದ್ಘಾಟಿಸಿದರು.

ಜನಧನ್ ಯೋಜನೆ ಮತ್ತು ಇತರೆ ಉಳಿತಾಯ ಖಾತೆ ಹೊಂದಿರುವವರು, 10 ವರ್ಷ ತುಂಬುತ್ತಿರುವ ಖಾತೆದಾರರು ತಪ್ಪದೇ re-kyc ಮಾಡಿಸಿ ಖಾತೆಗಳು ನಿಷ್ಕ್ರಿಯಗೊಳ್ಳುವುದನ್ನು ತಪ್ಪಿಸಿ, ಇದರಿಂದ ತ್ವರಿತವಾಗಿ ಬ್ಯಾಂಕಿಂಗ್ ಸೇವೆಗಳನ್ನು ಪಡೆಯಬಹುದಾಗಿದೆ. ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮ ಯೋಜನೆ 18ರಿಂದ 50 ವರ್ಷವರೆಗೆ ವರ್ಷಕ್ಕೆ 436 ಪಾವತಿಸಿ 2 ಲಕ್ಷ ಜೀವ ವಿಮೆ ಹಾಗೂ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆ ಮೂಲಕ 8 ರಿಂದ 70 ವರ್ಷ ವಯಸ್ಸಿನವರಿಗೆ ವರ್ಷಕ್ಕೆ ಕೇವಲ 20 ರೂಪಾಯಿ ಪಾವತಿಸಿ, 2 ಲಕ್ಷ ಅಪಘಾತ ವಿಮೆ ಪಡೆಯುವ ಅತ್ಯುತ್ತಮ ಯೋಜನೆಗಳಾಗಿದ್ದು, ಈ ಯೋಜನೆಗಳಿಗೆ ಪ್ರತಿಂಯೊಬ್ಬರೂ ನೋಂದಾಯಿಸಲು ಕರೆ ನೀಡಿದರು.

ಕೆನರಾ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕ ಲೋಹಿತ್ ಮಾತನಾಡಿ, ಬ್ಯಾಂಕ್ ಮೂಲಕ ಸ್ತ್ರೀಶಕ್ತಿ ಸಂಘ, ರೈತರು, ಉದ್ಯಮಿದಾರರು, ವಿದ್ಯಾರ್ಥಿಗಳಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ನೀಡಲಾಗುತ್ತಿದ್ದು, ಸದ್ಬಳಕೆ ಮಾಡಿಕೊಳ್ಳಲು ಮುಂದಾಗಬೇಕಿದೆ. ಮೊದಲೆಲ್ಲಾ ಬ್ಯಾಂಕ್‌ನಲ್ಲಿ ಖಾತೆ ತೆರೆಯಬೇಕೆಂದರೆ ದಿನಗಟ್ಟಲೆ ಕಾಯಬೇಕಿತ್ತು. ಆದರೀಗ ಬದಲಾದ ಪರಿಸ್ಥಿತಿಯಲ್ಲಿ ಬ್ಯಾಂಕೇ ನಿಮ್ಮ ಬಳಿ ಬಂದು ಖಾತೆ ತೆರೆಯುವ ಅಭಿಯಾನ ಹಮ್ಮಿಕೊಂಡಿದೆ. ಹಾಗಾಗಿ ಎಲ್ಲರೂ ಇದರ ಸದುಪ ಯೋಗ ಪಡಿಸಿಕೊಂಡು ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಮುಂದಾಗ ಬೇಕೆಂದು ಕರೆ ನೀಡಿದರು.

ವಾಟಾಳು ಶ್ರೀಮಠದ ಕಿರಿಯ ಶ್ರೀಗಳಾದ ಶಿವಕುಮಾರಸ್ವಾಮಿ, ಗ್ರಾಪಂ ಅಧ್ಯಕ್ಷ ಪುಟ್ಟಬುದ್ದಿ, ಪಿಡಿಓ ಸೋಲೋಮನ್ ರಾಜ್, ಉಪನ್ಯಾಸಕ ಕುಮಾರಸ್ವಾಮಿ, ಗ್ರಾಮೀಣ ಫೌಂಡೇಶನ್ ಆಫ್ ಕರ್ನಾಟಕ ಟ್ರಸ್ಟ್ ಅಧ್ಯಕ್ಷ ಮರಿಸ್ವಾಮಿ, ಬಿಸಿ ಇನ್ ಚಾರ್ಜ್ ಸಬ್‌ಕೆ ಕಂಪನಿಯ ಆನಂದ್, ಬ್ಯಾಂಕ್‌ನ ಮಲ್ಲಿಕಾ, ರಾಧ, ಗುರುಪಾದ ಸೇರಿದಂತೆ ವಿವಿಧ ಮಹಿಳಾ ಸಂಘಟನೆ ಮುಖ್ಯಸ್ಥರು ಹಾಜರಿದ್ದರು.

ಸನ್ಮಾನ



ಕಂಪಲಾಪುರ ಸರ್ಕಾರಿ ಪ್ರೌಢಶಾಲೆಗೆ ಶುದ್ಧ ಕುಡಿಯುವ ನೀರಿನ ಘಟಕ ಕೊಡುಗೆ ನೀಡಿದ ಡೆಕ್ಕನ್ ಕಂಪನಿ ವ್ಯವಸ್ಥಾಪಕ ಅಪ್ರೋಜ್ ಪಾಷಾ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಮುಖ್ಯ ಶಿಕ್ಷಕ ಮಹದೇವಯ್ಯ, ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣ, ಸದಸ್ಯರಾದ ಮಂಜು, ವೀರಭದ್ರ, ಮಂಜುನಾಥ್, ಪತ್ರಕರ್ತರಾದ ಸದಾಶಿವ, ರಾಜೇಶ್ ಮತ್ತಿತರರಿದ್ದರು.

ಪ್ರಜ್ವಲ್ ನಾಯಕ್ ನಿಧನ



ಹೆಚ್.ಡಿ.ಕೋಟೆ, ಆ.21– ಪುರಸಭಾ ಸದಸ್ಯ ಪುಟ್ಟ ಬಸವ ನಾಯಕ ಅವರ ಪುತ್ರ ಪ್ರಜ್ವಲ್ ನಾಯಕ್(22) ಗುರುವಾರ ನಿಧನರಾದರು. ಮೃತರು ತಂದೆ, ತಾಯಿ, ತಂಗಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಗಣ್ಯರು ಮೃತರ ಅಂತಿಮ ದರ್ಶನ ಪಡೆದರು. ಅಂತ್ಯಕ್ರಿಯೆ ಪಟ್ಟಣದ ಮೃತರ ತೋಟದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಾಷ್ಟ್ರೀಯ ಅಂಚೆ ಸಪ್ತಾಹ ಪ್ರಯುಕ್ತ

ಅ.26ರಂದು ಮೈಸೂರು ಮ್ಯಾರಥಾನ್

ದೇಶದ ವಿವಿಧ ಭಾಗಗಳಿಂದ 10 ಸಾವಿರ ಮಂದಿ ಭಾಗವಹಿಸುವ ನಿರೀಕ್ಷೆ ; ಅಂಚೆ ಇಲಾಖೆಯ ಕರ್ನಾಟಕ ವೃತ್ತದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಕೆ.ಪ್ರಕಾಶ್ ಮಾಹಿತಿ

ಮೈಸೂರು,ಆ.21(ಪಿಎಂ)– ಭಾರತೀಯ ಅಂಚೆ ಇಲಾಖೆಯ ಕರ್ನಾಟಕ ಅಂಚೆ ವೃತ್ತದ ವತಿಯಿಂದ ರಾಷ್ಟ್ರೀಯ ಅಂಚೆ ಸಪ್ತಾಹದ ಪ್ರಯುಕ್ತ 'ಮೈಸೂರು ಮ್ಯಾರಥಾನ್' ಶೀರ್ಷಿಕೆಯಡಿ ಅ.26ರಂದು ಮೈಸೂರಿನಲ್ಲಿ ಮ್ಯಾರಥಾನ್ ಆಯೋಜಿಸಲಾಗಿದೆ.

ಎನ್ಇಬಿ ಸ್ಪೋರ್ಟ್ಸ್ ಅಂಡ್ ಎಂಟರ್ಟೈನ್ ಮೆಂಟ್ ಲಿಮಿಟೆಡ್ ಹಾಗೂ ಕರ್ನಾಟಕ ರಾಜ್ಯ ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯದ ಸಹಯೋಗದೊಂದಿಗೆ ಈ ಮ್ಯಾರಥಾನ್ ಆಯೋಜಿಸಲಾಗಿದೆ. ಪೂರ್ಣ ಮ್ಯಾರಥಾನ್ (42.2 ಕಿ.ಮೀ.), ಹಾಫ್ ಮ್ಯಾರಥಾನ್ (21.1 ಕಿ.ಮೀ.), 10ಕೆ (10 ಕಿ.ಮೀ.) ಹಾಗೂ 5ಕೆ ಫನ್ ರನ್ (5 ಕಿ.ಮೀ.) ಸೇರಿದಂತೆ ನಾಲ್ಕು ವಿಭಾಗಗಳಲ್ಲಿ ಮ್ಯಾರಥಾನ್ ನಡೆಯಲಿದೆ.

ಮೈಸೂರಿನ ನಜರ್‌ಬಾದಿನ ಹೆರಿಟೇಜ್ ಪೋಸ್ಟಲ್ ತರಬೇತಿ ಕೇಂದ್ರದ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅಂಚೆ ಇಲಾಖೆಯ ಕರ್ನಾಟಕ ವೃತ್ತದ ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಕೆ.ಪ್ರಕಾಶ್ ಈ ವಿಷಯ ತಿಳಿಸಿದರು.

ಮೈಸೂರು ಮ್ಯಾರಥಾನ್ ಮೊದಲ ಆವೃತ್ತಿಯನ್ನು ಪ್ರಸ್ತುತಪಡಿಸಲು ಭಾರತೀಯ ಅಂಚೆ ಇಲಾಖೆ ಹೆಮ್ಮೆಪಡುತ್ತದೆ. ಅ.9ರಂದು ಆಚರಿಸಲಾಗುವ ವಿಶ್ವ ಅಂಚೆ ದಿನದ ಪ್ರಯುಕ್ತ ಸಹ ಈ ಓಟವನ್ನು ಹಮ್ಮಿಕೊಳ್ಳಲಾಗಿದೆ. ಹೆರಿಟೇಜ್ ಪೋಸ್ಟಲ್ ತರಬೇತಿ ಕೇಂದ್ರದಿಂದ ಮ್ಯಾರಥಾನ್ ಆರಂಭಗೊಳ್ಳಲಿದ್ದು, ಇಲ್ಲಿಯೇ ಕೊನೆಗೊಳ್ಳಲಿದೆ. ಓಟದ ಮಾರ್ಗವು ಚಾಮುಂಡಿಬೆಟ್ಟದ ರಮಣೀಯ ಪ್ರದೇಶವನ್ನು ಒಳಗೊಂಡಿದೆ ಎಂದು ಹೇಳಿದರು.



ಮ್ಯಾರಥಾನ್ ಕುರಿತ ಮಾಹಿತಿ ಒಳಗೊಂಡಿರುವ ಪೋಸ್ಟ್ ಕಾರ್ಡ್ ಮಾದರಿ ಚೀಟಿಗಳನ್ನು ಪ್ರದರ್ಶಿಸಲಾಯಿತು.

ಅಂದು ಬೆಳಗ್ಗೆ 4.30ಕ್ಕೆ ಪೂರ್ಣ ಪ್ರಮಾಣದ ಮ್ಯಾರಥಾನ್ ಪ್ರಾರಂಭವಾಗಲಿದೆ. ಇದರಲ್ಲಿ ಭಾಗವಹಿಸಲು 2,500 ರೂ. ಪಾವತಿಸಿ ನೋಂದಣಿ ಮಾಡಿಕೊಳ್ಳಬೇಕು. ಆ.31ಕ್ಕೂ ಮೊದಲೇ ನೋಂದಣಿ ಮಾಡಿಕೊಂಡರೆ 1,250 ರೂ.ಗಳ ರಿಯಾಯಿತಿ ದೊರೆಯಲಿದೆ. ಅಂದು ಬೆಳಗ್ಗೆ 5.30ಕ್ಕೆ ಹಾಫ್ ಮ್ಯಾರಥಾನ್ ನಡೆಯಲಿದ್ದು, ಇದರಲ್ಲಿ ಪಾಲ್ಗೊಳ್ಳಲು ಆ.31ರೊಳಗೆ ನೋಂದಣಿ ಮಾಡಿದರೆ 950 ರೂ.ಗಳ ರಿಯಾಯಿತಿ ದರದಲ್ಲಿ ಭಾಗವಹಿಸಲು ಅವಕಾಶ ದೊರೆಯಲಿದೆ ಎಂದರು.

ಅದೇ ರೀತಿಯಲ್ಲಿ ಅಂದು ಬೆಳಗ್ಗೆ 5.30ಕ್ಕೆ ಆರಂಭವಾಗುವ 10ಕೆ ಓಟದಲ್ಲಿ ಭಾಗವಹಿಸಲು 750 ರೂ. ಹಾಗೂ ಅಂದು ಬೆಳಗ್ಗೆ 7.30ಕ್ಕೆ ಆರಂಭವಾಗುವ 5ಕೆ ಓಟದಲ್ಲಿ ಭಾಗವಹಿಸಲು 350 ರೂ.ಗಳ ಪ್ರವೇಶ ಶುಲ್ಕ ಇದ್ದು, ಆ.31ರೊಳಗೆ ನೋಂದಣಿ ಮಾಡಿಕೊಂಡರೆ ಈ ರಿಯಾಯಿತಿ ಲಭಿಸಲಿದೆ ಎಂದು ವಿವರಿಸಿದರು.

ಎಲ್ಲಾ ಓಟಗಾರರಿಗೂ ಟಿ ಶರ್ಟ್ ಹಾಗೂ ಬಿಬ್‌ಗಳನ್ನು ನೀಡಲಾಗುವುದು. ಬಹುಮಾನದ ಮೊತ್ತವನ್ನು ಸದ್ಯ ನಿಗದಿ ಮಾಡಿಲ್ಲ. ಎಲ್ಲಾ ವಿಭಾಗಗಳಿಗೂ ಬಹುಮಾನ ಇರಲಿದೆ. ಅಂಚೆ ಇಲಾಖೆಯಿಂದ ಇದೇ ಮೊದಲ ಬಾರಿಗೆ ಮ್ಯಾರಥಾನ್ ನಡೆಸಲಾಗುತ್ತಿದೆ ಎಂದು ಪ್ರಶ್ನೆಗಳಿಗೆ ಉತ್ತರಿಸಿದರು.

ಅಂಚೆ ಇಲಾಖೆಗೆ ಓಟ ಹೊಸದಲ್ಲ: ಪ್ರಸ್ತುತ ಇಡೀ ಪ್ರಪಂಚದಲ್ಲಿ ಮ್ಯಾರಥಾನ್ ಜನಪ್ರಿಯಗೊಂಡಿದೆ. ವಿಶೇಷವಾಗಿ ಮ್ಯಾರಥಾನ್‌ನಲ್ಲಿ ಭಾಗವಹಿಸಲು ಯುವ ಜನರು ಆಸಕ್ತಿ ತೋರುವುದನ್ನು ಕಾಣಬಹುದು. ಸಾರಿಗೆ ವ್ಯವಸ್ಥೆ ಈಗಿನಂತೆ ಅಭಿವೃದ್ಧಿಗೊಳ್ಳುವ ಮುನ್ನ ಅಂಚೆ ಇಲಾಖೆ ಸಿಬ್ಬಂದಿ ಓಟ ಹಾಗೂ ನಡಿಗೆ ಮೂಲಕ ಪತ್ರಗಳನ್ನು ತಲುಪಿಸುತ್ತಿದ್ದರು. ಹಾಗಾಗಿ ಓಟವು ನಮ್ಮ ಇಲಾಖೆಗೆ ಹೊಸದೇನಲ್ಲ. ಇಂದಿಗೂ ಜಮ್ಮು ಕಾಶ್ಮೀರದ ಕಣಿವೆ ಪ್ರದೇಶದಲ್ಲಿ ನಮ್ಮ ಇಲಾಖೆ ಸಿಬ್ಬಂದಿ ಓಟ ಹಾಗೂ ನಡಿಗೆ ಮೂಲಕವೇ ಪತ್ರಗಳನ್ನು ರವಾನಿಸುವ ವ್ಯವಸ್ಥೆ ಇದೆ ಎಂದು ತಿಳಿಸಿದರು.

ಈ ಮ್ಯಾರಥಾನ್ ಕೇವಲ ಮೈಸೂರಿಗರಿಗೆ ಮಾತ್ರ ಸೀಮಿತವಲ್ಲ. ದೇಶದ ವಿವಿಧ ಭಾಗಗಳಿಂದ ಸುಮಾರು 10 ಸಾವಿರ ಓಟಗಾರರು ಭಾಗವಹಿಸುವ ನಿರೀಕ್ಷೆ ಹೊಂದಿದ್ದೇವೆ. ನೋಂದಣಿ ಈಗಾಗಲೇ ಪ್ರಾರಂಭವಾಗಿದೆ ಎಂದು ವಿವರಿಸಿದರು. ಅಂಚೆ ಇಲಾಖೆಯ ದಕ್ಷಿಣ ಕರ್ನಾಟಕ ವಲಯದ ಪಿಎಂಜಿ ಚಂದ್ರಶೇಖರ್ ಕಾಕುಮನ್ನು, ಸಿಇಪಿಟಿ ಜಿಎಂ ಡಾ.ಪಿ.ಎಂ.ಶರವಣನ್, ಕೆಆರ್ ಆಸ್ಪತ್ರೆ ಮಾನಸಿಕ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ.ಬಿ.ಎನ್.ರವೀಶ್, ಮೈಸೂರು ಅಂಚೆ ತರಬೇತಿ ಕೇಂದ್ರದ ನಿರ್ದೇಶಕ ಡಾ.ಆಶಿಶ್ ಸಿಂಗ್ ಠಾಕೂರ್ ಮತ್ತಿತರರು ಗೋಷ್ಠಿಯಲ್ಲಿದ್ದರು.

ಮ್ಯಾರಥಾನ್ ಹಾಗೂ ಹಾಫ್ ಮ್ಯಾರಥಾನ್‌ನಲ್ಲಿ ಭಾಗವಹಿಸಲು 18 ವರ್ಷ ವಯಸ್ಸು ನಿಗದಿ ಮಾಡಿದ್ದು, 10ಕೆ ಓಟಕ್ಕೆ 14 ವರ್ಷ ವಯಸ್ಸು ನಿಗದಿ ಮಾಡಲಾಗಿದೆ. 5ಕೆ ಫನ್ ರನ್‌ಗೆ 6 ವರ್ಷ ವಯಸ್ಸು ನಿಗದಿಗೊಳಿಸಲಾಗಿದೆ. ಈ ಕುರಿತ ಹೆಚ್ಚಿನ ಮಾಹಿತಿ ಹಾಗೂ ನೋಂದಣಿಗಾಗಿ https://www.mysamay.in/public/event/info/3afc8819-d56f-4f5f-bed6-27fa1b444439""https://mysurumarathon.com, https://nebsports.in/scheduleಗೆ ಭೇಟಿ ನೀಡಬಹುದು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಇಂದ್ರ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಕೂಲಿ (ಕ) + ಕೂಲಿ (ತ)	2+2 ಪ್ರದರ್ಶನಗಳು
ಬಾಲಾಜಿ	(ದೂ: 2497199)
ವಾರ್ –2 (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9986022634)
ಸು ಫ್ರಮ್ ಸೋ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕೂಲಿ (ಕ)	4 ಪ್ರದರ್ಶನಗಳು
ರಾಜಕಮಲ್	
ವಾರ್–2 (ತೆ)	4 ಪ್ರದರ್ಶನಗಳು
ಸಂಗಂ	
ಸು ಫ್ರಮ್ ಸೋ (ಕ)	4 ಪ್ರದರ್ಶನಗಳು
ಲಿಡೋ	
ಹಚ್ಚೆ (ಕ) + ವಾರ್–2 (ತೆ)	2+2 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಜಸ್ಟ್ ಮ್ಯಾರಿಡ್ (ಕ) + ಕಮರೊ2 (ಕ)	2+2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕೂಲಿ (ತ): ಬೆ.7ಕ್ಕೆ, ಮ.3ಕ್ಕೆ, ರಾ.10.15ಕ್ಕೆ, ವಾರ್ –2 (ಹಿಂ): ಬೆ.10.45ಕ್ಕೆ, ಸಂ.6.40ಕ್ಕೆ.
ಸ್ಕ್ರೀನ್ 2	ಕೂಲಿ (ತ): ಬೆ.7ಕ್ಕೆ, ಸು ಫ್ರಂ ಸೋ (ಕ): ಬೆ.10.20ಕ್ಕೆ, ಮ.1.15ಕ್ಕೆ, ಸಂ.4.10ಕ್ಕೆ, ರಾ.7ಕ್ಕೆ, ವಾರ್ –2 (ಹಿಂ): ರಾ.9.50ಕ್ಕೆ.
ಸ್ಕ್ರೀನ್ 3	ಕೂಲಿ (ತ): ಬೆ.7.05ಕ್ಕೆ, ರಾ.8.15ಕ್ಕೆ, ಕೂಲಿ (ಕ): ಬೆ.10.30ಕ್ಕೆ, ಮಹಾವತಾರ ನರಸಿಂಹ (3ಡಿ)(ಕ): ಮ.1.50ಕ್ಕೆ, ವಾರ್ –2 (ಹಿಂ): ಸಂ.4.35ಕ್ಕೆ.
ಸ್ಕ್ರೀನ್ 4	ಕೂಲಿ (ತ): ಬೆ.7ಕ್ಕೆ, ಬೆ.11.55ಕ್ಕೆ, ಮ.3.25ಕ್ಕೆ, ಸಂ.6.45ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
MVC
ದೂ : 0821–2973519

ಸ್ಕ್ರೀನ್ 1	ಸು ಫ್ರಂ ಸೋ (ಕ): ಬೆ.10ಕ್ಕೆ, ಮ.3.55ಕ್ಕೆ, ವಾರ್–2 (ಹಿಂ): ಮ.12.40ಕ್ಕೆ, ಕೂಲಿ (ಕ): ಸಂ.6.35ಕ್ಕೆ, ಕೂಲಿ (ತ): ರಾ.9.40ಕ್ಕೆ
ಸ್ಕ್ರೀನ್ 2	ಕೂಲಿ (ತ): ಬೆ.6.45ಕ್ಕೆ, ಬೆ.10ಕ್ಕೆ, ಸಂ.4.35ಕ್ಕೆ, ರಾ.7.50ಕ್ಕೆ, ವಾರ್–2 (ಹಿಂ): ಮ.1.15ಕ್ಕೆ.
ಸ್ಕ್ರೀನ್ 3	ವಾರ್–2 (ಹಿಂ): ಬೆ.10.05ಕ್ಕೆ, ಸು ಫ್ರಂ ಸೋ (ಕ): ಮ.1.20ಕ್ಕೆ, ರಾ.7.10ಕ್ಕೆ, ಕೂಲಿ (ಕ): ಸಂ.4ಕ್ಕೆ, ಕೂಲಿ (ತ): ರಾ.9.50ಕ್ಕೆ.
ಸ್ಕ್ರೀನ್ 4	ಕೂಲಿ (ತ): ಬೆ.7ಕ್ಕೆ, ಮಹಾವತಾರ ನರಸಿಂಹ (3ಡಿ)(ಕ): ಬೆ.10.15ಕ್ಕೆ, ಸಂ.4ಕ್ಕೆ, ಕೂಲಿ (ಕ): ಮ.12.45ಕ್ಕೆ, ವಾರ್–2 (ಹಿಂ): ಸಂ.6.35ಕ್ಕೆ, ರಾ.9.55ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ಸಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಇಲವಾಲ ಬಳಿಯ ಅರಣ್ಯ ಪ್ರದೇಶದಲ್ಲಿ ಹುಲಿಗೆ ಮೂರು ಹಸುಗಳು ಬಲಿ



ಹುಲಿ ದಾಳಿಗೆ ಬಲಿಯಾಗಿರುವ ಹಸುಗಳು

ಮೈಸೂರು, ಆ.21(ಎಂಕೆ)– ಹುಲಿ ದಾಳಿಗೆ ಒಂದೇ ವಾರದಲ್ಲಿ 3 ಹಸುಗಳು ಬಲಿಯಾಗಿರುವ ಘಟನೆ ಮೈಸೂರು ಇಲವಾಲದ ಆರ್‌ಎಂಪಿ ಕಾಲೋನಿ ಸಮೀಪದಲ್ಲಿರುವ ಆಲೋಕ ಫಾರೆಸ್ಟ್‌ನಲ್ಲಿ ನಡೆದಿದೆ.

ಹಳೆ ಕಾಮನಕೊಪ್ಪಲು, ಇಲವಾಲ ಗ್ರಾಮದ ರೈತರಿಗೆ ಸೇರಿದ ಹಸುಗಳ ಮೇಲೆ ದಾಳಿ ನಡೆದಿದ್ದು, ಹಾಡಹಗಲೇ ಹುಲಿ ದಾಳಿ ನಡೆಸುತ್ತಿದೆ ಎಂದು ಪ್ರತ್ಯಕ್ಷದರ್ಶಿಯೊಬ್ಬರು ತಿಳಿಸಿದ್ದಾರೆ.

ಕಳೆದ ಒಂದು ವಾರದಿಂದ ಆಲೋಕ ಫಾರೆಸ್ಟ್‌ನಲ್ಲಿ ಎರಡು ಹುಲಿಗಳು ಪ್ರತ್ಯಕ್ಷವಾಗಿದ್ದು, ನಿನ್ನೆ(ಆ.20)ಯಿಂದ 3 ಹಸುಗಳ ಮೇಲೆ ದಾಳಿ ಮಾಡಿವೆ. ಇದರಿಂದ ಅಕ್ಕ–ಪಕ್ಕದ ಗ್ರಾಮಸ್ಥರಲ್ಲಿ ಭೀತಿ ಉಂಟಾಗಿದೆ. ನಿನ್ನೆ 2 ಹಸುಗಳ ಮೇಲೆ ದಾಳಿ ಮಾಡಿದ್ದ ಹುಲಿ, ಗುರುವಾರ ಮಧ್ಯಾಹ್ನ 2 ಗಂಟೆ ಸುಮಾರಿಗೆ ರಸ್ತೆ ಬದಿಯಲ್ಲಿ ಮೇಯುತ್ತಿದ್ದ ಹಸುವೊಂದನ್ನು ಹೊತ್ತೊಯ್ದಿವೆ ಎಂದಿದ್ದಾರೆ.

ಅರಣ್ಯ ಸಿಬ್ಬಂದಿಗೆ ಈಗಾಗಲೇ ವಿಷಯ ತಿಳಿಸಿದ್ದು, ಒಂದು ಸ್ಥಳದಲ್ಲಿ ಬೋನ್ ಇಟ್ಟು ಹೋದವರು ಇದುವರೆಗೂ ತಿರುಗಿ ನೋಡಿಲ್ಲ. ಇದೇ ರೀತಿ ನಿರ್ಲಕ್ಷ್ಯತೆ ವಹಿಸಿದರೆ, ಮನುಷ್ಯರ ಮೇಲೂ ದಾಳಿಯಾಗಬಹುದು ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಮೈಸೂರು ಕೋ–ಆಪರೇಟಿವ್ ಬ್ಯಾಂಕ್‌ನಿಂದ ಉಚಿತ ಆರೋಗ್ಯ, ಕಣ್ಣಿನ ತಪಾಸಣಾ ಶಿಬಿರ ಯಶಸ್ವಿ

ಎರಡು ದಿನ ನೂರಾರು ಮಂದಿಯ ತಪಾಸಣೆ

ಮೈಸೂರು, ಆ.21– ಮೈಸೂರಿನ ಗಾಂಧಿಚೌಕದಲ್ಲಿರುವ ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ವತಿಯಿಂದ ಸದಸ್ಯರಿಗಾಗಿ ಆಯೋಜಿಸಿದ್ದ ಎರಡು ದಿನಗಳ ಆರೋಗ್ಯ ಮತ್ತು ಕಣ್ಣಿನ ತಪಾಸಣಾ ಶಿಬಿರ ಯಶಸ್ವಿಯಾಗಿದ್ದು, 500ಕ್ಕೂ ಹೆಚ್ಚು ಮಂದಿ ಪ್ರಯೋಜನ ಪಡೆದುಕೊಂಡರು.

ಶಿಬಿರಕ್ಕೆ ಚಾಲನೆ ನೀಡಿದ ಸಹಕಾರ ಸಂಘಗಳ ಸಹಾಯಕ ನಿಬಂಧಕ ಮನೋಜ್ ಕುಮಾರ್ ಮಾತನಾಡಿ, ಸಹಕಾರ ತತ್ವದಡಿ ಸ್ಥಾಪನೆಯಾದ ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ಯಶಸ್ವಿಯಾಗಿ 120ನೇ ವರ್ಷಕ್ಕೆ ದಾಪುಗಾಲಿಟ್ಟಿದೆ. ಬ್ಯಾಂಕ್‌ನ ಆಡಳಿತ ಮಂಡಳಿಯು ರಚನಾತ್ಮಕ ಹಾಗೂ ಕ್ರಿಯಾಶೀಲ ಚಟುವಟಿಕೆಯೊಂದಿಗೆ ಸಹಕಾರಿಗಳ ವಿಶ್ವಾಸ ಗಳಿಸಿದೆ. ಈ ನಿಟ್ಟಿನಲ್ಲಿ ಬ್ಯಾಂಕ್ ಸದಸ್ಯರ ಆರೋಗ್ಯದ ಕಾಳಜಿಯಿಂದ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿದ್ದು ಶ್ಲಾಘನೀಯ ಎಂದರು.



ಮೈಸೂರಿನ ಗಾಂಧಿಚೌಕದಲ್ಲಿರುವ ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ವತಿಯಿಂದ ಸದಸ್ಯರಿಗಾಗಿ ಆರೋಗ್ಯ ಮತ್ತು ಕಣ್ಣಿನ ತಪಾಸಣಾ ಶಿಬಿರ ಏರ್ಪಡಿಸಲಾಗಿತ್ತು.

ಹಲವು ಕಾರ್ಯಕ್ರಮಗಳ ಚಿಂತನೆ: ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಜೆ.ಯೋಗೇಶ್ ಮಾತನಾಡಿ, ಬ್ಯಾಂಕ್ ಮುಖ್ಯ ಕಛೇರಿಯಲ್ಲಿ ಕಣ್ಣು, ಕಿವಿ, ಹೃದಯ, ಕ್ಯಾನ್ಸರ್ ರೋಗಗಳಿಗೆ ಸಂಬಂಧಿಸಿದ ತಜ್ಞ ವೈದ್ಯರ ತಂಡವು ಆರೋಗ್ಯ ತಪಾಸಣೆಯಲ್ಲಿ ಪಾಲ್ಗೊಂಡಿತ್ತು. ಎರಡು ದಿನಗಳಲ್ಲಿ 500ಕ್ಕೂ ಹೆಚ್ಚಿನ ಸದಸ್ಯರು ತಪಾಸಣೆ ಮಾಡಿಸಿಕೊಂಡು ವೈದ್ಯರ ಮಾರ್ಗದರ್ಶನ ಪಡೆದಿದ್ದಾರೆ. ಮುಂದಿನ ದಿನಗಳಲ್ಲಿ ಇಂತಹ ಹಲವು ರಚನಾತ್ಮಕ ಕಾರ್ಯಕ್ರಮಗಳನ್ನು ಬ್ಯಾಂಕ್ ವತಿಯಿಂದ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಸೆ.14ಕ್ಕೆ ವಾರ್ಷಿಕ ಮಹಾಸಭೆ: ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ ಮಾತನಾಡಿ, ಮುಂದಿನ ಸೆಪ್ಟೆಂಬರ್ 14ರ ಭಾನುವಾರ ದಸರಾ ವಸ್ತು ಪ್ರದರ್ಶನದ ಆವರಣದಲ್ಲಿ ಬ್ಯಾಂಕ್‌ನ 119ನೇ ವಾರ್ಷಿಕ ಮಹಾಸಭೆ ನಡೆಯಲಿದ್ದು, ಎಲ್ಲಾ ಸದಸ್ಯರೂ ಭಾಗವಹಿಸಬೇಕು. ಈ ವೇಳೆ ಮರೆಯದೆ ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಬೇಕು. ಈ ಮೂಲಕ ಮುಂಬರುವ ಚುನಾವಣೆಗಳಿಗೆ ತಮ್ಮ ಮತದಾನದ ಹಕ್ಕನ್ನು ಸಂರಕ್ಷಿಸಿಕೊಳ್ಳಬೇಕು. ಈ ಹಿಂದಿನ ಚುನಾವಣೆಯಲ್ಲಾದ ಸಮಸ್ಯೆಗಳು ಮರುಕಳಿಸಬಾರದು ಎಂದು ಸಲಹೆ ನೀಡಿದರು.

ಈ ಸಂಧರ್ಭದಲ್ಲಿ ಬ್ಯಾಂಕ್‌ನ ಉಪಾಧ್ಯಕ್ಷ ಕುಂಬಾರಕೊಪ್ಪಲು ಟೆಂಟ್ ರವಿ, ನಿರ್ದೇಶಕರಾದ ಪಿ.ರಾಜೇಶ್ವರಿ, ಎನ್.ಯೋಗಾನಂದ, ಜಿ.ನಿರಂಜನ್, ರಾಜಕೀಯ ರವಿಕುಮಾರ್, ಹೆಚ್.ಹರೀಶ್ ಕುಮಾರ್, ಆರ್.ಸೋಮಣ್ಣ, ಸಿ.ಚಂದ್ರಶೇಖರ್, ಕೆ.ಗಿರೀಶ್, ಎಂ.ಪ್ರಮೀಳ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಹರ್ಷಿತ್ ಗೌಡ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರಲ್ಲಿ ಮಾಜಿ ಪ್ರಧಾನಿ ರಾಜೀವ್ ಗಾಂಧಿ, ಮಾಜಿ ಸಿಎಂ ದೇವರಾಜ ಅರಸು ಜನ್ಮ ದಿನಾಚರಣೆ

ಇಬ್ಬರು ನಾಯಕರ ಸೇವೆ, ಆದರ್ಶ ಸ್ಮರಿಸಿದ ಕಾಂಗ್ರೆಸಿಗರು

ಮೈಸೂರು, ಆ.21(ಎಂಕೆ)– ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಕಾಂಗ್ರೆಸ್ ಕಚೇರಿಯಲ್ಲಿ ಮೈಸೂರು ನಗರ ಹಾಗೂ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಮಾಜಿ ಪ್ರಧಾನ ಮಂತ್ರಿ ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಜನ್ಮ ದಿನ ಆಚರಿಸಲಾಯಿತು.


ಕಾರ್ಯಕ್ರಮವನ್ನು ಹಿರಿಯ ಕಾಂಗ್ರೆಸ್ ನಾಯಕರೂ ಆದ ಮಾಜಿ ಸಚಿವೆ ರಾಣಿ ಸತೀಶ್ ಅವರು ಉದ್ಘಾಟಿಸಿ, ಮಾಜಿ ಪ್ರಧಾನಿ ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ನಂತರ ಮಾತನಾಡಿ, ರಾಜೀವ್ ಗಾಂಧಿ ಹಾಗೂ ದೇವರಾಜ ಅರಸು ಅವರು ನೈತಿಕ ರಾಜಕಾರಣದ ಕ್ರಾಂತಿ ಪುರುಷರಾಗಿದ್ದಾರೆ ಎಂದರು.

ನಮ್ಮ ತಂದೆ ಎಚ್.ಎಂ ಚೆನ್ನಬಸಪ್ಪ ಹಾಗೂ ದೇವರಾಜ ಅರಸು ಆತ್ಮೀಯ ಒಡನಾಡಿಗಳಾಗಿದ್ದು, ಹಿಂದುಳಿದ ವರ್ಗದ ಮಹಿಳೆಯರಿಗೆ ರಾಜಕೀಯವಾಗಿ ಸ್ಥಾನ–ಮಾನ ಕಲ್ಪಿಸುವಲ್ಲಿ ದೇವರಾಜ ಅರಸು ಅವರ ಪಾತ್ರ ಗಣನೀಯವಾಗಿದೆ. ಹಿಂದುಳಿದ ವರ್ಗಕ್ಕೆ ಮೀಸಲಾತಿ ತರುವಲ್ಲಿ ಅವರ ಪಾತ್ರ ದೊಡ್ಡದಾಗಿದೆ. ಮಹಿಳೆಯರಿಗೆ ವಿಧವಾ ವೇತನ, ವೃದ್ಧಾಪ್ಯ ವೇತನ ಜಾರಿ ಮಾಡಿ ಆರ್ಥಿಕ ಸಬಲೀಕರಣ ಮತ್ತು ಭದ್ರತೆಗೆ ಅಡಿಗಲ್ಲು ಹಾಕಿದವರು ಅರಸು ಎಂದು ಸ್ಮರಿಸಿದರು.

ಹಿಂದುಳಿದ ವರ್ಗಗಳ ಮನೆದೇವರಾದ ಕರ್ನಾಟಕದ ಅರಸು ಕುರಿತು ಇತಿಹಾಸ ಹಾಗೂ ಪರಂಪರೆ ತಜ್ಞ ಪ್ರೊ.ರಂಗರಾಜು ಮಾತನಾಡಿ, ಡಿ.ದೇವರಾಜ ಅರಸು ಅವರು ಸಾರ್ವಕಾಲಿಕ ಹಿಂದುಳಿದ ವರ್ಗಗಳ ಚಿರಸ್ಮರಣೀಯ ನಾಯಕರಾಗಿದ್ದಾರೆ. ಅವರು ಬೆಂಗಳೂರಿನಲ್ಲಿ ಬಿಎಸ್ಸಿ ಪದವಿ ಪಡೆದು, ಬಳಿಕ ತಮ್ಮ ಸ್ವಗ್ರಾಮಕ್ಕೆ ಬಂದು ಕೃಷಿಯಲ್ಲಿ ತೊಡಗಿಸಿಕೊಂಡಿದ್ದರು. ಆದರೆ, ಅವರಲ್ಲಿದ್ದ ರಾಜಕೀಯದ ಗೀಳು ರಾಜಕಾರಣಕ್ಕೆ ಬರುವಂತೆ ಮಾಡಿತು ಎಂದರು.

ಪಕ್ಷ ಸಂಘಟನೆ ಹಾಗೂ ಅಧಿಕಾರಾವಧಿಯಲ್ಲಿ ಎಂದಿಗೂ ರಾಜಿಯಾಗದ ವ್ಯಕ್ತಿತ್ವ ದೇವರಾಜ ಅರಸು ಅವರದು. ಎರಡು ಬಾರಿ ಮುಖ್ಯಮಂತ್ರಿಯಾಗಿ ಯಶಸ್ವಿಯಾಗಿ ಸರ್ಕಾರವನ್ನು ಮುನ್ನಡೆಸಿ, ಸಾವಿರಾರು ಯೋಜನೆಗಳನ್ನು ಜಾರಿಗೆ ತಂದು ಬಡವರು, ಹಿಂದುಳಿದವರು ಮತ್ತು ದೀನ–ದಲಿತರ ಪಾಲಿನ ಆಶಾಕಿರಣವಾಗಿ ಬೆಳೆದು ನಿಂತವರು. ಉಳುವವನೇ ಭೂಮಿಯ ಒಡೆಯ ಕಾನೂನನ್ನು ದೇಶದಲ್ಲೇ ಪ್ರಥಮ ಬಾರಿಗೆ ಜಾರಿಗೆ ತಂದು ಬಡವರ ಪಾಲಿನ ಆರಾಧ್ಯರಾಗಿ ರೂಪುಗೊಂಡರು. ದಿಟ್ಟತನದಿಂದ ಅವರು ಮಾಡಿದ ಈ ಪ್ರಯತ್ನದ ಫಲದಿಂದ ಇಂದು ಕರ್ನಾಟಕದಲ್ಲಿ ಬಹುತೇಕ ಜನರು ಊಟ ಮಾಡುವಂತೆ ಆಗಿದೆ ಎಂದು ತಿಳಿಸಿದರು.

ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಮಾತನಾಡಿ, ಕರ್ನಾಟಕ ರಾಜಕಾರಣದಲ್ಲಿ ಡಿ.ದೇವರಾಜ ಅರಸು ಅವರ ಕಾಲಘಟ್ಟದಲ್ಲಿ ಮತ್ತೊಬ್ಬ ಧೀಮಂತ ಸಚಿವರ ಹೆಸರು ಎಂದರೆ ಅದು ಹೆಚ್.ಎಂ ಚನ್ನಬಸಪ್ಪ. ಅದೇ ರೀತಿಯಾಗಿ ಸಾಮಾಜಿಕ ಸಮಾನತೆಯ ಪರಿಕಲ್ಪನೆಯನ್ನು ಹೊಂದಿರುವಂತಹ ಪ್ರಸ್ತುತ ನಾಯಕರು ಸಿದ್ದರಾಮಯ್ಯರಾಗಿದ್ದಾರೆ. ಶಕ್ತಿ ಯೋಜನೆಯಲ್ಲಿ 504 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡಿ ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಸೇರಿದೆ ಎಂದು ಹರ್ಷ ವ್ಯಕ್ತಪಡಿಸಿದರು.



ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಜನ್ಮ ದಿನ ಆಚರಿಸಲಾಯಿತು.

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ದಾಸಪ್ಪ ವೃತ್ತದ ಬಸ್ ನಿಲ್ದಾಣದಲ್ಲಿ ನಿಂತಿರುವ ಸಾರ್ವಜನಿಕರಿಗೆ ಸಿಹಿ ಹಂಚಲಾಯಿತು. ಹಾಗೆಯೇ ಪಿರಿಯಾಪಟ್ಟಣದ ಸ್ವಾತಂತ್ರ್ಯ ಸೇನಾನಿ ಹಾಗೂ ಹಿರಿಯ ರಾಜಕೀಯ ಮುತ್ಸದ್ದಿ ಎಚ್.ಎಂ.ಚನ್ನಬಸಪ್ಪ ಅವರ ಪ್ರತಿಮೆಯನ್ನು ಮೈಸೂರಿನ ಪ್ರಮುಖ ಸ್ಥಳದಲ್ಲಿ ಸ್ಥಾಪಿಸುವಂತೆ ಹಾಗೂ ಪ್ರತಿ ವರ್ಷ ಕಾಂಗ್ರೆಸ್ ಭವನದಲ್ಲಿ ಹೆಚ್.ಎಂ ಚನ್ನಬಸಪ್ಪ ಅವರ ಜಯಂತಿ ಆಚರಿಸುವ ನಿರ್ಣಯವೊಂದನ್ನು ಅಂಗೀಕರಿಸಲಾಯಿತು.

ವಿಧಾನ ಪರಿಷತ್ ಮಾಜಿ ಸದಸ್ಯ ಮರಿತಿಬ್ಬೇಗೌಡ, ಮಾಜಿ ಮೇಯರ್‌ಗಳಾದ ಪುಷ್ಪಲತಾ ಚಿಕ್ಕಣ್ಣ, ಮೋದಮಣಿ, ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ಮಂಜುಳಾ ಮಾನಸ, ನಗರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಆರ್ ಮೂರ್ತಿ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಲತಾ ಸಿದ್ದ ಶೆಟ್ಟಿ, ಹಿಂದುಳಿದ ವರ್ಗಗಳ ನಗರ ಅಧ್ಯಕ್ಷ ಎನ್.ಆರ್.ನಾಗೇಶ್, ಗ್ರಾಮಾಂತರ ಅಧ್ಯಕ್ಷ ಎನ್.ಸೋಮಣ್ಣ, ನಗರ ಕಾಂಗ್ರೆಸ್ ಉಪಾಧ್ಯಕ್ಷ ಹೆಡತಲೆ ಮಂಜುನಾಥ್, ಪ್ರಧಾನ ಕಾರ್ಯದರ್ಶಿಗಳಾದ ಶಿವಣ್ಣ, ಎಂ.ಶಿವಪ್ರಸಾದ್, ಮುಖಂಡರಾದ ಶಾಮ್, ಮಲ್ಲೇಶ್, ಯೋಗೇಶ್, ಭಾಸ್ಕರ್ ಗೌಡ, ವೆಂಕಟಸುಬ್ಬಯ್ಯ, ತಲಕಾಡು ಮಂಜುನಾಥ್, ಚಂದ್ರು ಈಶ್ವರ್ ಚಕ್ಕಡಿ, ಗಿರೀಶ್, ಅರುಣ್ ಕುಮಾರ್, ಸಂತೋಷ್ ಮಳಿಯೂರ್, ಗೋಪಿನಾಥ್, ಯೇಸುದಾಸ್, ಸುರೇಶ್ ಪಾಳ್ಯ, ನಂದೀಶ್, ಚಂದ್ರಶೇಖರ್ ಮತ್ತಿತರರಿದ್ದರು.

ಮೈಸೂರು ಜಿಲ್ಲೆಯ ಏಳು ಗ್ರಾಮಗಳಲ್ಲಿ ಮಾದರಿ ಸೌರ ಗ್ರಾಮ ಸ್ಪರ್ಧೆ

- ಜು.1ರಿಂದ ಡಿ.31ರವರೆಗೆ ನಡೆಯುವ ಸ್ಪರ್ಧೆ
- ಆಯ್ಕೆಯಾದ ಗ್ರಾಮಕ್ಕೆ ಎಂಎನ್‌ಆರ್‌ಇ 1 ಕೋಟಿ ರೂ. ಪ್ರೋತ್ಸಾಹಧನ

ಮೈಸೂರು, ಆ.21(ಎಂಟಿವೈ)– ನವೀಕರಿಸಬಹುದಾದ ಇಂಧನ ಬಳಕೆ ಉತ್ತೇಜಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ 'ಮಾದರಿ ಸೌರ ಗ್ರಾಮ' ಯೋಜನೆಯಡಿ ಮೈಸೂರು ಜಿಲ್ಲೆಯ ಏಳು ಗ್ರಾಮಗಳನ್ನು ಸ್ಪರ್ಧಾ ಗ್ರಾಮ ಎಂದು ಆಯ್ಕೆ ಮಾಡಲಾಗಿದೆ.

ಮಾದರಿ ಸೌರ ಗ್ರಾಮ ಯೋಜನೆ ಜಾರಿಗೊಳಿಸುವ ಸಂಬಂಧ ಮೈಸೂರಿನ ಪ್ರಾದೇಶಿಕ ಆಯುಕ್ತ ಡಿ.ಎಸ್.ರಮೇಶ್ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾಮಟ್ಟದ ಸಮಿತಿ(ಡಿಎಲ್‌ಸಿ) ಸಭೆಯಲ್ಲಿ ಮೈಸೂರು ಜಿಲ್ಲೆಯ ವಿವಿಧ ತಾಲೂಕಿನ ಏಳು ಗ್ರಾಮಗಳನ್ನು ಯೋಜನೆಗೆ ಆಯ್ಕೆ ಮಾಡಲಾಗಿದೆ. ಮೈಸೂರು ತಾಲೂಕು, ವರುಣಾ ಹೋಬಳಿಯ ವರಕೊಡು, ಬಿಳಿಕೆರೆ, ಕೆ.ಆರ್.ನಗರದ ಗಂಧನಹಳ್ಳಿ, ಸಾಲಿಗ್ರಾಮ, ತಾಂಡವಪುರ, ಮೂಗೂರು ಮತ್ತು ಬೆಟ್ಟದಪುರ ಗ್ರಾಮಗಳನ್ನು ಮಾದರಿ ಸೌರ ಗ್ರಾಮ ಯೋಜನೆಯ ಸ್ಪರ್ಧಾ ಗ್ರಾಮಗಳೆಂದು ಗುರುತಿಸಲಾಗಿದೆ. ಈ ಸ್ಪರ್ಧೆಯಲ್ಲಿ ಅಂತಿಮವಾಗಿ ಆಯ್ಕೆಯಾಗುವ ಒಂದು ಗ್ರಾಮಕ್ಕೆ ಭಾರತ ಸರ್ಕಾರದ ನವೀಕರಿಸಬಹುದಾದ ಇಂಧನ ಸಚಿವಾಲಯದಿಂದ (ಎಂಎನ್‌ಆರ್‌ಇ) 1 ಕೋಟಿ ರೂ.ಪ್ರೋತ್ಸಾಹಧನ ಲಭಿಸಲಿದೆ.

ಈ ಸ್ಪರ್ಧೆಯು ಸ್ಥಳೀಯ ಗ್ರಾಮ ಪಂಚಾಯಿತಿಗಳ ನೇತೃತ್ವದಲ್ಲಿ ನವೀಕರಿಸಬಹುದಾದ ಇಂಧನ ಬಳಕೆಯನ್ನು ಉತ್ತೇಜಿಸುವ ಉದ್ದೇಶದಿಂದ ನಡೆಸಲಾಗುತ್ತಿದೆ. ಅಲ್ಲದೆ, ವಸತಿ ಮನೆಗಳಿಗೆ ಪ್ರಧಾನ ಮಂತ್ರಿ ಸೂರ್ಯಘರ್ ಯೋಜನೆ ಅಡಿಯಲ್ಲಿ ಮೇಲ್ಛಾವಣಿ ಸೌರಶಕ್ತಿ ಅಳವಡಿಸುವುದು. ಗ್ರಾಹಕರಿಗೆ ಸಬ್ಸಿಡಿ ರಹಿತ ಯೋಜನೆ ಅಡಿಯಲ್ಲಿ ಮೇಲ್ಛಾವಣಿ ಸೌರಶಕ್ತಿ ಅಳವಡಿಕೆಗೆ ಪ್ರೋತ್ಸಾಹ ನೀಡುವುದು. ನೀರಾವರಿ ಪಂಪ್‌ಸೆಟ್‌ಗಳಿಗೆ ಪಿಎಂ–ಕುಸುಮ್ ಯೋಜನೆ ಅಡಿಯಲ್ಲಿ ಅನುಷ್ಠಾನಕ್ಕೆ ಪ್ರೋತ್ಸಾಹಿಸುವುದು. ಸರ್ಕಾರಿ ಕಟ್ಟಡಗಳ ಮೇಲೆ ಸೌರಶಕ್ತಿ ಅಳವಡಿಸುವುದು (ಅಳವಡಿಕೆಗೆ ಅನುದಾನವನ್ನು ಪಿಪಿಪಿ/ಆರ್‌ಸಿಎಸ್‌ಸಿಒ/ಬಜೆಟ್‌ನಲ್ಲಿ ಅನುದಾನ), ಕುಡಿಯುವ ನೀರಿನ ಹಾಗೂ ಬೀದಿ ದೀಪಗಳಿಗೆ ಸೌರಶಕ್ತಿ ಅಳವಡಿಸುವುದನ್ನು ಉತ್ತೇಜಿಸುವ ಉದ್ದೇಶದಿಂದ ಈ ಯೋಜನೆ ಜಾರಿಗೊಳಿಸಲಾಗಿದೆ.

ಈ ಸ್ಪರ್ಧೆ ಪ್ರಸಕ್ತ ವರ್ಷದ ಜು.1ರಿಂದ ಡಿ.31ರವರೆಗೆ ನಡೆಯಲಿದ್ದು, ಸ್ಪರ್ಧೆಯ ಅಂತ್ಯದಲ್ಲಿ ಮೌಲ್ಯಮಾಪನದ ಆಧಾರದ ಮೇಲೆ ಗರಿಷ್ಠ ನವೀಕರಿಸಬಹುದಾದ ಇಂಧನ ಬಳಸಿದ ಗ್ರಾಮವನ್ನು 'ಮಾದರಿ ಸೌರ ಗ್ರಾಮ' ಎಂದು ಘೋಷಿಸಲಾಗುವುದು. ಆಯ್ಕೆಯಾದ ಗ್ರಾಮಕ್ಕೆ ಭಾರತ ಸರ್ಕಾರದ ನವೀಕರಿಸಬಹುದಾದ ಇಂಧನ ಸಚಿವಾಲಯದಿಂದ (ಎಂಎನ್‌ಆರ್‌ಇ) ವತಿಯಿಂದ 1 ಕೋಟಿ ರೂ. ಪ್ರೋತ್ಸಾಹಧನ ನೀಡಲಾಗುತ್ತದೆ ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್)ದ ಮೈಸೂರಿನ ಕಾರ್ಯ ಮತ್ತು ಪಾಲನಾ ವೃತ್ತದ ಅಧೀಕ್ಷಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.